ಮನುಕುಲಕ್ಕೆ ಅಪಾರ ನಷ್ಟ, ಆರ್ಥಿಕ ಸ್ಥಿತಿ-ಗತಿಯನ್ನು ಏರುಪೇರು ಮಾಡಿದ ಕೋವಿಡ್ ಸೋಂಕನ್ನು ನಿಯಂತ್ರಿಸುವಲ್ಲಿ ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕೆಲಸ ಮಾಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾ.ಪಿ.ವಿಶ್ವನಾಥ ಶೆಟ್ಟಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಅವರು ಸೋಮವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೋವಿಡ್ ನಿರ್ವಹಣೆ ಹಾಗೂ ಲೋಕಾಯುಕ್ತ ಪ್ರಕರಣಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

**ಕಡ್ಡಾಯವಾಗಿ ಲಸಿಕೆ ಪಡೆಯಲೇಬೇಕು**

ಕೋವಿಡ್ ಲಸಿಕೆಯ ಮೊದಲ ಡೋಸ್‌ನ್ನು ಜಿಲ್ಲೆಯಲ್ಲಿ ಶೇ.90ರಷ್ಟು ಹಾಗೂ ಎರಡನೇ ಡೋಸ್‌ನ್ನು ಶೇ.59 ಮಂದಿ ಪಡೆದಿದ್ದಾರೆ. ಮೊದಲ ಡೋಸ್ ಪಡೆಯಲು ಬಾಕಿಯಿರುವವರನ್ನು ಆದ್ಯತೆಯ ಮೇರೆಗೆ ಅವರೆಲ್ಲರಿಗೂ ಲಸಿಕೆ ಕೊಡಬೇಕು. ಈ ಕಾರ್ಯವನ್ನು ಮುಂದಿನ 15-20 ದಿನದೊಳಗೆ ಪೂರ್ಣಗೊಳಿಸಬೇಕು. ಎಲ್ಲರೂ ಕಡ್ಡಾಯವಾಗಿ ಲಸಿಕೆ ಪಡೆಯಲೇಬೇಕು. ಕೋವಿಡ್ ಸೋಂಕಿನಿಂದ ಮತ್ತೆ ಬರದೇ ಇದ್ದಲ್ಲಿ ರಾಜ್ಯ ಹಾಗೂ ದೇಶದ ಅಭಿವೃದ್ಧಿ ಕುಂಠಿತವಾಗುತ್ತದೆ. ಆರ್ಥಿಕ ಸ್ಥಿತಿ-ಗತಿಗಳಿಗೆ ಹಾನಿಯಾಗುತ್ತದೆ. ಜಿಲ್ಲೆಯಲ್ಲಿ ಲಸಿಕೆ ಕೊರತೆ ಇಲ್ಲ ಎಂದವರು ಹೇಳಿದರು.



**ಶೇಕಡಾ 81 ವಿದ್ಯಾರ್ಥಿಗಳು ಹಾಜರು**

ಈ ಸಂದರ್ಭದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಲ್ಲೇಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ 1,508 ಶಾಲೆಗಳಿದ್ದು ಅವುಗಳಲ್ಲಿ 1,071 ಸರಕಾರಿ, 315 ಅನುದಾನಿತ, 400 ಅನುದಾನ ರಹಿತ, 11 ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ, 14 ಬುಡಕಟ್ಟು ಶಾಲೆಗಳು, 11 ನವೋದಯ, 2 ಕೇಂದ್ರೀಯ ವಿದ್ಯಾಲಯ ಹಾಗೂ ಒಂದು ಜವಾಹರ ನವೋದಯ ಶಾಲೆಗಳಲ್ಲಿ 3,20,980 ವಿದ್ಯಾರ್ಥಿಗಳು ದಾಖಲಾಗಿದ್ದಾರೆ. 1-5ರ ವರೆಗೆ ಶೇ. 51, 6-8ರ ವರೆಗೆ ಶೇ. 69 ಹಾಗೂ 8-10 ಶೇಕಡಾ 81 ವಿದ್ಯಾರ್ಥಿಗಳು ಪ್ರತ್ಯಕ್ಷವಾಗಿ ಶಾಲಾ ತರಗತಿಗಳಿಗೆ ಹಾಜರಾಗುತ್ತಿದ್ದಾರೆ ಎಂದರು.

ಜಿಲ್ಲೆಯಲ್ಲಿ ಕೋವಿಡ್ ಕಾರಣಕ್ಕೆ ಪೋಷಕರನ್ನು ಕಳೆದು ಕೊಂಡ 210 ಮಕ್ಕಳು ಮತ್ತು ತಂದೆತಾಯಿ ಇಬ್ಬರನ್ನೂ ಕಳೆದುಕೊಂಡ ಐದು ಮಕ್ಕಳಿಗೆ ಸರಕಾರದ ವತಿಯಿಂದ ನೀಡುವ ಪರಿಹಾರವನ್ನು ಶೀಘ್ರ ತಲುಪಿಸುವಂತೆ ಲೋಕಾಯುಕ್ತರು ನಿರ್ದೇಶನ ನೀಡಿದರು.

**ಲಸಿಕೆಯಿಂದ ಅಡ್ಡ ಪರಿಣಾಮ ಆಗದು**

ಸ್ವತಃ ನಾನು ಕೂಡಾ ವ್ಯಾಕ್ಸಿನ್ ಪಡೆದಿದ್ದು ಅದರಿಂದ ಯಾವುದೇ ರೀತಿಯ ಅಡ್ಡ ಪರಿಣಾಮ ಆಗುವುದಿಲ್ಲ. ಕೋವಿಡ್ ನಿಯಂತ್ರಿಸಲು ಕಡ್ಡಾಯವಾಗಿ ಲಸಿಕೆಗಳನ್ನು ಪಡೆಯಲೇ ಬೇಕು. ಮಾಸ್ಕನ್ನು ಸರಿಯಾದ ಕ್ರಮದಲ್ಲಿ ಕಡ್ಡಾಯವಾಗಿ ಧರಿಸಬೇಕು. ಸಾಮಾಜಿಕ ಅಂತರ ಕಾಪಾಡಿಕೊಳ್ಳಬೇಕು.

■ ನ್ಯಾ.ಪಿ.ವಿಶ್ವನಾಥ ಶೆಟ್ಟಿ

**ವಿದ್ಯಾರ್ಥಿಗಳಿಗೆ ಸೋಂಕು ಹರಡದಂತೆ ಕ್ರಮ ವಹಿಸಿ**

ಇದೀಗ ಶಾಲೆಗಳು ಆರಂಭಗೊಂಡಿದ್ದು ಅಲ್ಲಿ ಕೋವಿಡ್ ಸಮುಚಿತ ವರ್ತನೆಗಳನ್ನು ಪಾಲಿಸಲಾಗುತ್ತಿರುವ ಬಗ್ಗೆ ಅಧಿಕಾರಿಗಳು ಎಚ್ಚರ ವಹಿಸಬೇಕು. ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧಿಕಾರಿಗಳು ಆಗಾಗ ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಕೋವಿಡ್ ಸೋಂಕು ಹರಡದಂತೆ ಕೈಗೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಅವರ ಮೂಲಕ ವರದಿ ನೀಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾ.ಪಿ.ವಿಶ್ವನಾಥ ಶೆಟ್ಟಿ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಅಕ್ಷಯ್ ಶ್ರೀಧರ್ ಹಾಗೂ ಲೋಕಾಯುಕ್ತ ಎಸ್ಪಿ ಕುಮಾರಸ್ವಾಮಿ ವೇದಿಕೆಯಲ್ಲಿದ್ದರು.

**ಮುಖ್ಯಾಂಶಗಳು...**

- ಕೋವಿಡ್ ಲಸಿಕೆಯ ಮೊದಲ ಡೋಸ್‌ನ್ನು ಜಿಲ್ಲೆಯಲ್ಲಿ ಶೇ.90ರಷ್ಟು ಹಾಗೂ ಎರಡನೇ ಡೋಸ್‌ನ್ನು ಶೇ.59 ಮಂದಿ ಪಡೆದಿದ್ದಾರೆ
- ಮೊದಲ ಡೋಸ್ ಪಡೆಯಲು ಬಾಕಿಯಾದವರನ್ನು ಆದ್ಯತೆಯ ಮೇರೆಗೆ ಅವರೆಲ್ಲರಿಗೂ ಲಸಿಕೆ ಕೊಡಿಸಬೇಕು. ಈ ಕಾರ್ಯವನ್ನು ಮುಂದಿನ 15-20 ದಿನದೊಳಗೆ ಪೂರ್ಣಗೊಳಿಸಬೇಕಿದೆ

**ಲಸಿಕಾ ಕೇಂದ್ರಕ್ಕೆ ಭೇಟಿ**

ಸಭೆಗೂ ಮುನ್ನ ಕರ್ನಾಟಕ ಲೋಕಾಯುಕ್ತ ನ್ಯಾ.ಪಿ.ವಿಶ್ವನಾಥ ಶೆಟ್ಟಿ ಅವರು ನಗರದ ಗಾಂಧಿ ನಗರದಲ್ಲಿರುವ ಸರಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಅಲ್ಲಿ ವಿದ್ಯಾರ್ಥಿಗಳು ಕೋವಿಡ್ ಸಮುಚಿತ ವರ್ತನೆಗಳನ್ನು ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದರು. ಬಳಿಕ ವೆನ್ಲಾಕ್ ಆಸ್ಪತ್ರೆಯಲ್ಲಿರುವ ಆಯುಷ್ ಘಟಕದಲ್ಲಿರುವ ಲಸಿಕಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವಿಜಯಕರ್ನಾಟಕ: 16/11/2021

# ಶಾಲೆಗಳಲ್ಲಿ ಕೋವಿಡ್ ನಿಯಂತ್ರಣ ವರದಿಗೆ ಲೋಕಾಯುಕ್ತರ ನಿರ್ದೇಶನ



**ವಿಕ ಸುದ್ದಿಲೋಕ** ಮಂಗಳೂರು

ಕೋವಿಡ್ ಸೋಂಕನ್ನು ನಿಯಂತ್ರಿಸುವಲ್ಲಿ ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕೆಲಸ ಮಾಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ. ವಿಶ್ವನಾಥ್ ಶೆಟ್ಟಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿಯ ನೇತ್ರಾವತಿ ಸಭಾಂಗಣದಲ್ಲಿ ಸೋಮವಾರ ಕೋವಿಡ್ ನಿರ್ವಹಣೆ ಹಾಗೂ ಲೋಕಾಯುಕ್ತ ಪ್ರಕರಣಗಳ ಪರಿಶೀಲನೆ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋವಿಡ್ ಲಸಿಕೆಯ ಮೊದಲ ಡೋಸ್ ಜಿಲ್ಲೆಯಲ್ಲಿ ಶೇ.100ರಷ್ಟು ಹಾಗೂ ಎರಡನೇ ಡೋಸ್ ಶೇ.59 ಮಂದಿ ಪಡೆದಿದ್ದಾರೆ. ಇನ್ನುಳಿದ ಶೇ.10ರಷ್ಟು ಜನರನ್ನು ಗುರುತಿಸಿ, ಆದ್ಯತೆ ಮೇರೆಗೆ ಎಲ್ಲರಿಗೂ ಲಸಿಕೆ ಕೊಡಿಸಬೇಕು. ಈ ಕಾರ್ಯವನ್ನು ಮುಂದಿನ 15-20 ದಿನದೊಳಗೆ ಪೂರ್ಣಗೊಳಿಸಬೇಕು. ಎಲ್ಲರೂ ಕಡ್ಡಾಯವಾಗಿ ಲಸಿಕೆ ಪಡೆಯಲೇಬೇಕು. ಜಿಲ್ಲೆಯಲ್ಲಿ ಲಸಿಕೆಗೆ ಕೊರತೆ ಇಲ್ಲ, ಕೊವ್ಯಾಕ್ಸಿನ್ ಹಾಗೂ ಕೋವಿಶೀಲ್ಡ್ ಸೇರಿದಂತೆ ಒಟ್ಟು 1.75 ಲಕ್ಷ ಡೋಸ್ ಲಭ್ಯವಿದೆ ಎಂದರು.

ಇದೀಗ ಶಾಲೆಗಳು ಪ್ರಾರಂಭವಾಗಿದ್ದು, ಜಿಲ್ಲೆಯಲ್ಲಿ 1,50[illegible] ಶಾಲೆಗಳಲ್ಲಿ 3,20,9[illegible] ವಿದ್ಯಾರ್ಥಿಗಳು ದಾಖಲಾಗಿದ್ದು 1-5 ವರೆಗೆ ಶೇ.51, 6-8ರವರೆಗೆ ಶೇ.[illegible] ಹಾಗೂ 9-10 ಶೇ. 81 ವಿದ್ಯಾರ್ಥಿಗಳು ಪ್ರತ್ಯಕ್ಷವಾಗಿ ಶಾಲಾ ತರಗತಿ[illegible] ಹಾಜರಾಗುತ್ತಿದ್ದಾರೆ ಎಂ[illegible] ಜಿಲ್ಲೆಯಲ್ಲಿ ಕೋವಿಡ್ ಕಾರಣದಿ[illegible] 210 ಮಕ್ಕಳು ಪೋಷಕ[illegible] ಕಳೆದುಕೊಂಡಿದ್ದಾರೆ. ಐದು [illegible] ತಂದೆ- ತಾಯಿ [illegible] ಕಳೆದುಕೊಂಡಿದ್ದಾರೆ ಎಂದು ತಿಳಿಸಿ[illegible] ಕೂಡಲೇ ಈ ಮಕ್ಕಳಿಗೆ [illegible] ದಡಿಯಿಂದ ವಿ[illegible] ಒದಗಿಸುವಂತೆ [illegible] ಸೂಚಿಸಿದರು. [illegible] ಪಾಲಿಕೆ ಆಯುಕ್ತ[illegible] ಲೋಕಾಯುಕ್ತ [illegible] ಉಪಸ್ಥಿತರಿದ್ದರು.

**ಪಾಲಿಕೆ ಅಧಿಕಾ[illegible]**

ಮಂಗಳೂರು [illegible] ಇದ್ದರೂ [illegible] ವಿಫಲರಾ[illegible] ಮಾಡುತ್ತಿರುವ [illegible] ಇದರಿಂದಾಗಿ [illegible] ತೊಂದರೆಯುಂಟಾ[illegible] ಸಂಬಂಧಿಸಿದವರ [illegible] ಕ್ರಮ ಕೈಗೊಳ್ಳ[illegible] [illegible] ನೀಡಿದರು.

ಉದಯವಾಣಿ: 16-11-2021

# ಕೋವಿಡ್ ಸೋಂಕು ನಿಯಂತ್ರಣಕ್ಕೆ ಯುದ್ಧೋಪಾದಿಯಲ್ಲಿ ಕೆಲಸ ಮಾಡಿ

## ಲೋಕಾಯುಕ್ತ ನ್ಯಾ। ಪಿ. ವಿಶ್ವನಾಥ ಶೆಟ್ಟಿ



ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ ಶೆಟ್ಟಿ ಅವರು ವೆನ್ಲಾಕ್ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿದರು.

ಮಂಗಳೂರು, ನ.15: ಮನುಕುಲಕ್ಕೆ ಆಘಾತನೀಡಿ, ಆರ್ಥಿಕತೆ-ಗತಿಯನ್ನು ಏರು-ಪೇರು ಮಾಡಿದ ಕೋವಿಡ್ ಸೋಂಕನ್ನು ನಿಯಂತ್ರಿಸುವಲ್ಲಿ ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕೆಲಸ ಮಾಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ ಶೆಟ್ಟಿ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿ.ಪಂ.ನ ನೇತ್ರಾವತಿ ಸಭಾಂಗಣದಲ್ಲಿ ಕೋವಿಡ್ ನಿರ್ವಹಣೆ ಹಾಗೂ ಲೋಕಾಯುಕ್ತ ಪ್ರಕರಣಗಳ ಪರಿಶೀಲನೆ ಕುರಿತು ಸೋಮವಾರ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋವಿಡ್ ಲಸಿಕೆಯ ಮೊದಲ ಡೋಸ್ ಅನ್ನು ಜಿಲ್ಲೆಯಲ್ಲಿ ಶೇ.90ರಷ್ಟು ಹಾಗೂ 2ನೇ ಡೋಸ್ ಅನ್ನು ಶೇ. 59 ಮಂದಿ ಪಡೆದಿದ್ದಾರೆ. ಎಲ್ಲರೂ ಕಡ್ಡಾಯವಾಗಿ ಲಸಿಕೆ ಪಡೆಯಬೇಕು. ಕೋವಿಡ್ ಸೋಂಕಿನಿಂದ ಹೊರಬರದ ಇದ್ದಲ್ಲಿ ರಾಜ್ಯ ಹಾಗೂ ದೇಶದ ಅಭಿವೃದ್ಧಿ ಕುಂಠಿತವಾಗುತ್ತದೆ ಎಂದು ಹೇಳಿದರು.

ಇದೀಗ ಶಾಲೆಗಳು ಆರಂಭಗೊಂಡಿದ್ದು, ಅಲ್ಲಿ ಕೋವಿಡ್ ನಿಯಮ ಪಾಲನೆಯಾಗುತ್ತಿರುವ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಎಚ್ಚರ ವಹಿಸಬೇಕು. ಮಾಸ್ಕ್ ಧಾರಣೆ, ಸಾಮಾಜಿಕ ಅಂತರ ಹಾಗೂ ಸ್ವಚ್ಛತೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಜಿ. ಪಂ. ಸಿಇಒ ಮೂಲಕ ವರದಿ ನೀಡಬೇಕು ಎಂದು ಲೋಕಾಯುಕ್ತರು ಸೂಚಿಸಿದರು.

ಜಿಲ್ಲೆಯಲ್ಲಿ ಕೋವಿಡ್ ಕಾರಣದಿಂದಾಗಿ 210 ಮಕ್ಕಳು ಪೋಷಕರನ್ನು ಕಳೆದುಕೊಂಡಿದ್ದಾರೆ. ಐದು ಮಕ್ಕಳು ತಂದೆ-ತಾಯಿ ಇಬ್ಬರನ್ನು ಕಳೆದುಕೊಂಡಿದ್ದಾರೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಮಲ್ಲೇಸ್ವಾಮಿ ಅವರು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಲೋಕಾಯುಕ್ತರು ಕೂಡಲೇ ಈ ಮಕ್ಕಳಿಗೆ ಸರಕಾರದ ವತಿಯಿಂದ ನೀಡುವ ಪರಿಹಾರವನ್ನು ಕೂಡಲೇ ಒದಗಿಸುವಂತೆ ಸೂಚಿಸಿದರು.

ಮಕ್ಕಳಿಗೆ ಕೋವಿಡ್ ಲಸಿಕೆ ನೀಡುವ ನಿಟ್ಟಿನಲ್ಲಿ ಸರಕಾರ ಹೊರಡಿಸಿರುವ ಮಾರ್ಗಸೂಚಿಗಳನ್ನು ಪಾಲಿಸಲಾಗುತ್ತಿದೆ. ಈಗಾಗಲೇ 2,467 ವಿಕಲಚೇತನ ಮಕ್ಕಳನ್ನು ಗುರುತಿಸಲಾಗಿದ್ದು, ಲಸಿಕೆ ಬಂದ ಕೂಡಲೇ ಅವರಿಗೆ ಕೊಡಿಸಲಾಗುವುದು ಎಂದು ಡಿಎಚ್ಒ ತಿಳಿಸಿದರು. ಮುಂದಿನ ಎರಡು-ಮೂರು ತಿಂಗಳು ಉತ್ತಮವಾಗಿ ಕಾರ್ಯ ನಿರ್ವಹಿಸುವಂತೆ ಲೋಕಾಯುಕ್ತರು ಈ ಸಂದರ್ಭ ಅವರಿಗೆ ಸೂಚಿಸಿದರು.

### ಗ್ರಾ.ಪಂ.ಗಳಿಗೆ ಅನುದಾನ

ಕೋವಿಡ್ ನಿರ್ವಹಣೆ ಸಂಬಂಧಿತ ವಿವಿಧ ಪ್ರಕ್ರಿಯೆಗಳಿಗಾಗಿ ಪ್ರತಿ ಗ್ರಾ.ಪಂ.ಗಳಿಗೆ ಸರಕಾರ 50 ಸಾವಿರ ರೂ.ಗಳ ಅನುದಾನ ಬಿಡುಗಡೆ ಮಾಡಿದೆ. ಆ ಹಣ ಯಾವುದೇ ಕಾರಣಕ್ಕೂ ದುರುಪಯೋಗವಾಗಬಾರದು. ಆ ಹಣ ಸದ್ಬಳಕೆಯಾಗುವ ಬಗ್ಗೆ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಪರಿಶೀಲನೆ ನಡೆಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಮಂಗಳೂರು ಮಹಾನಗರ ಪಾಲಿಕೆಯ ಇಬ್ಬರು ಸಿಬಂದಿ ಸಾರ್ವಜನಿಕರ ಕೆಲಸಕ್ಕೆ ವಿಪರೀತ ಅಡಚಣೆಯುಂಟು ಮಾಡುತ್ತಿರುವ ಬಗ್ಗೆ ದೂರುಗಳು ಬಂದಿದ್ದು, ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಈ ರೀತಿ ತೊಂದರೆಯುಂಟು ಮಾಡಿದ್ದಲ್ಲಿ, ಸಂಬಂಧಿಸಿದವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಲೋಕಾಯುಕ್ತರು ಎಚ್ಚರಿಕೆ ನೀಡಿದರು.

ಜಿ. ಪಂ. ಸಿಇಒ ಡಾ| ಕುಮಾರ್, ಮಹಾಪಾ ಆಯುಕ್ತ ಅಕ್ಷಯ್ ಶ್ರೀಧರ್ ಹಾಗೂ ಲೋಕಾಯುಕ್ತ ಎಸ್ಪಿ ಕುಮಾರಸ್ವಾಮಿ ಉಪಸ್ಥಿತರಿದ್ದರು. ಜಿಲ್ಲಾ ಮಟ್ಟದ ಅಧಿಕಾರಿಗಳು, ತಾ. ಪಂ. ಇಒಗಳು ಹಾಗೂ ತಹಶೀಲ್ದಾರರು ಸಭೆಯಲ್ಲಿದ್ದರು.

### ಶಾಲೆ, ಲಸಿಕಾ ಕೇಂದ್ರಕ್ಕೆ ಭೇಟಿ

ಇದಕ್ಕೂ ಮುನ್ನ ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ ಶೆಟ್ಟಿ ಅವರು ನಗರದ ಗಾಂಧಿನಗರದಲ್ಲಿರುವ ಸರಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಅಲ್ಲಿ ವಿದ್ಯಾರ್ಥಿಗಳು ಕೋವಿಡ್ ಸಮುಚಿತ ವರ್ತನೆಗಳನ್ನು ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದರು. ಅನಂತರ ಅವರು ನಗರದ ವೆನ್ಲಾಕ್ ಆಸ್ಪತ್ರೆಯಲ್ಲಿರುವ ಆಯುಷ್ ಕಟ್ಟಡದಲ್ಲಿರುವ ಲಸಿಕಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

THE HINDU – 16/11/2021

# 'You're accountable to society too, get vaccinated'

## Lokayukta P. Vishwanatha Shetty directs administration to ensure 100% vaccination in Dakshina Kannada

SPECIAL CORRESPONDENT
MANGALURU

Lokayukta P. Vishwanatha Shetty on Monday said an individual was accountable not just to his family, but to society and hence it was the responsibility of everyone to get vaccinated against COVID-19.

Vaccination prevents further spread of the pandemic, he noted.

Chairing a meeting on COVID-19 management and Lokayukta cases here, Justice Shetty said he too has been vaccinated and there were no adverse effects. The district administration should work on the war footing for the next two-three months to ensure every eligible individual in the district was vaccinated, he said.



Lokayukta P. Vishwanatha Shetty visiting a government school at Gandhinagar, and at a review meeting in Mangaluru on Monday.

Justice Shetty noted while 90% eligible persons had received the first dose, 59% had received both the doses in the district. Efforts should be made to cover the remaining 10% with the first dose in the next fortnight and the 41% with both the doses in the coming days. There was no dearth for vaccines in the district with 1.75 lakh doses of Covishield and Covaxin readily available.

With physical classes resuming in educational institutions, the Education Department should ensure students and staff follow COVID-19 protocol strictly by periodical visits. Zilla Panchayat CEO should submit regular reports in this regard.

Deputy Director of Public Instructions Malleswamy informed the meeting that 3,20,980 students were enrolled in 1,508 schools, including 1,071 government, 315 grant-in-aid, 400 unaided, 11 under Social Welfare Department, 14 for Scheduled Tribes, 11 Navodaya, two Kendriya Vidyalaya, and one Jawahar Navodaya schools in the district. The attendance had been 51% in primary, 69% in higher primary, and 81% in high schools, he said.

When Mr. Malleswamy informed that 210 children have lost either of the parent and five both the parents due to COVID-19, Justice Shetty asked the officials concerned to arrange distribution of compensation to the families immediately.

The Lokayukta warned of initiating action against two staff members of the Mangaluru City Corporation against whom many public complaints were received.

ZP CEO Kumara, MCC Commissioner Akshy Sridhar, Lokayukta S.P. Kumaraswamy, and others were present.

Earlier, Justice Shetty visited the government primary school at Gandhinagar to verify the COVID-19 protocol implementation. Later, he visited the COVID-19 vaccination centre at the Ayush Block of District Government Wenlock Hospital.

ಸಂಯುಕ್ತ ಕರ್ನಾಟಕ: 16/11/2021

ಲೋಕಾಯುಕ್ತ ಪ್ರಕರಣಗಳ ಪರಿಶೀಲನೆ | ರಾಜ್ಯ ಹಾಗೂ ದೇಶದ ಅಭಿವೃದ್ಧಿ ಕುಂಠಿತ | ಜಿಲ್ಲೆಯಲ್ಲಿ ಲಸಿಕೆಗೆ ತೊಂದರೆ ಇಲ್ಲ

# ಕೋವಿಡ್ ನಿಯಂತ್ರಣಕ್ಕೆ ಕಾರ್ಯನಿರ್ವಹಣೆ

ಸಂ. ಕ. ಸಮಾಚಾರ, ಮಂಗಳೂರು

ಮನುಕುಲಕ್ಕೆ ಆಘಾತ ನೀಡಿ, ಆರ್ಥಿಕಸ್ಥಿತಿ-ಗತಿಯನ್ನು ಏರುಪೇರು ಮಾಡಿದ ಕೋವಿಡ್ ಸೋಂಕನ್ನು ನಿಯಂತ್ರಿಸುವಲ್ಲಿ ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕೆಲಸ ಮಾಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾ. ಬಿ.ವಿಶ್ವನಾಥ ಶೆಟ್ಟಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯತ್‌ನ ನೇತ್ರಾವತಿ ಸಭಾಂಗಣದಲ್ಲಿ ಕೋವಿಡ್ ನಿರ್ವಹಣೆ ಹಾಗೂ ಲೋಕಾಯುಕ್ತ ಪ್ರಕರಣಗಳ ಪರಿಶೀಲನ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಕೋವಿಡ್ ಲಸಿಕೆಯ ಮೊದಲ ಡೋಸ್‌ಅನ್ನು ಜಿಲ್ಲೆಯಲ್ಲಿ ಶೇ.90ರಷ್ಟು ಹಾಗೂ ಎರಡನೇ ಡೋಸ್ ಅನ್ನು ಶೇ.59 ಮಂದಿ ಪಡೆದಿದ್ದಾರೆ, ಮೊದಲ ಡೋಸ್‌ನಲ್ಲಿ ಇನ್ನೂ ಉಳಿದ ಶೇ. 10ರಷ್ಟು ಜನರನ್ನು ಗುರುತಿಸಿ, ಅಗತ್ಯತೆಯ ಮೇರೆಗೆ ಅವರೆಲ್ಲರಿಗೂ ಲಸಿಕೆ ಕೊಡಿಸಬೇಕು, ಈ ಕಾರ್ಯವನ್ನು ಮುಂದಿನ 15-20 ದಿನದೊಳಗೆ ಪೂರ್ಣಗೊಳಿಸಬೇಕು. ಎಲ್ಲರೂ ಕಡ್ಡಾಯವಾಗಿ ಲಸಿಕೆ ಪಡೆಯಬೇಕು. ಕೋವಿಡ್ ಸೋಂಕಿನಿಂದ ಹೊರಬರದ ಇದ್ದಲ್ಲಿ ರಾಜ್ಯ ಹಾಗೂ ದೇಶದ ಅಭಿವೃದ್ಧಿ ಕುಂಠಿತವಾಗುತ್ತದೆ, ಆರ್ಥಿಕ ಸ್ಥಿತಿ-ಗತಿಗಳಿಗೆ ಹಾನಿಯಾಗುತ್ತದೆ. ಜಿಲ್ಲೆಯಲ್ಲಿ ಲಸಿಕೆಗೆ ತೊಂದರೆ ಇಲ್ಲ. ಕೋವ್ಯಾಕ್ಸಿನ್ ಹಾಗೂ ಕೋವಿಶೀಲ್ಡ್ ಸೇರಿದಂತೆ ಒಟ್ಟು 1.75 ಲಕ್ಷ ಡೋಸ್‌ಗಳು ಇಂದು ಕೂಡ ಲಭ್ಯವಿದೆ ಎಂದು ಹೇಳಿದರು.



ಲೋಕಾಯುಕ್ತರು ನಗರದ ವೆನ್ಲಾಕ್ ಆಸ್ಪತ್ರೆಯಲ್ಲಿರುವ ಆಯುಷ್ ಘಟಕದಲ್ಲಿರುವ ಲಸಿಕಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ನಾನು ಸಹ ಕೋವ್ಯಾಕ್ಸಿನ್ ಪಡೆದಿದ್ದು, ಅದರಿಂದ ಯಾವುದೇ ರೀತಿಯ ತೊಂದರೆಗಳಾಗುವುದಿಲ್ಲ ಅಥವಾ ಯಾವುದೇ ಸಮಸ್ಯೆಗಳು ಉಂಟಾಗುವುದಿಲ್ಲ, ನಾವು ಕೇವಲ ನಮ್ಮ ಕುಟುಂಬಕ್ಕೆ ಮಾತ್ರ ಸೀಮಿತವಲ್ಲ, ಸಮಾಜಕ್ಕೆ ಜವಾಬ್ದಾರರಾಗಿರುತ್ತೇವೆ. ಹಾಗಾಗಿ ಕೋವಿಡ್ ನಿಯಂತ್ರಿಸಲು ಕಡ್ಡಾಯವಾಗಿ ಲಸಿಕೆಗಳನ್ನು ಪಡೆಯಬೇಕು, ಮಾಸ್ಕ್ ಧರಿಸುವುದು ಮತ್ತು ಕೈಗಳನ್ನು ಸ್ವಚ್ಛವಾಗಿ ತೊಳೆದುಕೊಳ್ಳಬೇಕು, ಪರಸ್ಪರ ಸಾಮಾಜಿಕ ಅಂತರ ಕಾಪಾಡಿಕೊಳ್ಳಬೇಕು ಹಾಗೂ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಕಿವಿಮಾತು ಹೇಳಿದರು.

ಮಕ್ಕಳಿಗೆ ಕೋವಿಡ್ ಲಸಿಕೆ ನೀಡುವ ನಿಟ್ಟಿನಲ್ಲಿ ಸರಕಾರ ಹೊರಡಿಸುವ ಮಾರ್ಗಸೂಚಿಗಳನ್ನು ಪಾಲಿಸಲಾಗುತ್ತಿದೆ. ಈಗಾಗಲೇ 2,467 ವಿಕಲಚೇತನ ಮಕ್ಕಳನ್ನು ಗುರುತಿಸಲಾಗಿದ್ದು ಲಸಿಕೆ ಬಂದ ಕೂಡಲೇ ಅವರಿಗೆ ಕೊಡಿಸಲಾಗುವುದು ಎಂದು ಡಿಹೆಚ್ಒ ತಿಳಿಸಿದರು.

ಮಂಗಳೂರು ಮಹಾನಗರ ಪಾಲಿಕೆಯ ಇಲ್ಲವರು, ಸಿಬ್ಬಂದಿ ಸಾರ್ವಜನಿಕರ ಕೆಲಸಕ್ಕೆ ವಿನಾಕಾರಣ ಅನಗತ್ಯ ವಿಳಂಬ ಮಾಡುತ್ತಿರುವ ಬಗ್ಗೆ ದೂರುಗಳು ಬಂದಿದ್ದು, ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಈ ರೀತಿ ತೊಂದರೆಯುಂಟು ಮಾಡಿದ್ದಲ್ಲಿ ಸಂಬಂಧಿಪಟ್ಟವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದ ಅವರು, ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಸಮಸ್ಯೆಗಳನ್ನುಂಟು ಮಾಡಬಾರದು. ಒಂದು ವೇಳೆ ಮಾಡಿದ್ದಲ್ಲಿ ಸಮಸ್ಯೆ ಮಾಡಿದವರ ಶಿಕ್ಷೆಗೆ ಶಿಫಾರಸು ಮಾಡುವುದು ತಮ್ಮ ಕೆಲಸವಾಗಿದೆ ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಅಕ್ಷಯ್ ಶ್ರೀಧರ್ ಹಾಗೂ ಲೋಕಾಯುಕ್ತ ಎಸ್ಪಿ ಕುಮಾರಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಕಿಶೋರ್ ಕುಮಾರ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಲ್ಲೇಸ್ವಾಮಿ ಉಪಸ್ಥಿತರಿದ್ದರು.

ವಾರ್ತಾ ಭಾರತಿ: 16/11/2021

# ಕೋವಿಡ್ ಅನುದಾನ ದುರುಪಯೋಗವಾಗದಂತೆ ನಿಗಾ ವಹಿಸಿ

## ಅಧಿಕಾರಿಗಳಿಗೆ ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ನಿರ್ದೇಶನ




ಮಂಗಳೂರು, ನ.15: ಕೋವಿಡ್ ನಿರ್ವಹಣೆ ಸೇರಿದಂತೆ ವಿವಿಧ ಪ್ರಕ್ರಿಯೆಗಳಿಗಾಗಿ ಪ್ರತಿಯೊಂದು ಗ್ರಾಮ ಪಂಚಾಯತ್‌ಗಳಿಗೆ ಸರಕಾರ ನೀಡಿದ ಅನುದಾನ ಯಾವುದೇ ಕಾರಣಕ್ಕೂ ದುರುಪಯೋಗವಾಗದಂತೆ ನಿಗಾ ವಹಿಸಬೇಕು. ಅದು ಸದ್ಬಳಕೆಯಾಗುವಂತೆ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ನೋಡಿಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾ.ಪಿ.ವಿಶ್ವನಾಥ ಶೆಟ್ಟಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ನಗರದ ಜಿಲ್ಲಾ ಪಂಚಾಯತ್‌ನ ನೇತ್ರಾವತಿ ಸಭಾಂಗಣದಲ್ಲಿ ಸೋಮವಾರ ನಡೆದ ಕೋವಿಡ್ ನಿರ್ವಹಣೆ ಹಾಗೂ ಲೋಕಾಯುಕ್ತ ಪ್ರಕರಣಗಳ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದ.ಕ. ಜಿಲ್ಲೆಯಲ್ಲಿ ಕೋವಿಡ್ ಲಸಿಕೆಯ ಮೊದಲ ಡೋಸ್ ಶೇ.90ರಷ್ಟು ಹಾಗೂ ಎರಡನೇ ಡೋಸ್ ಅನ್ನು ಶೇ.59 ಮಂದಿ ಪಡೆದಿದ್ದಾರೆ. ಮೊದಲ ಡೋಸ್‌ನಲ್ಲಿ ಉಳಿದಿರುವ ಶೇ.10ರಷ್ಟು ಜನರನ್ನು ಗುರುತಿಸಿ, ಆದ್ಯತೆಯ ಮೇರೆಗೆ ಅವರೆಲ್ಲರಿಗೂ ಲಸಿಕೆ ಕೊಡಿಸಬೇಕು. ಈ ಕಾರ್ಯವನ್ನು ಮುಂದಿನ 15-20 ದಿನದೊಳಗೆ ಪೂರ್ಣಗೊಳಿಸಬೇಕೆಂದು ಸೂಚಿಸಿದರು.

ಈಗಾಗಲೇ ಶಾಲೆಗಳು ಆರಂಭಗೊಂಡಿದ್ದು, ಅಲ್ಲಿ ಕೋವಿಡ್ ಸಮುಚಿತ ವರ್ತನೆಗಳನ್ನು ಪಾಲನೆಯಾಗುತ್ತಿರುವ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ನಿಗಾ ವಹಿಸಬೇಕು. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಇತರ ಶಿಕ್ಷಣ ಅಧಿಕಾರಿಗಳು ಆಗಾಗ ವಿವಿಧ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿನ ವಿದ್ಯಾರ್ಥಿಗಳಿಗೆ ಕೋವಿಡ್ ಸೋಂಕು ಹರಡದಂತೆ ಕೈಗೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಮಾಸ್ಕ್ ಧಾರಣೆ, ಸುರಕ್ಷಿತ ಅಂತರ ಹಾಗೂ ಸ್ವಚ್ಛತೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ಜಿಪಂ ಸಿಇಒ ಮೂಲಕ ವರದಿ ನೀಡಬೇಕು ಎಂದು ಲೋಕಾಯುಕ್ತರು ಹೇಳಿದರು.

ಈ ವೇಳೆ ಮಾತನಾಡಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಲ್ಲೇಸ್ವಾಮಿ, ಜಿಲ್ಲೆಯಲ್ಲಿ 1,508 ಶಾಲೆಗಳಿದ್ದು, ಅವುಗಳಲ್ಲಿ 1,071 ಸರಕಾರಿ, 315 ಅನುದಾನಿತ, 400 ಅನುದಾನ ರಹಿತ, 11 ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ, 14 ಮೊರಾರ್ಜಿ ಶಾಲೆಗಳು, 11 ನವೋದಯ, 2 ಕೇಂದ್ರೀಯ ವಿದ್ಯಾಲಯ ಹಾಗೂ ಒಂದು ಜವಾಹರ ನವೋದಯ ಶಾಲೆಗಳಲ್ಲಿ 3,20,980 ವಿದ್ಯಾರ್ಥಿಗಳು ದಾಖಲಾಗಿದ್ದಾರೆ. 1ರಿಂದ 5ನೇ ತರಗತಿಯವರೆಗೆ ಶೇ.51, 6-8ರ ವರೆಗೆ ಶೇ.69 ಹಾಗೂ 8-10 ಶೇ.81 ವಿದ್ಯಾರ್ಥಿಗಳು ಸದ್ಯ ಶಾಲಾ ತರಗತಿಗಳಿಗೆ ಹಾಜರಾಗುತ್ತಿದ್ದಾರೆ ಎಂದರು.

ಜಿಲ್ಲೆಯಲ್ಲಿ ಕೋವಿಡ್ ಕಾರಣದಿಂದಾಗಿ 210 ಮಕ್ಕಳು ಪೋಷಕರನ್ನು ಕಳೆದುಕೊಂಡಿದ್ದಾರೆ, ಐದು ಮಕ್ಕಳು ತಂದೆ-ತಾಯಿ ಇಬ್ಬರನ್ನೂ ಕಳೆದುಕೊಂಡಿದ್ದಾರೆ ಎಂದು ಮಲ್ಲೇಸ್ವಾಮಿ ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಲೋಕಾಯುಕ್ತರು, ಕೂಡಲೇ ಈ ಮಕ್ಕಳಿಗೆ ಸರಕಾರದ ವತಿಯಿಂದ ನೀಡುವ ಪರಿಹಾರವನ್ನು ಒದಗಿಸುವಂತೆ ಸೂಚಿಸಿದರು.

ಮಕ್ಕಳಿಗೆ ಕೋವಿಡ್ ಲಸಿಕೆ ನೀಡುವ ನಿಟ್ಟಿನಲ್ಲಿ ಸರಕಾರ ಹೊರಡಿಸಿರುವ ಮಾರ್ಗಸೂಚಿಗಳನ್ನು ಪಾಲಿಸಲಾಗುತ್ತಿದೆ. ಈಗಾಗಲೇ 2,467 ವಿಕಲಚೇತನ ಮಕ್ಕಳನ್ನು ಗುರುತಿಸಲಾಗಿದ್ದು, ಲಸಿಕೆ ಬಂದ ಕೂಡಲೇ ಅವರಿಗೆ ಕೊಡಿಸಲಾಗುವುದು ಎಂದು ಡಿಡಿಪಿಐ ತಿಳಿಸಿದರು.

ಮಂಗಳೂರು ಮಹಾನಗರ ಪಾಲಿಕೆಯ ಇಬ್ಬರು ಸಿಬ್ಬಂದಿ ಸಾರ್ವಜನಿಕರ ಕೆಲಸಕ್ಕೆ ವಿಪರೀತ ಅಡೆತಡೆಯುಂಟು ಮಾಡುತ್ತಿರುವ ಬಗ್ಗೆ ದೂರುಗಳು ಬಂದಿದ್ದು, ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಈ ರೀತಿ ತೊಂದರೆಯುಂಟು ಮಾಡಿದ್ದಲ್ಲಿ ಸಂಬಂಧಿಸಿದವರ ವಿರುದ್ಧ ಕಾನೂನಿನ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಸಮಸ್ಯೆಗಳನ್ನುಂಟು ಮಾಡಬಾರದು, ಒಂದು ವೇಳೆ ಮಾಡಿದ್ದಲ್ಲಿ ಸಮಸ್ಯೆ ಮಾಡಿದವರ ಶಿಕ್ಷೆಗೆ ಶಿಫಾರಸು ಮಾಡುವುದು ತಮ್ಮ ಕೆಲಸವಾಗಿದೆ ಎಂದು ನ್ಯಾ.ಪಿ.ವಿಶ್ವನಾಥ ಶೆಟ್ಟಿ ಎಚ್ಚರಿಸಿದರು.

ಸಭೆಯಲ್ಲಿ ಸಿಇಒ ಡಾ. ಕುಮಾರ್, ಮನಪಾ ಆಯುಕ್ತ ಅಕ್ಷಿ ಶ್ರೀಧರ್, ಲೋಕಾಯುಕ್ತ ಎಸ್ಪಿ ಕುಮಾರಸ್ವಾಮಿ, ಜಿಲ್ಲಾಮಟ್ಟದ ಅಧಿಕಾರಿಗಳು, ತಾಪಂ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ತಹಶೀಲ್ದಾರರು ಉಪಸ್ಥಿತರಿದ್ದರು.

> ಗ್ರಾಮಗಳಲ್ಲಿ ಲಸಿಕೆ ಪಡೆಯದವರನ್ನು ಪತ್ತೆ ಹಚ್ಚಿ ಅವರ ಬಳಿ ತೆರಳಿ, ಲಸಿಕೆಯ ಮಹತ್ವದ ಬಗ್ಗೆ ಅರಿವು ಮೂಡಿಸಿ, ಲಸಿಕೆ ಪಡೆಯಲು ಪ್ರೇರೇಪಿಸಬೇಕು ಹಾಗೂ ಲಸಿಕೆ ಪಡೆಯಲು ಸಾಧ್ಯವಾದ ಎಲ್ಲಾ ಕ್ರಮಗಳನ್ನು ಸಕಾರಾತ್ಮಕವಾಗಿ ಕೈಗೊಳ್ಳಬೇಕು. ಯಾವುದಾದರೂ ಸಮಸ್ಯೆ ಇದ್ದಲ್ಲಿ ತಮ್ಮ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿಕೊಂಡು ಬಗೆಹರಿಸಿಕೊಳ್ಳಬೇಕು.
>
> ■ ನ್ಯಾ.ಪಿ.ವಿಶ್ವನಾಥ ಶೆಟ್ಟಿ
> ಕರ್ನಾಟಕ ಲೋಕಾಯುಕ್ತ

### ■ ಶಾಲೆ, ಲಸಿಕೆ ಕೇಂದ್ರಕ್ಕೆ ಭೇಟಿ

ಕರ್ನಾಟಕ ಲೋಕಾಯುಕ್ತ ನ್ಯಾ.ಪಿ.ವಿಶ್ವನಾಥ ಶೆಟ್ಟಿ ನಗರದ ಗಾಂಧಿ ನಗರದಲ್ಲಿರುವ ಸರಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಅಲ್ಲಿ ವಿದ್ಯಾರ್ಥಿಗಳು ಕೋವಿಡ್ ಸಮುಚಿತ ವರ್ತನೆಗಳನ್ನು ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದರು.

ಬಳಿಕ ನಗರದ ವೆನ್ಲಾಕ್ ಆಸ್ಪತ್ರೆಯಲ್ಲಿರುವ ಆಯುಷ್ ಘಟಕದಲ್ಲಿರುವ ಲಸಿಕೆ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

The Times of India: 16/11/2021

# 'Complete 1st dose vaccination target in 20 days'

Times News Network

**Mangaluru:** Karnataka Lokayukta Justice Vishwanath Shetty directed officials in Dakshina Kannada to work on a war footing to bring the Covid-19 pandemic completely under control.

At a review meeting on various Lokayukta cases at Dakshina Kannada zilla panchayat here on Monday, Shetty said the remaining 10% of the target population should be identified at

**LOKAYUKTA IN DAKSHINA KANNADA**

the earliest and they should be brought under vaccine cover within 15-20 days. The vaccination drive has touched 90% of the target population for the first dose in Dakshina Kannada.

"If we are not free from the Covid-19 pandemic, it is difficult for the nation to grow economically. There is no shortage of vaccines and it has no adverse effect. Hence, people should understand that they are responsible not only towards the health of their families, but society too," he said.

Special emphasis should be given to ensure adherence of Covid-appropriate behaviour in educational institutions, he said, and directed officials to visit schools and colleges regularly. "Submit a report to me through the zilla panchayat CEO," he said.

Deputy director of public instructions Malleswamy said that the attendance in classes from 1 to 5 was 51%, while it was 69% in classes from 6-8 and 81% in classes from 9-10. The district has 250 children who lost parents, including five losing both the parents, he said.

The Lokayukta directed officials to expedite the distribution of the government's ex-gratia. The Lokayukta said that his office had received complaints against two Mangaluru City Corporation employees who were creating obstruction in public work, whom he warned of action.

ಪ್ರಜಾವಾಣಿ: 16-11-2021

ಅಧಿಕಾರಿಗಳಿಗೆ ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ ಶೆಟ್ಟಿ ಸೂಚನೆ

# ಕೋವಿಡ್: ಯುದ್ಧೋಪಾದಿ ಕೆಲಸ ಮಾಡಿ

ಪ್ರಜಾವಾಣಿ ವಾರ್ತೆ

ಮಂಗಳೂರು: 'ಕೋವಿಡ್ ನಿಯಂತ್ರಣಕ್ಕೆ ಅಧಿಕಾರಿಗಳು ಯುದ್ಧೋಪಾದಿಯಲ್ಲಿ ಕೆಲಸ ಮಾಡಬೇಕು' ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಂಗಳೂರು ಜಿಲ್ಲಾ ಪಂಚಾಯಿತಿ ನೇತ್ರಾವತಿ ಸಭಾಂಗಣದಲ್ಲಿ ಸೋಮವಾರ ನಡೆದ ಕೋವಿಡ್ ನಿರ್ವಹಣೆ ಹಾಗೂ ಲೋಕಾಯುಕ್ತ ಪ್ರಕರಣಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಶೇ 90 ರಷ್ಟು ಮಂದಿಗೆ ಕೋವಿಡ್ ಲಸಿಕೆಯ ಮೊದಲ ಡೋಸ್, ಶೇ 59 ರಷ್ಟು ಮಂದಿ ಎರಡೂ ಡೋಸ್ ನೀಡಲಾಗಿದೆ. 'ಮೊದಲ ಡೋಸ್ ಪಡೆಯಲು ಉಳಿದಿರುವ ಶೇ 10ರಷ್ಟು ಜನರನ್ನು ಗುರುತಿಸಿ, ಆದ್ಯತೆ ಮೇರೆಗೆ ಲಸಿಕೆ ಕೊಡಿಸಬೇಕು. ಈ ಕಾರ್ಯ ಮುಂದಿನ 20 ದಿನದೊಳಗೆ ಪೂರ್ಣಗೊಳಿಸಬೇಕು' ಎಂದರು.

ಕೋವಿಡ್ ನಿರ್ವಹಣೆಗಾಗಿ ಪ್ರತಿ ಗ್ರಾಮ ಪಂಚಾಯಿತಿಗೆ ಸರ್ಕಾರ ₹50 ಸಾವಿರ ಅನುದಾನ ಬಿಡುಗಡೆ ಮಾಡಿದೆ. ಇದರ ಸದ್ಬಳಕೆಯ ಬಗ್ಗೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ಪರಿಶೀಲನೆ ನಡೆಸಬೇಕು ಎಂದರು.

ಜಿಲ್ಲೆಯಲ್ಲಿ ಕೋವಿಡ್ ಸೋಂಕಿನಿಂದಾಗಿ 210 ಮಕ್ಕಳು ಪೋಷಕರನ್ನು ಕಳೆದುಕೊಂಡಿದ್ದಾರೆ. ಇವರು ಮಕ್ಕಳು ತಂದೆ- ತಾಯಿ ಇಬ್ಬರನ್ನೂ ಕಳೆದುಕೊಂಡಿದ್ದಾರೆ ಎಂದು ಡಿಡಿಪಿಐ ಮಲ್ಲೇಸ್ವಾಮಿ ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕುಮಾರ್, ಪಾಲಿಕೆ ಆಯುಕ್ತ ಅಕ್ಷಯ್ ಶ್ರೀಧರ್ ಹಾಗೂ ಲೋಕಾಯುಕ್ತ ಎಸ್ಪಿ ಕುಮಾರಸ್ವಾಮಿ, ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ತಹಶೀಲ್ದಾರರು ಪಾಲ್ಗೊಂಡಿದ್ದರು.

**ಲಸಿಕಾ ಕೇಂದ್ರಕ್ಕೆ ಭೇಟಿ:** ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ ಶೆಟ್ಟಿ ಅವರು ನಗರದ ಗಾಂಧಿ ನಗರದ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ವಿದ್ಯಾರ್ಥಿಗಳು ಕೋವಿಡ್ ನಿಯಮಾವಳಿ ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸಿದರು. ನಗರದ ವೆನ್ಲಾಕ್ ಆಸ್ಪತ್ರೆಯಲ್ಲಿರುವ ಆಯುಷ್ ಘಟಕದ ಲಸಿಕಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಕಿಶೋರ್ ಕುಮಾರ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಲ್ಲೇಸ್ವಾಮಿ ಇದ್ದರು.



ಮಂಗಳೂರಿನ ಗಾಂಧಿ ನಗರದ ಸರ್ಕಾರಿ ಪ್ರಾಥಮಿಕ ಶಾಲೆಗೆ ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ ಶೆಟ್ಟಿ ಭೇಟಿ ನೀಡಿ ಕೋವಿಡ್ ನಿಯಮಾವಳಿ ಬಗ್ಗೆ ಪರಿಶೀಲನೆ ನಡೆಸಿದರು

## 'ಕ್ರಮಗಳ ಬಗ್ಗೆ ವರದಿ ನೀಡಿ'

'ಶಾಲೆ ಕಾಲೇಜುಗಳು ಆರಂಭಗೊಂಡಿದ್ದು, ಅಲ್ಲಿ ಕೋವಿಡ್ ನಿಯಮಾವಳಿಗಳು ಯಾವ ರೀತಿ ಪಾಲನೆ ಆಗುತ್ತಿವೆ ಎಂಬುದರ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ನಿಗಾ ವಹಿಸಬೇಕು. ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಇತರೆ ಶಿಕ್ಷಣ ಅಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡಿ, ಸೋಂಕು ಹರಡದಂತೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ಮಾಡಬೇಕು. ಮಾಸ್ಕ್, ಅಂತರ ಹಾಗೂ ಸ್ವಚ್ಛತೆಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೂಲಕ ತಮಗೆ ವರದಿ ನೀಡಬೇಕು' ಎಂದು ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥ ಶೆಟ್ಟಿ ಸೂಚನೆ ನೀಡಿದರು.

ಕನ್ನಡಪ್ರಭ: 16-11-2021

# ಕೋವಿಡ್ ನಿಯಂತ್ರಣಕ್ಕೆ ಯುದ್ಧೋಪಾದಿ ಕೆಲಸ ಮಾಡಿ

## 2ನೇ ಡೋಸ್ ಪಡೆಯದವರ ಗುರುತಿಸಿ ಲಸಿಕೆ ನೀಡಿ, ಗ್ರಾಪಂಗೆ ನೀಡಿದ ಅನುದಾನ ದುರ್ಬಳಕೆ ಸಲ್ಲದು: ಲೋಕಾಯುಕ್ತ

• **ಕನ್ನಡಪ್ರಭ ವಾರ್ತೆ** ಮಂಗಳೂರು

[illegible]



ಲೋಕಾಯುಕ್ತ ನ್ಯಾ.ಪಿ. ವಿಶ್ವನಾಥ ಶೆಟ್ಟಿ ಅವರು ಮಂಗಳೂರು ನಗರದ ಗಾಂಧಿ ನಗರದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದರು.

### ಪಾಲಿಕೆ ಸಿಬ್ಬಂದಿಯಿಂದ ಅಡಚಣೆ

[illegible]

### ಶಾಲೆ, ಲಸಿಕಾ ಕೇಂದ್ರಕ್ಕೆ ಭೇಟಿ

[illegible]

INDIAN EXPRESS : 16/11/2021

# Ensure covid norms in schools, 100% first dose in 20 days, says Lokayukta

EMS @Mangaluru

KARNATAKA Lokayukta Justice P Vishwanath Shetty directed the education officials to ensure that all Covid-19 precautions are being taken in view of reopening of schools and colleges.

Chairing a meeting on Covid-19 management and review of Lokayukta cases in Dakshina Kannada, Lokayukta Shetty called upon officials to effectively work to control spreading of Covid-19. "In DK, 90 percent of the people have received first dose of Covid-19 vaccine while 59 percent of people have got second dose of the vaccine. All remaining people should be vaccinated early within next 15 to 20 days. 1.75 lakh doses of Covaxin and Covishield are available. People need not hesitate to take vaccine as there is no side effect," he said. He also directed education officials to visit schools frequently and submit a report on following of Covid-19 procedures to zilla panchayat CEO.

DDPI Malleswamy said that 51 percent of children in 1 to 5 classes attend school while in 6 to 8 section, 69 percent of the children are attending classes. In 8 to 10 class section, 81 percent students are attending physical classes. "In the district, 210 children have lost parents to Covid-19 while 5 children have been orphaned due to Covid-19. To which, the Lokayukta directed to provide compensation immediately.

DDPI also said that 2467 specially abled children have been identified for administering vaccine once it is available.

DECCAN HERALD: 16/11/2021

# 'Complete first dose of vax drive in 20 days'

**A total of 1.75L doses of Covaxin, Covishield available in DK: Lokayukta**



Lokayukta Justice P Vishwanath Shetty visits a government school at Gandhinagara in Mangaluru.

MANGALURU, DHNS

Lokayukta Justice P Vishwanath Shetty directed officials to work round-the-clock to control Covid-19 infections across the district.

Justice Shetty, chairing a meeting on Covid management, observed that 90% of targeted beneficiaries in Dakshina Kannada had received first dose of vaccine while 59% of targeted beneficiaries were administered with second dose.

The remaining 10% of targeted population should be identified and the process of administering first dose of vaccine to them should be completed in the next 20 days. None should remain outside the vaccination campaign.

The Lokayukta said that there was no shortage of vaccines in the district. A total of 1.75 lakh doses of Covaxin and Covishield are available in the district.

"I have been vaccinated. I did not face any problem after availing the vaccine. All of us have a responsibility towards society. Covid-19 infections can be checked through the vaccines. But people should strictly adhere to Covid appropriate behaviour," he said.

Lokayukta said that the government had released Rs 50,000 each to gram panchayats in the state to tackle Covid-19. The funds should not be misused. The Taluk Panchayat EOs should monitor the use of funds. He said that he had been receiving complaints against two officers in Mangaluru City Corporation (MCC), who were allegedly harassing public. The Lokayukta warned of taking strict action if they continued to harass people.

## Loss of parents

DDPI Malleswamy said that 210 children in Dakshina Kannada had lost one of their parents to Covid-19. While five children had lost both parents in the district.

Shetty visited Government School at Gandhi Nagar and inspected Covid-19 protocols in the school.

He directed officials to visit schools and colleges frequently to inspect the implementation of Covid-19 guidelines.

A report on steps taken to maintain social distance and cleanliness in schools should be submitted through Zilla Panchayat CEO to Lokayukta.

Justice P Vishwanath Shetty also visited a vaccination centre at District Wenlock Hospital, sources added.

ಹೊಸ ದಿಗಂತ
ಶುಕ್ರವಾರ, 31 ಡಿಸೆಂಬರ್ 2021, ಬೆಂಗಳೂರು



## ಲೋಕಾಯುಕ್ತ ನೂತನ ವೆಬ್‌ಸೈಟ್ ರಾಜ್ಯಪಾಲರಿಂದ ಲೋಕಾರ್ಪಣೆ

# ಪಾರದರ್ಶಕ ಆಡಳಿತ ಮಾಹಿತಿ ಸಿಗಲಿ

**ಬೆಂಗಳೂರು:** ಲೋಕಾಯುಕ್ತ ಸಂಸ್ಥೆಯಲ್ಲಿ ಪಾರದರ್ಶಕತೆ ಹಾಗೂ ಸಾರ್ವಜನಿಕರಿಗೆ ಸಕಾಲಿಕ ಮಾಹಿತಿ ಒದಗಿಸಲು ಜಾಲತಾಣವನ್ನು ಉನ್ನತೀಕರಿಸಿರುವುದು ಪ್ರಶಂಸನೀಯ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ಹೇಳಿದರು.

ಗುರುವಾರ ಕರ್ನಾಟಕ ಲೋಕಾಯುಕ್ತದ ನೂತನ ವೆಬ್‌ಸೈಟ್ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಲೋಕಾಯುಕ್ತ ಸಂಸ್ಥೆಯ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ ತರಲು ಮತ್ತು ಎಲ್ಲಾ ವಿಷಯಗಳಲ್ಲಿ ಸಂಬಂಧಪಟ್ಟ ದೂರುದಾರರಿಗೆ, ಪ್ರತಿವಾದಿಗಳಿಗೆ ಮತ್ತು ಸಾರ್ವಜನಿಕರಿಗೆ ಮಾಹಿತಿಯನ್ನು ಒದಗಿಸುವ ನಿಟ್ಟಿನಲ್ಲಿ ಹೊಸದಾಗಿ ಲೋಕಾಯುಕ್ತ ಜಾಲತಾಣಕ್ಕೆ ಚಾಲನೆ ನೀಡಲಾಗಿದೆ. ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.



### ಎಲ್ಲಾ ವರ್ಗದ ಜನರಿಗೆ ನ್ಯಾಯ

ಲೋಕಾಯುಕ್ತದಲ್ಲಿ ಪಾರದರ್ಶಕತೆ ಅಳವಡಿಸುವ ನಿಟ್ಟಿನಲ್ಲಿ ವೆಬ್‌ಸೈಟ್ ಕಾರ್ಯನಿರ್ವಹಿಸಲಿದೆ. ಇದುವರೆಗೆ ಲೋಕಾಯುಕ್ತ ಹೇಗೆ ಕಾರ್ಯ ನಿರ್ವಹಿಸುತ್ತಿದೆ ಎಂಬುದು ಅನೇಕರಿಗೆ ಗೊತ್ತಿರಲಿಲ್ಲ. ಇನ್ನು ಮುಂದೆ ಕೇವಲ ಒಂದು ಕ್ಲಿಕ್‌ನಲ್ಲಿ ಎಲ್ಲಾ ಮಾಹಿತಿಯನ್ನು ಪಡೆದುಕೊಳ್ಳಬಹುದು. ಸರ್ಕಾರಕ್ಕೆ ಹಾಗೂ ಇತರೆ ಇಲಾಖೆಗಳಿಗೆ ಈ ವ್ಯವಸ್ಥೆ ಮಾದರಿಯಾಗಲಿದೆ. ಲೋಕಾಯುಕ್ತದಲ್ಲಿ ಕೆಲಸ ಮಾಡುವ ಪ್ರತಿಯೊಬ್ಬರೂ ತಾನು ಲೋಕಾಯುಕ್ತನೆಂದು ಭಾವಿಸಿ ಕಾರ್ಯನಿರ್ವಹಿಸಬೇಕು. ಆಗ ಮಾತ್ರ ಎಲ್ಲಾ ವರ್ಗದ ಜನರಿಗೆ ನ್ಯಾಯ ದೊರಕಿಸಲು ಸಾಧ್ಯ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ.ವಿಶ್ವನಾಥ್ ಶೆಟ್ಟಿ ತಿಳಿಸಿದರು.

ವ್ಯವಸ್ಥೆಯಲ್ಲಿ ಮಾನವ ಹಸ್ತಕ್ಷೇಪವನ್ನು ಕಡಿಮೆ ಮಾಡಿ ತಂತ್ರಜ್ಞಾನದ ಬಳಕೆಗೆ ಆದ್ಯತೆ ನೀಡುವುದರಿಂದ ಪ್ರಜಾಪ್ರಭುತ್ವದ ಚೌಕಟ್ಟಿನ ಪಾರದರ್ಶಕತೆ ಮತ್ತು ಉತ್ತಮ ಆಡಳಿತಕ್ಕೆ ದಾರಿ ಮಾಡಿಕೊಡುತ್ತದೆ ಎಂದರು.

**3293 ದೂರು ವಿಲೇ:** ಸಾರ್ವಜನಿಕ ಹಿತಾಸಕ್ತಿಯ ಅನೇಕ ವಿಷಯಗಳಲ್ಲಿ ಕರ್ನಾಟಕ ಲೋಕಾಯುಕ್ತ ಮತ್ತು ಉಪ ಲೋಕಾಯುಕ್ತರು ಸ್ವಯಂಪ್ರೇರಿತ ಕ್ರಮ ತೆಗೆದುಕೊಂಡಿದ್ದಾರೆ. ಕಳೆದ ವರ್ಷ ಕೋವಿಡ್ ಸಂದರ್ಭದಲ್ಲಿಯೂ ಕರ್ನಾಟಕ ಲೋಕಾಯುಕ್ತರಿಂದ 3293 ದೂರುಗಳು ಮತ್ತು 368 ಶಿಸ್ತಿನ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಮತ್ತು 228 ಪ್ರಕರಣಗಳಲ್ಲಿ ಆಕ್ಟ್ ನ ಸೆಕ್ಷನ್ 12(1) ಮತ್ತು 12(3) ರ ಅಡಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ವರದಿ ಮಾಡಲಾಗಿದೆ ಎಂದು ವಿವರಿಸಿದರು.

ಉಪಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್, ಲೋಕಾಯುಕ್ತದ ಎಡಿಜಿಪಿ ಪ್ರಶಾಂತ್ ಕುಮಾರ್ ಠಾಕೂರ್, ರಿಜಿಸ್ಟ್ರಾರ್ ಉಪಸ್ಥಿತರಿದ್ದರು.

ಕನ್ನಡಪ್ರಭ
ಶುಕ್ರವಾರ 31.12.2021

# ಲೋಕಾಯುಕ್ತ ವೆಬ್‌ಸೈಟ್‌ನ ಹೊಸ ರೂಪ ರಾಜ್ಯಪಾಲರಿಂದ ಅನಾವರಣ

## ದೂರುದಾರರು, ನಾಗರಿಕರಿಗೆ ಸಕಾಲಕವಾಗಿ ಮಾಹಿತಿ ಒದಗಿಸಲು ಉನ್ನತೀಕರಣ

• ಕನ್ನಡಪ್ರಭ ವಾರ್ತೆ ಬೆಂಗಳೂರು

[illegible]

[illegible] (lokayukta.kar.nic.in) [illegible]

[illegible] 1984 [illegible]



[illegible]

[illegible]

[illegible]

BENGALURU ಸಂಯುಕ್ತ ಕರ್ನಾಟಕ
31 ಡಿಸೆಂಬರ್ 2021
ಶುಕ್ರವಾರ
ಬೆಂಗಳೂರು
07

# ಹಸ್ತಕ್ಷೇಪ ತಪ್ಪಿಸಲು ತಂತ್ರಜ್ಞಾನ ಬಳಕೆ

**ಲೋಕಾಯುಕ್ತ ಜಾಲತಾಣ ಉದ್ಘಾಟನೆ**

ಸಂ.ಕ. ಸಮಾಚಾರ ಬೆಂಗಳೂರು

ಲೋಕಾಯುಕ್ತ ಸಂಸ್ಥೆಯ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆಯನ್ನು ತರಲು ಮತ್ತು ಎಲ್ಲಾ ವಿಷಯಗಳಲ್ಲಿ ಸಂಬಂಧಪಟ್ಟ ದೂರುದಾರರಿಗೆ, ಪ್ರತಿವಾದಿಗಳಿಗೆ ಮತ್ತು ಸಾರ್ವಜನಿಕರಿಗೆ ಸಕಾಲಿಕ ಮಾಹಿತಿಯನ್ನು ಒದಗಿಸುವ ನಿಟ್ಟಿನಲ್ಲಿ ನೂತನ ಕರ್ನಾಟಕ ಲೋಕಾಯುಕ್ತ ಜಾಲತಾಣಕ್ಕೆ ಚಾಲನೆ ನೀಡಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ಲೋಕಾಯುಕ್ತ ಕೇಂದ್ರ ಕಚೇರಿಯಲ್ಲಿ ಕರ್ನಾಟಕ ಲೋಕಾಯುಕ್ತ ಜಾಲತಾಣವನ್ನು ಉದ್ಘಾಟಿಸಿ ಮಾತನಾಡಿದ ಅವರು ವ್ಯವಸ್ಥೆಯಲ್ಲಿ ಮಾನವ ಹಸ್ತಕ್ಷೇಪವನ್ನು ಕಡಿಮೆ ಮಾಡಿ ತಂತ್ರಜ್ಞಾನದ ಬಳಕೆಗೆ ಆದ್ಯತೆ ನೀಡುವ ಪ್ರಧಾನಿ ಮೋದಿಯವರ ಚಿಂತನೆಯು ಪಾರದರ್ಶಕತೆ ಮತ್ತು ಉತ್ತಮ ಆಡಳಿತಕ್ಕೆ ದಾರಿ ಮಾಡಿಕೊಡುತ್ತದೆ. ಇದೇ ಚಿಂತನೆಯೊಂದಿಗೆ, ಸಂಸ್ಥೆಯ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆಯನ್ನು ತರಲು ಮತ್ತು ಎಲ್ಲಾ ವಿಷಯಗಳಲ್ಲಿ ಸಂಬಂಧಪಟ್ಟ ದೂರುದಾರರಿಗೆ, ಪ್ರತಿವಾದಿಗಳಿಗೆ ಮತ್ತು ಸಾರ್ವಜನಿಕರಿಗೆ ಸಕಾಲಿಕ ಮಾಹಿತಿಯನ್ನು ಒದಗಿಸಲು ಲೋಕಾಯುಕ್ತ ಜಾಲತಾಣವನ್ನು ಅಭಿವೃದ್ಧಿಪಡಿಸಲಾಗಿದೆ ಎಂದರು.



ಕರ್ನಾಟಕ ಲೋಕಾಯುಕ್ತ ಕೇಂದ್ರ ಕಚೇರಿಯಲ್ಲಿ ಜಾಲತಾಣವನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಉದ್ಘಾಟಿಸಿದರು. ಲೋಕಾಯುಕ್ತ ನ್ಯಾ.ಪಿ. ವಿಶ್ವನಾಥಶೆಟ್ಟಿ, ಉಪಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್ ಪಾಲ್ಗೊಂಡಿದ್ದರು.

ಸ್ವಯಂ ಪ್ರೇರಣೆಯಿಂದ ಲೋಕಾಯುಕ್ತ/ಉಪಲೋಕಾಯುಕ್ತರು ದಾಖಲಿಸಿಕೊಂಡಿರುವ ಪ್ರಕರಣಗಳ ವಿವರಗಳು, ಕರ್ನಾಟಕ ಲೋಕಾಯುಕ್ತಕ್ಕೆ ಸಂಬಂಧಿಸಿದ ಕಾಯಿದೆಗಳು, ನಿಯಮಗಳು ಮತ್ತು ಆದೇಶಗಳು, ವಿವಿಧ ರೀತಿಯ ಫಾರ್ಮ್ ಫಾರ್ಮ್ಯಾಟ್‌ಗಳು ಇತ್ಯಾದಿಗಳ ಮಾಹಿತಿ ಲಭ್ಯವಿದೆ ಎಂದ ಅವರು, ಹೊಸ ಜಾಲತಾಣ ರಚಿಸಿದ ಲೋಕಾಯುಕ್ತ, ಅಧಿಕಾರಿಗಳು ಮತ್ತು ತಾಂತ್ರಿಕ ತಂಡವನ್ನು ಅಭಿನಂದಿಸಿದರು ಹಾಗೂ ಕೈಗೊಂಡ ಪರಿಣಾಮಕಾರಿ ಕ್ರಮಗಳಿಗೆ ಪ್ರಶಂಸೆ ವ್ಯಕ್ತಪಡಿಸಿದರು.

ದೂರು ಆಧಾರಿತ ಸ್ವಯಂ ಪ್ರೇರಣೆಯ ಆಧಾರದ ಮೇಲೆ ತನಿಖೆಗಳು ಮತ್ತು ತಪಾಸಣೆಗಳ ಮೂಲಕ ಸಾರ್ವಜನಿಕ ಆಡಳಿತದಲ್ಲಿ ಉತ್ತಮತೆಯನ್ನು ಅಭಿವೃದ್ಧಿಪಡಿಸಲು ಮತ್ತು ಶುದ್ಧ ಆಡಳಿತ, ನ್ಯಾಯಸಮ್ಮತತೆ ಮತ್ತು ಸೂಕ್ಷ್ಮತೆಯನ್ನು ತರಲು ನಿರಂತರ ಪ್ರಯತ್ನಗಳನ್ನು ಮಾಡಲು ಲೋಕಾಯುಕ್ತರಿಂದ ನಿರೀಕ್ಷಿಸಲಾಗಿದೆ ಎಂದರು.

ಲೋಕಾಯುಕ್ತ ನ್ಯಾ.ಪಿ.ವಿಶ್ವನಾಥಶೆಟ್ಟಿ, ಉಪಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್, ನಿವೃತ್ತ ಲೋಕಾಯುಕ್ತ ನ್ಯಾ.ಸಂತೋಷ್ ಹೆಗ್ಡೆ, ಲೋಕಾಯುಕ್ತ ಎಡಿಜಿಪಿ ಪ್ರಶಾಂತ್ ಕುಮಾರ್ ಠಾಕೂರ್ ಸೇರಿದಂತೆ, ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

THE HINDU
FRIDAY, DECEMBER 31, 2021

# Lokayukta website launched

STAFF REPORTER
BENGALURU

The new website of Karnataka Lokayukta was launched on Thursday.

According to an official release, Governor Thaawarchand Gehlot, who inaugurated the website at the Lokayukta headquarters in the city, said the Lokayukta website has been upgraded to provide transparency in the functioning of the organisation and provide timely information to complainants, defendants, and the public.

## Clean administration

He said the Karnataka Lokayukta Act was enacted in 1984 to independently and investigate complaints of negligence and office misconduct in the performance of the public employees with the intention of creating a clean administration, the release stated.

Mr. Gehlot said the Lokayukta is expected to make continuous efforts to develop cleanliness in public administration and to bring about clean governance, fairness and sensitivity thorough investigations and investigations based on complaint or self-motivation.

2

ಉದಯವಾಣಿ ಬೆಂಗಳೂರು

ಶುಕ್ರವಾರ, ಡಿಸೆಂಬರ್ 31, 2021

ಲೋಕಾಯುಕ್ತ ಕಾರ್ಯವ್ಯಾಪ್ತಿಯ ಸಮಗ್ರ ಚಿತ್ರಣ ವೆಬ್‌ಸೈಟ್‌ನಲ್ಲಿ ಲಭ್ಯ: ಥಾವರ್ ಚಂದ್ ಗೆಹಲೋತ್

# ಲೋಕಾ ಸಂಸ್ಥೆಯ ವೆಬ್‌ಸೈಟ್ ಅನಾವರಣ



ರಾಜ್ಯಪಾಲ ಗೆಹಲೋತ್ ಲೋಕಾಯುಕ್ತ ಸಂಸ್ಥೆಯ ಜಾಲತಾಣವನ್ನು ಲೋಕಾರ್ಪಣೆಗೊಳಿಸಿದರು.

**ಬೆಂಗಳೂರು:** ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಕಾರ್ಯನಿರ್ವಹಣೆಯ ಸಮಗ್ರ ಮಾಹಿತಿಯನ್ನು ಸಾರ್ವಜನಿಕರಿಗೆ ಒದಗಿಸುವ ನಿಟ್ಟಿನಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹಲೋತ್ ನೂತನ ಜಾಲತಾಣವನ್ನು ಲೋಕಾರ್ಪಣೆ ಮಾಡಿದರು.

ಗುರುವಾರ ಲೋಕಾಯುಕ್ತ ಕೇಂದ್ರ ಕಚೇರಿಯಲ್ಲಿ [illegible] ನಂತರ ಮಾತನಾಡಿದ ಅವರು, ಲೋಕಾಯುಕ್ತ ಸಂಸ್ಥೆಯ ಕಾರ್ಯನಿರ್ವಹಣೆಯ ಬಗ್ಗೆ ಪಾರದರ್ಶಕತೆ ಕಾಯ್ದುಕೊಳ್ಳಲು, [illegible] ಸಾಕ್ಷಿದಾರರು ಹಾಗೂ ಸಾರ್ವಜನಿಕರಿಗೆ ಸಂಪೂರ್ಣ ಮಾಹಿತಿ ತಿಳಿಸುವ ಉದ್ದೇಶದಿಂದ ಈ ಜಾಲತಾಣವನ್ನು ಅನಾವರಣಗೊಳಿಸಲಾಗಿದೆ ಎಂದು ತಿಳಿಸಿದರು.

[illegible]

http://lokayukta.kar.nic.in/

ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ
VIJAYAVANI BENGALURU
ಶುಕ್ರವಾರ 31 ಡಿಸೆಂಬರ್ 2021
31 DECEMBER 2021
5
ಬೆಂಗಳೂರು ಸಿಟಿ ಎಕ್ಸ್‌ಪ್ರೆಸ್

ದೂರುದಾರರಿಗೆ ಸಕಾಲಿಕ ಮಾಹಿತಿ | ಪಾರದರ್ಶಕತೆ ಕಾಯ್ದುಕೊಳ್ಳಲು ಅನುಕೂಲ

# ಬೆರಳ ತುದಿಯಲ್ಲಿ ಲೋಕಾಯುಕ್ತ ಮಾಹಿತಿ

» ವೆಬ್‌ಸೈಟ್‌ಗೆ ರಾಜ್ಯಪಾಲರಿಂದ ಚಾಲನೆ

ಬೆಂಗಳೂರು: ಲೋಕಾಯುಕ್ತ ಸಂಸ್ಥೆಯಲ್ಲಿ ಪಾರದರ್ಶಕತೆ ಹಾಗೂ ದೂರುದಾರರಿಗೆ, ಪ್ರತಿವಾದಿಗಳಿಗೆ ಮತ್ತು ಜನರಿಗೆ ಸಕಾಲಿಕ ಮಾಹಿತಿ ಒದಗಿಸಲು ನೂತನ ವೆಬ್‌ಸೈಟ್ ಅನುಕೂಲವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹಲೋತ್ ಹೇಳಿದ್ದಾರೆ.

ಲೋಕಾಯುಕ್ತ ಕೇಂದ್ರ ಕಚೇರಿಯಲ್ಲಿ ಗುರುವಾರ ಲೋಕಾಯುಕ್ತ ವೆಬ್‌ಸೈಟ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ಪಾರದರ್ಶಕತೆ ಮತ್ತು ಉತ್ತಮ ಆಡಳಿತ ಚಿಂತನೆಯಲ್ಲಿ ಲೋಕಾಯುಕ್ತ ವೆಬ್‌ಸೈಟ್ ಆರಂಭಿಸಿರುವುದು ಶ್ಲಾಘನೀಯ ಎಂದರು.

ದೂರುದಾರರಿಗೆ, ಪ್ರತಿವಾದಿಗಳಿಗೆ ಮತ್ತು ಜನರಿಗೆ ಸಕಾಲಿಕ ಮಾಹಿತಿ ಸಿಗಲಿದೆ. ನಾಗರಿಕರಿಗೆ ತ್ವರಿತ, ಸುಲಭ ಮತ್ತು ನ್ಯಾಯವನ್ನು ಪಡೆಯಲು ಅನುಕೂಲವಾಗಲಿದೆ. ಲೋಕಾಯುಕ್ತ ವೆಬ್‌ಸೈಟ್‌ನಲ್ಲಿ ಇತಿಹಾಸ, ಸರ್ಕಾರಿ/ ಸಾರ್ವಜನಿಕ ನೌಕರರ ವಿರುದ್ಧ ದೂರುಗಳನ್ನು ಸಲ್ಲಿಸುವ ವಿಧಾನ, ದೂರು, ವಿಮರ್ಶೆ, ಟಿಪ್ಪಣಿ, ಆದೇಶಗಳ ಪ್ರತಿ, 2017ರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ವಿವಿಧ ವಿಭಾಗಗಳ ಅಡಿಯಲ್ಲಿ ಅಂಕಿಅಂಶಗಳು ಮತ್ತು ವರದಿಗಳನ್ನು ವೀಕ್ಷಿಸಬಹುದು ಎಂದರು.

ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ, ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್, ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ, ಲೋಕಾಯುಕ್ತ ಎಡಿಜಿಪಿ ಪ್ರಶಾಂತ್ ಕುಮಾರ್ ಠಾಕೂರ್ ಉಪಸ್ಥಿತರಿದ್ದರು.


ಲೋಕಾಯುಕ್ತ ವೆಬ್‌ಸೈಟ್‌ಗೆ ರಾಜ್ಯಪಾಲ ಥಾವರ್‌ಚಂದ್ ಗೆಹಲೋತ್ ಚಾಲನೆ ನೀಡಿದರು. ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ, ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಇತರರಿದ್ದರು.

### ವೆಬ್‌ಸೈಟ್ ವೈಶಿಷ್ಟ್ಯ

ಲೋಕಾಯುಕ್ತ ವೆಬ್‌ಸೈಟ್‌ನಲ್ಲಿ (https://lokayukta.kar.nic.in) ಸಾರ್ವಜನಿಕರ ಕುಂದುಕೊರತೆಗಳ ಬಗ್ಗೆ, ಸರ್ಕಾರಿ ನೌಕರರ ದುರ್ನಡತೆ ಮತ್ತು ಅವರ ವಿರುದ್ಧ ಹೇಗೆ ದೂರು ಸಲ್ಲಿಸಬಹುದು, ಪ್ರಕರಣ ಯಾವ ಹಂತದಲ್ಲಿದೆ, ಪ್ರತಿ ದಿನ ವಿಚಾರಣಾಧಿಕಾರಿಗಳ ಮುಂದೆ ಯಾವ ಕೇಸ್ಗಳು ವಿಚಾರಣಾ ಪ್ರಕರಣ ಬಂದಿದೆ, ಎಷ್ಟು ಪ್ರಕರಣಗಳು ಬಾಕಿ ಇವೆ, ಕೇಸು ಕ್ರಮವಾಗಿರುವ ಪ್ರಕರಣಗಳ ವಿವರ ಸೇರಿದಂತೆ ಲೋಕಾಯುಕ್ತ ಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ಪಡೆಯಬಹುದು.

ಕನ್ನಡಪ್ರಭ
ಶುಕ್ರವಾರ 12.1.2018

ಒಬ್ಬ ಸಾಮಾನ್ಯ ಪ್ರಜೆಯಾಗಿ ಇಂದಿರಾ ಕ್ಯಾಂಟೀನ್ ಯೋಜನೆಗೆ ನಾನು ಪ್ರಶಂಸಿಸುತ್ತೇನೆ. ಇಲ್ಲಿ ನೀಡುವ ಆಹಾರದ ಗುಣಮಟ್ಟದ ಕುರಿತು ಸಹ ಲೋಕಾಯುಕ್ತ ರಿಗೂ ದೂರುಗಳು ಬಂದಿದ್ದು, ಈ ಹಿನ್ನೆಲೆ ಯಲ್ಲಿ ಬೆಂಗಳೂರಿನ ಹಲವು ಇಂದಿರಾ ಕ್ಯಾಂಟೀನ್‌ಗಳಿಗೆ ಲೋಕಾ ಪೊಲೀಸರು ಭೇಟಿ ನೀಡಿ ಆಹಾರ ಪರೀಕ್ಷಿಸಿದ್ದು, ಉತ್ತಮ ಗುಣಮಟ್ಟದ್ದಾಗಿದೆ.
• **ವಿಶ್ವನಾಥ ಶೆಟ್ಟಿ** ಲೋಕಾಯುಕ್ತ ನ್ಯಾಯಮೂರ್ತಿ

# ರಾಜ್ಯದ ಜನತೆಗೆ ಉತ್ತಮ ಆಡಳಿತ

## ಸಭೆಯಲ್ಲಿ ಕರ್ನಾಟಕ ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಹೇಳಿಕೆ



ಸಭೆಯಲ್ಲಿ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಗದಗ

ಲೋಕಾಯುಕ್ತ ಅಧಿಕಾರ ಬಳಸಿಕೊಂಡು ಜನರಿಗೆ ಉತ್ತಮ ಆಡಳಿತ ನೀಡುವ ನಿಟ್ಟಿನಲ್ಲಿ ವ್ಯವಸ್ಥೆಯ ಸುಧಾರಣೆ ತಮ್ಮ ಮುಖ್ಯ ಉದ್ದೇಶವಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಹೇಳಿದರು.

ಅವರು ಗುರುವಾರ ಗದಗ ಜಿಪಂ ಸಭಾಂಗಣದಲ್ಲಿ ಜರುಗಿದ ಜಿಲ್ಲೆಯ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆಯಲ್ಲಿ ಮಾತನಾಡಿದರು. ಅಧಿಕಾರಿಗಳಿಗೆ ಸರ್ಕಾರವು ಜನತೆಯ ಶ್ರೇಯೋಭಿವೃದ್ಧಿಗಾಗಿ ಅಧಿಕಾರ ಕೊಟ್ಟಿದ್ದು, ಅದನ್ನು ಒಳ್ಳೆಯ ರೀತಿಯಲ್ಲಿ ಬಳಸಿಕೊಂಡು ಸರ್ಕಾರದ ಯೋಜನೆಗಳ ಉದ್ದೇಶ ಜನಸಾಮಾನ್ಯರಿಗೆ ತಲುಪುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು. ಆ ರೀತಿ ಆಗದಿದ್ದಲ್ಲಿ ಲೋಕಾಯುಕ್ತರಾಗಿ ತಮಗೆ ನೀಡಿರುವ ಕೆಲಸವನ್ನು ಹಾವು ಮಾಡಬೇಕಾಗುತ್ತದೆ. ಆದರೆ, ಅದಕ್ಕೆ ಅವಕಾಶ ನೀಡದೇ ಸಾರ್ವಜನಿಕರಿಗೆ ಪಾರದರ್ಶಕ ಹಾಗೂ ಉತ್ತಮ ಆಡಳಿತವನ್ನು ನೀಡಲು ಪ್ರತಿಯೊಬ್ಬ ಅಧಿಕಾರಿಯು ಬದ್ಧತೆಯಿಂದ ಕೆಲಸ ಮಾಡಬೇಕು. ಗದಗ ಜಿಲ್ಲೆಯು ಒಂದು ಒಳ್ಳೆಯ ಆಡಳಿತ ವ್ಯವಸ್ಥೆಯ ಜಿಲ್ಲೆಯಾಗುವಂತೆ ಪ್ರಯತ್ನಿಸಬೇಕು. ಸಾರ್ವಜನಿಕರ ಕುಂದುಕೊರತೆ ಅಹವಾಲುಗಳನ್ನು ನಿಯಮಬದ್ಧವಾಗಿ ಸ್ವೀಕರಿಸಿ ಪರಿಹಾರಗಳನ್ನು ಒದಗಿಸಬೇಕು ಎಂದರು.

ಲೋಕಾಯುಕ್ತರ ಹೆಚ್ಚುವರಿ ಮಹಾ ಪೊಲೀಸ್ ನಿರ್ದೇಶಕ ಸಂಜಯ ಸಹಾಯ್ ಮಾತನಾಡಿ, ಯಾವುದೇ ಇಲಾಖೆಗಳಿಗೆ ಆಡಿಟ್ ವರದಿಗಳ ಕುರಿತು ಸರಿಯಾದ ಸ್ಪಂದನೆ ನೀಡಿ ಸರಿಯಾಗಿ ಅನುಷ್ಠಾನಗೊಳಿಸಬೇಕು. ವಿಳಂಬ ಮಾಡಿದಲ್ಲಿ ಅಥವಾ ಉದಾಸೀನ ಮಾಡಿದಲ್ಲಿ ಮಹಾಲೇಖಪಾಲರಿಗೆ ತಪ್ಪು ಮಾಹಿತಿ ಹೋಗಿ ಅನೇಕ ಆಡಳಿತಾತ್ಮಕ ತೊಂದರೆಗಳು ಉದ್ಭವವಾಗುತ್ತವೆ. ಆದರಿಂದ ಮಹಾಲೇಖಪಾಲರ ತಪಾಸಣಾ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದರು.

ಸಭೆಯಲ್ಲಿ ಶಿಕ್ಷಣ, ಆರೋಗ್ಯ, ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ, ಕೃಷಿ, ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಯೋಜನೆ ಕುರಿತು ಚರ್ಚಿಸಲಾಯಿತು. ಜಿಲ್ಲಾಧಿಕಾರಿ ಮನೋಜ್ ಜೈನ್, ಎಸ್ಪಿ ಕೆ. ಸಂತೋಷ ಬಾಬು, ಜಿಪಂ ಸಿಇಒ ಮಂಜುನಾಥ ಚವ್ಹಾಣ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಜಿಪಂ ಉಪಕಾರ್ಯದರ್ಶಿ ಎಸ್.ಸಿ. ಮಹೇಶ, ಜಿಪಂ ಯೋಜನಾ ನಿರ್ದೇಶಕ ಟಿ. ದಿನೇಶ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರೇಶ, ಉಪ ಅರಣ್ಯ ಸಂರಕ್ಷಣಾಧಿಕಾರಿ ಯಶಪಾಲ ಕ್ಷೀರಸಾಗರ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಂದಿರಾ ಕ್ಯಾಂಟೀನ್ ಉತ್ತಮ ಯೋಜನೆ

**ಗದಗ:** ಇಂದಿರಾ ಕ್ಯಾಂಟೀನ್ ಬಡವರ ಹಾಗೂ ಹಸಿದವರಿಗೆ ರೂಪಿಸಿರುವ ಅತ್ಯುತ್ತಮ ಯೋಜನೆ ಯಾಗಿದೆ ಎಂದು ರಾಜ್ಯ ಸರ್ಕಾರದ ಇಂದಿರಾ ಕ್ಯಾಂಟೀನ್ ಯೋಜನೆಯನ್ನು ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಪ್ರಶಂಸೆ ಮೆಚ್ಚುಗೆ ವ್ಯಕ್ತಪಡಿಸಿದರು. ಅವರು ಗುರುವಾರ ಗದಗ ನಗರಕ್ಕೆ ಆಗಮಿಸಿದ್ದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ಒಬ್ಬ ಸಾಮಾನ್ಯ ಪ್ರಜೆಯಾಗಿ ಇಂದಿರಾ ಕ್ಯಾಂಟೀನ್ ಯೋಜನೆಗೆ ನಾನು ಪ್ರಶಂಸಿಸುತ್ತೇನೆ. ಇಲ್ಲಿ ನೀಡುವ ಆಹಾರದ ಗುಣಮಟ್ಟದ ಕುರಿತು ಸಹ ಲೋಕಾಯುಕ್ತರಿಗೂ ದೂರುಗಳು ಬಂದಿದ್ದು, ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಹಲವು ಇಂದಿರಾ ಕ್ಯಾಂಟೀನ್‌ಗಳಿಗೆ ಲೋಕಾ ಪೊಲೀಸರು ಭೇಟಿ ನೀಡಿ ಆಹಾರ ಪರೀಕ್ಷಿಸಿದ್ದು, ಇಂದಿರಾ ಕ್ಯಾಂಟೀನ್ ನಲ್ಲಿರುವ ಆಹಾರ ಉತ್ತಮ ಗುಣಮಟ್ಟದ್ದಾಗಿದೆ. ಈ ವಿಷಯವಾಗಿ ಸಿದ್ಧವಾಗಿದ್ದ ಪರಿಶೀಲನಾ ವರದಿಯನ್ನು ಬೆಂಗಳೂರು ಕಮೀಷನರ್‌ಗೆ ಸಲ್ಲಿಸಲಾಗಿದ್ದು, ಅವರು ಕೂಡ ಈ ಕುರಿತು ತಮ್ಮ ಅಧಿಕಾರಿಗಳಿಂದ ಪರಿಶೀಲನೆ ನಡೆಸಿದ್ದು, ಅಲ್ಲಿ ಸಣ್ಣಪುಟ್ಟ ದೋಷಗಳನ್ನು ಬಿಟ್ಟರೆ ಯಾವುದೇ ಗಂಭೀರ ಸಮಸ್ಯೆಗಳಿಲ್ಲ ಎಂದರು. ನಂತರ ಬೆಟಗೇರಿಯ ರಾಜೀವಗಾಂಧಿ ನಗರದಲ್ಲಿನ ಗೌರವ ಭವನ ಮತ್ತು ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗೆ ಭೇಟಿ ನೀಡಿ ಪರಿಶೀಲಿಸಿದರು.

## ಬಾಕಿ ಪ್ರಕರಣಗಳ ಇತ್ಯರ್ಥಕ್ಕೆ ಕ್ರಮ

• **ಕನ್ನಡಪ್ರಭ ವಾರ್ತೆ** ಗದಗ

ಲೋಕಾಯುಕ್ತದಲ್ಲಿ ಬಾಕಿ ಉಳಿದಿರುವ 4 ಸಾವಿರ ಪ್ರಕರಣಗಳ ಇತ್ಯರ್ಥಕ್ಕೆ ವಿಶೇಷ ಗಮನ ನೀಡಲಾಗಿದ್ದು ಇದಕ್ಕಾಗಿ ಜಿಲ್ಲಾ ಮಟ್ಟದ ನ್ಯಾಯಾಧೀಶರು ಗಳನ್ನು ಕೊಡುವಂತೆ ಸರ್ಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆಗೆ ಸಮ್ಮತಿ ದೊರೆತು 5 ಜನ ಜಿಲ್ಲಾ ಮಟ್ಟದ ನ್ಯಾಯಾಧೀಶರುಗಳನ್ನು ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಹೇಳಿದರು.

ಅವರು ಗುರುವಾರ ನಗರದ ಜಿಲ್ಲಾಡಳಿತ ಭವನದಲ್ಲಿ ಅಧಿಕಾರಿಗಳ ಪ್ರಗತಿ ಪರಿಶೀಲನೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಲೋಕಾಯುಕ್ತದಲ್ಲಿ ಒಟ್ಟು 6400 ಪ್ರಕರಣಗಳು ಬಾಕಿ ಇದ್ದು, ಅವುಗಳಲ್ಲಿ 2500 ಪ್ರಕರಣಗಳನ್ನು ಈಗಾಗಲೇ ವಿಲೇವಾರಿ ಮಾಡಲಾಗಿದ್ದು, ಇನ್ನುಳಿದ 4 ಸಾವಿರ ಪ್ರಕರಣ ನಮ್ಮ ವ್ಯಾಪ್ತಿಗೆ ಬಾರದ ಹಿನ್ನೆಲೆಯಲ್ಲಿ ಅವುಗಳನ್ನು ಇಲಾಖೆಗಳಿಗೆ ರವಾನಿಸಲಾಗಿದೆ. ಲೋಕಾಯುಕ್ತದಲ್ಲಿ ಬಹಳ ವರ್ಷಗಳಿಂದ ಇತ್ಯರ್ಥ ವಾಗದೇ ಬಾಕಿ ಪ್ರಕರಣಗಳಿಂದಾಗಿ ಸಾಕಷ್ಟು ಸಮಸ್ಯೆಯಾಗುತ್ತಿದ್ದು, ಸಧ್ಯ ಇರುವ ಸಿಬ್ಬಂದಿಗಳ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಬೇಕಾದಲ್ಲಿ 6 ವರ್ಷಗಳ ಕಾಲಾವಕಾಶ ಬೇಕಾಗುವ ಹಿನ್ನೆಲೆಯಲ್ಲಿ, ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರಕ್ಕೆ 9 ಜನ ನಿವೃತ್ತ ಅಥವಾ ಹಾಲಿ ಜಿಲ್ಲಾ ನ್ಯಾಯಾಧೀಶರುಗಳನ್ನು ನೇಮಕಕ್ಕೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಇದಕ್ಕೆ ಸ್ಪಂದಿಸಿರುವ ಸರ್ಕಾರ 5 ಜನ ಜಿಲ್ಲಾ ನ್ಯಾಯಾಧೀಶ ಮಟ್ಟದ ಅಧಿಕಾರಿಗಳು ಹಾಗೂ 15 ಜನ ಇಲಾಖೆ ಸಿಬ್ಬಂದಿಗಳನ್ನು ನೀಡಿದ ಹಿನ್ನೆಲೆಯಲ್ಲಿ ಬಾಕಿ ಪ್ರಕರಣಗಳು ಶೀಘ್ರ ವಿಲೇವಾರಿಯಾಗಲಿವೆ.

ಲೋಕಾಯುಕ್ತರ ಕಾರ್ಯವ್ಯಾಪ್ತಿಯ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು ಕೆಲವರು ಕೆಲವು ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಾರೆ. ಎಲ್ಲಾ ಅಧಿಕಾರಿಗಳು ತಪ್ಪು ಮಾಡುವುದಿಲ್ಲ, ಇರುವ ಅಧಿಕಾರಿಗಳಿಗೆ ತಿದ್ದಿ ಬುದ್ಧಿ ಹೇಳಿ ಅವರಿಂದ ಕೆಲಸ ಪಡೆಯುವುದು ನನ್ನ ಕಾರ್ಯವಾಗಿದೆ. ಮನೆಯಲ್ಲಿ ಮಗು ತಪ್ಪು ಮಾಡಿದಾಗ ನಾವೇಗೆ ತಿದ್ದಿ ಬುದ್ಧಿ ಹೇಳುತ್ತೇವೆ. ಅದೇ ಮಾದರಿಯಲ್ಲಿಯೇ ಕಾರ್ಯ ನಿರ್ವಹಿಸುವ ವ್ಯಕ್ತಿತ್ವ ನನ್ನದು. ಸರ್ಕಾರಿ ಆಸ್ಪತ್ರೆಯಲ್ಲಿನ ಅವ್ಯವಸ್ಥೆಯ ಬಗ್ಗೆ ಸಾಕಷ್ಟು ಆಕ್ಷೇಪಗಳಿವೆ. ಆದರೆ ಅವರು ಕೂಡಾ ಮನುಷ್ಯರೇ. ಒಂದು ದಿನದಲ್ಲಿ ನೂರಕ್ಕೆ ಹೆಚ್ಚು ಜನರನ್ನು ತಪಾಸಣೆ ಮಾಡಬೇಕಾದ ಅನಿವಾರ್ಯತೆ ಅವರಿಗೆ ಇದೆ. ಇದೇ ರೀತಿ ಬೇರೆ ಬೇರೆ ಇಲಾಖೆಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೆ ಸಾಕಷ್ಟು ಒತ್ತಡವಿದೆ, ಅವರಿಗೆ ನಮ್ಮಿಂದಲೂ ಒತ್ತಡವಾಗಬಾರದು, ಬದಲಾಗಿ ತಪ್ಪುಗಳಂತೆ ಅವರು ನಡೆದುಕೊಳ್ಳುವ ಬಗ್ಗೆ ಅವರಿಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿ, ಅವರ ಸ್ವಲ್ಪ ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ನಿರ್ವಹಿಸುತ್ತಿದ್ದೇವೆ. ಒಟ್ಟಿನಲ್ಲಿ ಸಂತೃಪ್ತ ಸಮಾಜ ನಿರ್ಮಾಣ ಮಾಡುವುದು ನನ್ನ ಕೆಲಸವಾಗಿದೆ ಎಂದರು.

ಲೋಕಾಯುಕ್ತ ಎಡಿಜಿಪಿ ಸಂಜಯ ಸಹಾಯ, ಜಿಲ್ಲಾಧಿಕಾರಿ ಮನೋಜ್ ಜೈನ, ಜಿಪಂ ಸಿಇಒ ಮಂಜುನಾಥ ಚವ್ಹಾಣ, ಡಿಎಫ್ಒ ಯಶಪಾಲ್ ಕ್ಷೀರಸಾಗರ, ಮುಂತಾದವರು ಹಾಜರಿದ್ದರು. ಸುದ್ದಿಗೋಷ್ಠಿಯಲ್ಲಿ 20 ನಿಮಿಷಕ್ಕೂ ಹೆಚ್ಚು ಕಾಲ ವಿವಿಧ ವರದಿಗಳನ್ನು ಆಧಾರಿಸಿ ನಡೆದಿರುವುದರ ಮಾಹಿತಿಯನ್ನು ಹೇಳುವ ಮೂಲಕ ಮಾಧ್ಯಮಗಳು ಜವಾಬ್ದಾರಿ ಅರಿತು ಕಾರ್ಯ ನಿರ್ವಹಿಸಲಿ ಎಂದು ಪಾಠ ಮಾಡಿದ್ದು ವಿಶೇಷವಾಗಿತ್ತು.

ಎಸಿಬಿ ಸ್ಥಾಪನೆ ನಂತರ ಲೋಕಾಯುಕ್ತಕ್ಕೆ ದಾಖಲಾಗುವ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿದೆ ಎನ್ನುವುದು ಸತ್ಯಕ್ಕೆ ದೂರವಾದ ಮಾತಾಗಿದ್ದು, ಇದು ಸಧ್ಯ ಲೋಕಾಯುಕ್ತದಲ್ಲಿರುವ ಪ್ರಕರಣಗಳ ಸಂಖ್ಯೆಯನ್ನು ಗಮನಿಸಿದಲ್ಲಿ ಲೋಕಾಯುಕ್ತದ ಬಗ್ಗೆ ಈಗಲೂ ಜನರಿಗೆ ಗೊತ್ತಿದೆ. ಪ್ರಕರಣಗಳು ಕಡಿಮೆಯಾಗಿಲ್ಲ.
• **ವಿಶ್ವನಾಥ ಶೆಟ್ಟಿ** ಲೋಕಾಯುಕ್ತ ನ್ಯಾಯಮೂರ್ತಿ

ವಿಜಯ ಕರ್ನಾಟಕ

ಸಾಹಿತಿ ಜಿ.ಎಸ್.ಶಿವರುದ್ರಪ್ಪ ಅವರ ಪ್ರಥಮ ಒಲವು ಕವಿತೆ. ನಂತರ ಸಾಹಿತ್ಯಿಕ ವಿಮರ್ಶೆ. ಆದರೆ ಅವರಿಗೆ 1984ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ತಂದು ಕೊಟ್ಟಿದ್ದು ಗದ್ಯ ಕೃತಿ 'ಕಾವ್ಯಾರ್ಥ ಚಿಂತನ'.

III ನೆಪ ಮಾತ್ರ ಕುಂದುಕೊರತೆ ಸಭೆ ಸಾರ್ವಜನಿಕರ ಆರೋಪ

ನಮ್ಮ | VK
ಗದಗ

# ಎಸಿಬಿ ಲೋಕಾ ಬಲ ಕುಗ್ಗಿಸಿಲ್ಲ

## ಲೋಕಾಯುಕ್ತಕ್ಕೆ ಹಿಂದೆಂದಿಗಿಂತಲೂ ಹೆಚ್ಚು ದೂರು ದಾಖಲು ಎಂದ ವಿಶ್ವನಾಥ ಶೆಟ್ಟಿ

■ **ವಿಕ ಸುದ್ದಿಲೋಕ** ಗದಗ

ಎಸಿಬಿ ಬಂದ ಮೇಲೆ ಲೋಕಾಯುಕ್ತಕ್ಕೆ ದೂರು ಕೊಡುವವರ ಸಂಖ್ಯೆ ಕಡಿಮೆಯಾಗಿದೆ ಎನ್ನುವುದು ತಪ್ಪು. ಈ ಹಿಂದಿಗಿಂತ ಹೆಚ್ಚು ದೂರುಗಳು ಲೋಕಾಯುಕ್ತದಲ್ಲಿ ದಾಖಲಾಗಿವೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಹೇಳಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಅಧಿಕಾರ ವಹಿಸಿಕೊಂಡಾಗ ಆರೂವರೆ ಸಾವಿರ ಪ್ರಕರಣಗಳು ಬಾಕಿ ಉಳಿದಿದ್ದವು. ಈ ವರ್ಷ ಮತ್ತೆ ನಾಲ್ಕು ಸಾವಿರ ಪ್ರಕರಣಗಳು ದಾಖಲಾಗಿದ್ದು, 5 ಸಾವಿರಕ್ಕೂ ಹೆಚ್ಚು ಪ್ರಕರಣಗಳು ಇತ್ಯರ್ಥವಾಗಿವೆ. ಪ್ರಕರಣಗಳನ್ನು ಶೀಘ್ರ ಇತ್ಯರ್ಥ ಮಾಡಲು 9 ಜನ ನ್ಯಾಯಾಧೀಶರ ನೇಮಕಕ್ಕೆ ಒಪ್ಪಿಗೆ ಕೋರಿ ಸರಕಾರಕ್ಕೆ ಮನವಿ ಮಾಡಿಕೊಳ್ಳಲಾಗಿತ್ತು. ಅದರಂತೆ 5 ಜನ ನ್ಯಾಯಾಧೀಶರನ್ನು ನೇಮಿಸಿಕೊಳ್ಳಲು ಸರಕಾರದಿಂದ ಅನುಮೋದನೆ ದೊರೆತಿದೆ. ಇನ್ನಷ್ಟು ಪ್ರಕರಣಗಳು ಶೀಘ್ರವೇ ಇತ್ಯರ್ಥವಾಗಲಿವೆ ಎಂದು ತಿಳಿಸಿದರು.

**ಪ್ರಕರಣಗಳು ಶೀಘ್ರ ಇತ್ಯರ್ಥ**

ಅಧಿಕಾರಿಗಳಲ್ಲಿ ಒಳ್ಳೆಯವರು ಇದ್ದಾರೆ, ಕೆಟ್ಟವರೂ ಇದ್ದಾರೆ. ಅವರೆಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಒಳ್ಳೆಯ ರೀತಿಯಿಂದ ಕೆಲಸ ನಿರ್ವಹಿಸುವಂತೆ ಮಾಡಲಾಗುತ್ತದೆ. ಒಂದು ವೇಳೆ ವಿಶ್ವಾಸಕ್ಕೆ ಅರ್ಹರಾಗದಿದ್ದರೆ ಖಂಡಿತ ಕಠಿಣ ಕ್ರಮ ಕೈಗೊಳ್ಳಲಾಗುವುದು. ಅಧಿಕಾರಿಗಳು ಈ ಹಿಂದೆ ಏನು ಮಾಡಿದರು ಎನ್ನುವುದಕ್ಕಿಂತ ಇನ್ನು ಮುಂದೆ ಹೇಗೆ ಕಾರ್ಯ ನಿರ್ವಹಿಸುತ್ತಾರೆ ಎನ್ನುವುದು ಮುಖ್ಯ. ಇದಕ್ಕಾಗಿ ಪ್ರತಿ ಜಿಲ್ಲೆಗೂ ಹೋಗಿ ಅಧಿಕಾರಿಗಳನ್ನು ಭೇಟಿ ಮಾಡುತ್ತಿದ್ದೇನೆ ಎಂದರು.

ಈ ಹಿಂದೆ ಭೇಟಿ ನೀಡಿದ ಜಿಲ್ಲೆಗಳಿಗೂ ಗದಗ ಜಿಲ್ಲೆಗೂ ಹೋಲಿಕೆ ಮಾಡುವುದು ಕಷ್ಟ. ಆದರೆ ಗದಗ ಜಿಲ್ಲಾಧಿಕಾರಿ, ಜಿಪಂ ಸಿಇಒ, ಆರಕ್ಷಕ ಇಲಾಖೆ ಅಧಿಕಾರಿಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಮೆಚ್ಚುಗೆಗೆ ಪಾತ್ರರಾಗುತ್ತಾರೆ. ಇದು ನನ್ನ ವೈಯಕ್ತಿಕ ಅನಿಸಿಕೆ ಅಷ್ಟೆ ಎಂದು ತಿಳಿಸಿದರು.

ಅಂಗನವಾಡಿ ಮಕ್ಕಳಿಗೆ, ಗರ್ಭಿಣಿ, ಬಾಣಂತಿಯರಿಗೆ ನೀಡಲಾಗುತ್ತಿರುವ ಶೇಂಗಾ ಕಳಪೆಯಾಗಿದೆ. ಆಹಾರ ಇಲಾಖೆ ಗೋದಾಮುಗಳಿಂದ ಕಳಪೆ ಶೇಂಗಾ ಸರಬರಾಜು ಆಗುತ್ತಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ಗದಗ ಜಿಲ್ಲೆಗೆ ಭೇಟಿ ನೀಡುವ ಮುನ್ನ ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿ ಅಂಗನವಾಡಿ ಆಹಾರದ ಗುಣಮಟ್ಟ ಪರಿಶೀಲಿಸಿದ್ದೇನೆ. ಸಾಕಷ್ಟು ಉತ್ತಮ ಗುಣಮಟ್ಟದ ಧಾನ್ಯ, ಆಹಾರ ಪೂರೈಕೆ ಮಾಡಲಾಗುತ್ತಿದೆ. ಈ ಜಿಲ್ಲೆಯಲ್ಲಿ ನಿರ್ದಿಷ್ಟ ಪ್ರಕರಣಗಳಿದ್ದರೆ ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ಮಾಧ್ಯಮಗಳು ಅಧಿಕಾರಿಗಳನ್ನು ಟೀಕಿಸುವುದಕ್ಕಿಂತ ಸತ್ಯಾಸತ್ಯತೆ ಪರಿಶೀಲಿಸಿ ಜವಾಬ್ದಾರಿ ಅರಿತು ಕೆಲಸ ಮಾಡಬೇಕು ಎಂದು ಹೇಳಿದರು.



ಗದಗ ಬಸವೇಶ್ವರ ನಗರದಲ್ಲಿರುವ ಅಂಗನವಾಡಿ ಕೇಂದ್ರಕ್ಕೆ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಗುರುವಾರ ಭೇಟಿ ನೀಡಿ ಪರಿಶೀಲಿಸಿದರು.

### ಅಂಗನವಾಡಿಗೆ ಭೇಟಿ, ಮೆಚ್ಚುಗೆ

ಗದಗ ನಗರದಲ್ಲಿನ ಬಸವೇಶ್ವರ ನಗರದ ಅಂಗನವಾಡಿ ಕೇಂದ್ರಕ್ಕೆ ಗುರುವಾರ ಸಂಜೆ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಭೇಟಿ ನೀಡಿದರು. ಮಕ್ಕಳಿಗೆ, ಗರ್ಭಿಣಿ, ಬಾಣಂತಿಯರಿಗೆ ನೀಡಲಾಗುತ್ತಿರುವ ಮೊಟ್ಟೆ, ಆಹಾರ ಧಾನ್ಯಗಳ ಕುರಿತು ಪರಿಶೀಲನೆ ನಡೆಸಿ, ಮೆಚ್ಚುಗೆ ವ್ಯಕ್ತಪಡಿಸಿದರು. ಅಲ್ಲಿಂದ ಬೆಟಗೇರಿಯ ಮುಕ್ತಿಧಾಮ, ಮುಳಗುಂದ ರಸ್ತೆಯಲ್ಲಿರುವ ಎಸ್ ಎಸ್ ಎಲ್ ಸಿ ನಂತರದ ವಿದ್ಯಾರ್ಥಿಗಳ ವಸತಿ ನಿಲಯಕ್ಕೆ ಭೇಟಿ ನೀಡಿ ಅಧಿಕಾರಿಗಳ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅಂಗನವಾಡಿ, ಹಾಸ್ಟೆಲ್ ಭೇಟಿ ಮೊದಲೇ ನಿಗದಿಯಾಗಿದ್ದರಿಂದ ಯಾವುದೇ ತಪ್ಪುಗಳು ಕಂಡುಬರಲಿಲ್ಲ. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ, ಜಿಪಂ ಸಿಇಒ, ತಹಸೀಲ್ದಾರ್ ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

> ಇಂದಿರಾ ಕ್ಯಾಂಟೀನ್ ಬಡವರ ಹಾಗೂ ಹಸಿದವರಿಗೆ ರೂಪಿಸಿರುವ ಅತ್ಯುತ್ತಮ ಯೋಜನೆ. ಒಬ್ಬ ಸಾಮಾನ್ಯ ಪ್ರಜೆಯಾಗಿ ಇಂದಿರಾ ಕ್ಯಾಂಟೀನ್ ಯೋಜನೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುತ್ತೇನೆ.
>
> **-ವಿಶ್ವನಾಥ ಶೆಟ್ಟಿ**
> ಲೋಕಾಯುಕ್ತ ನ್ಯಾಯಮೂರ್ತಿ

**ಇಂದಿರಾ ಕ್ಯಾಂಟೀನ್‌ಗೆ ಹೊಗಳಿಕೆ**

ಇಂದಿರಾ ಕ್ಯಾಂಟೀನ್ ಬಡವರ ಹಾಗೂ ಹಸಿದವರಿಗೆ ರೂಪಿಸಿರುವ ಅತ್ಯುತ್ತಮ ಯೋಜನೆ. ಒಬ್ಬ ಸಾಮಾನ್ಯ ಪ್ರಜೆಯಾಗಿ ಇಂದಿರಾ ಕ್ಯಾಂಟೀನ್ ಯೋಜನೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುತ್ತೇನೆ. ಇಂದಿರಾ ಕ್ಯಾಂಟೀನ್‌ನಲ್ಲಿ ನೀಡಲಾಗುತ್ತಿರುವ ಆಹಾರದ ಬಗ್ಗೆಯೂ ದೂರುಗಳು ಬಂದಿದ್ದವು.

ಈ ಜಿಲ್ಲೆಯಲ್ಲಿ ಪರಿಶೀಲನೆ ನಡೆಸಿದಾಗ ಗುಣಮಟ್ಟದ ಆಹಾರ ವಿತರಿಸಲಾಗುತ್ತಿರುವುದು ಗಮನಕ್ಕೆ ಬಂದಿದೆ. ಅಲ್ಲದೆ ಪರಿಶೀಲನೆ ವರದಿಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನೀಡಲಾಗಿದೆ. ಬಿಬಿಎಂಪಿ ಸಹ ವರದಿಗೆ ಸಕಾರಾತ್ಮಕವಾಗಿ ಸ್ಪಂದಿಸಿದೆ. ಈ ಜಿಲ್ಲೆಯಲ್ಲಿ ಪ್ರತಿ ತಿಂಗಳು ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ ವರದಿ ಸಲ್ಲಿಸುವಂತೆ ಲೋಕಾಯುಕ್ತ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಮನೋಜ್ ಜೈನ್, ಜಿಪಂ ಸಿಇಒ ಮಂಜುನಾಥ ಚವ್ಹಾಣ ಮತ್ತಿತರರು ಉಪಸ್ಥಿತರಿದ್ದರು.

# ರಾಜ್ಯದ ಜನತೆಗೆ ಉತ್ತಮ ಆಡಳಿತ ವ್ಯವಸ್ಥೆ: ನ್ಯಾ. ವಿಶ್ವನಾಥ ಶೆಟ್ಟಿ



ಸಂಯುಕ್ತ. 12.01.2018.

ಗದಗ, ಜ. 11. ಲೋಕಾಯುಕ್ತ ಅಧಿಕಾರ ವಹಿಸಿಕೊಂಡು ಜನರಿಗೆ ಉತ್ತಮ ಆಡಳಿತ ನೀಡುವ ನಿಟ್ಟಿನಲ್ಲಿ ವ್ಯವಸ್ಥೆಯ ಸುಧಾರಣೆ ತಮ್ಮ ಮುಖ್ಯ ಉದ್ದೇಶವಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ನ್ಯಾಮೂ. ವಿಶ್ವನಾಥ ಶೆಟ್ಟಿ ಅವರು ತಿಳಿಸಿದರು.

ಗದಗ ಜಿ.ಪಂ. ಸಭಾಂಗಣದಲ್ಲಿಂದು ಜಿಲ್ಲೆಯ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆ ಜರುಗಿಸಿ ಅವರು ಮಾತನಾಡಿದರು. ಅಧಿಕಾರಿಗಳಿಗೆ ಸರ್ಕಾರವು ಜನತೆಯ ಶ್ರೇಯೋಭಿವೃದ್ಧಿಗಾಗಿ ಅಧಿಕಾರ ಕೊಟ್ಟಿದ್ದು ಅದನ್ನು ಒಳ್ಳೆಯ ರೀತಿಯಲ್ಲಿ ಬಳಸಿಕೊಂಡು ಸರ್ಕಾರದ ಯೋಜನೆಗಳ ಉದ್ದೇಶ ಜನಸಾಮಾನ್ಯರಿಗೆ ತಲುಪುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು. ಆ ರೀತಿ ಆಗದಿದ್ದಲ್ಲಿ ಲೋಕಾಯುಕ್ತರಾಗಿ ತಮಗೆ ನೀಡಿರುವ ಕೆಲಸವನ್ನು ಶಾಪ ಮಾಡಬೇಕಾಗುತ್ತದೆ. ಆದರೆ ಅದಕ್ಕೆ ಅವಕಾಶ ನೀಡದೇ ಸಾರ್ವಜನಿಕರಿಗೆ ಪಾರದರ್ಶಕ ಹಾಗೂ ಉತ್ತಮ ಆಡಳಿತವನ್ನು ನೀಡಲು ಪ್ರತಿಯೊಬ್ಬ ಅಧಿಕಾರಿಯು ಬದ್ಧತೆಯಿಂದ ಕೆಲಸ ಮಾಡಿ ಗದಗ ಜಿಲ್ಲೆಯು ಒಂದು ಒಳ್ಳೆಯ ಆಡಳಿತ ವ್ಯವಸ್ಥೆಯ ಜಿಲ್ಲೆಯಾಗುವಂತೆ ಪ್ರಯತ್ನಿಸಬೇಕು. ಸಾರ್ವಜನಿಕರ ಕುಂದುಕೊರತೆ ಅಹವಾಲುಗಳನ್ನು ನಿಯಮಿತವಾಗಿ ಸ್ವೀಕರಿಸಿ ಪರಿಹಾರಗಳನ್ನು ಒದಗಿಸಬೇಕು ಎಂದು ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಅವರು ತಿಳಿಸಿದರು.

ಸಭೆಯಲ್ಲಿ ಶಿಕ್ಷಣ, ಆರೋಗ್ಯ, ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಕೃಷಿ, ಕಂದಾಯ, ನೀರಾವರಿ ವಿವಿಧ ಇಲಾಖೆಗಳಲ್ಲಿನ ವಿವಿಧ ಸೌಲಭ್ಯಗಳ ಯೋಜನೆಗಳ ಜಾರಿ ಕುರಿತು ವಿಸ್ತೃತ ಚರ್ಚೆ ನಡೆಯಿತು. ಇಲಾಖೆಗಳು ಕೈಕೊಂಡ ಕ್ರಮಗಳ ಕುರಿತ ಮೆಚ್ಚುಗೆ ವ್ಯಕ್ತಪಡಿಸಿದ ಲೋಕಾಯುಕ್ತರು ಇನ್ನು ಹೆಚ್ಚಿನ ಬದ್ಧತೆ ಮತ್ತು ಆಸಕ್ತಿಯಿಂದ ಕೆಲಸ ಮಾಡಲು ಸಲಹೆ ಸೂಚನೆ ನೀಡಿದರು.

ಲೋಕಾಯುಕ್ತರ ಜೊತೆಯಾಗಿ ಮಹಾ ಪೊಲೀಸ್ ನಿರ್ದೇಶಕ ಸಂಜಯ ಸಹಾಯ್ ಅವರು ಯಾವುದೇ ಇಲಾಖೆಗಳಾಗಲಿ ಆಡಿಟ್ ವರದಿಗಳ ಕುರಿತು ಸರಿಯಾದ ಸ್ಪಂದನೆ ನೀಡಿ ಸರಿಯಾಗಿ ಉತ್ತರಿಸಬೇಕು. ವಿಳಂಬ ಮಾಡಿದಲ್ಲಿ ಅಥವಾ ಉದಾಸೀನ ಮಾಡಿದಲ್ಲಿ ಮಹಾಲೇಖಪಾಲಕರಿಗೆ ತಪ್ಪು ಮಾಹಿತಿ ಹೋಗಿ ಅನೇಕ ಆಡಳಿತಾತ್ಮಕ ತೊಂದರೆಗಳು ಉದ್ಭವವಾಗುತ್ತವೆ. ಆದುದರಿಂದ ಮಹಾಲೇಖಪಾಲಕರ ತಪಾಸಣಾ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದರು.

ಜಿಲ್ಲಾಧಿಕಾರಿ ಮನೋಜ್ ಜೈನ್ ಅವರು ಜಿಲ್ಲೆಯ ಸಮಾಜ ಕಲ್ಯಾಣ,

## ಕ್ಯಾಲಿಫೋರ್ನಿಯಾದಲ್ಲಿ ಭಾರೀ ಭೂಕುಸಿತ: 16 ಮಂದಿ ಸಾವು

ಲಾಸ್ ಏಂಜೆಲೀಸ್, ಜ.11. ಅಮೆರಿಕದ ದಕ್ಷಿಣ ಕ್ಯಾಲಿಫೋರ್ನಿಯಾದ ಪೆಸಿಫಿಕ್ ಕರಾವಳಿಯ ಸಾಂಟಾ ಬಾರ್ಬರಾದಲ್ಲಿ ನಿನ್ನೆ ಭಾರೀ ಮಳೆ ಮತ್ತು ಭೂಕುಸಿತದಲ್ಲಿ 16 ಮಂದಿ ಮೃತಪಟ್ಟು, ಅನೇಕರು ಗಾಯಗೊಂಡಿದ್ದಾರೆ. ಈ ನೈಸರ್ಗಿಕ ವಿಕೋಪದಲ್ಲಿ ನಾಪತ್ತೆಯಾದವರಿಗಾಗಿ ಶೋಧಕಾರ್ಯ ಮುಂದುವರಿದಿದೆ. ಈ ಪ್ರಾಂತ್ಯದಲ್ಲಿ ಭಾರಿ ಮಳೆ ಮತ್ತು ಭೂಕುಸಿತ ಸಂಭವಿಸಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದ ನಂತರ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಇಲ್ಲಿನ ನಿವಾಸಿಗಳಿಗೆ ಸೂಚನೆ ನೀಡಲಾಗಿತ್ತು.

## ಮದರಸಾಗಳಲ್ಲಿ ಸಂಸ್ಕೃತ ಪಠ್ಯಕ್ಕೆ ನಿರ್ಧಾರ!

ಡೆಹ್ರಾಡೂನ್, ಜ.11. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಉತ್ತರಾಖಂಡದ ಎಲ್ಲ ಮದರಸಾಗಳ ಪಠ್ಯದಲ್ಲಿ ಸಂಸ್ಕೃತ ಮತ್ತು ಕಂಪ್ಯೂಟರ್

(1ನೇ ಪುಟದಿಂದ)

## ರಾಜ್ಯದ ಜನತೆಗೆ ಉತ್ತಮ ಆಡಳಿತ ವ್ಯವಸ್ಥೆ: ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ

ಜಿಲ್ಲೆಯಲ್ಲಿ ಕ್ರೀಡಾಪಟುಗಳ ಸೌಲಭ್ಯ ಹೆಚ್ಚಿಸಲಾಗುತ್ತಿದ್ದು ಎಲ್ಲ ತಾಲೂಕಾ ಕೇಂದ್ರಗಳಲ್ಲಿ ಕ್ರೀಡಾ ತರಬೇತುದಾರರನ್ನು ನೇಮಕ ಮಾಡಲಾಗಿದೆ. ಜಿಲ್ಲೆಯ ಶೈಕ್ಷಣಿಕ ಮಟ್ಟ ಉತ್ತೀರ್ಣತೆ ಹೆಚ್ಚಿಸಲು ಹಾಗೂ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳು ಫಲಾನುಭವಿಗಳಿಗೆ ನಿಗದಿತ ಅವಧಿಯಲ್ಲಿ ತಲುಪಿಸಲು ಅಗತ್ಯದ ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ಸಂತೋಷಬಾಬು, ಗದಗ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ ಚವ್ಹಾಣ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ಜಿ.ಪಂ. ಉಪಕಾರ್ಯದರ್ಶಿ ಎಸ್.ಸಿ. ಮಹೇಶ, ಜಿ.ಪಂ. ಯೋಜನಾ ನಿರ್ದೇಶಕ ಟಿ.ದಿನೇಶ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರೇಶ ಎಸ್.ಎನ್. ಉಪ ಅರಣ್ಯ ಸಂರಕ್ಷಣಾಧಿಕಾರಿ ಯಶಪಾಲ ಕ್ಷೀರಸಾಗರ, ಹಾಗೂ ವಿವಿಧ ಇಲಾಖೆಗಳ ಸಂಸ್ಥೆಗಳ ಜಿಲ್ಲಾ ಮುಖ್ಯಸ್ಥರು, ಲೋಕಾಯುಕ್ತ ಕಚೇರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಲೋಕಾಯುಕ್ತರ ಭೇಟಿ: ಕರ್ನಾಟಕ ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಅವರು ಗದುಗಿನ ಶಹಾಪುರ ಪೇಟೆ ಅಂಗನವಾಡಿ ಕೇಂದ್ರ, ಗದಗ ಬೆಟಗೇರಿ ಮುಕ್ತಿಧಾಮ, ರಾಜೀವಗಾಂಧಿ ನಗರದಲ್ಲಿ ಇರುವ ಗೋದಾಮು ಘಟಕ ಹಾಗೂ ಓಪನ್ ಜಿಮ್, ಶಿವಶರಣ ಹರಳಯ್ಯ ಉದ್ಯಾನವನ ಹಾಗೂ ಸಮುದಾಯ ಭವನ ಹಾಗೂ ಮುಳಗುಂದ ರಸ್ತೆಯಲ್ಲಿರುವ ಹಿಂ. ವರ್ಗಗಳ ಮೆಟ್ರಿಕ್ ನಂತರ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿ ಸಲಹೆ ಸೂಚನೆ ನೀಡಿದರು.

ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಜನೆ ಮಾಡುವ ವಿದ್ಯಾರ್ಥಿಗಳಿಗೆ ಕನಿಷ್ಠ 8 ವರ್ಷದ ಸಾಧನೆಯನ್ನು ದಾಖಲಿಸುವ ತಂತ್ರಾಂಶವೊಂದನ್ನು ರೂಪಿಸಲು ಪ್ರಯತ್ನಿಸಲಾಗುತ್ತಿದೆ ಎಂದರು.

(ಪುಟ: ೩ಕ್ಕೆ)

## ಭಾರತೀಯ

ಲಂಡನ್, ... ಮತ್ತು ಇಂಗ್ಲೆ... ಮೂಲದ ವ್ಯಕ್ತಿಗ... ಮುಂದುವರಿದ... ತನ್ನ ಅಂಗಡಿ... ಸಿಗರೇಟ್ ... ಭಾರತೀಯ ... ಭೀಕರವಾಗಿ ...




ಗದಗ ಹ...

5

ನೂತನ ಮಾದ...

ಭೂಮಿಪ...

ದಿನಾಂಕ : 12-01-2018 ಸಂ...

ಹಾ...

ಗದಗ-ಬೆಟಗೇರಿ ಶಹರ

ಹಾರ್ದಿಕ ಶುಭಾಶ...

ಸಹಕಾರಿ ರತ್ನ




P.T.O



ರೈಲು ನಿಲುಗಡೆ ಮಾಡದಿದ್ದರೆ ಹರ್ಲಾಪೂರ ರೈಲು ನಿಲ್ದಾಣದ ಎದುರಿಗೆ ನೂರಾರು ರೈತರು, ವ್ಯಾಪಾರಸ್ಥರು ಹಾಗೂ ಸ್ಥಳೀಯ ಗ್ರಾಮ ಪಂಚಾಯಿತಿಯ ಜನಪ್ರತಿನಿಧಿಗಳೊಂದಿಗೆ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಯಲಬುರ್ಗಾ ಘಟಕದ ಅಧ್ಯಕ್ಷ ಅಂದಪ್ಪ ಕೋಳೂರು, ತಿಮ್ಮಾಪೂರದ ಗ್ರಾ.ಪಂ. ಉಪಾಧ್ಯಕ್ಷ ಯಲ್ಲಪ್ಪ ಬಾಲಿ, ಶಂಕ್ರಪ್ಪ ಭೀಮನೂರು, ಶರಣಪ್ಪ ಜೋಗಿನ್, ... ಸೋಮಾಪೂರ, ಗಾಣಿಗೇರಪ್ಪನವರ, ಶರದ ಮ... ರೈಮನಸಾಬ ನದಾಫ ಇತರರು ಎಚ್ಚರಿಸಿದ್ದಾರೆ.



ಗದಗ: ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಅವರು ಗದುಗಿನ ಶಹಪೂರ ಪೇಟೆಯಲ್ಲಿರುವ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಲೋಕಾಯುಕ್ತ ಹೆಚ್ಚುವರಿ ಮಹಾಪೊಲೀಸ್ ನಿರ್ದೇಶಕ ಸಂಜಯ ಸಹಾಯ್, ಜಿಲ್ಲಾಧಿಕಾರಿ ಮನೋಜ ಜೈನ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ ಚವ್ಹಾಣ್ ಉಪಸ್ಥಿತರಿದ್ದರು.

# ಎಸಿಬಿ ಬಂದರೂ ಲೋಕಾಯುಕ್ತಕ್ಕೆ ದೂರು ಕಡಿಮೆ ಆಗಿಲ್ಲ

ಗದಗ, ಜ. 11: ರಾಜ್ಯದಲ್ಲಿ ನೂತನವಾಗಿ ಭ್ರಷ್ಟಾಚಾರ ನಿಗ್ರಹ ದಳವನ್ನು ಸ್ಥಾಪಿಸಿದ್ದರೂ ಲೋಕಾಯುಕ್ತಕ್ಕೆ ದೂರು ಸಲ್ಲಿಸುವವರ ಸಂಖ್ಯೆ ಕಡಿಮೆಯಾಗಿಲ್ಲ. 2017ರ ಕೊನೆಗೆ ಲೋಕಾಯುಕ್ತದಲ್ಲಿ 6500 ಪ್ರಕರಣಗಳಿದ್ದವು ಅದರಲ್ಲಿ 2500 ಲೋಕಾಯುಕ್ತ ವ್ಯಾಪ್ತಿಗೆ 4000 ಉಪಲೋಕಾಯುಕ್ತರ ವ್ಯಾಪ್ತಿಗೆ ಒಳಪಟ್ಟಿದ್ದು ಬಹುತೇಕ ಪ್ರಕರಣಗಳು ಇತ್ಯರ್ಥ ಗೊಂಡಿವೆ ಎಂದು ಕರ್ನಾಟಕ ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಅವರು ಇಂದಿಲ್ಲಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸರ್ಕಾರಕ್ಕೆ ಜಿಲ್ಲಾ ನ್ಯಾಯಾಧೀಶರ ಸರಿ ಸಮಾನ ಶ್ರೇಣಿಯ 9 ನ್ಯಾಯಾಧೀಶರನ್ನು ಕೇಳಲಾಗಿತ್ತು. ಡಿ. 26ಕ್ಕೆ 5 ನ್ಯಾಯಾಧೀಶರನ್ನು ಲೋಕಾಯುಕ್ತಕ್ಕೆ ನೀಡಲಾಗಿದೆ. ಸಾಧ್ಯವಾದಷ್ಟು ಬೇಗನೆ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ವ್ಯವಸ್ಥೆಯನ್ನು ರೂಪಿಸಿಕೊಳ್ಳಲಾಗಿದೆ ಎಂದು ನ್ಯಾ. ವಿಶ್ವನಾಥ ಶೆಟ್ಟಿ ಅವರು ತಿಳಿಸಿದರು.

ಲೋಕಾಯುಕ್ತದಿಂದ ಗುಪ್ತವಾಗಿ ಪೊಲೀಸರಿಂದ ವರದಿಯನ್ನು ತರಿಸಲಾಗುತ್ತಿದೆ. ಇಂದಿರಾ ಕ್ಯಾಂಟೀನ್ ಕುರಿತು ದೂರು ಪರಿಶೀಲನೆ ನಡೆಸಿದ್ದು ಅದು ಉತ್ತಮ ರೀತಿಯಲ್ಲಿ ಕೆಲಸಮಾಡುತ್ತಿದೆ. ಬಡವರಿಗಾಗಿ ಮಾಡಿರುವ ಈ ಪ್ರಯತ್ನ ಫಲಪ್ರದವಾಗಬೇಕು. ಅದಕ್ಕಾಗಿ ವ್ಯವಸ್ಥೆ ಸುಧಾರಣೆಗೆ ಸಾರ್ವಜನಿಕರು ಕೈ ಜೋಡಿಸಬೇಕೆಂದು ಅವರು ಆಶಿಸಿದರು.

ಸರ್ಕಾರಿ ಆಸ್ಪತ್ರೆಗಳ ಅವ್ಯವಸ್ಥೆ ಯನ್ನು ವೈಭವೀಕರಿಸುವುದರಿಂದ ಸುಧಾರಣೆ ಸಾಧ್ಯವಿಲ್ಲ. ಲೋಪವನ್ನು ತಿದ್ದಲು ಹಲವಾರು ಮಾರ್ಗಗಳಿವೆ. ಖಾಸಗಿ ಆಸ್ಪತ್ರೆಯಲ್ಲಿ 10 ಜನರನ್ನು ವೈದ್ಯರು ಪರೀಕ್ಷಿಸಿದರು. ಸರ್ಕಾರಿ ಆಸ್ಪತ್ರೆಯಲ್ಲಿ 100 ಜನರನ್ನು ಪರೀಕ್ಷಿಸಬೇಕಾಗುತ್ತದೆ. ಸರ್ಕಾರಿ ಆಸ್ಪತ್ರೆಗಳನ್ನು ತಪ್ಪಾಗಿ ಬಿಂಬಿಸುವುದು ಬಡವರಿಗೆ ಮಾಡುವ ಅನ್ಯಾಯ ಎಂದು ನ್ಯಾ. ವಿಶ್ವನಾಥ ಶೆಟ್ಟಿ ಅವರು ಹೇಳಿದರು.

ಸರ್ಕಾರ ನಡೆಸುವವರು ಅಧಿಕಾರಿಗಳು ಅವರನ್ನು ತೆಗಳುತ್ತ ಕೂತರೆ ಪ್ರಯೋಜನವಿಲ್ಲ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ತಪ್ಪಿನ ಅರಿವು ಮೂಡಿಸಿ ಅವರಿಂದ ಕಾರ್ಯ ನಿರ್ವಹಿಸುವಂತೆ ಮಾಡುವುದು ನನ್ನ ಪ್ರವೃತ್ತಿ. ಶಿಕ್ಷೆಯಿಂದ ಮಹತ್ತರವಾದ ಬದಲಾವಣೆ ಅಸಾಧ್ಯ. ಅದಕ್ಕಾಗಿ ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಾರ್ಯನಿರ್ವಹಿಸುವುದು ಒಳಿತು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜನರ ಕಲ್ಯಾಣಕ್ಕೆ ರೂಪಿಸಿರುವ ಕಾರ್ಯಕ್ರಮಗಳನ್ನು ಜನರಿಗೆ ಪ್ರಾಮಾಣಿಕವಾಗಿ ತಲುಪಿಸುವುದೇ ನಮ್ಮ ಗುರಿ ಎಂದು ನ್ಯಾ. ವಿಶ್ವನಾಥ ಶೆಟ್ಟಿ ಹೇಳಿದರು.

ಈ ಸಂದರ್ಭದಲ್ಲಿ ಲೋಕಾಯುಕ್ತ ಹೆಚ್ಚುವರಿ ಮಹಾಪೊಲೀಸ್ ನಿರ್ದೇಶಕ ಸಂಜಯ ಸಹಾಯ್, ಜಿಲ್ಲಾಧಿಕಾರಿ ಮನೋಜ ಜೈನ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಂಜುನಾಥ ಚವ್ಹಾಣ ಅವರು ಉಪಸ್ಥಿತರಿದ್ದರು.



ಮುಂಡರಗಿ ತಾಲೂಕಿನ ಹಿರಿಯ ಯಜಮಾನರಾದ ಲಿಂ. ಕೊಪ್ಪಳ ವೀರಭದ್ರಪ್ಪನವರು, ಮುದಕನಗೌಡ ಪಾಟೀಲರು, ಲಿಂ. ಇಲ್ಲೂರ ದಾಸಪ್ಪನವರ ಗ್ರಂಥ ಬಿಡುಗಡೆ ಹಾಗೂ ಮಾಜಿ ಸಚಿವ ಎಸ್.ಎಸ್. ಪಾಟೀಲ ಸೌಜನ್ಯ ಶೀಲ ಅಭಿನಂದನಾ ಗ್ರಂಥ ಬಿಡುಗಡೆಯ ಆಮಂತ್ರಣವನ್ನು ನಾರಾಯಣ ಇಲ್ಲೂರ ಅವರು ಎಸ್.ಎಸ್. ಪಾಟೀಲರಿಗೆ ನೀಡಿ ಸಮಾರಂಭಕ್ಕೆ ಆಹ್ವಾನಿಸಿದರು.



# ಬಸವೇಶ್ವರ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಪ್ರೌಢಶಾಲೆ ವಾರ್ಷಿಕ ಸ್ನೇಹ ಸಮ್ಮೇಳನ

ಗದಗ, ಜ. 11: ಪ್ರತಿಷ್ಠಿತ ಬಡಾವಣೆ ಸಿದ್ಧಲಿಂಗನಗರದ ಬಸವೇಶ್ವರ ಕನ್ನಡ ಹಾಗೂ ಆಂಗ್ಲ ಮಾಧ್ಯಮ ಪ್ರೌಢಶಾಲೆಗಳ ವಾರ್ಷಿಕ ಸ್ನೇಹ ಸಮ್ಮೇಳನವನ್ನು ಜ. 12 ರಂದು ಬೆಳಗ್ಗೆ 10.30 ಗಂಟೆಗೆ ಪ್ರೌಢಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸಮಾರಂಭವನ್ನು ವಾಸ್ತ್ರೀ ಹುಲ್ಲೂರ ಐ.ಎ.ಎಸ್. ಕೇಂದ್ರ ಆದಾಯ ತೆರಿಗೆ ... ಐ.ಬಿ. ಬೆನಕೊಪ್ಪ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾ.ಶಿ.ಇಲಾಖೆ, ಗದಗ ಇವರು ಬಹುಮಾನ ವಿತರಕರಾಗಿ ಆಗಮಿಸುವರು. ಡಾ. ಎಸ್.ಬಿ. ಯಾದವಾಡ ಪ್ರಾಚಾರ್ಯರು, ಡಿ.ಸಿ.ಪಾವಟೆ ಶಿಕ್ಷಣ ಮಹಾವಿದ್ಯಾಲಯ ಇವರು ಹಸ್ತಪ್ರತಿ ಸಂಚಿಗೆ ಬಿಡುಗಡೆ ಮಾಡುವರು. ಮುಖ್ಯ ... ಕೊಟುಮಚಗಿ, ಯೋಗಾಚಾರ್ಯರು ಕೆ.ಎಸ್. ಪಲ್ಲೇದ ಸಂಯೋಜಕರು ಬಸವಯೋಗ ಕೇಂದ್ರ ಗದಗ, ಎಸ್.ವ್ಹಿ. ಬಂಡಿವಾಳ ಸಮೂಹ ಸಂಪನ್ಮೂಲಾಧಿಕಾರಿಗಳು ಸಿ.ಆರ್.ಸಿ. ಗದಗ, ಶರಣ ಮಲ್ಲಿಕಾರ್ಜುನ ಪಿಂಡಮ್ಮನವರ ಕಾರ್ಯಾಧ್ಯಕ್ಷರು ಬಸವಕೇಂದ್ರ ಕಳಸಾಪೂರ, ಹಾಗೂ ದಾನಪ್ಪ ತಡಸದ ಚೇರಮನ್ನರು ವಹಿಸಲಿದ್ದಾರೆ. ಸಾಯಂಕಾಲ 3.30 ಗಂಟೆಗೆ ಪ್ರೌಢಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರಗುವವು.

ಕಾರ್ಯಕ್ರಮಕ್ಕೆ ಪಾಲಕರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನಸಂಖ್ಯೆಯಲ್ಲಿ ಪಾಲ್ಗೊಳ್ಳಲು ಮುಖ್ಯೋಪಾಧ್ಯಾಯರಾದ ಶಿವನಗೌಡ ಗೌಡರ ಹಾಗೂ

• VIJAYAVANI » HUBBALLI
ಶುಕ್ರವಾರ 12 ಜನವರಿ 2
ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ

ಇಂಧನ ಇಂದಿನ ದರ 72.05 ಪೆಟ್ರೋಲ್ ₹ 62.25 ಡೀಸೆಲ್
ಆಯಾ ಪ್ರದೇಶಕ್ಕೆ ಅನುಗುಣವಾಗಿ ಪೈಸೆಗಳಲ್ಲಿ ದರ ಬದಲಾಗಲಿದೆ
ಇಂದು ರಾಷ್ಟ್ರೀಯ ಯುವದಿನ
2018 ಹೊಸ ವರುಷ ತರಲಿ ಹರುಷ



# ಇಂದಿರಾ ಕ್ಯಾಂಟೀನ್ ಉತ್ತಮ ಯೋಜನೆ

## ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಪ್ರಶಂಸೆ | ಪ್ರತಿ ತಿಂಗಳು ಪರಿಶೀಲನೆ

■ ವಿಜಯವಾಣಿ ಸುದ್ದಿಜಾಲ ಗದಗ

ಸಾಮಾನ್ಯ ಪ್ರಜೆಯಾಗಿ ಹೇಳುವುದಾದರೆ ಇಂದಿರಾ ಕ್ಯಾಂಟೀನ್ ಬಡವರ ಹಾಗೂ ಹಸಿದವರಿಗಾಗಿ ರೂಪಿಸಿರುವ ಅತ್ಯುತ್ತಮ ಯೋಜನೆ.!

ಗದಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಅವರು ಸರ್ಕಾರ ಕಾರ್ಯವೈಖರಿಗೆ ಪ್ರಶಂಸೆ ವ್ಯಕ್ತಪಡಿಸಿದರು.

ಸರ್ಕಾರ ಉತ್ತಮ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ್ದು, ಅಧಿಕಾರಿಗಳು ಜನರಿಗೆ ಸೌಲಭ್ಯ ಒದಗಿಸಲು ಮುಂದಾಗಬೇಕು ಎಂದರು. ಇಂದಿರಾ ಕ್ಯಾಂಟೀನ್ ಸೇವೆ ಬಗ್ಗೆ ಹಾಗೂ ಅಲ್ಲಿ ತಯಾರಾಗುವ ಆಹಾರದ ಗುಣಮಟ್ಟದ ಬಗ್ಗೆ ಲೋಕಾಯುಕ್ತ ಕಚೇರಿಗೆ ದೂರು ಸಲ್ಲಿಕೆಯಾಗಿತ್ತು. ದೂರು ಆಧರಿಸಿ ಲೋಕಾಯುಕ್ತ ಪೊಲೀಸರ ಮೂಲಕ ಗುಣಮಟ್ಟದ ಪರೀಕ್ಷೆ ಮಾಡಿಸಲಾಗಿತ್ತು. ಜನರಿಂದ ಸಕಾರಾತ್ಮಕ ಪ್ರತಿಕ್ರಿಯೆ ಸಿಕ್ಕಿದೆ. ಗುಣಮಟ್ಟದ ಆಹಾರ ಸಿಗುತ್ತಿದೆ ಎಂಬ ವರದಿ ಬಂದಿದೆ ಎಂದರು. ಗುಣಮಟ್ಟದ ಆಹಾರ ಸಿಗಬೇಕು ಮತ್ತು ಉತ್ತಮ ಸೇವೆ ಇರಬೇಕು ಎಂಬ ಎರಡು ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಲೋಕಾಯುಕ್ತ ಪೊಲೀಸರು ಪ್ರತಿ ತಿಂಗಳು ಇಂದಿರಾ ಕ್ಯಾಂಟೀನ್ ಪರಿಶೀಲಿಸಲಿದ್ದಾರೆ ಎಂದರು.



ಗದಗದಲ್ಲಿನ ಶಹಾಪುರಪೇಟೆ ಅಂಗನವಾಡಿ ಕೇಂದ್ರಕ್ಕೆ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಭೇಟಿ ನೀಡಿ ಪರಿಶೀಲಿಸಿದರು.

ಸರ್ಕಾರ ಎಸಿಬಿ ರಚಿಸಿದ ನಂತರ ಲೋಕಾಯುಕ್ತಕ್ಕೆ ದೂರುಗಳ ಸಂಖ್ಯೆ ಕಡಿಮೆ ಆಗಿದೆ ಎಂಬುದು ತಪ್ಪು ಭಾವನೆ. ಸದ್ಯ ಲೋಕಾಯುಕ್ತ ಇಲಾಖೆಯಲ್ಲಿ 4 ಸಾವಿರ ದೂರುಗಳಿವೆ. ನಾನು ಅಧಿಕಾರ ವಹಿಸಿಕೊಂಡ ನಂತರ ಸುಮಾರು 5 ಸಾವಿರ ದೂರುಗಳನ್ನು ವಿಲೇವಾರಿ ಮಾಡಿದ್ದೇನೆ ಎಂದರು. ಲೋಕಾಯುಕ್ತ ಇಲಾಖೆಯ ದೂರುಗಳ ವಿಚಾರಣೆಗಾಗಿ ಸರ್ಕಾರ ಐದು ಮಂದಿ ಜಿಲ್ಲಾ ನ್ಯಾಯಾಧೀಶರ ನೇಮಕಕ್ಕೆ ಅಧಿಸೂಚನೆ ಹೊರಡಿಸಿದೆ. ನ್ಯಾಯಾಧೀಶರನ್ನು ಹೈಕೋರ್ಟ್ ನೇಮಕ ಮಾಡಬೇಕಿದ್ದು, ನಿವೃತ್ತ ನ್ಯಾಯಾಧೀಶರಿಗಿಂತ ಸದ್ಯ ಸೇವೆಯಲ್ಲಿರುವ ನ್ಯಾಯಾಧೀಶರನ್ನು ನೇಮಕ ಮಾಡಬೇಕೆಂದು ಹೈಕೋರ್ಟ್‌ಗೆ ಪತ್ರ ಬರೆದು ಮನವಿ ಮಾಡಿಕೊಳ್ಳಲಾಗಿದೆ ಎಂದರು. ಆಡಳಿತ ಸುಧಾರಣೆಗಾಗಿ ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳಲಾಗಿದೆ. ಅಧಿಕಾರಿಗಳಿಗೆ ತಿಳಿವಳಿಕೆ ನೀಡುವುದು ಇದರ ಉದ್ದೇಶ. ಇಷ್ಟಾದರೂ ಅಧಿಕಾರಿಗಳು ತಮ್ಮ ವರ್ತನೆ ಬದಲಿಸಿಕೊಳ್ಳದಿದ್ದರೆ ಕ್ರಮಕ್ಕೆಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಸುದ್ದಿಗೋಷ್ಠಿ ನಂತರ ಲೋಕಾಯುಕ್ತ ನ್ಯಾಯಮೂರ್ತಿಗಳು ನಗರದ ಶಹಾಪುರಪೇಟೆ ಅಂಗನವಾಡಿ ಮತ್ತು ದೇವರಾಜ ಅರಸು ಹಿಂದುಳಿದ ವರ್ಗಗಳ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಆದರೆ, ಅಧಿಕಾರಿಗಳ ಸಭೆಗೆ ಮಾಧ್ಯಮದವರನ್ನು ನಿರ್ಬಂಧಿಸಲಾಗಿತ್ತು. ಅಂಗನವಾಡಿ, ವಸತಿ ನಿಲಯ ಭೇಟಿ ಸಂದರ್ಭದಲ್ಲೂ ಮಾಧ್ಯಮದವರಿಗೆ ಸಮರ್ಪಕ ಮಾಹಿತಿ ನೀಡಲಿಲ್ಲ.

### ಮೇಷ್ಟ್ರಾದ ಲೋಕಾಯುಕ್ತರು!

ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಅವರು ಸುದ್ದಿಗೋಷ್ಠಿಯಲ್ಲಿ ಮಾಧ್ಯಮಗಳ ಜವಾಬ್ದಾರಿ ಕುರಿತು ಪಾಠ ಮಾಡಿದರು. ದಿನದ 24 ಗಂಟೆ ಕಾಲ ಸರ್ಕಾರ, ಅಧಿಕಾರಿಗಳನ್ನು ತೆಗಳಿದರೆ ಪ್ರಯೋಜನವಿಲ್ಲ. ತಪ್ಪು ಕಂಡುಬಂದಾಗ ಕೂಲಂಕಷವಾಗಿ ಪರಿಶೀಲಿಸಿ ವರದಿ ಮಾಡುವುದರಲ್ಲಿ ತಪ್ಪಿಲ್ಲ. ವಿನಾಕಾರಣ ಬೈಯತೊಡಗಿದರೆ, ನಿಂದಿಸಿದರೆ ಯಾರಿಗೆ ಉಪಯೋಗ ಹೇಳಿ? ಎಂದು ಪ್ರಶ್ನಿಸಿದರು. ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಬೇಕು ಎಂದ ಅವರು ಸತ್ಯಸಂಗತಿಯೊಂದನ್ನು ವಿವರಿಸಿದರು. 'ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ಚಿಕಿತ್ಸೆ ಸಿಗುತ್ತಿಲ್ಲ ಎಂದು ಟಿವಿಯಲ್ಲಿ ಪ್ರಸಾರ ಆಗುತ್ತಿತ್ತು. ಈ ವಿಷಯವನ್ನು ಉಪಲೋಕಾಯುಕ್ತ ನ್ಯಾಯಮೂರ್ತಿ ಆನಂದ ಅವರು ತಿಳಿಸಿದ್ದರಿಂದ ನಾನೇ ಖುದ್ದು ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿರುವ ರೋಗಿಗಳನ್ನು ವಿಚಾರಿಸಿದೆ. ಅಲ್ಲಿ ಯಾವ ಸಮಸ್ಯೆಯೂ ಇರಲಿಲ್ಲ. ಅದೊಂದು ಫೇಕ್ ನ್ಯೂಸ್ ಆಗಿತ್ತು. ಇಂತಹ ಅನೇಕ ಘಟನೆಗಳು ನಿತ್ಯ ನಡೆಯುತ್ತಿವೆ. ಸೇವೆ ನೀಡುವಂತಹ ಆಸ್ಪತ್ರೆಗಳ ವಿರುದ್ಧ ನೆಗೆಟಿವ್ ಆಗಿ ತೋರಿಸಿದರೆ ಸಾಮಾನ್ಯ ಜನರಿಗೆ ತೊಂದರೆ. ಹೀಗಾಗಿ ತಾವುಗಳು ಜವಾಬ್ದಾರಿ ಅರಿತು ಕೆಲಸ ಮಾಡಬೇಕು' ಎಂದರು.

### ದೂರುಗಳಿಲ್ಲದೆ ನಡೆದ ಸಭೆ

ಲೋಕಾಯುಕ್ತರಾಗಿ ಅಧಿಕಾರ ಸ್ವೀಕರಿಸಿದ ನಂತರ ಮೊದಲ ಸಲ ಜಿಲ್ಲೆಗೆ ಆಗಮಿಸಿದ ನ್ಯಾ. ವಿಶ್ವನಾಥಶೆಟ್ಟಿ ಅವರು ಮಾಧ್ಯಮದವರನ್ನು ದೂರವಿಟ್ಟು ಅಧಿಕಾರಿಗಳ ಸಭೆ ನಡೆಸಿದರು. ಸಭೆಯಲ್ಲಿ ನಡೆದಂತಹ ಚರ್ಚೆ ಕುರಿತು ಸಂಪೂರ್ಣ ವಿವರಣೆ ನೀಡಲಿಲ್ಲ. ಅಷ್ಟೇ ಅಲ್ಲದೆ, ಲೋಕಾಯುಕ್ತರು ಜಿಲ್ಲೆಗೆ ಆಗಮಿಸಿದಾಗ ಸಾರ್ವಜನಿಕರು ಅರ್ಜಿಗಳು, ದೂರುಗಳು ಸಲ್ಲಿಕೆ ಆಗುವುದು ಸಾಮಾನ್ಯ. ಆದರೆ, ಲೋಕಾಯುಕ್ತರಿಗೆ ಒಂದೇ ಒಂದು ದೂರು, ಅರ್ಜಿಗಳು ಸಲ್ಲಿಕೆಯಾಗಲಿಲ್ಲ. ಬಹುಶಃ ಜಿಲ್ಲಾಡಳಿತ ಅದಕ್ಕೆ ಅವಕಾಶವನ್ನೇ ಕೊಡಲಿಲ್ಲ.

ನಾಗರಿಕ 12 ಜನೇವರಿ 2018

# ಬಾಕಿ ಪ್ರಕರಣ ಇತ್ಯರ್ಥಕ್ಕೆ ವಿಶೇಷ ಕ್ರಮ: ನ್ಯಾ. ಪಿ. ವಿಶ್ವನಾಥ ಶೆಟ್ಟಿ



ಗದಗ, 11– ಲೋಕಾಯುಕ್ತದಲ್ಲಿರುವ ಬಾಕಿ ಉಳಿದಿರುವ 4 ಸಾವಿರ ಪ್ರಕರಣಗಳ ಇತ್ಯರ್ಥಕ್ಕೆ ವಿಶೇಷ ಗಮನ ನೀಡಲಾಗಿದ್ದು ಇದಕ್ಕಾಗಿ ಜಿಲ್ಲಾ ಮಟ್ಟದ ನ್ಯಾಯಾಧೀಶರುಗಳನ್ನು ಕೊಡುವಂತೆ ಸರ್ಕಾರಕ್ಕೆ ಸಲ್ಲಿಸಿದ ಪ್ರಸ್ತಾವನೆ ಸಮ್ಮತಿ ದೊರೆತು 5 ಜನ ಜಿಲ್ಲಾ ಮಟ್ಟದ ನ್ಯಾಯಾಧೀಶರುಗಳನ್ನು ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ.ವಿಶ್ವನಾಥ ಶೆಟ್ಟಿ ಹೇಳಿದರು.

ಅವರು ಗುರುವಾರ ಗದಗ ನಗರದ ಜಿಲ್ಲಾಡಳಿತ ಭವನದಲ್ಲಿ ಅಧಿಕಾರಿಗಳ ಪ್ರಗತಿ ಪರಿಶೀಲನೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಲೋಕಾಯುಕ್ತದಲ್ಲಿ ಒಟ್ಟು 6400 ಪ್ರಕರಣಗಳು ಬಾಕಿ ಇದ್ದು, ಅವುಗಳಲ್ಲಿ 2500 ಪ್ರಕರಣಗಳನ್ನು ಈಗಾಗಲೇ ವಿಲೇವಾರಿ ಮಾಡಲಾಗಿದ್ದು, ಇನ್ನುಳಿದ 4 ಸಾವಿರ ಪ್ರಕರಣ ನಮ್ಮ ವ್ಯಾಪ್ತಿಗೆ ಬಾರದ ಹಿನ್ನೆಲೆಯಲ್ಲಿ ಅವುಗಳನ್ನು ಇಲಾಖೆಗಳಿಗೆ ರವಾನಿಸಲಾಗಿದೆ.

ಲೋಕಾಯುಕ್ತದಲ್ಲಿ ಬಹಳ ವರ್ಷಗಳಿಂದ ಇತ್ಯರ್ಥವಾಗದೇ ಉಳಿದ ಪ್ರಕರಣಗಳಿಂದಾಗಿ ಸಾಕಷ್ಟು ಸಮಸ್ಯೆಯಾಗುತ್ತಿದ್ದು ಸದ್ಯ ಇರುವ ಸಿಬ್ಬಂದಿಗಳ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಬೇಕಾದಲ್ಲಿ 6 ವರ್ಷಗಳ ಕಾಲಾವಕಾಶ ಬೇಕಾಗುವ ಹಿನ್ನೆಲೆಯಲ್ಲಿ, ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರಕ್ಕೆ 9 ಜನ ನಿವೃತ್ತ ಅಥವಾ ಹಾಲಿ ಜಿಲ್ಲಾ ನ್ಯಾಯಾಧೀಶರುಗಳನ್ನು ನೇಮಕಕ್ಕೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಇದಕ್ಕೆ ಸ್ಪಂದಿಸಿರುವ ಸರ್ಕಾರ 5 ಜನ ಜಿಲ್ಲಾ ನ್ಯಾಯಾಧೀಶ ಮಟ್ಟದ ಅಧಿಕಾರಿಗಳು ಹಾಗೂ 15 ಜನ ಇಲಾಖೆ ಸಿಬ್ಬಂದಿಗಳನ್ನು ನೀಡಿದ ಹಿನ್ನೆಲೆಯಲ್ಲಿ ಬಾಕಿ ಪ್ರಕರಣಗಳು ಶೀಘ್ರ ವಿಲೇವಾರಿಯಾಗಲಿವೆ.

ಲೋಕಾಯುಕ್ತರ ಕಾರ್ಯವೈಖರಿಯ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು ಕೆಲವರು ಕೆಲವು ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಾರೆ. ಎಲ್ಲಾ ಅಧಿಕಾರಿಗಳು ತಪ್ಪು ಮಾಡುವುದಿಲ್ಲ. ಇರುವ ಅಧಿಕಾರಿಗಳಿಗೆ ತಿದ್ದಿ ಬುದ್ಧಿ ಹೇಳಿ ಅವರಿಂದ ಕೆಲಸ ಪಡೆಯುವುದು ನನ್ನ ಕಾರ್ಯವೈಖರಿ. ಮನೆಯಲ್ಲಿ ಮಗು ತಪ್ಪು ಮಾಡಿದಾಗ ನಾವೇಗೆ ತಿದ್ದಿ ಬುದ್ಧಿ ಹೇಳುತ್ತೇವೆ.ಅದೇ ಮಾದರಿಯಲ್ಲಿಯೇ ಕಾರ್ಯ ನಿರ್ವಹಿಸುವ ವ್ಯಕ್ತಿತ್ವ ನನ್ನದು. ಸರ್ಕಾರಿ ಆಸ್ಪತ್ರೆಯಲ್ಲಿನ ವೈದ್ಯರ ಬಗ್ಗೆ ಸಾಕಷ್ಟು ಆಕ್ಷೇಪಗಳಿಗೆ ಆದರೆ ಅವರು ಕೂಡಾ ಮನುಷ್ಯರೇ ಒಂದು ದಿನದಲ್ಲಿ ನೂರಕ್ಕೆ ಹೆಚ್ಚು ಜನರನ್ನು ತಪಾಸಣೆ ಮಾಡಬೇಕಾದ ಅನಿವಾರ್ಯತೆ ಅವರಿಗೆ ಇದೆ.

ಇದೇ ರೀತಿ ಬೇರೆ ಬೇರೆ ಇಲಾಖೆಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೆ ಸಾಕಷ್ಟು ಒತ್ತಡವಿದೆ, ಅವರಿಗೆ ನಮ್ಮಿಂದಲೂ ಒತ್ತಡವಾಗಬಾರದು, ಬದಲಾಗಿ ತಪ್ಪಾಗದಂತೆ ಅವರು ನಡೆದುಕೊಳ್ಳುವ ಬಗ್ಗೆ ಅವರಿಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿ, ಅವರೆಲ್ಲರನ್ನ ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ನಿರ್ವಹಿಸುತ್ತಿದ್ದೇವೆ. ಒಟ್ಟಿನಲ್ಲಿ ಸಂತೃಪ್ತ ಸಮಾಜ ನಿರ್ಮಾಣ ಮಾಡುವುದು ನಮ್ಮ ಕೆಲಸವಾಗಿದೆ ಎಂದರು.

ಎಸಿಬಿ ರಚನೆಯ ನಂತರ ಪರಿಸ್ಥಿತಿ ಕುರಿತ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ಎಸಿಬಿ ಸ್ಥಾಪನೆ ನಂತರ ಲೋಕಾಯುಕ್ತಕ್ಕೆ ದಾಖಲಾಗುವ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿದೆ ಎನ್ನುವುದು ಸತ್ಯಕ್ಕೆ ದೂರವಾದ ಮಾತಾಗಿದ್ದು, ಇದು ಸದ್ಯ ಲೋಕಾಯುಕ್ತದಲ್ಲಿರುವ ಪ್ರಕರಣಗಳ ಸಂಖ್ಯೆಯನ್ನು ಗಮನಿಸಿದಲ್ಲಿ ಲೋಕಾಯುಕ್ತದ ಬಗ್ಗೆ ಈಗಲೂ ಜನರಿಗೆ ಗೊತ್ತಿದೆ, ಪ್ರಕರಣಗಳು ಕಡಿಮೆಯಾಗಿಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಲೋಕಾಯುಕ್ತ ಎಡಿಜಿಪಿ ಸಂಜಯ ಸಹಾಯ, ಜಿಲ್ಲಾಧಿಕಾರಿ ಮನೋಜ್ ಜೈನ, ಜಿಪಂ ಸಿಇಓ ಮಂಜುನಾಥ ಚವಾಣ, ಡಿಎಫ್‌ಓ ಯಶಪಾಲ್ ಕ್ಷೀರಸಾಗರ, ಮುಂತಾದವರು ಹಾಜರಿದ್ದರು

# ಮುಕ್ತಿಧಾಮ ಕಾರ್ಯಕ್ಕೆ ಲೋಕಾಯುಕ್ತ ನ್ಯಾ.ಮೂ. ವಿಶ್ವನಾಥ ಶೆಟ್ಟಿ ಪ್ರಶಂಸೆ



ಬೆಟಗೇರಿ, ೧೧ : ನಗರಕ್ಕೆ ಆಗಮಿಸಿದ್ದ ರಾಜ್ಯದ ಲೋಕಾಯುಕ್ತರಾದ ವಿಶ್ವನಾಥ ಶೆಟ್ಟಿ ಹಾಗೂ ಅವರ ತಂಡ ಬೆಟಗೇರಿಯ ಮುಕ್ತಿಧಾಮಕ್ಕೆ ಭೇಟಿ ನೀಡಿ ಸುಮಾರು ಅರ್ಧಗಂಟೆ ಅಲ್ಲಿಯ ಕಾಮಗಾರಿಯನ್ನು ವೀಕ್ಷಿಸಿ ಇದೊಂದು ದೇಶದಲ್ಲಿಯೇ ಮಾದರಿಯಾದ ಮುಕ್ತಿಧಾಮ ಆಗುವದರಲ್ಲಿ ನಿಸ್ಸಂದೇಹ ಎಂದು ಮುಕ್ತಕಂಠದಿಂದ ಪ್ರಶಂಸಿಸಿ ಈ ಮುಕ್ತಿಧಾಮ ಸಮಿತಿಯವರು ಶ್ರಮಿಸುತ್ತಿರುವ ಬಗ್ಗೆ ಶ್ಲಾಘಿಸಿ ನಿಮ್ಮ ಜಿಲ್ಲೆಯಲ್ಲಿ ಉತ್ತಮ ಜಿಲ್ಲಾಧಿಕಾರಿ, ಜಿ.ಪಂ. ಸಿ.ಇ.ಓ. ಒಳಗೊಂಡಂತೆ ಒಳ್ಳೆಯ ಅಧಿಕಾರಿಗಳ ತಂಡ ಇದ್ದು ಇನ್ನಷ್ಟು ಇದರ ಅಭಿವೃದ್ಧಿಗೆ ಅವರ ಇಲಾಖೆಗಳಿಂದ ಅಭಿವೃದ್ಧಿ ಪಡಿಸಬೇಕೆಂದು ಸಮಿತಿಗೆ ತಿಳಿಸಿದರು.

ಅನಿರೀಕ್ಷಿತವಾಗಿ ಭೇಟಿ ನೀಡಿದ ಲೋಕಾಯುಕ್ತ ಹಾಗೂ ಅವರ ತಂಡವನ್ನು ಸಮಿತಿ ಅಧ್ಯಕ್ಷ ಗಣೇಶಸಿಂಗ್ ಬ್ಯಾಳಿ ಬರಮಾಡಿಕೊಂಡರು.

ಅಲ್ಲಿಯ ಕಾಮಗಾರಿಯ ಪರಿಚಯವನ್ನು ನೀಡಿದರು. ಅವರೊಂದಿಗೆ ಎ.ಡಿ.ಜಿ.ಪಿ. ಲೋಕಾಯುಕ್ತ ಸಂಜಯ ಸಹಾಯ್, ಜಿಲ್ಲಾಧಿಕಾರಿ ಮನೋಜ ಜೈನ್ ಜಿಲ್ಲಾ ಪಂಚಾಯತಿ ಸಿ.ಇ.ಓ. ಮಂಜುನಾಥ ಚವ್ಹಾಣ, ತಹಶೀಲ್ದಾರ ಜಿರಳೆ, ಪೌರಾಯುಕ್ತ ಮನ್ಸೂರ ಅಲಿ, ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕ ಶಿರೂರ ಸೇರಿದಂತೆ ಹಲವಾರು ಅಧಿಕಾರಿಗಳು ಆಗಮಿಸಿದ್ದರು. ಈ ಸಂದರ್ಭದಲ್ಲಿ ಸಮಿತಿ ಸದಸ್ಯರುಗಳಾದ ಕಾಲಗಾರ, ಮನ್ನೂಬಿಲಾಲ ಮಾಣೇಕರ, ಭೋಜಪ್ಪ ಹೆಗ್ಗಡಿ, ಪ್ರೇಮನಾಥ ಬರದ್ವಾಡ ಸೇರಿದಂತೆ ಹಲವಾರು ಜನ ಉಪಸ್ಥಿತರಿದ್ದರು.

ಪ್ರಜಾವಾಣಿ ಶುಕ್ರವಾರ • ಜನವರಿ 12, 2018

# ಭ್ರಷ್ಟಾಚಾರ, ಸರ್ಕಾರಿ ಯೋಜನೆಗಳ ಮೇಲೆ ಲೋಕಾಯುಕ್ತ ನಿಗಾ: ನ್ಯಾ.ವಿಶ್ವನಾಥ ಶೆಟ್ಟಿ

ಗದಗ: 'ಲಂಚ ಪ್ರಕರಣಗಳಲ್ಲದೆ ಸರ್ಕಾರದ ಯೋಜನೆಗಳು ಸಮರ್ಪಕವಾಗಿ ಕಾರ್ಯರೂಪಕ್ಕೆ ಬರುತ್ತಿವೆಯೋ ಅಥವಾ ಇಲ್ಲವೋ ಎಂಬುದನ್ನೂ ಲೋಕಾಯುಕ್ತ ಸಂಸ್ಥೆ ಪರಿಶೀಲಿಸುತ್ತದೆ' ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಹೇಳಿದರು.

ಬುಧವಾರ ನಗರದಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

'ಇಂದಿರಾ ಕ್ಯಾಂಟೀನ್‌ನಲ್ಲಿ ಆಹಾರದ ಗುಣಮಟ್ಟದ ಕುರಿತು ಗ್ರಾಹಕರೊಬ್ಬರು ದೂರು ನೀಡಿದ್ದರು. ಲೋಕಾಯುಕ್ತ ಸಿಬ್ಬಂದಿ ಪರಿಶೀಲನೆ ನಡೆಸಿ, ಗುಣಮಟ್ಟ ಚೆನ್ನಾಗಿದೆ ಎಂದು ವರದಿ ನೀಡಿದ್ದಾರೆ. ಇದನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರಿಗೆ ಕಳುಹಿಸಲಾಗಿದೆ. ಕ್ಯಾಂಟೀನ್ ಮಾತ್ರವಲ್ಲ, ಸರ್ಕಾರದ ಎಲ್ಲ ಯೋಜನೆಗಳ ಅನುಷ್ಠಾನ ಮತ್ತು ಅದು ಅರ್ಹ ಫಲಾನುಭವಿಗಳಿಗೆ ತಲುಪುತ್ತಿವೆಯೋ ಎಂಬ ಕುರಿತು ಲೋಕಾಯುಕ್ತ ನಿರಂತರ ನಿಗಾ ವಹಿಸುತ್ತಿದೆ' ಎಂದರು.

'ಲೋಕಾಯುಕ್ತ ಎಂದರೆ ಕೇವಲ ಸರ್ಕಾರಿ ಅಧಿಕಾರಿಗಳ ಮೇಲೆ ದಾಳಿ ನಡೆಸುವವರು ಎನ್ನುವ ಭಯದ ವಾತಾವರಣ ಇದೆ. ಇದನ್ನು ಹೋಗಲಾಡಿಸಿ, ಅಧಿಕಾರಿ ವರ್ಗವನ್ನು ವಿಶ್ವಾಸಕ್ಕೆ ತೆಗೆದುಕೊಂಡು ಭ್ರಷ್ಟಾಚಾರ ರಹಿತ ವ್ಯವಸ್ಥೆ ಜಾರಿಗೆ ತರುವ ಆಶಯ ಇದೆ' ಎಂದರು.

'ಭ್ರಷ್ಟಾಚಾರ ನಿಗ್ರಹ ದಳ ಅಸ್ತಿತ್ವಕ್ಕೆ ಬಂದ ನಂತರ, ಲೋಕಾಯುಕ್ತ ದುರ್ಬಲಗೊಂಡಿದೆ ಎಂಬುದು ಕೆಲವು ಜನರ ಅಭಿಪ್ರಾಯವಾಗಿದೆ. ಆದರೆ, ಲೋಕಾಯುಕ್ತ ಸಂಸ್ಥೆಗೆ ಸಾರ್ವಜನಿಕರಿಂದ ಬರುವ ಅಹವಾಲುಗಳ ಸಂಖ್ಯೆ ಹೆಚ್ಚಿದೆ' ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಮನೋಜ್ ಜೈನ್, ಸಿಇಒ ಮಂಜುನಾಥ ಚವ್ಹಾಣ ಇದ್ದರು.

ಕಿತ್ತೂರ ಕರ್ನಾಟಕ

12-1-2018 ಶುಕ್ರವಾರ

ಲೋಕಾ ನ್ಯಾಮೂ. ವಿಶ್ವನಾಥ ಶೆಟ್ಟಿ ಹೇಳಿಕೆ

# ದಾಳಿ, ಕ್ರಮಕ್ಕಿಂತ ಮೊದಲು ವಿಶ್ವಾಸಕ್ಕೆ ಒತ್ತು



ಗದಗ, ೧೧ : ಲೋಕಾಯುಕ್ತ ಇಲಾಖೆ ನ್ಯಾಯಮೂರ್ತಿಗಳೆಂದರೆ ಕೇವಲ ಸರ್ಕಾರಿ ಅಧಿಕಾರಿ ಮತ್ತು ಇಲಾಖೆಗಳ ಮೇಲೆ ದಾಳಿ ಮಾಡುವವರು ಎನ್ನುವ ಭಯದ ವಾತಾವರಣ ಇದೆ. ಇದನ್ನು ಹೋಗಲಾಡಿಸಿ, ಅಧಿಕಾರಿ ವರ್ಗವನ್ನು ಮೊದಲು ವಿಶ್ವಾಸಕ್ಕೆ ತೆಗೆದುಕೊಂಡು ಭ್ರಷ್ಟಾಚಾರರಹಿತ ವ್ಯವಸ್ಥೆ ಜಾರಿಗೆ ತರುವ ಆಶಯ ಹೊಂದಿದ್ದೇನೆ.

ಅಧಿಕಾರಿಗಳು ಸಮರ್ಪಕವಾಗಿ ಕೆಲಸ ಮಾಡದಿದ್ದರೆ ಆಗ ನಾನು ನನ್ನ ಕಾರ್ಯ ಮಾಡಬೇಕಾಗುತ್ತದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಎಚ್ಚರಿಸಿದರು. ಬುಧವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆ ನಡೆಸಿದ ಬಳಿಕ ನಡೆದ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಲಂಚ ಪ್ರಕರಣಗಳು ಮಾತ್ರವಲ್ಲದೆ ಸರ್ಕಾರದ ಯೋಜನೆಗಳು ಸಮರ್ಪಕವಾಗಿ ಕಾರ್ಯರೂಪಕ್ಕೆ ಬರುತ್ತಿವೆಯೇ ಎಂಬುದನ್ನೂ ಲೋಕಾಯುಕ್ತ ಸಂಸ್ಥೆ ಪರಿಶೀಲಿಸುತ್ತಿದೆ. 'ಇಂದಿರಾ ಕ್ಯಾಂಟೀನ್‌ನಲ್ಲಿ ಆಹಾರದ ಗುಣಮಟ್ಟದ ಕುರಿತು ಗ್ರಾಹಕರೊಬ್ಬರು ದೂರು ನೀಡಿದ್ದರು. ಲೋಕಾಯುಕ್ತ ಸಿಬ್ಬಂದಿ ಪರಿಶೀಲನೆ ನಡೆಸಿದ್ದು, ಗುಣಮಟ್ಟ ಚೆನ್ನಾಗಿದೆ ಎಂದು ವರದಿ ನೀಡಿದ್ದಾರೆ. ಇದನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರಿಗೆ ಕಳುಹಿಸಲಾಗಿದೆ. ಕ್ಯಾಂಟೀನ್ ಮಾತ್ರವಲ್ಲ, ಸರ್ಕಾರದ ಎಲ್ಲ ಯೋಜನೆಗಳ ಅನುಷ್ಠಾನ ಮತ್ತು ಅದು ಅರ್ಹ ಫಲಾನುಭವಿಗಳಿಗೆ ತಲುಪುತ್ತಿವೆಯೇ ಎನ್ನುವುದರ ಬಗ್ಗೆ ಲೋಕಾಯುಕ್ತ ನಿರಂತರ ನಿಗಾವಹಿಸುತ್ತಿದೆ' ಎಂದರು. (ಒಳ ಪುಟಕ್ಕೆ)

P.T.O

(ಮೊದಲನೆ ಪುಟದಿಂದ ಬಂದುದು)

# ದಾಳಿ, ಕ್ರಮಕ್ಕಿಂತ ಮೊದಲು ವಿಶ್ವಾಸಕ್ಕೆ ಒತ್ತು

ಈಗಾಗಲೇ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿದ್ದ ೫ ಸಾವಿರ ಪ್ರಕರಣಗಳಲ್ಲಿ ೨.೫ ಸಾವಿರ ಪ್ರಕರಣಗಳು ಲೋಕಾಯುಕ್ತ ವ್ಯಾಪ್ತಿಗೆ ಬರಲಿದ್ದು, ಉಳಿದವುಗಳನ್ನು ಸಂಬಂಧಿಸಿದವರಿಗೆ ರವಾನೆ ಮಾಡಲಾಗಿದೆ. ಜೊತೆಗೆ ಉಪಲೋಕಾಯುಕ್ತ ವ್ಯಾಪ್ತಿಗೆ ಬಂದ ೪ ಸಾವಿರ ಅರ್ಜಿಗಳ ಪೈಕಿ ೩ ಸಾವಿರ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲಾಗಿದೆ.

ಅಲ್ಲದೇ, ಲೋಕಾಯುಕ್ತ ಸಂಸ್ಥೆಯಲ್ಲಿ ಬರುವ ದೂರುಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ೯ ಜಿಲ್ಲಾ ನ್ಯಾಯಾಧೀಶರನ್ನು ನೀಡುವಂತೆ ಸರ್ಕಾರಕ್ಕೆ ಕೇಳಿಕೊಂಡಿದ್ದು, ಈ ಪೈಕಿ ಐವರು ನ್ಯಾಯಾಧೀಶರ ನೇಮಕಕ್ಕೆ ಸರ್ಕಾರ ಅಧಿಸೂಚನೆ ಹೊರಡಿಸಿದೆ ಎಂದರು.

'ಭ್ರಷ್ಟಾಚಾರ ನಿಗ್ರಹ ದಳ ಅಸ್ತಿತ್ವಕ್ಕೆ ಬಂದ ನಂತರ, ಲೋಕಾಯುಕ್ತ ದುರ್ಬಲಗೊಂಡಿದೆ ಎಂಬುದು ಕೆಲವು ಜನರ ಅಭಿಪ್ರಾಯವಷ್ಟೇ. ಲೋಕಾಯುಕ್ತ ಸಂಸ್ಥೆಗೆ ಸಾರ್ವಜನಿಕರಿಂದ ಬರುವ ಅಹವಾಲುಗಳ ಸಂಖ್ಯೆ ಹೆಚ್ಚಿದೆ' ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಅಷ್ಟೇ ಅಲ್ಲ, ಸರ್ಕಾರ ಆರಂಭಿಸಿರುವ ಇಂದಿರಾ ಕ್ಯಾಂಟೀನ್ ಅನ್ನು ಸಾಮಾನ್ಯ ಪ್ರಜೆಯಾಗಿ ಪ್ರಶಂಸೆ ಮಾಡುವುದಾಗಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಂಜಯ ಸಾಯಿ, ಜಿಲ್ಲಾಧಿಕಾರಿ ಮನೋಜ್ ಜೈನ್, ಜಿಪಂ ಸಿಇಒ ಮಂಜುನಾಥ ಚವ್ಹಾಣ ಇದ್ದರು.

### ಪತ್ರಕರ್ತರಿಗೆ ಪಾಠ ಮಾಡಿದ ಲೋಕಾ ನ್ಯಾಮೂ

"ಸುದ್ದಿಗೋಷ್ಠಿ ವೇಳೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಲೇ ಕೆಲ ವಿದ್ಯುನ್ಮಾನ ವಾಹಿನಿಗಳಲ್ಲಿ ಬಿತ್ತರಗೊಂಡ ಸುದ್ದಿ, ಪತ್ರಕರ್ತರ ಪಾತ್ರ ಕುರಿತು ಪಾಠ ಮಾಡಿದ ಪ್ರಸಂಗವೂ ನಡೆಯಿತು. ನಿಮ್ಮಷ್ಟೇ ನನಗೂ ಸಮಾಜದ ಬಗ್ಗೆ ಕಾಳಜಿಯಿದ್ದು, ವಾಸ್ತವಿಕತೆಯನ್ನು ಸುದ್ದಿ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕು ಎಂದ ಅವರು ಸಲಹೆ ನೀಡಿದರು".

### ಜಿಲ್ಲಾಧಿಕಾರಿಗೆ ಪ್ರಶಂಸೆ

"ಗದಗ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ ಮನೋಜ್ ಜೈನ್ ಸೇರಿ ಜಿಲ್ಲೆಯ ಅಧಿಕಾರಿಗಳ ಕಾರ್ಯ ವೈಖರಿಯನ್ನು ಪ್ರಶಂಸಿಸಿದ ಲೋಕಾಯುಕ್ತ ನ್ಯಾಮೂ. ವಿಶ್ವನಾಥ ಶೆಟ್ಟಿ ಅವರು, ಪರಿಸರ ಕಾಳಜಿ ಮತ್ತು ಅರಣ್ಯ ಸಂರಕ್ಷಣೆಯ ಭಾಗವಾಗಿ ಜಿಲ್ಲೆಯಲ್ಲಿ ಕೈಗೊಂಡ ರಸ್ತೆ ಅಗಲೀಕರಣ ವೇಳೆ ಅಡ್ಡಲಾಗಿ ಬರುವ ಮರಗಳನ್ನು ಸ್ಥಳಾಂತರಿಸುವ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು".

ಸಂಜೆ ದರ್ಪಣ, 13-01-2018.

# ರಾಜ್ಯದ ಜನತೆಗೆ ಉತ್ತಮ ಆಡಳಿತ ವ್ಯವಸ್ಥೆ : ಲೋಕಾಯುಕ್ತ ನ್ಯಾ.ಶೆಟ್ಟಿ



ಗದಗ : ಲೋಕಾಯುಕ್ತ ಅಧಿಕಾರ ಬಳಸಿಕೊಂಡು ಜನರಿಗೆ ಉತ್ತಮ ಆಡಳಿತ ನೀಡುವ ನಿಟ್ಟಿನಲ್ಲಿ ವ್ಯವಸ್ಥೆಯ ಸುಧಾರಣೆ ತಮ್ಮ ಮುಖ್ಯ ಉದ್ದೇಶವಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಅವರು ತಿಳಿಸಿದರು.

ಗದಗ ಜಿ.ಪಂ. ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆ ಜರುಗಿಸಿ ಅವರು ಮಾತನಾಡಿ,ಅಧಿಕಾರಿಗಳಿಗೆ ಸರ್ಕಾರವು ಜನತೆಯ ಶ್ರೇಯೋಭಿವೃದ್ಧಿಗಾಗಿ ಅಧಿಕಾರ ಕೊಟ್ಟಿದ್ದು ಅದನ್ನು ಒಳ್ಳೆಯ ರೀತಿಯಲ್ಲಿ ಬಳಸಿಕೊಂಡು ಸರ್ಕಾರದ ಯೋಜನೆಗಳ ಉದ್ದೇಶ ಜನಸಾಮಾನ್ಯರಿಗೆ ತಲುಪುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದರು.

ಸಭೆಯಲ್ಲಿ ಶಿಕ್ಷಣ, ಆರೋಗ್ಯ,ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಕೃಷಿ, ಕಂದಾಯ, ಸೇರಿದಂತೆ ವಿವಿಧ ಇಲಾಖೆಗಳಲ್ಲಿನ ವಿವಿಧ ಸೌಲಭ್ಯಗಳ ಯೋಜನೆಗಳ ಜಾರಿ ಕುರಿತು ವಿಸ್ತೃತ ಚರ್ಚೆ ನಡೆಯಿತು. ಇಲಾಖೆಗಳು ಕೈಕೊಂಡ ಕ್ರಮಗಳ ಕುರಿತ ಮೆಚ್ಚುಗೆ ವ್ಯಕ್ತಪಡಿಸಿದ ಲೋಕಾಯುಕ್ತರು ಇನ್ನು ಹೆಚ್ಚಿನ ಬದ್ಧತೆ ಮತ್ತು ಆಸಕ್ತಿಯಿಂದ ಕೆಲಸ ಮಾಡಲು ಸಲಹೆ ಸೂಚನೆ ನೀಡಿದರು.

ಲೋಕಾಯುಕ್ತರ ಹೆಚ್ಚುವರಿ ಮಹಾ ಪೊಲೀಸ ನಿರ್ದೇಶಕ ಸಂಜಯ ಸಹಾಯ್,ಜಿಲ್ಲಾಧಿಕಾರಿ ಮನೋಜ್ ಜೈನ್ ಮಾತನಾಡಿದರು.ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಕೆ. ಸಂತೋಷ ಬಾಬು, ಗದಗ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾ ಧಿಕಾರಿ ಮಂಜುನಾಥ ಚವ್ಹಾಣ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಜಿ.ಪಂ. ಉಪಕಾರ್ಯದರ್ಶಿ ಎಸ್.ಸಿ. ಮಹೇಶ, ಜಿ.ಪಂ. ಯೋಜನಾ ನಿರ್ದೇಶಕ ಟಿ. ದಿನೇಶ,ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರೇಶ ಎಸ್.ಎನ್. ಉಪ ಅರಣ್ಯ ಸಂರಕ್ಷಣಾಧಿಕಾರಿ ಯಶಪಾಲ ಕ್ಷೀರಸಾಗರ, ಹಾಗೂ ವಿವಿಧ ಇಲಾಖೆಗಳ ಸಂಸ್ಥೆಗಳ ಜಿಲ್ಲಾ ಮುಖ್ಯಸ್ಥರು,ಲೋಕಾಯುಕ್ತ ಕಚೇರಿಯ ಅಧಿಕಾರಿ ಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ನಾಗರಿಕ 12-1-2018 ಶುಕ್ರವಾರ

# ರಾಜ್ಯದ ಜನತೆಗೆ ಉತ್ತಮ ಆಡಳಿತ ವ್ಯವಸ್ಥೆ-ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ



ಗದಗ, 11- ಲೋಕಾಯುಕ್ತ ಅಧಿಕಾರ ಬಳಸಿಕೊಂಡು ಜನರಿಗೆ ಉತ್ತಮ ಆಡಳಿತ ನೀಡುವ ನಿಟ್ಟಿನಲ್ಲಿ ವ್ಯವಸ್ಥೆಯ ಸುಧಾರಣೆ ತಮ್ಮ ಮುಖ್ಯ ಉದ್ದೇಶವಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಅವರು ತಿಳಿಸಿದರು.

ಗದಗ ಜಿ.ಪಂ. ಸಭಾಂಗಣದಲ್ಲಿಂದು ಜಿಲ್ಲೆಯ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆ ಜರುಗಿಸಿ ಅವರು ಮಾತನಾಡಿದರು. ಅಧಿಕಾರಿಗಳಿಗೆ ಸರ್ಕಾರವು ಜನತೆಯ ಶ್ರೇಯೋಭಿವೃದ್ಧಿಗಾಗಿ ಅಧಿಕಾರ ಕೊಟ್ಟಿದ್ದು ಅದನ್ನು ಒಳ್ಳೆಯ ರೀತಿಯಲ್ಲಿ ಬಳಸಿಕೊಂಡು ಸರ್ಕಾರದ ಯೋಜನೆಗಳ ಉದ್ದೇಶ ಜನಸಾಮಾನ್ಯರಿಗೆ ತಲುಪುವ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು. ಆ ರೀತಿ ಆಗದಿದ್ದಲ್ಲಿ ಲೋಕಾಯುಕ್ತರಾಗಿ ತಮಗೆ ನೀಡಿರುವ ಕೆಲಸವನ್ನು ತಾವು ಮಾಡಬೇಕಾಗುತ್ತದೆ. ಆದರೆ ಅದಕ್ಕೆ ಅವಕಾಶ ನೀಡದೇ ಸಾರ್ವಜನಿಕರಿಗೆ ಪಾರದರ್ಶಕ ಹಾಗೂ ಉತ್ತಮ ಆಡಳಿತವನ್ನು ನೀಡಲು ಪ್ರತಿಯೊಬ್ಬ ಅಧಿಕಾರಿಯು ಬದ್ಧತೆಯಿಂದ ಕೆಲಸ ಮಾಡಿ ಗದಗ ಜಿಲ್ಲೆಯು ಒಂದು ಒಳ್ಳೆಯ ಆಡಳಿತ ವ್ಯವಸ್ಥೆಯ ಜಿಲ್ಲೆಯಾಗುವಂತೆ ಪ್ರಯತ್ನಿಸಬೇಕು. ಸಾರ್ವಜನಿಕರ ಕುಂದುಕೊರತೆ ಅಹವಾಲುಗಳನ್ನು ನಿಯಮಿತವಾಗಿ ಸ್ವೀಕರಿಸಿ ಪರಿಹಾರಗಳನ್ನು ಒದಗಿಸಬೇಕು ಎಂದು ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಅವರು ತಿಳಿಸಿದರು.

ಸಭೆಯಲ್ಲಿ ಶಿಕ್ಷಣ, ಆರೋಗ್ಯ, ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಕೃಷಿ, ಕಂದಾಯ, ಸೇರಿದಂತೆ ವಿವಿಧ ಇಲಾಖೆಗಳಲ್ಲಿನ ವಿವಿಧ ಸೌಲಭ್ಯಗಳ ಯೋಜನೆಗಳ ಜಾರಿ ಕುರಿತು ವಿಸ್ತೃತ ಚರ್ಚೆ ನಡೆಯಿತು. ಇಲಾಖೆಗಳು ಕೈಕೊಂಡ ಕ್ರಮಗಳ ಕುರಿತ ಮೆಚ್ಚುಗೆ ವ್ಯಕ್ತಪಡಿಸಿದ ಲೋಕಾಯುಕ್ತರು ಇನ್ನು ಹೆಚ್ಚಿನ ಬದ್ಧತೆ ಮತ್ತು ಆಸಕ್ತಿಯಿಂದ ಕೆಲಸ ಮಾಡಲು ಸಲಹೆ ಸೂಚನೆ ನೀಡಿದರು.

ಲೋಕಾಯುಕ್ತರ ಹೆಚ್ಚುವರಿ ಮಹಾ ಪೊಲೀಸ ನಿರ್ದೇಶಕ ಸಂಜಯ ಸಹಾಯ್ ಅವರು ಯಾವುದೇ ಇಲಾಖೆಗಳಾಗಲಿ ಆಡಿಟ್ ವರದಿಗಳ ಕುರಿತು ಸರಿಯಾದ ಸ್ಪಂದನೆ ನೀಡಿ ಸರಿಯಾಗಿ ಉತ್ತರಿಸಬೇಕು. ವಿಳಂಬ ಮಾಡಿದಲ್ಲಿ ಅಥವಾ ಉದಾಸೀನ ಮಾಡಿದಲ್ಲಿ ಮಹಾಲೇಖಪಾಲಕರಿಗೆ ತಪ್ಪು ಮಾಹಿತಿ ಹೋಗಿ ಅನೇಕ ಆಡಳಿತಾತ್ಮಕ ತೊಂದರೆಗಳು ಉದ್ಭವವಾಗುತ್ತವೆ. ಆದುದರಿಂದ ಮಹಾಲೇಖಪಾಲಕರ ತಪಾಸಣಾ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದರು.

ಜಿಲ್ಲಾಧಿಕಾರಿ ಮನೋಜ್ ಜೈನ್ ಅವರು ಜಿಲ್ಲೆಯ ಸಮಾಜ ಕಲ್ಯಾಣ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರು ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಜನೆ ಮಾಡುವ ವಿದ್ಯಾರ್ಥಿಗಳ ಕನಿಷ್ಟ 10 ವರ್ಷದ ಸಾಧನೆಯನ್ನು ದಾಖಲಿಸುವ ತಂತ್ರಾಂಶವೊಂದನ್ನು ರೂಪಿಸಲು ಪ್ರಯತ್ನಿಸಲಾಗುತ್ತಿದೆ. ಜಿಲ್ಲೆಯಲ್ಲಿ ಕ್ರೀಡಾಪಟುಗಳ ಸೌಲಭ್ಯ ಹೆಚ್ಚಿಸಲಾಗುತ್ತಿದ್ದು ಎಲ್ಲ ತಾಲೂಕಾ ಕೇಂದ್ರಗಳಲಿ ಕ್ರೀಡಾ ತರಬೇತುದಾರರನ್ನು ನೇಮಕ ಮಾಡಲಾಗಿದೆ. ಜಿಲ್ಲೆಯ ಶೈಕ್ಷಣಿಕ ಪರೀಕ್ಷಾ ಉತ್ತೀರ್ಣತೆ ಹೆಚ್ಚಿಸಲು ಹಾಗೂ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳು ಫಲಾನುಭವಿಗಳಿಗೆ ನಿಗದಿತ ಅವಧಿಯಲ್ಲಿ ತಲುಪಿಸಲು ಅಗತ್ಯದ

## ರಾಜ್ಯದ ಜನತೆಗೆ ಉತ್ತಮ ಆಡಳಿತ ವ್ಯವಸ್ಥೆ...

ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಕೆ. ಸಂತೋಷ ಬಾಬು, ಗದಗ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಂಜುನಾಥ ಚವ್ಹಾಣ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಜಿ.ಪಂ. ಉಪಕಾರ್ಯದರ್ಶಿ ಎಸ್.ಸಿ. ಮಹೇಶ, ಜಿ.ಪಂ. ಯೋಜನಾ ನಿರ್ದೇಶಕ ಟಿ. ದಿನೇಶ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರೇಶ ಎಸ್.ಎನ್. ಉಪ ಅರಣ್ಯ ಸಂರಕ್ಷಣಾಧಿಕಾರಿ ಯಶಪಾಲ ಕ್ಷೀರಸಾಗರ, ಹಾಗೂ ವಿವಿಧ ಇಲಾಖೆಗಳ ಸಂಸ್ಥೆಗಳ ಜಿಲ್ಲಾ ಮುಖ್ಯಸ್ಥರು, ಲೋಕಾಯುಕ್ತ ಕಚೇರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಲೋಕಾಯುಕ್ತರ ಭೇಟಿ: ಕರ್ನಾಟಕ ಲೋಕಾಯುಕ್ತ ನ್ಯಾ. ವಿಶ್ವನಾಥ ಶೆಟ್ಟಿ ಅವರು ಗದುಗಿನ ಶಹಾಪುರ ಪೇಟೆ ಅಂಗನವಾಡಿ ಕೇಂದ್ರ, ಗದಗ ಬೆಟಗೇರಿ ಮುಕ್ತಿಧಾಮ, ರಾಜೀವ ಗಾಂಧಿ ನಗರದಲ್ಲಿ ಇರುವ ಗೌರವ ಘಟಕ ಹಾಗೂ ಓಪನ್ ಜಿಮ್, ಶಿವಶರಣ ಹರಳಯ್ಯ ಉದ್ಯಾನವನ್ ಹಾಗೂ ಸಮುದಾಯ ಭವನ ಹಾಗೂ ಮುಳಗುಂದ ರಸ್ತೆಯಲಿರುವ ಹಿಂ. ವರ್ಗಗಳ ಮಾದರಿ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿ ಸಲಹೆ ಸೂಚನೆ ನೀಡಿದರು.

-ಕೊನೆಯ ಪುಟಕ್ಕೆ

ಸಂಜೆ ಮಿತ್ರ (25-12-2021)

# ಕೋವಿಡ್ ಲಸಿಕಾಕರಣವನ್ನು ಹೆಚ್ಚು ಮಾಡಿ: ಲೋಕಾಯುಕ್ತ ಪಿ.ವಿಶ್ವನಾಥ್ ಶೆಟ್ಟಿ



ಸಭೆಯಲ್ಲಿ ಜಿ.ಪಂ ಸಿಇಒ ದಿವ್ಯಪ್ರಭು, ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಧನಂಜಯ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಸಂಜಯ್, ಲೋಕಾಯುಕ್ತ ಎಸ್.ಪಿ ಪುಟ್ಟಮಾದಯ್ಯ ಇತರರಿದ್ದರು.

ಮಂಡ್ಯ : ಜಿಲ್ಲೆಯದ್ಯಾಂತ ಪ್ರತಿ ಗ್ರಾಮಗಳಲ್ಲೂ ಲಸಿಕಾಕರಣವನ್ನು ಹೆಚ್ಚು ಮಾಡಿ, ಪ್ರತಿಯೊಬ್ಬರೂ ಲಸಿಕೆ ಪಡೆಯುವಂತೆ ಜಾಗೃತಿ ಮೂಡಿಸಿ, ಲಸಿಕೆ ನೀಡಿ ಎಂದು ಲೋಕಾಯುಕ್ತ ಪಿ. ವಿಶ್ವನಾಥ್ ಶೆಟ್ಟಿ ಹೇಳಿದರು.

ನಗರದ ಪ್ರವಾಸಿಮಂದಿರದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಸಿಕಾಕರಣವನ್ನು ಹೆಚ್ಚು ಮಾಡಲು ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮ ಲೆಕ್ಕಿಗರು, ವಾಟರ್ ಮ್ಯಾನ್‌ಗಳ ಮೂಲಕ ಲಸಿಕೆ ಪಡೆಯದವರನ್ನು ಲಸಿಕಾ ಕೇಂದ್ರಕ್ಕೆ ಕರೆತಂದು ಲಸಿಕೆಯನ್ನು ನೀಡಲು ಕ್ರಮವಹಿಸಿ ಎಂದರು.

ಮೊದಲ ಡೋಸ್ ಮತ್ತು ಎರಡನೇ ಡೋಸ್‌ಗೆ ಹೆಚ್ಚು ಆದ್ಯತೆ ನೀಡಿ, ಅರ್ಹ ಫಲಾನುಭವಿಗಳಿಗೆ ಬಾಕಿ ಇರುವ ಡೋಸ್‌ನ್ನು ನೀಡಿ ಎಂದರು.

ಶಾಲಾ-ಕಾಲೇಜು ಶಿಕ್ಷಣ ಇಲಾಖಾ ಅಧಿಕಾರಿಗಳು, ಲೋಕಾಯುಕ್ತ ಅಧಿಕಾರಿಗಳು ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಲಸಿಕೆ ಸಂಬಂಧ ಜಾಗೃತಿ ಮೂಡಿಸಿ, ಅವರ ಪೋಷಕರು ಲಸಿಕೆ ಪಡೆಯುವಂತೆ ಮಾಡಿ, ಶಾಲಾ ಕಾಲೇಜುಗಳಲ್ಲಿ ಸಾಮಾಜಿಕ ಅಂತರ, ಮಾಸ್ಕ್ ಧರಿಸುವಿಕೆ, ಶುಚಿತ್ವ, ಬಿಸಿ ನೀರು, ಶೌಚಾಲಯ ಇನ್ನಿತರ ಸೌಲಭ್ಯಗಳ ಸಮರ್ಪಕತೆಯನ್ನು ಪರೀಕ್ಷಿಸಿ ಎಂದರು.

ಗಣಿ ಮತ್ತು ಭೂವಿಜ್ಞಾನ ಇಲಾಖಾ ಅಧಿಕಾರಿಗಳು ಅಕ್ರಮ ಮರಳುಸಾಗಾಣಿಕೆ ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಕ್ರಮವಹಿಸಿ ಎಂದರು.


ಕಂದಾಯ ಅಧಿಕಾರಿಗಳು ಪ್ರಕರಣಗಳನ್ನು ಇತ್ಯರ್ಥ ಪಡಿಸುವುದಕ್ಕೆ ಹೆಚ್ಚು ಒತ್ತುಕೊಟ್ಟು ಸಾರ್ವಜನಿಕರಿಗೆ ಸಹಕರಿಸಿ ಎಂದು ಉಪವಿಭಾಗಾಧಿಕಾರಿಗಳಿಗೆ ಸೂಚಿಸಿದರು.

ಉದಯವಾಣಿ (26-12-2021)

# ಲಸಿಕಾಕರಣ ಹೆಚ್ಚಿಸಿ: ವಿಶ್ವನಾಥ್ ಶೆಟ್ಟಿ

## ಪ್ರತಿಯೊಬ್ಬರೂ ಲಸಿಕೆ ಪಡೆಯಲು ಜಾಗೃತಿ ಮೂಡಿಸಿ

[illegible]



ನಗರದ ಪ್ರವಾಸಿ ಮಂದಿರದಲ್ಲಿ ಲೋಕಾಯುಕ್ತ ಪಿ. ವಿಶ್ವನಾಥ್ ಶೆಟ್ಟಿ ಅವರು ಅಧಿಕಾರಿಗಳ ಸಭೆ ನಡೆಸಿದರು.

[illegible]

ವಿಜಯವಾಣಿ (26-12-2021)

ಲೋಕಾಯುಕ್ತ ಪಿ.ವಿಶ್ವನಾಥ್ ಅಭಿಮತ | ಹಿರಿಯ ವಕೀಲರಿಗೆ ಸನ್ಮಾನ

# ನ್ಯಾಯಾಧೀಶರ ಸಾಮರ್ಥ್ಯವೂ ತಗ್ಗುತ್ತೆ

■ ವಿಜಯವಾಣಿ ಸುದ್ದಿಜಾಲ ಮಂಡ್ಯ

ಪ್ರತಿಯೊಬ್ಬರಲ್ಲೂ ಒಂದಲ್ಲ ಒಂದು ಮೇಧಾವಿತನ ಇದ್ದೇ ಇರುತ್ತದೆ. ಅಂತಹವರಿಗೆ ಪ್ರೋತ್ಸಾಹ ನೀಡಿದಲ್ಲಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡುವಲ್ಲಿ ಯಾವುದೇ ಸಂದೇಹ ಇಲ್ಲ ಎಂದು ಲೋಕಾಯುಕ್ತ ಪಿ.ವಿಶ್ವನಾಥ್ ಅಭಿಪ್ರಾಯಪಟ್ಟರು.

ನಗರದ ವಕೀಲರ ಸಂಘದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ



ನಗರದ ವಕೀಲರ ಸಂಘದಲ್ಲಿ ಹಿರಿಯ ವಕೀಲರನ್ನು ಸನ್ಮಾನಿಸಲಾಯಿತು. ಲೋಕಾಯುಕ್ತ ಪಿ.ವಿಶ್ವನಾಥ್, ವಕೀಲರ ಸಂಘದ ಅಧ್ಯಕ್ಷ ಎಂ.ಟಿ. ರಾಜೇಂದ್ರ, ಎಚ್.ಬಿ. ಪದ್ಮಮ್ಮ, ಎಚ್.ಎಲ್. ವಿಶಾಲ್ ರಘು ಇತರರಿದ್ದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ನ್ಯಾಯಾಧೀಶರು, ಮುಖ್ಯ [illegible] ಮೇಧಾವಿಗಳಾಗಿದ್ದರೂ ಕೆಲವೊಮ್ಮೆ ನಮ್ಮ ಚಿಂತನಾ ಸಾಮರ್ಥ್ಯವೂ ತಗ್ಗಿರುತ್ತದೆ. ಸಾಮಾನ್ಯ ವ್ಯಕ್ತಿಯಾಗಿದ್ದರೂ ಅವರಲ್ಲಿರುವ ಅಸಾಧಾರಣ ಜ್ಞಾನ ಎಲ್ಲರಿಗೂ ಪ್ರೇರಣೆಯಾಗುತ್ತದೆ ಎಂದು ಉದಾಹರಣೆ ಸಮೇತ ವಿವರಿಸಿದರು.

ಯಾವುದೇ ವ್ಯಕ್ತಿಯನ್ನು ನೋಡಿ ಗುರುತಿಸುವುದು ಸಾಧ್ಯವಿಲ್ಲ. ಅವನ ಜ್ಞಾನವನ್ನು ನೋಡಿ ಗುರುತಿಸುವುದು ಬಹಳ ಮುಖ್ಯ. ಸಮಾಜದಲ್ಲಿ ಸಾಧನೆ ಮಾಡಿರುವ ಸಾಧಕರನ್ನು ಗುರುತಿಸಿ ಗೌರವಿಸುವುದರಿಂದ ಅವರಿಗೆ ಮತ್ತಷ್ಟು [illegible] ಹೆಚ್ಚುವ ಜತೆಗೆ ಕಿರಿಯರಿಗೆ ಇದೊಂದು ಪ್ರೇರಣೆಯಾಗುತ್ತದೆ. ನಾವೂ ಅವರಂತೆ ಸಾಧನೆ ಮಾಡಬೇಕೆಂಬ ವಿಶ್ವಾಸ ಮೂಡುತ್ತದೆ. ಇಂತಹ ಸಾರ್ಥಕ ಕೆಲಸವನ್ನು ಸಂಘ ಸಂಸ್ಥೆಗಳು ಮುಂದುವರಿಸುವುದು ಅಗತ್ಯ ಎಂದರು.

ಇದೇ ವೇಳೆ ರಾಜ್ಯ ಉಚ್ಚನ್ಯಾಯಾಲಯದ ಹಿರಿಯ ವಕೀಲರಾದ ಸಿ.ಆರ್. ಗೋಪಾಲಸ್ವಾಮಿ, ಆರ್.ಎನ್. ರವಿ, ಎ.ಪಿ.ಶಿವಣ್ಣ, [illegible] ಪುಟ್ಟೇಗೌಡ, ಎಚ್. ಶಾಂತಿ ಭೂಷಣ್ ಅವರನ್ನು ಸನ್ಮಾನಿಸಲಾಯಿತು. ವಕೀಲರ ಸಂಘದ ಅಧ್ಯಕ್ಷ ಎಂ.ಟಿ. ರಾಜೇಂದ್ರ ಅಧ್ಯಕ್ಷತೆ ವಹಿಸಿದ್ದರು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಚ್.ಟಿ. [illegible]. ವಕೀಲರ ಪರಿಷತ್ ಸದಸ್ಯ ಎಚ್.ಎಲ್. ವಿಶಾಲ್ ರಘು, ಕಾರ್ಯದರ್ಶಿ ಸಿದ್ದರಾಜು, ಪದಾಧಿಕಾರಿಗಳಾದ ಎನ್.ಎಂ. ಮಹದೇವ್, ಟಿ.ಎಂ. ದಿನೇಶ್, ಶಿವಕುಮಾರ್, ಎಂ. ರೂಪಾ, ಎಂ. ಶ್ರೀನಿವಾಸ್, ಎನ್. ರಾಮಲಿಂಗಪ್ಪ, ಗಿರೀಶ್‌ಚಂದ್ರ, ರವಿಕುಮಾರ್, ಅಮೃತ್, ಯಶ್ವಂತ್ ಇತರರು ಭಾಗವಹಿಸಿದ್ದರು.

ನಮ್ಮ ನೇಗಿಲಯೋಗಿ (25-12-2021)

# ಕೋವಿಡ್-19 : ಲಸಿಕಾಕರಣವನ್ನು ಹೆಚ್ಚು ಮಾಡಿ; ಲೋಕಾಯುಕ್ತ ಪಿ.ವಿಶ್ವನಾಥ್ ಶೆಟ್ಟಿ



ಮಂಡ್ಯ- ಜಿಲ್ಲೆಯಾದ್ಯಂತ ಪ್ರತಿ ಗ್ರಾಮಗಳಲ್ಲೂ ಲಸಿಕಾಕರಣವನ್ನು ಹೆಚ್ಚು ಮಾಡಿ , ಪ್ರತಿಯೊಬ್ಬರೂ ಲಸಿಕೆ ಪಡೆಯುವಂತೆ ಜಾಗೃತಿ ನೀಡಿ, ಲಸಿಕೆ ನೀಡಿ ಎಂದು ಲೋಕಾಯುಕ್ತ ಪಿ. ವಿಶ್ವನಾಥ್ ಶೆಟ್ಟಿ ಹೇಳಿದರು.

ನಗರದ ಪ್ರವಾಸಿಮಂದಿರದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಸಿಕಾಕರಣವನ್ನು ಹೆಚ್ಚು ಮಾಡಲು ಆಶಾಕಾರ್ಯಕರ್ತೆಯರು, ಗ್ರಾಮ ಲೆಕ್ಕಿಗರು, ವಾಟರ್ ಮ್ಯಾನ್ ಗಳ ಮೂಲಕ ಲಸಿಕೆ ಪಡೆಯದವರನ್ನು ಲಸಿಕಾ ಕೇಂದ್ರಕ್ಕೆ ಕರೆತಂದು ಲಸಿಕೆಯನ್ನು ನೀಡಲು ಕ್ರಮವಹಿಸಿ ಎಂದರು.


ಮೊದಲ ಡೋಸ್ ಮತ್ತು ಎರಡನೇ ಡೋಸ್ ಗೆ ಹೆಚ್ಚು ಆದ್ಯತೆ ನೀಡಿ , ಅರ್ಹ ಫಲಾನುಭವಿಗಳಿಗೆ ಬಾಕಿ ಇರುವ ಡೋಸ್ ನ್ನು ನೀಡಿ ಎಂದರು. ಶಾಲಾ-ಕಾಲೇಜು ಶಿಕ್ಷಣ ಇಲಾಖಾ ಅಧಿಕಾರಿಗಳು, ಲೋಕಾಯುಕ್ತ ಅಧಿಕಾರಿಗಳು ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಲಸಿಕೆ ಸಂಬಂಧ ಜಾಗೃತಿ ಮೂಡಿಸಿ, ಅವರ ಪೋಷಕರು ಲಸಿಕೆ ಪಡೆಯುವಂತೆ ಮಾಡಿ, ಶಾಲಾ ಕಾಲೇಜುಗಳಲ್ಲಿ ಸಾಮಾಜಿಕ ಅಂತರ, ಮಾಸ್ಕ್ ಧರಿಸುವಿಕೆ, ಶುಚಿತ್ವ, ಬಿಸಿ ನೀರು , ಶೌಚಾಲಯ ಇನ್ನಿತರ ಸೌಲಭ್ಯಗಳ ಸಮರ್ಪಕತೆಯನ್ನು ಪರೀಕ್ಷಿಸಿ ಎಂದರು.

ಗಣಿ ಮತ್ತು ಭೂವಿಜ್ಞಾನ ಇಲಾಖಾ ಅಧಿಕಾರಿಗಳು ಅಕ್ರಮ ಮರಳುಸಾಗಾಣಿಕೆ ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಕ್ರಮವಹಿಸಿ ಎಂದರು. ಕಂದಾಯ ಅಧಿಕಾರಿಗಳು ಪ್ರಕರಣಗಳನ್ನು ಇತ್ಯರ್ಥ ಪಡಿಸುವುದಕ್ಕೆ ಹೆಚ್ಚು ಒತ್ತುಕೊಟ್ಟು ಸಾರ್ವಜನಿಕರಿಗೆ ಸಹಕರಿಸಿ ಎಂದು ಉಪವಿಭಾಗಾಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿ.ಪಂ ಸಿಇಒ ದಿವ್ಯಪ್ರಭು, ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಧನಂಜಯ್, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಸಂಜಯ್, ಲೋಕಾಯುಕ್ತ ಎಸ್.ಪಿ ಪುಟ್ಟಮಾದಯ್ಯ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ರಣ ಕಹಳೆ (25-12-2021)

# ಕೋವಿಡ್-19 : ಲಸಿಕಾಕರಣವನ್ನು ಹೆಚ್ಚು ಮಾಡಿ; ಲೋಕಾಯುಕ್ತ ಪಿ.ವಿಶ್ವನಾಥ್ ಶೆಟ್ಟಿ



ಮಂಡ್ಯ- ಜಿಲ್ಲೆಯಾದ್ಯಂತ ಪ್ರತಿ ಗ್ರಾಮಗಳಲ್ಲೂ ಲಸಿಕಾಕರಣವನ್ನು ಹೆಚ್ಚು ಮಾಡಿ . ಪ್ರತಿಯೊಬ್ಬರೂ ಲಸಿಕೆ ಪಡೆಯುವಂತೆ ಜಾಗೃತಿ ನೀಡಿ, ಲಸಿಕೆ ನೀಡಿ ಎಂದು ಲೋಕಾಯುಕ್ತ ಪಿ. ವಿಶ್ವನಾಥ್ ಶೆಟ್ಟಿ ಹೇಳಿದರು.

ನಗರದ ಪ್ರವಾಸಿಮಂದಿರದಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಸಿಕಾಕರಣವನ್ನು ಹೆಚ್ಚು ಮಾಡಲು ಆಶಾಕಾರ್ಯಕರ್ತೆಯರು, ಗ್ರಾಮ ಲೆಕ್ಕಿಗರು, ವಾಟರ್ ಮ್ಯಾನ್ ಗಳ ಮೂಲಕ ಲಸಿಕೆ ಪಡೆಯದವರನ್ನು ಲಸಿಕಾ ಕೇಂದ್ರಕ್ಕೆ ಕರೆತಂದು ಲಸಿಕೆಯನ್ನು ನೀಡಲು ಕ್ರಮವಹಿಸಿ ಎಂದರು.

ಮೊದಲ ಡೋಸ್ ಮತ್ತು ಎರಡನೇ ಡೋಸ್ ಗೆ ಹೆಚ್ಚು ಆದ್ಯತೆ ನೀಡಿ . ಅರ್ಹ ಫಲಾನುಭವಿಗಳಿಗೆ ಬಾಕಿ ಇರುವ ಡೋಸ್ ನ್ನು ನೀಡಿ ಎಂದರು. ಶಾಲಾ-ಕಾಲೇಜು, ಶಿಕ್ಷಣ ಇಲಾಖಾ ಅಧಿಕಾರಿಗಳು, ಲೋಕಾಯುಕ್ತ ಅಧಿಕಾರಿಗಳು ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಲಸಿಕೆ ಸಂಬಂಧ ಜಾಗೃತಿ ಮೂಡಿಸಿ, ಅವರ ಪೋಷಕರು ಲಸಿಕೆ ಪಡೆಯುವಂತೆ ಮಾಡಿ, ಶಾಲಾ ಕಾಲೇಜುಗಳಲ್ಲಿ ಸಾಮಾಜಿಕ ಅಂತರ, ಮಾಸ್ಕ್ ಧರಿಸುವಿಕೆ, ಶುಚಿತ್ವ, ಬಿಸಿ ನೀರು , ಶೌಚಾಲಯ ಇನ್ನಿತರ ಸೌಲಭ್ಯಗಳ ಸಮರ್ಪಕತೆಯನ್ನು ಪರೀಕ್ಷಿಸಿ ಎಂದರು.

ಗಣಿ ಮತ್ತು ಭೂವಿಜ್ಞಾನ ಇಲಾಖಾ ಅಧಿಕಾರಿಗಳು ಅಕ್ರಮ ಮರಳುಸಾಗಾಣಿಕೆ ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಕ್ರಮವಹಿಸಿ ಎಂದರು. ಕಂದಾಯ ಅಧಿಕಾರಿಗಳು ಪ್ರಕರಣಗಳನ್ನು ಇತ್ಯರ್ಥ ಪಡಿಸುವುದಕ್ಕೆ ಹೆಚ್ಚು ಒತ್ತುಕೊಟ್ಟು ಸಾರ್ವಜನಿಕರಿಗೆ ಸಹಕರಿಸಿ ಎಂದು ಉಪವಿಭಾಗಾಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿ.ಪಂ ಸಿಇಒ ದಿವ್ಯಪ್ರಭು, ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಧನಂಜಯ್, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಸಂಜಯ್, ಲೋಕಾಯುಕ್ತ ಎಸ್.ಪಿ ಪುಟ್ಟಮಾದಯ್ಯ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಪ್ರಜಾವಾಣಿ - 25/01/2022

# 'ಎಸಿಬಿ ಲೋಕಾಯುಕ್ತದ ಅಧೀನದಲ್ಲೇ ಇರಬೇಕು'

ಪ್ರಜಾವಾಣಿ ವಾರ್ತೆ



ಪಿ. ವಿಶ್ವನಾಥ ಶೆಟ್ಟಿ

ಬೆಂಗಳೂರು: ಭ್ರಷ್ಟಾಚಾರ ನಿಗ್ರಹ ದಳವನ್ನು (ಎಸಿಬಿ) ಲೋಕಾಯುಕ್ತದ ಅಧೀನಕ್ಕೆ ತಂದು, ಲೋಕಾಯುಕ್ತಕ್ಕೆ ಹಿಂದಿನಂತೆ ಹೆಚ್ಚಿನ ಅಧಿಕಾರ ನೀಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಒತ್ತಾಯಿಸಿದರು.

ಇದೇ 27ರಂದು ಲೋಕಾಯುಕ್ತ ಹುದ್ದೆಯಿಂದ ನಿವೃತ್ತರಾಗುತ್ತಿರುವ ಅವರು ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, 'ಎಸಿಬಿ ಸರ್ಕಾರದ ಅಧೀನದಲ್ಲಿ ಇರುವುದರಿಂದ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಲು ಸಾಧ್ಯವಿಲ್ಲ. ಲೋಕಾಯುಕ್ತ ಒಂದು ಸ್ವತಂತ್ರ ಸಂಸ್ಥೆ. ಇದರ ಅಧೀನಕ್ಕೆ ಎಸಿಬಿಯನ್ನು ನೀಡಿದರೆ ಭ್ರಷ್ಟಾಚಾರ ನಿಯಂತ್ರಣ ಕಾರ್ಯದಲ್ಲಿ ಹೆಚ್ಚಿನ ಕೆಲಸ ಮಾಡಲು ಸಾಧ್ಯವಿದೆ' ಎಂದರು.

ಹಿಂದೆ ಲೋಕಾಯುಕ್ತದ ಪೊಲೀಸ್ ವಿಭಾಗವೇ ಭ್ರಷ್ಟಾಚಾರ ನಿಯಂತ್ರಣ ಕಾರ್ಯದಲ್ಲಿ ತನಿಖೆ ನಡೆಸುವ ಅಧಿಕಾರ ಹೊಂದಿತ್ತು. ಅದನ್ನು ಬದಲಿಸಿ ಎಸಿಬಿ ಸೃಷ್ಟಿಸಲಾಯಿತು. ಎಸಿಬಿ ಸರ್ಕಾರದ ಅಧೀನದಲ್ಲಿ ಇರುವುದು ಸರಿಯಲ್ಲ ಎಂದು ಹೇಳಿದರು.

ತಾವು ಲೋಕಾಯುಕ್ತ ಹುದ್ದೆಯ ಅಧಿಕಾರ ಸ್ವೀಕರಿಸಿದ ಸಂದರ್ಭದಲ್ಲಿ ಸಂಸ್ಥೆಯಲ್ಲಿ 7,680 ದೂರುಗಳು ಬಾಕಿ ಇದ್ದವು. 3,242 ಇಲಾಖಾ ವಿಚಾರಣಾ ಪ್ರಕರಣಗಳೂ ಇದ್ದವು. ಕೆಲವು ಪ್ರಕರಣಗಳು 15 ವರ್ಷಗಳಿಗಿಂತಲೂ ಹಿಂದಿನವು. ತಮ್ಮ ಐದು ವರ್ಷಗಳ ಅವಧಿಯಲ್ಲಿ 20,549 ದೂರುಗಳು ಹಾಗೂ 2,431 ಇಲಾಖಾ ವಿಚಾರಣಾ ಪ್ರಕರಣಗಳು ದಾಖಲಾಗಿವೆ. 13,000 ಇತರ (ಮಿಸಲೇನಿಯಸ್) ದೂರುಗಳು ದಾಖಲಾಗಿವೆ ಎಂದರು.

ತಮ್ಮ ಅವಧಿಯಲ್ಲಿ 20,199 ದೂರು ವಿಲೇವಾರಿ ಮಾಡಲಾಗಿದೆ. 2,677 ಇಲಾಖಾ ವಿಚಾರಣೆಗಳನ್ನು ಪೂರ್ಣಗೊಳಿಸಲಾಗಿದೆ. 12,000 ಇತರ ದೂರುಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ವಿವರಿಸಿದರು.

ಹುದ್ದೆಯ ಸೂಕ್ಷ್ಮತೆ ತಿಳಿದಿರಲಿಲ್ಲ: 'ಹೆಚ್ಚಿನ ಆದಾಯದ ಕೆಲಸ ಇದ್ದರೂ ಸಮಾಜ ಸೇವೆಯ ಅವಕಾಶ ಎಂದು ಪರಿಗಣಿಸಿ ಲೋಕಾಯುಕ್ತ ಹುದ್ದೆಗೆ ಬಂದಿದ್ದೆ. ಬರುವಾಗ ಈ ಹುದ್ದೆಯ ಸೂಕ್ಷ್ಮತೆ ತಿಳಿದಿರಲಿಲ್ಲ. ನನ್ನ ಮೇಲೆ ಮಾರಣಾಂತಿಕ ದಾಳಿಯಾದ ಬಳಿಕವೇ ಹುದ್ದೆಯ ಸೂಕ್ಷ್ಮತೆ ತಿಳಿಯಿತು' ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

## 1,226 ವರದಿಗಳಿಗೆ ಸರ್ಕಾರದ ಉತ್ತರವಿಲ್ಲ

ಭ್ರಷ್ಟ ಸರ್ಕಾರಿ ನೌಕರರು ಮತ್ತು ಚುನಾಯಿತ ಪ್ರತಿನಿಧಿಗಳ ವಿರುದ್ಧ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 12(3)ರ ಅಡಿಯಲ್ಲಿ 2,122 ಮತ್ತು ಸೆಕ್ಷನ್ 21(1)ರ ಅಡಿಯಲ್ಲಿ 587 ವರದಿಗಳನ್ನು ಸರ್ಕಾರಕ್ಕೆ ಕಳುಹಿಸಲಾಗಿದೆ. ಈ ಪೈಕಿ 1,226 ಪ್ರಕರಣಗಳಲ್ಲಿ ಕ್ರಮ ಕೈಗೊಂಡಿರುವ ಬಗ್ಗೆ ವರದಿ ಬರುವುದು ಬಾಕಿ ಇದೆ ಎಂದು ಲೋಕಾಯುಕ್ತ ವಿಶ್ವನಾಥ ಶೆಟ್ಟಿ ತಿಳಿಸಿದರು.

ಲೋಕಾಯುಕ್ತ ಪೊಲೀಸರು ಪ್ರಾಥಮಿಕ ವಿಚಾರಣೆ ನಡೆಸಿದ್ದ ದೂರುಗಳ ಪೈಕಿ 38 ಪ್ರಕರಣಗಳಲ್ಲಿ ಆಪಾದಿತ ಸಾರ್ವಜನಿಕ ನೌಕರರ ವಿರುದ್ಧ ಎಫ್‌ಐಆರ್ ದಾಖಲಿಸಲು ಅಭಿಯೋಜನಾ ಮಂಜೂರಾತಿ ಕೋರಲಾಗಿತ್ತು. 28 ಪ್ರಕರಣಗಳಲ್ಲಿ ಸಂಸ್ಥೆಯ ಕೋರಿಕೆಯನ್ನು ಸರ್ಕಾರ ತಿರಸ್ಕರಿಸಿದೆ. 10 ಪ್ರಕರಣಗಳಲ್ಲಿ ಯಾವುದೇ ಉತ್ತರ ಬಂದಿಲ್ಲ ಎಂದು ಹೇಳಿದರು.

## 'ಆಸ್ತಿ ವಿವರ ಸಲ್ಲಿಸುವ ಅಗತ್ಯವಿಲ್ಲ'

'ಲೋಕಾಯುಕ್ತರ ಹುದ್ದೆ ಸರ್ಕಾರಿ ನೌಕರಿಯೂ ಅಲ್ಲ, ಜನಪ್ರತಿನಿಧಿಯೂ ಅಲ್ಲ. ಸ್ವತಂತ್ರ ಸಾಂವಿಧಾನಿಕ ಸಂಸ್ಥೆ. ಈ ಕಾರಣದಿಂದ ಲೋಕಾಯುಕ್ತರು ಆಸ್ತಿ ವಿವರ ಸಲ್ಲಿಸಬೇಕಾದ ಅಗತ್ಯ ಇಲ್ಲ' ಎಂದು ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಹೇಳಿದರು.

'45 ವರ್ಷದಿಂದ ನಾನು ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸುತ್ತಿದ್ದೇನೆ. ತಪ್ಪು ಮಾಡಿದ್ದರೆ, ಅಕ್ರಮ ಸಂಪಾದನೆ ಮಾಡಿದ್ದರೆ ಕ್ರಮ ಕೈಗೊಳ್ಳಲು ಕಾನೂನಿನಲ್ಲಿ ಅವಕಾಶಗಳಿವೆ. ಲೋಕಾಯುಕ್ತರ ಆಸ್ತಿ ವಿವರಗಳನ್ನು ಬಹಿರಂಗಪಡಿಸುವುದರಿಂದ ಸಂಸ್ಥೆ ದುರ್ಬಲಗೊಳ್ಳುವುದಕ್ಕೆ ದಾರಿಯಾಗಬಹುದು. ಜನರಿಂದ ಕಿರಿಕಿರಿಗೆ ಒಳಗಾಗಬಹುದು' ಎಂದರು.

ಹೊಸ ದಿಗಂತ 25/01/2022

# ಲೋಕಾಯುಕ್ತಕ್ಕೆ ಹೆಚ್ಚಿನ ಅಧಿಕಾರ ನೀಡಿ

| ಅವಧಿ | ದೂರು | ದೂರು ವಿಲೇ | ವಿಚಾರಣೆ | ವಿಚಾರಣೆಯ ವಿಲೇವಾರಿ | 12(3) ವರದಿ | 12(1) ವರದಿ |
|---|---|---|---|---|---|---|
| 2017 | 4106 | 4796 | 1068 | 372 | 891 | 307 |
| 2018 | 4303 | 4054 | 611 | 539 | 513 | 142 |
| 2019 | 4205 | 3812 | 299 | 617 | 284 | 48 |
| 2020 | 3255 | 3331 | 228 | 582 | 225 | 59 |
| 2021 | 4680 | 4206 | 225 | 567 | 209 | 31 |
| ಒಟ್ಟು | 20549 | 20199 | 2431 | 2677 | 2122 | 587 |



ಬೆಂಗಳೂರು: ಲೋಕಾಯುಕ್ತ ಸಂಸ್ಥೆಗೆ ಮೊದಲಿನಂತೆ ಸಂಪೂರ್ಣ ಅಧಿಕಾರವನ್ನು ನೀಡಬೇಕು. ಅದರಿಂದ ಸಾರ್ವಜನಿಕರಿಗೆ ಮತ್ತು ಸರ್ಕಾರಿ ಅಧಿಕಾರಿಗಳಿಗೆ ಅನುಕೂಲವಾಗಲಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಲೋಕಾಯುಕ್ತರಾಗಿ ಅಧಿಕಾರ ಸ್ವೀಕರಿಸಿ ಐದು ವರ್ಷ ಸಂದಿದೆ. ನಿವೃತ್ತಿ ಆಗುತ್ತಿದ್ದೇನೆ. ನನ್ನ ಅವಧಿಯಲ್ಲಿ ಸಂಸ್ಥೆಗೆ ಅದರ ಶಕ್ತಿಯನ್ನು ಮರಳಿಸಲು ಆಗಲಿಲ್ಲ ಎನ್ನುವ ಬೇಸರ ಇದೆ. ಆದರೂ, ಈ ಅವಧಿಯಲ್ಲಿ ಒಟ್ಟು ಮೇಲೆ 20,199 ದೂರು ಪ್ರಕರಣಗಳನ್ನು, 2677 ವಿಚಾರಣಾ ಪ್ರಕರಣಗಳನ್ನು ಇತ್ಯರ್ಥ ಪಡಿಸಿದ ತೃಪ್ತಿ ಇದೆ ಎಂದರು.

**ಸಂಸ್ಥೆ ನಿಷ್ಕ್ರಿಯ ಆಗಿಲ್ಲ:** ಎಸಿಬಿ ಬಂದ ನಂತರ ಲೋಕಾಯುಕ್ತ ನಿಷ್ಕ್ರಿಯ ಆಗಿದೆ ಎನ್ನುವ ಆರೋಪದ ಸುಳ್ಳು. ಮೊದಲಿನಂತೆ ಮಾಧ್ಯಮಗಳಲ್ಲಿ ಸುದ್ದಿಯಲ್ಲಿ ಇಲ್ಲ ಎಂದ ಮಾತ್ರಕ್ಕೆ ಪ್ರಯೋಜನವಿಲ್ಲ ಎನ್ನುವ ಅರ್ಥ ಅಲ್ಲ. ನ್ಯಾಯಾಲಯ ಯಾವ ರೀತಿ ತನ್ನ ಕೆಲಸವನ್ನು ಮಾಡುತ್ತದೆಯೋ ಹಾಗೆ ಲೋಕಾಯುಕ್ತ ನಿಶ್ಶಬ್ದವಾಗಿ ಕೆಲಸ ಮಾಡುತ್ತಿದೆ. ಅದರಿಂದ ಇದರ ಕೆಲಸ ಹೊರಗಾಗುತ್ತಿದೆ, ಎಷ್ಟಾಗಿದೆ ಎಂದು ಯಾರಿಗೂ ತಿಳಿಯುತ್ತಿಲ್ಲ. ಲೋಕಾಯುಕ್ತದ ವತಿಯಿಂದ ಸರ್ಕಾರಕ್ಕೆ ಒಪ್ಪಿಸಲಾದ ಎಲ್ಲಾ ವರದಿಗಳ ವಿವರ ಇಲಾಖೆ ಜಾಲ ತಾಣದಲ್ಲಿ ಪ್ರಕಟಿಸುವ ತೀರ್ಮಾನಕ್ಕೆ ಬಂದಿದ್ದೇವೆ ಎಂದರು.

ಉದಯವಾಣಿ 25/01/2022

# ಲೋಕಾಯುಕ್ತಕ್ಕೆ ಹಿಂದಿನ ಅಧಿಕಾರ ಅಗತ್ಯ

ಬೆಂಗಳೂರು: ಲೋಕಾಯುಕ್ತಕ್ಕೆ ಹಿಂದಿನ ಅಧಿಕಾರ ಮತ್ತೆ ನೀಡದಿದ್ದರೆ ಈ ಸಂಸ್ಥೆ ಪರಿಣಾಮಕಾರಿಯಾಗಿ ಕೆಲಸ ಮಾಡಲು ಸಾಧ್ಯವಿಲ್ಲ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ.ವಿಶ್ವನಾಥ ಶೆಟ್ಟಿ ಬಲವಾಗಿ ಪ್ರತಿಪಾದಿಸಿದ್ದಾರೆ.

ಇದೇ ಜ.27ರಂದು ಲೋಕಾಯುಕ್ತ ಹುದ್ದೆಯಿಂದ ನಿರ್ಗಮಿಸುತ್ತಿರುವ ಹಿನ್ನೆಲೆಯಲ್ಲಿ ಸೋಮವಾರ ಲೋಕಾಯುಕ್ತ ಕಚೇರಿಯಲ್ಲಿ ಸುದ್ದಿಗೋಷ್ಠಿಯ ನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಬಲಿಷ್ಠ ಹಾಗೂ ಪಾರದರ್ಶಕ ಲೋಕಾಯುಕ್ತ ಸಂಸ್ಥೆ ಇರಬೇಕು ಎಂಬ ವಿಚಾರದಲ್ಲಿ ಮೊದಲಿಗೆ ನಾನು ಎಂದು ಹೇಳಿದ್ದಾರೆ.

ಭ್ರಷ್ಟಾಚಾರ ನಿಗ್ರಹ ದಳ (ಎಸಿಬಿ) ರಚನೆ ಸರಿಯೋ, ತಪ್ಪೋ ಅದು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದೆಯೋ, ಇಲ್ಲವೋ ಎಂಬ ವಿಶ್ಲೇಷಣೆ ನಾನು ಮಾಡುವುದಿಲ್ಲ. ಆದರೆ, ಎಸಿಬಿಯನ್ನು ಲೋಕಾಯುಕ್ತದ ಅಧೀನದಲ್ಲೇ ತಂದು, ಲೋಕಾಯುಕ್ತಕ್ಕೆ ಹಿಂದಿನ ಹೆಚ್ಚಿನ ಅಧಿಕಾರವನ್ನು ಕೊಡಬೇಕು ಎಂಬುದು ನನ್ನ ವಾದ. ಈ ವಿಚಾರವು ನ್ಯಾಯಾಲಯದಲ್ಲಿ ಪ್ರಶ್ನಿಸಲಾಗಿದೆ. ಹೆಚ್ಚಿನ ಅಧಿಕಾರ ಇಲ್ಲದಿದ್ದರೆ ಲೋಕಾಯುಕ್ತಕ್ಕೆ ಪರಿಣಾಮಕಾರಿಯಾಗಿ ಕೆಲಸ ಮಾಡಲು ಸಾಧ್ಯವಿಲ್ಲ. ಜನರ ಹಿತದೃಷ್ಟಿಯಿಂದ ಸರ್ಕಾರದ ಆಡಳಿತದಲ್ಲಿ ಪಾರದರ್ಶಕತೆ ತರಲು ಬಲಿಷ್ಠ ಲೋಕಾಯುಕ್ತ ಸಂಸ್ಥೆ ಇರಬೇಕು ಎಂದರು.

ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ತನಿಖೆ ನಡೆಸುವ ಅಧಿಕಾರವನ್ನು ಹಿಂದೆ ಲೋಕಾಯುಕ್ತದ ಪೊಲೀಸ್ ವಿಭಾಗ ಹೊಂದಿತ್ತು. ಆ ಅಧಿಕಾರವನ್ನು ಕಿತ್ತು ಎಸಿಬಿ ರಚಿಸಲಾಯಿತು. ಲೋಕಾಯುಕ್ತ ಸ್ವತಂತ್ರ ಸಂಸ್ಥೆ ಆದರೆ, ಎಸಿಬಿ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತದೆ. ಕೇವಲ ದಾಳಿ ನಡೆಸಿ ದೊಡ್ಡ ಪ್ರಚಾರ ಮಾಡಿ ಅಧಿಕಾರಿಗಳ [illegible] ಮತ್ತು ಅವರ ಕುಟುಂಬದ ಮಾನ ಹರಾಜು ಹಾಕುವ ಕೆಲಸ ಆಗಬಾರದು. ಭ್ರಷ್ಟರಿಗೆ ಶಿಕ್ಷೆ ಆಗಬೇಕು. ಇದೇ ವೇಳೆ ಪ್ರಾಮಾಣಿಕರ ರಕ್ಷಣೆಯೂ ಆಗಬೇಕು. ಆ ಹಿನ್ನೆಲೆಯಲ್ಲಿ ಎಸಿಬಿ ಲೋಕಾಯುಕ್ತದ ಅಧೀನದಲ್ಲಿರಬೇಕು, ಲೋಕಾಯುಕ್ತಕ್ಕೆ ಹಿಂದಿನ ಹೆಚ್ಚಿನ ಅಧಿಕಾರ ಮತ್ತೆ ಸಿಗಬೇಕು ಎಂದು ನ್ಯಾ. ಶೆಟ್ಟಿ ಪ್ರತಿಪಾದಿಸಿದರು.

**20 ಸಾವಿರ ದೂರುಗಳ ಇತ್ಯರ್ಥ:** 2017ರ ಜ.28ರಿಂದ ಲೋಕಾಯುಕ್ತ ಹಾಗೂ ಉಪ ಲೋಕಾಯುಕ್ತರ ವ್ಯಾಪ್ತಿಯಲ್ಲಿ 20,199 ದೂರು ಹಾಗೂ 2,677 ವಿಚಾರಣಾ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಈ ಅವಧಿಯಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಸರ್ಕಾರಿ ನೌಕರರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆ ಸೆಕ್ಷನ್ 12(3) ರಡಿ 1,122 ಹಾಗೂ ಸೆಕ್ಷನ್ 12(1)ರಡಿ 587 ಪ್ರಕರಣಗಳನ್ನು ಸರ್ಕಾರಕ್ಕೆ ಶಿಫಾರಸು ಮಾಡಲಾಗಿದ್ದು, ಇದರಲ್ಲಿ 1,206 ಪ್ರಕರಣಗಳಲ್ಲಿ ಸರ್ಕಾರದ ಕ್ರಮ ಜಾರಿ ವರದಿ (ಎಟಿಆರ್) ಬರಬೇಕಿದೆ. ಈ ವಿಚಾರವಾಗಿ ಸರ್ಕಾರಕ್ಕೆ ಪದೇ ಪದೇ ಪುನರ್‌ಮನನ ಮಾಡಿಕೊಡಲಾಗುತ್ತಿದೆ. ಪ್ರಸ್ತುತ 8,036 ದೂರು ಹಾಗೂ 2,340 ವಿಚಾರಣಾ ಪ್ರಕರಣಗಳು ಬಾಕಿ ಇವೆ. ಕಳೆದ ಐದು ವರ್ಷಗಳ ಅವಧಿಯಲ್ಲಿ 20,549 ದೂರು ಹಾಗೂ 2,431 ವಿಚಾರಣಾ ಪ್ರಕರಣಗಳು ದಾಖಲಾಗಿವೆ ಎಂದು ಲೋಕಾಯುಕ್ತ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಲಸ ನೆಮ್ಮದಿ ತಂದಿದೆ: ನ್ಯಾ. ವಿಶ್ವನಾಥ್ ಶೆಟ್ಟಿ



[illegible] ಎಂದು ಈ ವೇಳೆ ನ್ಯಾ. ವಿಶ್ವನಾಥ್ ಶೆಟ್ಟಿ ಹೇಳಿದರು.

■ ಬಲಿಷ್ಠ, ಪಾರದರ್ಶಕ ಲೋಕಾ ಸಂಸ್ಥೆ ಬೇಕು: ನ್ಯಾ. ವಿಶ್ವನಾಥಶೆಟ್ಟಿ

ವಿಜಯ ಕರ್ನಾಟಕ 25/01/2022

# ಲೋಕಾಯುಕ್ತಕ್ಕೆ ಹಿಂದಿನ ಅಧಿಕಾರ ನ್ಯಾ.ಪಿ.ವಿಶ್ವನಾಥ ಶೆಟ್ಟಿ ಆಗ್ರಹ

**ಬೆಂಗಳೂರು:** ಪಾರದರ್ಶಕ ಆಡಳಿತಕ್ಕಾಗಿ ಮತ್ತು ಭ್ರಷ್ಟ ಅಧಿಕಾರಿಗಳನ್ನು ಮಟ್ಟ ಹಾಕಲು ಲೋಕಾಯುಕ್ತರಿಂದ ಭ್ರಷ್ಟಾಚಾರ ನಿಗ್ರಹ ದಳಕ್ಕೆ ಅಧಿಕಾರವನ್ನು ಮರಳಿ ನೀಡಬೇಕಿದೆ. ಇಲ್ಲವಾದರೆ ಪರಿಣಾಮಕಾರಿಯಾಗಿ ಕೆಲಸ ಮಾಡಲಾಗದು ಎಂದು ಲೋಕಾಯುಕ್ತ ನ್ಯಾ. ಪಿ. ವಿಶ್ವನಾಥಶೆಟ್ಟಿ ಆಗ್ರಹಿಸಿದರು.



ಲೋಕಾಯುಕ್ತರಾಗಿ ಐದು ವರ್ಷ ಅಧಿಕಾರಾವಧಿ ಪೂರ್ಣಗೊಳಿಸಿ ಜ.27ರಂದು ನಿವೃತ್ತರಾಗಲಿರುವ ಹಿನ್ನೆಲೆಯಲ್ಲಿ ಸೋಮವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

"ಎಸಿಬಿ ಅಧಿಕಾರ ಮತ್ತೆ ಲೋಕಾಯುಕ್ತಕ್ಕೆ ಪಡೆಯುವ ಕುರಿತ ಕಾನೂನು ಹೋರಾಟ ಹೈಕೋರ್ಟ್‌ನಲ್ಲಿ ನಡೆಯುತ್ತಿದೆ. ಅದರಲ್ಲಿ ಲೋಕಾಯುಕ್ತ ಸಂಸ್ಥೆ ತನ್ನ ನಿಲುವನ್ನು ಸ್ಪಷ್ಟವಾಗಿ ತಿಳಿಸಿದೆ. ಅನಿವಾರ್ಯ ಕಾರಣಗಳಿಂದಾಗಿ ಆ ಅರ್ಜಿ ಇತ್ಯರ್ಥವಾಗಿಲ್ಲ. ಅದು ಬೇಗ ಇತ್ಯರ್ಥವಾಗದಿರುವ ಬಗ್ಗೆ ನನಗೂ ಬೇಸರ ಇದೆ. ಫೆ.3ರಂದು ವಿಚಾರಣೆ ನಿಗದಿಯಾಗಿದೆ" ಎಂದು ನ್ಯಾ. ವಿಶ್ವನಾಥ ಶೆಟ್ಟಿ ಹೇಳಿದರು.

**ಪಂಚಾಯಿತ್ ಪ್ರತಿನಿಧಿಗಳಿಗೂ ಕಡ್ಡಾಯ:** "ಎಲ್ಲ ಜನಪ್ರತಿನಿಧಿಗಳೂ ತಮ್ಮ ಆಸ್ತಿ ವಿವರಗಳನ್ನು ಪ್ರತಿ ವರ್ಷ ಸಲ್ಲಿಸಬೇಕಾದದ್ದು ಕಡ್ಡಾಯ. ಇದು ಕೇವಲ ಶಾಸಕರಿಗೆ ಮಾತ್ರ ಇತ್ತು. ಇದೀಗ ಗ್ರಾಮ ಪಂಚಾಯಿತಿ ಸದಸ್ಯರಿಗೂ ಕಡ್ಡಾಯ ಮಾಡಲಾಗಿದೆ," ಎಂದು ಹೇಳಿದರು.

**ಸರಕಾರದ ವಿರುದ್ಧ ಹೈಕೋರ್ಟ್‌ಗೆ:** "ಭ್ರಷ್ಟ ಅಧಿಕಾರಿಗಳ ವಿರುದ್ಧ 77 ಪ್ರಕರಣಗಳಲ್ಲಿ ಸರಕಾರಕ್ಕೆ ಕ್ರಮ ಕೈಗೊಳ್ಳಲು ವರದಿ ಸಲ್ಲಿಸಲಾಗಿದೆ. ಆ ಪೈಕಿ 25 ಪ್ರಕರಣಗಳಲ್ಲಿ ವರದಿ ತಿರಸ್ಕರಿಸಲಾಗಿದೆ. 10 ಪ್ರಕರಣಗಳಲ್ಲಿ ಉತ್ತರ ಬಂದಿಲ್ಲ. ಸರಕಾರ ಭ್ರಷ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಅನುಮತಿ ನೀಡುವ ವಿಚಾರದಲ್ಲಿ ವಿಳಂಬ ಮಾಡುತ್ತಿರುವುದರಿಂದ ಹೈಕೋರ್ಟ್‌ಗೆ ಮೊರೆ ಹೋಗುವ ಬಗ್ಗೆ ಚಿಂತನೆ ನಡೆದಿದೆ," ಎಂದು ಹೇಳಿದರು.

ಕನ್ನಡ ಪ್ರಭ 25/1/2022

# ಲೋಕಾಯುಕ್ತ ಅಧೀನಕ್ಕೆ ಎಸಿಬಿ

## ನಿವೃತ್ತಿ ಮುನ್ನ ಸರ್ಕಾರಕ್ಕೆ ನ್ಯಾ.ವಿಶ್ವನಾಥ್ ಶೆಟ್ಟಿ ಆಗ್ರಹ

**• ಕನ್ನಡಪ್ರಭ ವಾರ್ತೆ ಬೆಂಗಳೂರು**

ಅಧಿಕಾರ ಮೊಟಕುಗೊಳಿಸಿರುವ ಲೋಕಾಯುಕ್ತ ಸಂಸ್ಥೆಗೆ ಈ ಹಿಂದೆ ಇದ್ದ ಅಧಿಕಾರ ನೀಡಿ, ಭ್ರಷ್ಟಾಚಾರ ನಿಗ್ರಹ ದಳವನ್ನು (ಎಸಿಬಿ) ಸಂಸ್ಥೆಯ ಅಧೀನಕ್ಕೆ ತರಬೇಕು ಎಂದು ಲೋಕಾಯುಕ್ತ ನ್ಯಾ.ಪಿ.ವಿಶ್ವನಾಥ್ ಶೆಟ್ಟಿ ಆಗ್ರಹಿಸಿದ್ದಾರೆ.



ಇದೇ ತಿಂಗಳು 28ರಂದು ಅವಧಿ ಮುಕ್ತಾಯಗೊಳ್ಳುತ್ತಿರುವ ಹಿನ್ನೆಲೆಯಲ್ಲಿ, ಅವರು ಸೋಮವಾರ ಲೋಕಾಯುಕ್ತ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದರು.

ಎಸಿಬಿಯನ್ನು ಲೋಕಾಯುಕ್ತ ಸಂಸ್ಥೆಯ ಅಧೀನ ತರಬೇಕು. ಎಸಿಬಿ ರಚನೆಯಿಂದ ಲೋಕಾಯುಕ್ತದ ಅಧಿಕಾರ ಮೊಟಕುಮಾಗಿದೆ. ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತಿರುವುದರಿಂದ ಎಸಿಬಿ ಪರಿಣಾಮ ಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಲೋಕಾಯುಕ್ತ ಸಂಸ್ಥೆಯು ಸ್ವತಂತ್ರ ಸಂಸ್ಥೆಯಾಗಿರುವುದರಿಂದ ಸಂಸ್ಥೆಯ ವ್ಯಾಪ್ತಿಯಲ್ಲಿ ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತದೆ. ಈ ನಿಟ್ಟಿನಲ್ಲಿ ಸರ್ಕಾರ ಕೆಲಸ ಮಾಡಬೇಕು ಎಂದರು.

**ಇನ್ನೂ 10 ಪ್ರಕರಣಕ್ಕೆ ಅನುಮತಿ ಬೇಕು:** ಲೋಕಾಯುಕ್ತ ಸಂಸ್ಥೆಯಲ್ಲಿ ವಿಚಾರಣೆ ನಡೆಸಲು ಸಕ್ಷಮ ಪ್ರಾಧಿಕಾರವು 10 ಅಕ್ರಮ ಆಸ್ತಿ ಪ್ರಕರಣದಲ್ಲಿ ಇನ್ನೂ ಅನುಮತಿ ನೀಡಿಲ್ಲ. ಎಸಿಬಿ ರಚನೆಯಾಗುವ ಮೊದಲು ಲೋಕಾಯುಕ್ತ ಸಂಸ್ಥೆಯ ಪೊಲೀಸ್ ವಿಭಾಗವು ಕಾರ್ಯಾಚರಣೆ ನಡೆಸಿದ ದಾಳಿ ಪ್ರಕರಣಗಳಾಗಿವೆ. 25 ಅಕ್ರಮ ಆಸ್ತಿ ಗಳಿಕೆ ಪ್ರಕರಣ ಸಂಬಂಧ ವಿಚಾರಣೆಗೆ ಅನುಮತಿ ನೀಡಲು ಸಕ್ಷಮ ಪ್ರಾಧಿಕಾರ ನಿರಾಕರಿಸಿದೆ. ಜಿಲ್ಲಾ ಪಂಚಾಯತ್, ನಗರ ಪಾಲಿಕೆ ಮತ್ತು ಮಹಾನಗರ ಪಾಲಿಕೆ ಸದಸ್ಯರ, ಅಧ್ಯಕ್ಷರ, ಉಪಾಧ್ಯಕ್ಷರ ವಿರುದ್ಧ ದುರ್ನಡತೆಗೆ ಆರೋಪಗಳು ಕೇಳಿ ಬಂದಾಗ ಅವರನ್ನು ಆಯಾ ಸ್ಥಾನದಿಂದ ಮತ್ತು ಮುಂದಿನ ಆರು ವರ್ಷಗಳ ಅವಧಿಗೆ ಸದಸ್ಯತ್ವ ಸ್ಥಾನಕ್ಕೆ ಸ್ಪರ್ಧಿಸದಂತೆ ಅನರ್ಹಗೊಳಿಸುವ ಸಂಬಂಧ ತಿದ್ದುಪಡಿ ತರಲು ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ ಎಂದು ಮಾಹಿತಿ ನೀಡಿದರು.

**20,190 ದೂರುಗಳ ವಿಲೇವಾರಿ:** ತಮ್ಮ ಅವಧಿಯಲ್ಲಿ ದಾಖಲಾದ 20549 ದೂರುಗಳ ಪೈಕಿ, 20199 ವಿಲೇವಾರಿಯಾಗಿದೆ. 1,677 ಇಲಾಖೆ ವಿಚಾರಣೆ ಪೂರ್ಣ, 11 ಸಾವಿರ ಇತರೆ ದೂರು ವಿಲೇವಾರಿ ಆಗಿದೆ. ತಪ್ಪಿತಸ್ಥ ನೌಕರರು, ಪಂಚಾಯತ್ ಪ್ರತಿನಿಧಿ ವಿರುದ್ಧ 587 ವರದಿ ಕಳುಹಿಸಲಾಗಿದೆ ಎಂದರು.

ಸಂಯುಕ್ತ ಕರ್ನಾಟಕ 25/01/2022

# ಲೋಕಾಯುಕ್ತಕ್ಕೆ ಎಸಿಬಿ ಅಧಿಕಾರ ನ್ಯಾಯಮೂರ್ತಿ ವಿಶ್ವನಾಥಶೆಟ್ಟಿ ಆಗ್ರಹ



[illegible]

## ನಾನು ಆಸ್ತಿ ವಿವರ ಘೋಷಿಸಿಲ್ಲ

[illegible]

[illegible]

■ ನ್ಯಾ. ವಿಶ್ವನಾಥಶೆಟ್ಟಿ, ಲೋಕಾಯುಕ್ತರು

INDIAN EXPRESS 22/01/2022

# Lokayukta may move HC over prosecution nod

State Government has not taken any decision regarding several tainted officials for over five years now: Justice Vishwanatha Shetty

YATHIRAJU @ Bengaluru

THE Lokayukta, the state anti-corruption watchdog, is likely to knock on the doors of the Karnataka High Court seeking directives to the State Government to clear the proposals seeking sanction for prosecution of bureaucrats, which have been pending for over five years.



Lokayukta Justice P Vishwanatha Shetty at his office on Friday | ASHISHKRISHNA HP

Lokayukta Justice P Vishwanatha Shetty, who is demitting office on January 27 after completing a five-year term, is seriously examining the prospect of asking the Lokayukta registry to take up the issue with the high court.

During his stint as Lokayukta, Justice Shetty tried to restore the image of the institution which had been dented due to in-house corruption before he took charge.

He initiated over 300 suo motu cases of public interest across state, which include survey of lakes and removal of encroachments, illegal sand mining and quarrying, infrastructure for schools and colleges, wages on par with prisoners to inmates of the beggars' rehabilitation centre, reforms in the central jail, irregularities in payment of salaries and other benefits to employees hired through outsourcing agencies, sanction of land and sites for wounded soldiers, widows of martyrs, illegal formation and allotment of sites by Shivamogga Urban Development Authority, etc.

Justice Shetty disposed of over 7,000 complaints and conducted 115 inquiries against errant public servants. He submitted reports in 77 cases, recommending to the government to take action against erring officials. Among these cases include substandard work at Vikasa Soudha.

"All this was possible with state government accepting my request to provide nine additional enquiry officers of district judge cadre, and support staff for completing inquiries expeditiously. The government has also provided additional space by letting out the Women and Child Development block for the Lokayukta institution", said Justice Shetty.

He was successful in ensuring an amendment to Section 53(A) of Panchayat Raj Act to disqualify a gram panchayat member for the next term, in case the member was found guilty of wrongdoing and a report was not submitted before the expiry of the member's current term.

Similarly, he recommended to the government to modify the law in the case of corporators, members of taluk and zilla panchayats too.

**EXPRESS EXCLUSIVE**

While submitting details of assets and liabilities was extended to corporators, members of GPs, TPs and ZPs, apart from MLAs/MLCs, Justice Shetty persuaded the government to modify the law so that those details are submitted online to the Lokayukta too.

"I am satisfied with my work as Lokayukta. Though I was comfortable after retiring as HC judge and taking up practice as a senior Supreme Court advocate, I consider it a God-sent opportunity to serve this institution and the people of Karnataka. I received excellent cooperation in the discharge of my duties from officers within the Lokayukta as well as the government. The prevailing Covid situation has taken away almost two years. I could have done much more work if there was no pandemic," he said.

"An attempt was made on my life at my office and the case is under trial. I don't have any regrets about serving in the post. But what I do regret is the government taking away the power of prosecuting errant public servants under Prevention of Corruption Act after the establishment of the Anti-Corruption Bureau", he told *The New Indian Express*. He conceded that he could not persuade the high court to dispose of the matter challenging the constitution of the ACB before he demitted office.

"I had a clear perception and road map in my mind to bring greater transparency in administration, while giving less scope for mal-administration. I honestly believe that if the Lokayukta is strengthened with powers of anti-corruption, in addition to others, it will automatically pave the way for quick and efficient administration," he said.

# I did my best to strengthen Lokayukta, says Justice Shetty

ManuAiyappa.Kanathanda
@timesgroup.com

After five years of service, **Justice P Vishwanath Shetty** will step down as the head of Karnataka Lokayukta on January 27. In an interview with **STOI**, Justice Shetty stressed that corruption cannot be rooted out by the Lokayukta alone, and support of the government, the public, judiciary, and media is vital.



**Without police powers, the Lokayukta has become just a recommendatory authority. Do you agree with this view?**

Even when we had police powers, the Lokayukta had remained a recommending body. Our job is to redress people's grievances, trap corrupt government employees, and check maladministration before writing to the government to initiate disciplinary action against the guilty.

**When you assumed office, you talked about bringing back the lost glory of the institution. How do you summarise your long stint?**

I never dreamt of becoming the Lokayukta. I was happy to be an advocate in the Supreme Court, which fetched me higher remuneration. I was really surprised when then chief minister Siddaramaiah sent out a message through MR Naik, then advocate general, to take up the job. However, I must confess now that I'm satisfied with what I have done. I've tried my best to strengthen the institution and its integrity despite the pandemic hurting our efforts. I believe Lokayuktas may come and go, but the institution should remain strong to fight growing corruption.

**You took a lot of interest in protecting lakes and stopping illegal stone quarrying. How far did you succeed?**

We've not fully succeeded in stopping illegal activities, but we've created a sense of fear among land grabbers and homeless people who encroach lakes. Several illegal stone quarrying were halted, and hefty penalties imposed on operators, but some owners approached the court seeking a stay.

**How many recommendations have been made for action against officials and politicians during your tenure? How many have been implemented?**

We've received over 7,000 complaints, mainly against officials and politicians, and recommended action in about 100 cases after investigation. The government acted on approximately half of them and left the other half pending. This includes action against engineers of the Karnataka Road Development Corporation Limited.

**Have you made recommendations to make the Lokayukta Act more effective?**

After ensuring elected representatives, right from gram panchayat members to BBMP corporators, file their annual statement of assets and liabilities online, we recently recommended those who are found guilty of corrupt practices, will lose their membership or be removed. If the government approves this, it will go a long way towards fighting corruption. Otherwise, the existing Karnataka Lokayukta Act is quite effective, though we need police powers to make it stronger. Since the issue of merger of Anti-Corruption Bureau with Lokayuta is pending before the high court, it's not fair on my part to comment. So I believe if an institution remains strong, the Act will become stronger.

**What was the government's attitude towards Lokayukta when it comes to corruption or any other misconduct?**

I've seen four CMs under three governments during my tenure. I had no problem with any one of them. They were all supportive and good to me.

**You were attacked by a youth in your office for reportedly not considering his complaint. Any regrets?**

I have no regrets. I thank God, and the skills I learned as an NCC cadet as a child helped me survive. If I wanted, I could have killed the man since my gunman was about to shoot him as he rushed to save me. But I stopped him. When I look back, I feel proud of myself for making that quick decision and upholding professional values. Otherwise, the taint of being called a "murderer" would have remained till my last breath.

**Karnataka is on top among the states with corruption. How do you explain its increasing prevalence?**

Corruption cannot be rooted out by Lokayukta alone. We need the support of the government, the public, judiciary, and media. Only if all these four pillars work in tandem can we minimise corruption, if not root it out completely.

**What have been the common observations in the complaints?**

I found eight out of 10 complaints we received were completely or partly false, motivated by revenge, enmity, mischief, or extraneous considerations.

KARNATAKA / SOUTH - 25/01/2022

TUESDAY 25.01.2022
newindianexpress.com

# Will web-host reports against errant officials: Lokayukta

EXPRESS NEWS SERVICE
@ Bengaluru

KARNATAKA Lokayukta Justice P Vishwanatha Shetty on Monday said they have decided to web-host and make public the reports submitted to the government recommending action against errant officials if authorities fail to act on them within four months of submission.

Briefing the media about his achievements in his five-year tenure as Lokayukta, Justice Shetty said honest public servants and elected representatives are safe if powers to prosecute the corrupt under the Prevention of Corruption (PC) Act are with the Lokayukta, an independent body headed by a former High Court judge, than the Anti-Corruption Bureau (ACB), which is under the state government led by politicians.

He contended that the Lokayukta can initiate action against ACB if it fails to perform its obligations, as the Lokayukta is




Lokayukta Justice P Vishwanatha Shetty addresses the media in Bengaluru on Monday | ASHISHKRISHNA HP

still empowered with powers, including its own police wing, to deal with maladministration. "If people file complaints of maladministration against public servants, the Lokayukta can refer them to its police wing for investigation. If allegations are prima facie found true, the Lokayukta can write to the government to entrust the inquiry to it under Section 12(3) of the Karnataka Lokayukta Act or refer it to ACB, under Section 15(3) the Act. If ACB doesn't act, the Lokayukta can act even against ACB. The jurisdiction of disciplinary action continues to be with the Lokayukta," he said.

Waving his assets and liabilities list when asked to declare it, Justice Shetty said declaring assets and liabilities on his own may set a wrong precedent as there are no provisions under the law to do so. "But in my case, it is open for anybody to check. Before the selection of a Lokayukta, six constitutional functionaries have thoroughly made careful consideration about the integrity of the person," he added.

THE HINDU - 25/01/2022

INTERVIEW | P. VISHWANATHA SHETTY

# 'ACB needs to be scrapped and its powers restored to Lokayukta'

## My foremost priority was to strengthen the institution, says Vishwanatha Shetty

K.V. ADITYA BHARADWAJ
BENGALURU

Justice P. Vishwanatha Shetty completes his five-year tenure as the Karnataka Lokayukta on January 27. His tenure came shortly after a deep crisis in the institution. His predecessor Bhaskar Rao was embroiled in a corruption scandal himself and the chair lay vacant for two years after his exit. The State Government created the Anti-Corruption Bureau (ACB), taking away powers from the Lokayukta police to investigate under the Prevention of Corruption Act, 1988.

Mr. Shetty maintained a low profile through his tenure and championed several causes, including lakes and encroachment of government lands among other issues. Excerpts from a conversation with *The Hindu*.



PHOTO: K. MURALI KUMAR

**You took over Lokayukta when the institution was in a crisis. Five years later, how do you look back?**

■ My foremost priority through my tenure was to strengthen the institution, rather than glorify myself. After the Government formed the ACB, there has been a general feeling that the institution has been weakened. But I think following a crisis, I have tried my best to restore the credibility of the institution. I was also attacked by a person with a knife in my office in 2018. That was a bitter incident, but I soon overcame that and continued with my work. I am happy and content with my work. I toured the State once after I took charge and wanted to go on another tour, which did not happen due to the pandemic, but all of us are helpless.

**Do you think formation of the ACB was a wise move?**

■ It is true that the institution has lost some bite after the Government formed the ACB taking away the investigation powers of Lokayukta police under Prevention of Corruption Act, 1988. This had already happened before I was appointed Lokayukta and the matter was pending before the Karnataka High Court. After studying the case, I formed a view that I could impress upon the court to resolve the matter either way at the earliest, in which I miserably failed as the matter is still pending. As an institution and in my personal opinion too, the Government Order forming the ACB has to be scrapped and those functions have to be brought back under the Karnataka Lokayukta. We have filed an affidavit to this effect before the court. I hope the issue is resolved soon.

**How has this affected your work?**

■ The institution can do more if ACB is abolished and those powers and functions are restored back to the Karnataka Lokayukta. But that is just one part of the institution and actually it never comes under the direct purview of the Lokayukta. There is a lot of work on public grievance redressal against maladministration that can be done, which we concentrated on. During my tenure, I have initiated 304 *suo motu* proceedings pertaining to maladministration, mostly based on media reports ranging from encroachments, providing protective gear to pourakarmikas, to protecting lakes.

**How has the State Government responded to the recommendations you have made?**

■ The State saw four Chief Ministers from all three prominent political parties during my tenure. No Government was better than the other, most have ignored recommendations made by the institution for action against errant officials. The situation is so bad that an anti-corruption activist has filed a PIL in the High Court seeking directions to the State Government to implement our recommendations. We supported the petition and it is still pending in the court. Lokayukta has always been a recommendatory body and the Governments need to take its recommendations seriously and submit Action Taken Reports within the stipulated time to make the administration people friendly.

21.01.2022

ನಂ.1 ವಿಜಯವಾಣಿ • VIJAYAVANI • BENGALURU | ಬೆಂಗಳೂರು ಸಿಟಿ ಎಕ್ಸ್‌ಪ್ರೆಸ್

ಸರ್ಕಾರದ ಹಂತದಲ್ಲಿ ಪ್ರಕ್ರಿಯೆ ಆರಂಭ | 27ಕ್ಕೆ ನ್ಯಾ. ಪಿ. ವಿಶ್ವನಾಥ ಶೆಟ್ಟಿ ನಿವೃತ್ತಿ

# ಲೋಕಾಯುಕ್ತ ಹುದ್ದೆಗೆ ಹಲವರ ಹೆಸರು

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕಳೆದ ಐದು ವರ್ಷಗಳಿಂದ ಲೋಕಾಯುಕ್ತರಾಗಿ ಸೇವೆ ಸಲ್ಲಿಸಿರುವ ನ್ಯಾಯಮೂರ್ತಿ ಪಿ. ವಿಶ್ವನಾಥ್ ಶೆಟ್ಟಿ ಜ. 27ರಂದು ನಿವೃತ್ತಿ ಹೊಂದಲಿದ್ದಾರೆ. ಅವರಿಂದ ತೆರವಾಗುವ ಹುದ್ದೆಗೆ ಹೊಸಬರ ನೇಮಕಕ್ಕೆ ಸರ್ಕಾರದ ಹಂತದಲ್ಲಿ ಪ್ರಕ್ರಿಯೆ ಆರಂಭವಾಗಿದ್ದು, ಹಲವು ನಿವೃತ್ತ ನ್ಯಾಯಮೂರ್ತಿಗಳ ಹೆಸರು ಮುಂಚೂಣಿಯಲ್ಲಿವೆ.



ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಎಲ್. ನಾರಾಯಣಸ್ವಾಮಿ, ಅಶೋಕ್ ಬಿ. ಹಿಂಚಿಗೇರಿ ಹೆಸರು ಕೇಳಿಬಂದಿವೆ. ಉತ್ತರ ಕರ್ನಾಟಕ ಮೂಲದ ನಿವೃತ್ತ ನ್ಯಾಯಮೂರ್ತಿಯೊಬ್ಬರನ್ನು ಲೋಕಾಯುಕ್ತರನ್ನಾಗಿ ನೇಮಿಸಲು ಸರ್ಕಾರದ ಹಂತದಲ್ಲಿ ಚಿಂತನೆ ನಡೆದಿದೆ ಎಂದು ಹೇಳಲಾಗುತ್ತಿದೆ. ಸದ್ಯ ಉಪ ಲೋಕಾಯುಕ್ತರಾಗಿರುವ ಬಿ.ಎಸ್. ಪಾಟೀಲ್ ಅವರನ್ನು ಲೋಕಾಯುಕ್ತರನ್ನಾಗಿ ನೇಮಿಸಲು ಅವಕಾಶಗಳಿವೆ. ಆದರೆ, ಅಧಿಕೃತ ಆಯ್ಕೆ ಪ್ರಕ್ರಿಯೆ ಇನ್ನಷ್ಟೇ ನಡೆಯಬೇಕಿದೆ. ಮುಖ್ಯಮಂತ್ರಿ, ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ, ವಿಧಾನಸಭಾಧ್ಯಕ್ಷರು, ವಿಧಾನಪರಿಷತ್‌ನ ಸಭಾಪತಿ ಜತೆಗೂಡಿ ನೂತನ ಲೋಕಾಯುಕ್ತರನ್ನು ಆಯ್ಕೆ ಮಾಡಲಿದ್ದಾರೆ.

ಕಳೆದ ಐದು ವರ್ಷಗಳ ಸೇವೆಯ ಕುರಿತು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ್ ಶೆಟ್ಟಿ ವಿಜಯವಾಣಿಯೊಂದಿಗೆ ಹಂಚಿಕೊಂಡಿದ್ದಾರೆ. ಕಾನೂನಿನಲ್ಲಿ ಲೋಕಾಯುಕ್ತಕ್ಕೆ ಸಾಕಷ್ಟು ಅಧಿಕಾರವಿದೆ. ಆದರೆ, ಭ್ರಷ್ಟಾಚಾರ ನಿಗ್ರಹ ದಳ (ಎಸಿಬಿ) ಸ್ಥಾಪನೆಯಾದ ಬಳಿಕ ಲೋಕಾಯುಕ್ತಕ್ಕೆ ಹಿಂದೆ ಇದ್ದ ಅಧಿಕಾರ ಸ್ವಲ್ಪ ಕಡಿಮೆಯಾಗಿದೆ. ಎಸಿಬಿ ರದ್ದು ಮಾಡುವ ವಿಚಾರಕ್ಕೆ ಸಂಬಂಧಿಸಿದಂತೆ ನನ್ನ ಪ್ರಯತ್ನ ಸಫಲವಾಗಲಿಲ್ಲ ಎಂಬ ಬೇಸರವಿದೆ. 'ಎಸಿಬಿ' ಪವರ್ ನಮಗೆ ಸಿಗಲಿಲ್ಲವಲ್ಲ ಎಂಬ ಸಣ್ಣ ನೋವು ಆಗಾಗ ಕಾಡುತ್ತದೆ. ಇಷ್ಟಾದರೂ ಹಲವು ಗಂಭೀರ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಲೋಕಾಯುಕ್ತ ಯಶಸ್ವಿಯಾಗಿದೆ ಎಂದರು.


kannada matrimony

ವಧು ಅಥವಾ ವರರನ್ನು ಹುಡುಕಲು ಸಹಾಯ ಬೇಕೆ?

ಮಿಸ್ಡ್ ಕಾಲ್ ನೀಡಿ 70928 77888, ನೋಂದಣಿ ಉಚಿತ

ಕನ್ನಡಿಗರ ನಂ.1 ಆಯ್ಕೆ, 21 ವರ್ಷಗಳಿಂದ





ಕಳೆದ ಐದು ವರ್ಷಗಳಲ್ಲಿ ಲೋಕಾಯುಕ್ತ ಹುದ್ದೆಗೆ ಯಾವುದೇ ಕಪ್ಪು ಚುಕ್ಕೆ ಬಾರದಂತೆ ಕಾರ್ಯ ನಿರ್ವಹಿಸಿದ್ದೇನೆ. ಸದಾ ಜನರ ಒಳಿತನ್ನೇ ಮನಸ್ಸಿನಲ್ಲಿಟ್ಟುಕೊಂಡು ಕೆಲಸ ನಿರ್ವಹಿಸಿರುವ ತೃಪ್ತಿ ನನಗಿದೆ.

| ನ್ಯಾ.ಪಿ. ವಿಶ್ವನಾಥ್ ಶೆಟ್ಟಿ ಲೋಕಾಯುಕ್ತ

## ನಿಷ್ಠೆ ಹೊಂದಿದವರಿಗೆ ಸೂಕ್ತ

ಕೆಲಸ, ನಿಷ್ಠೆ, ಸಮಾಜದ ಗೌರವಕ್ಕೆ ಆಸಕ್ತಿ ಹೊಂದಿರುವವರು, ಕಾರ್ಯ ಪ್ರವೃತ್ತಿಯಲ್ಲಿ ಹೆಚ್ಚಿನ ಹುಮ್ಮಸ್ಸು, ಅಭಿಲಾಷೆ ಇಟ್ಟುಕೊಂಡಿರುವವರು ಲೋಕಾಯುಕ್ತ ಹುದ್ದೆಯಲ್ಲಿ ಕೆಲಸ ಮಾಡಲು ಸೂಕ್ತ ವ್ಯಕ್ತಿಗಳಾಗಿರುತ್ತಾರೆ. ಎಂಜಾಯ್ ಮಾಡಲು ಬರುವವರಿಗೆ ಈ ಹುದ್ದೆ ಸೂಕ್ತವಾಗಿರುವುದಿಲ್ಲ. ಸದಾ ಸಮಾಜಮುಖಿ ಚಿಂತನೆಗಳನ್ನು ಮನಸ್ಸಿನಲ್ಲಿಟ್ಟುಕೊಂಡು ಅನ್ಯಾಯವಾದವರಿಗೆ ಸೂಕ್ತ ರೀತಿಯಲ್ಲಿ ನ್ಯಾಯ ಒದಗಿಸಬೇಕು ಎಂದು ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ ಸಲಹೆ ನೀಡಿದರು.

## ಸಮಾಜಮುಖಿ ಕೆಲಸಗಳು

ರಾಜ್ಯದ ಪ್ರತಿ ಜಿಲ್ಲೆಗಳಲ್ಲಿರುವ ಕೆರೆಗಳ ಒತ್ತುವರಿಗೆ ಸಂಬಂಧಿಸಿದಂತೆ ತನಿಖೆ ನಡೆಸಲಾಗುತ್ತಿದೆ. ಲೋಕಾಯುಕ್ತ ಸೂಚನೆ ಮೇರೆಗೆ ಸಾಕಷ್ಟು ಕೆರೆಗಳ ದುರಸ್ತಿ ಕಾರ್ಯ ನಡೆಯುತ್ತಿದೆ. ಬಿಬಿಎಂಪಿ ಪೌರ ಕಾರ್ಮಿಕರಿಗೆ ಕೈಗವಸು ಸೇರಿ ಇನ್ನಿತರ ಮೂಲಭೂತ ಉಪಕರಣಗಳನ್ನು ಒದಗಿಸಲು ನೆರವಾಗಿದ್ದೇವೆ. ಹೊರ ಗುತ್ತಿಗೆ ನೌಕರರಿಗೆ ಪಿಎಫ್, ಇಎಸ್ಐ ಸೌಲಭ್ಯ, ವಿದ್ಯಾರ್ಥಿಗಳ ಹಾಸ್ಟೆಲ್ ದುರಸ್ತಿ, ಗುಂಡಿ ಬಿದ್ದ ರಸ್ತೆಗಳ ರಿಪೇರಿ ಸೇರಿ ಲೋಕಾಯುಕ್ತ ಸಂಸ್ಥೆಯಿಂದ ಹಲವು ಸಮಾಜಮುಖಿ ಕೆಲಸಗಳು ನಡೆದಿವೆ ಎಂದು ವಿಶ್ವನಾಥ ಶೆಟ್ಟಿ ವಿವರಿಸಿದರು.

## ಒತ್ತಡಕ್ಕೆ ಮಣಿಯುವವನಲ್ಲ

ಸರ್ಕಾರದಿಂದ ನನಗೆ ಯಾವುದೇ ಒತ್ತಡ ಬರಲಿಲ್ಲ. ನನ್ನ ಅವಧಿಯಲ್ಲಿ ನಾಲ್ವರು ಮುಖ್ಯಮಂತ್ರಿಗಳನ್ನು ಕಂಡಿದ್ದೇನೆ. ಲೋಕಾಯುಕ್ತದಲ್ಲಿ ನಡೆಯುತ್ತಿರುವ ಯಾವ ಪ್ರಕರಣಗಳಲ್ಲೂ ರಾಜಕಾರಣಿಗಳು ನನ್ನ ಮೇಲೆ ಪ್ರಭಾವ ಬೀರಲಿಲ್ಲ. ಒಂದು ವೇಳೆ ಒತ್ತಡಗಳು ಬಂದಿದ್ದರೂ ಅದಕ್ಕೆ ಮಣಿಯುವ ವ್ಯಕ್ತಿತ್ವ ನನ್ನದಲ್ಲ. ಪತ್ರಿಕೆಗಳಲ್ಲಿನ ವರದಿ ಆಧರಿಸಿ ಹಲವು ಪ್ರಕರಣಗಳಲ್ಲಿ ಸ್ವಯಂಪ್ರೇರಿತ ದೂರು ದಾಖಲಿಸಿ ಸಂಬಂಧಿಸಿದ ಅಧಿಕಾರಿಗಳಿಗೆ ನೋಟಿಸ್ ಕೊಟ್ಟು ಕ್ರಮ ಕೈಗೊಂಡಿದ್ದೇನೆ ಎಂದು ವಿಶ್ವನಾಥ ಶೆಟ್ಟಿ ತಿಳಿಸಿದರು.

ಸಂಯುಕ್ತ ಕರ್ನಾಟಕ 18.01.2022

# ಹಣಗಳಿಸುವ ಮಾರ್ಗಕ್ಕಿಂತ ಜನಸೇವೆ ತೃಪ್ತಿಕರ

## ಲೋಕಾಯುಕ್ತರ ಅವಧಿ ಬಹುತೇಕ ಪೂರ್ಣ



ನಾನು ಸುಪ್ರೀಂಕೋರ್ಟ್ ವಕೀಲಿ ವೃತ್ತಿಯಲ್ಲೇ ಮುಂದುವರೆದಿದ್ದರೆ ಬ್ಯಾಂಕ್ ಬ್ಯಾಲೆನ್ಸ್ ದೊಡ್ಡದಾಗ್ತಿತ್ತು. ಆದರೆ ಸಮಸ್ಯೆ ಹೊತ್ತು ಬಂದು ಕಣ್ಣೀರಿಡುವ ನೂರಾರು ಮಂದಿಗೆ ಪರಿಹಾರ ಒದಗಿಸಿಕೊಡುವ ಮೂಲಕ ಪುಣ್ಯದ ಬ್ಯಾಂಕ್ ಬ್ಯಾಲೆನ್ಸ್ ದೊಡ್ಡದಾಗುತ್ತಿರಲಿಲ್ಲ. ಹೀಗೆಂದು ಐದು ವರ್ಷಗಳ ಅಧಿಕಾರಾವಧಿಯ ಹತ್ತು ಹಲವು ಅನುಭವಗಳನ್ನು ಮಾರ್ಮಿಕವಾಗಿ ಬಿಚ್ಚಿಟ್ಟವರು ಲೋಕಾಯುಕ್ತ ನ್ಯಾ.ವಿಶ್ವನಾಥಶೆಟ್ಟಿ ಅವರು.

ಸೇವಾವಧಿ ಇನ್ನು ಕೇವಲ 10 ದಿನಗಳಷ್ಟೇ (ಜ.28) ಬಾಕಿ ಇರುವಾಗ ಸೋಮವಾರ ಸಂಯುಕ್ತ ಕರ್ನಾಟಕದ ಮುಖಾಮುಖಿ ಸಂದರ್ಶನದಲ್ಲಿ ಹಲವು ವಿಷಯಗಳನ್ನು ಹಂಚಿಕೊಂಡ ಅವರು

ಮುಖಾಮುಖಿ ಸಂದರ್ಶನ

ಕೆ.ಎ.ಪರಮೇಶ್

ಎ.ಸಿ.ಬಿ.ಗಿರುವ ಪವರ್ ಇಲ್ಲದಿದ್ದರೂ ಸುಮೋಟೋ ಅಧಿಕಾರ ಬಳಸಿ ಹಲವು ಗಂಭೀರ ಸಮಸ್ಯೆಗಳನ್ನು ಬಗೆಹರಿಸಿ ಸರ್ಕಾರದ ಆದೇಶ ಹೊರಬೀಳುವಂತೆ ಮಾಡುವಲ್ಲಿ ಯಶಸ್ವಿಯಾಗಿದ್ದೇನೆ. ಕಾನೂನಿನ ಚೌಕಟ್ಟಿನ ಮಿತಿಯೊಳಗೆ ಮತ್ತು ಸಾಮಾಜಿಕ ಕಳಕಳಿ ಇಟ್ಟುಕೊಂಡೇ ಸೇವಾವಧಿಯ ಅಂತ್ಯಕ್ಕೆ ಬಂದು ನಿಂತಿದ್ದೇನೆ.

ಪುಟ 05

- ಎಸಿಬಿ ಅಧಿಕಾರ ಇಲ್ಲದಿದ್ದರೂ ಬಿಸಿ ಮುಟ್ಟಿಸಿದ್ದೇನೆ
- ಸುಮೋಟೋ ಬಳಸಿ ಗುರುತರ ಸಮಸ್ಯೆಗಳಿಗೆ ಸ್ಪಂದನೆ
- ಲೋಕಾಯುಕ್ತರಾಗಿ ಅಧಿಕಾರಾವಧಿ ಜ.28ಕ್ಕೆ ಪೂರ್ಣ

ಒಂದನೇ ಪುಟದಿಂದ

### ಅಧಿಕಾರ ತಲೆಗೇರಬಾರದು

ಸರ್ಕಾರದ ಎಲ್ಲಾ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಅವರವರ ಕಾರ್ಯವ್ಯಾಪ್ತಿಯಲ್ಲಿ ಸಮಾಜದ ಸಮಸ್ಯೆಗಳಿಗೆ ಕರ್ತವ್ಯದಲ್ಲಿ ಸ್ಪಂದಿಸಿದಲ್ಲಿ ಗ್ರಾಮಪಂಚಾಯಿತಿಯಿಂದ ಲೋಕಾಯುಕ್ತರ ವರೆಗೂ ಸ್ಪಂದಿಸಲು ಸಾಧ್ಯವಿದೆ.

ಹೀಗೆ ಮಾಡಿದಲ್ಲಿ ಮಾತ್ರ ಜನರು ನಂಬಿದಂತೆ ದೇವರ ದಯೆ..ಜನರ ಪುಣ್ಯ ಲಭಿಸುತ್ತದೆ..ಅಷ್ಟೇ ಅಲ್ಲ ನಮಗೆ ಮಾಡಿದ ಹೊರಿಯೂ ಕುಂಡಾಗುತ್ತದೆ..ನೆಗುತ್ತಾ (ನಮಗೆ ಯಾರಿ ಪಾಪದ ಫಲವ ಮೇಲುಕು ಹಾಕುತ್ತಾ..) ನಮಗೆ ಇರುವ ಅಧಿಕಾರ ತಲೆಗೆ ಏರದಂತೆ ಇದು ಸೇವೆಗಿರುವ ಅಮೂಲ್ಯ ಅವಕಾಶ ಎಂದು ತಿಳಿಯಬೇಕೆಂಬುದು ಶೆಟ್ಟಿ ಅವರ ಪ್ರಾಮಾಣಿಕ ಸಲಹೆ.

### ಎಸಿಬಿ ಪವರ್ ಸಿಗದ ಕೊರಗು

ಕೊರೊನಾ ಸಾಂಕ್ರಾಮಿಕದಿಂದ ಕಳೆದೆರಡು ವರ್ಷಗಳಲ್ಲಿ ಅಂದುಕೊಂಡ ಕೆಲಸಗಳು ಅಷ್ಟಾಗಿ ಆಗಿಲ್ಲ. ಹಾಗಿದ್ದು ನೊಂದು ಬಂದವರ ನೋವಿಗೆ ಲೋಕಾಯುಕ್ತ ಸ್ಪಂದಿಸಿ ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ನೆರವಾಗಿದ್ದೇವೆ. ಎಸಿಬಿ ಪವರ್ ಇತ್ತು ಸಮಯವಾದರೂ ನಮಗೆ ಸಿಗಲಿಲ್ಲವಲ್ಲ ಎಂಬ ಸಣ್ಣ ಕೊರಗಿದೆ. ಇದ್ದರೆ ಲೋಕಾಯುಕ್ತರಾಗಿ ಇನ್ನಷ್ಟು ಪರಿಣಾಮಕಾರಿ ಕೆಲಸ ಮಾಡಬಹುದೆಂದು ತೋರಿಸಿಕೊಡುವ ಅವಕಾಶದಿಂದ ವಂಚಿತವಾದ ಬಗ್ಗೆ ಸ್ವಲ್ಪ ಬೇಸರವಿದೆ. ಇದು ಯಾರ ಮೇಲೆಯೂ ದೂಷಣೆ ಅಲ್ಲ. ವ್ಯವಸ್ಥೆಯೇ ಹಾಗಿದೆ.

### ಪರಮಾಧಿಕಾರ ಎಂಬುದಿಲ್ಲ

ಪ್ರಜಾಪ್ರಭುತ್ವದಲ್ಲಿ ಲೋಕಾಯುಕ್ತರಿಗಷ್ಟೇ ಅಲ್ಲ ಯಾರಿಗೂ ಪರಮಾಧಿಕಾರ ಇಲ್ಲ. ಸಮಾಜದ ಹಿತದೃಷ್ಟಿಯಿಂದ ಕಾನೂನಿನಲ್ಲಿ (ಸೆಕ್ಷನ್ 14ರಡಿ) ಕ್ರಮ ಕೈಗೊಳ್ಳಬಹುದಾದ ಸಾಕಷ್ಟು ಅಧಿಕಾರವಿದೆ.



ಮಾಧ್ಯಮಗಳು ಬಹಿರಂಗಪಡಿಸುವ ಗಂಭೀರ ಸಮಸ್ಯೆಗಳ ವರದಿಯನ್ನೇ ಆಧರಿಸಿ ಲೋಕಾಯುಕ್ತರು ಸುಮೋಟೋ ಅಧಿಕಾರ ಬಳಸಿ ತನಿಖೆಗೆ ಆದೇಶಿಸಿ ಕ್ರಮ ಜರುಗಿಸಬಹುದು. ಆದರೆ ಕೆಲವು ಸಮಸ್ಯೆಗಳ ತನಿಖೆಗೆ ಆದೇಶಿಸಿ ಜನಹಿತಕ್ಕೆ ಧಕ್ಕೆಯಾಗುವ ಆತಂಕವೂ ನಮ್ಮ ಮೇಲಿರುತ್ತದೆ.

### ಅಧಿಕಾರ ಬಳಕೆಗೆ ವಿವೇಚನೆ ಬೇಕು

ಅಧಿಕಾರ ಬಳಕೆಯ ವಿವೇಚನೆ ನಮ್ಮಲ್ಲಿರಬೇಕಾಗುತ್ತದೆ. ಇಲ್ಲದಿದ್ದಲ್ಲಿ ವ್ಯತಿರಿಕ್ತ ಪರಿಣಾಮಗಳಾಗುವ ಸಾಧ್ಯತೆಯೂ ಇಲ್ಲದಿಲ್ಲ. ಜನಮಾಧ್ಯಮವೂ ಇದಕ್ಕೆ ಸಹಾಯಕವಾಗಲಿದೆ. ಸಮಾಜದ ಇಲ್ಲವೇ ಮಾಧ್ಯಮಗಳ ಮೆಚ್ಚುಗೆ ಪಡೆಯಲು ಲೋಕಾಯುಕ್ತರು ಅಧಿಕಾರ ಬಳಸಿಕೊಂಡರೆ ಅದು ಒಳಿತಲ್ಲ ಎನಿಸುತ್ತದೆ. ನನ್ನ ಕಾರ್ಯವೈಖರಿ ಇದಕ್ಕೆ ಭಿನ್ನವಾದುದು. ನನ್ನ ಮನಸ್ಸಿಗೆ ಮೆಚ್ಚುವಂತೆ ಸಮಾಜಮುಖಿ ಕೆಲಸ ಮಾಡಿದ್ದೇನೆಂದೂ ವಿಶ್ವನಾಥಶೆಟ್ಟಿ ಹೆಮ್ಮೆಯಿಂದ ಹೇಳಿಕೊಂಡರು.

### ಒಮ್ಮತದ ಆಯ್ಕೆಗೆ ಒಪ್ಪಿಕೊಂಡೆ

ಸರ್ವಾನುಮತವಾಗಿ ಆಯ್ಕೆ ಮಾಡಿದಲ್ಲಿ ಮಾತ್ರ ಲೋಕಾಯುಕ್ತ ಹುದ್ದೆಗೆ ಒಪ್ಪುತ್ತೇನೆಂದು ಅಂದಿನ ಅಡ್ವೊಕೇಟ್ ಜನರಲ್ ಮಧುಸೂದನ್ ನಾಯಕ್ ಅವರ ಬಳಿ ಹೇಳಿದ್ದೆ. ಹಾಗೇ ಆಯಿತು. ಸಿದ್ದರಾಮಯ್ಯ ಅವರಿಂದ ಹಿಡಿದು ಈಗಿನ ಬೊಮ್ಮಾಯಿ ಅವರು ಸಿಎಂ ಆಗಿರುವವರೆಗೆ ಎಲ್ಲರಿಂದಲೂ ನಮ್ಮ ಅಗತ್ಯ ಬೇಡಿಕೆ ಈಡೇರಿಕೆಗೆ ಉತ್ತಮ ಸ್ಪಂದನೆ ಸಿಕ್ಕಿದೆ ಎಂದು ಧನ್ಯತಾಭಾವದಿಂದ ಹೇಳಿದ್ದರು.

### ಇವೆಲ್ಲವೂ ಸುಮೋಟೋ ಆದೇಶ

ಬಿ.ಹೆಚ್.ಎಸ್.ದೊರೆಸ್ವಾಮಿ ಅವರ ದೂರಿನ ಆಧಾರದಲ್ಲಿ ಸುಮೋಟೋ ಬಳಸಿ ಇಡೀ ರಾಜ್ಯದಲ್ಲಿ ಕೆರೆಗಳ ಒತ್ತುವರಿ ಮತ್ತು ತೆರವಿಗೆ ಸಂಬಂಧಿಸಿದಂತೆ ತನಿಖೆ ನಡೆದಿದ್ದು ಶೀಘ್ರವೇ ವರದಿ ಬರಲಿದೆ. ಎಸ್ಸಿಎಸ್ಟಿ ಹಾಸ್ಟೆಲ್ ದುಸ್ಥಿತಿ, ಸಿಬ್ಬಂದಿ ಸಮಸ್ಯೆ, ದೊಡ್ಡ ಆಸ್ಪತ್ರೆಗಳಲ್ಲಿ ಹೊರಗುತ್ತಿಗೆದಾರರು, ಪೌರಕಾರ್ಮಿಕರಿಗೆ ಕೈಗವಸು,ಬೂಟು, ಸಮರ್ಪಕ ಕೊಡದಿರುವಲ್ಲಿ, ಹೊರಗುತ್ತಿಗೆ ನೌಕರರಿಗೆ ಪಿಎಫ್,ಇಎಸ್‌ಐ ವ್ಯವಸ್ಥೆ, ಗ್ರಾಮ ಸಹಾಯಕರ ವಾರ್ಷಿಕ ಆದಾಯದ ಸಲ್ಲಿಸುವ ಬಗ್ಗೆ ಕಾನೂನು ತಿದ್ದುಪಡಿ ಮೂಲಕ ಆದೇಶ ಹೊರಡುವಂತೆ ಮಾಡಿದ್ದೇನೆ.

### ಮತ್ತೆ ಕಪ್ಪುಕೋಟು ಕರೆದಿದೆ..

ಸುಪ್ರೀಂಕೋರ್ಟ್‌ನ ಹಿರಿಯ ವಕೀಲರು ಮತ್ತೆ ಬರುವಂತೆ ಸಲಹೆಗಳೂ ಬರುತ್ತಿವೆ. ನಾನೂ ಓಪನ್ ಆಗಿದ್ದೇನೆ. ಲೋಕಾಯುಕ್ತನಾಗಿ ನಿವೃತ್ತನಾದರೂ ವ್ಯಕ್ತಿ ಜೀವನದಿಂದ ನಿವೃತ್ತನಾಗಿಲ್ಲ. ನಿದ್ದೆ ಬರುವವರೆಗೆ, ತಾಕತ್ ಇರುವವರೆಗೆ ಜೀವನ ಕಳೆಯುವುದು ಕಷ್ಟವಲ್ಲ. ದೇವರು ಆರೋಗ್ಯ, ಆಯುಷ್ಯ ಕೊಟ್ಟರೆ ಇನ್ನೂ ಸಾಕಷ್ಟು ಕೆಲಸಕ್ಕೆ ಅವಕಾಶವಿದೆ. ವಕೀಲನಾಗಿರುವ ನನ್ನ ಮಗನ ಕಚೇರಿಯಲ್ಲೇ ಜೂನಿಯರ್‌ಗಳಿಗೆ ಅನುಭವದ ಸಹಕಾರ ಕೊಡುವೆ. ವಿಶೇಷವಾಗಿ ಕೊರೊನಾ ರಾಜ್ಯ, ದೇಶವನ್ನು ಮುಕ್ತಗೊಳಿಸಲಿ ಎಂದು ಪ್ರಾರ್ಥಿಸುತ್ತೇನೆ.

### ಹೊಸ ಲೋಕಾಯುಕ್ತರು ಉತ್ತರ ಕರ್ನಾಟಕದವರೇ?

ಇನ್ನು ಹತ್ತು ದಿನಗಳಲ್ಲಿ ಲೋಕಾಯುಕ್ತರ ಹುದ್ದೆ ತೆರವಾಗಲಿದೆ. ಹೊಸ ಲೋಕಾಯುಕ್ತರು ಯಾರೆಂಬ ಜನರ ಕುತೂಹಲ ಇದ್ದೇ ಇರುತ್ತದೆ. ಮೂಲಗಳ ಪ್ರಕಾರ ಈ ಬಾರಿ ಉತ್ತರಕರ್ನಾಟಕದ ಮೂಲದ ಹಿರಿಯ ನಿವೃತ್ತ ನ್ಯಾಯಾಧೀಶರೊಬ್ಬರು ಲೋಕಾಯುಕ್ತರಾಗುವ ಸಂಭವವಿದೆ. ಪ್ರಾಥಮಿಕ ಚರ್ಚೆಗಳಾಗಿದ್ದು ಇನ್ನಷ್ಟೇ ಅಧಿಕೃತ ಆಯ್ಕೆ ಪ್ರಕ್ರಿಯೆ ನಡೆಯಬೇಕಿದೆ. ಮುಖ್ಯಮಂತ್ರಿ, ಹೈಕೋರ್ಟ್ ಸಿಜೆ, ವಿಧಾನಸಭಾಧ್ಯಕ್ಷರು, ವಿಧಾನಪರಿಷತ್‌ನ ಸಭಾಪತಿ, ಎರಡೂ ಸದನಗಳ ವಿಪಕ್ಷ ನಾಯಕರು ಒಗ್ಗೂಡಿ ನೂತನ ಲೋಕಾಯುಕ್ತರನ್ನು ಆರಿಸಲಿದ್ದಾರೆ. ದೇಶದಲ್ಲೇ ನಮ್ಮಲ್ಲಿ ಅತ್ಯುತ್ತಮ ಆಯ್ಕೆ ಪದ್ಧತಿ ಎಂಬ ಮಾತಿದೆ. ಒಳ್ಳೆಯವರ ಆಯ್ಕೆಗೂ ಅವಕಾಶವಿದೆ.

ವಿಜಯ ವಾಣಿ - 25.01.2022

## ಲೋಕಾಯುಕ್ತ ತನಿಖೆಗೆ ಅಡ್ಡಗಾಲು | 8,036 ದೂರು ಇತ್ಯರ್ಥವಾಗಿಲ್ಲ | ಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಲು ಸೂಚನೆ

# 25 ಪ್ರಕರಣಗಳ ವಿರುದ್ಧ ತನಿಖೆ ನಡೆಸಲು ಸರ್ಕಾರ ನಕಾರ!

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸರ್ಕಾರಿ ಅಧಿಕಾರಿಗಳ ವಿರುದ್ಧದ ಅಕ್ರಮ ಆಸ್ತಿ ಗಳಿಕೆಗೆ ಸಂಬಂಧಿಸಿ 25 ಪ್ರಕರಣಗಳ ಲೋಕಾಯುಕ್ತ ತನಿಖೆಗೆ ಅನುಮತಿ ನೀಡಲು ಸರ್ಕಾರ ನಿರಾಕರಿಸಿರುವ ವಿಚಾರ ಬೆಳಕಿಗೆ ಬಂದಿದೆ. 10 ಪ್ರಕರಣಗಳಲ್ಲಿ ಇನ್ನೂ ತನಿಖೆಗೆ ಅನುಮತಿ ಬಾಕಿಯಿದೆ.

ಭ್ರಷ್ಟಾಚಾರ ನಿಗ್ರಹ ದಳ (ಎಸಿಬಿ) ಸ್ಥಾಪನೆಗೆ ಮುನ್ನ ಲೋಕಾಯುಕ್ತದಲ್ಲಿ ದಾಖಲಾಗಿದ್ದ ಸರ್ಕಾರಿ ಅಧಿಕಾರಿಗಳ ಅಕ್ರಮ ಆಸ್ತಿಗೆ ಸಂಬಂಧಿಸಿದ ಡಿಎ ಪ್ರಕರಣಗಳ ತನಿಖೆ ನಡೆಸಲು ಸಕ್ಷಮ ಪ್ರಾಧಿಕಾರದ ಅನುಮತಿ ಕೇಳಲಾಗಿತ್ತು. ಈ ಪೈಕಿ 25 ಪ್ರಕರಣಗಳ ತನಿಖೆಗೆ ಅನುಮತಿ ನೀಡಲು ಸರ್ಕಾರ ನಿರಾಕರಿಸಿದೆ. ಈ ಕ್ರಮವನ್ನು ಪ್ರಶ್ನಿಸಿ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಲು ರಿಜಿಸ್ಟ್ರಾರ್‌ಗೆ ಲೋಕಾಯುಕ್ತರು ಸೂಚಿಸಿದ್ದಾರೆ.

ಹಲವು ವರ್ಷಗಳ ಹಿಂದೆ ದಾಖಲಾಗಿದ್ದ 10 ಡಿಎ ಕೇಸ್‌ಗಳ ತನಿಖೆಗೆ ಸರ್ಕಾರದಿಂದ ಅನುಮತಿ ಸಿಗಲು ಬಾಕಿ ಇದೆ. ಈ ಪೈಕಿ 2004, 2006, 2010, 2012ರಲ್ಲಿ ಐಎಎಸ್ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು, ಇಂಜಿನಿಯರ್‌ಗಳು ಸೇರಿ ಸರ್ಕಾರದ ಉನ್ನತ ಹುದ್ದೆಯಲ್ಲಿರುವವರು ಅಕ್ರಮ ಆಸ್ತಿ ಹೊಂದಿರುವ ಕುರಿತು ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾಗಿತ್ತು. ಇದರ ತನಿಖೆಗೆ ಸರ್ಕಾರ ಅನುಮತಿ ನೀಡದ ಕಾರಣ ಹಲವು ವರ್ಷಗಳಿಂದ ತನಿಖೆ ಬಾಕಿ ಉಳಿದಿದೆ. ಪ್ರಸ್ತುತ



ಸುದ್ದಿಗೋಷ್ಠಿ ನಡೆಸಿದ ಲೋಕಾಯುಕ್ತ ನ್ಯಾಯಮೂರ್ತಿ ವಿಶ್ವನಾಥ ಶೆಟ್ಟಿ.

ಲೋಕಾಯುಕ್ತ ಸಂಸ್ಥೆಯಲ್ಲಿ 8,036 ದೂರುಗಳು ಹಾಗೂ 2,430 ವಿಚಾರಣಾ ಹಂತದಲ್ಲಿರುವ ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಉಳಿದಿವೆ. ಕಳೆದ 5 ವರ್ಷಗಳಲ್ಲಿ 20,549 ದೂರು ಹಾಗೂ 2,431 ವಿಚಾರಣಾ ಪ್ರಕರಣಗಳು ದಾಖಲಾಗಿವೆ. ಅದರಲ್ಲಿ 13 ಸಾವಿರ ಸ್ವಪ್ರೇರಿತ ಕೇಸ್ ದಾಖಲಾಗಿದ್ದು, ಈ ಪೈಕಿ 12 ಸಾವಿರ ಕೇಸ್ ಇತ್ಯರ್ಥವಾಗಿವೆ. 2017 ಜ. 28ರಿಂದ ಇಲ್ಲಿವರೆಗೆ ಲೋಕಾಯುಕ್ತ ಸಂಸ್ಥೆಯಲ್ಲಿ ಒಟ್ಟು 20,199 ದೂರು ಹಾಗೂ 2,677 ವಿಚಾರಣಾ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಈ ಅವಧಿಯಲ್ಲಿ 2,122 ಪ್ರಕರಣಗಳಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3)ರ ಅನ್ವಯ ಹಾಗೂ 587 ಕೇಸ್‌ಗಳಲ್ಲಿ ಕಲಂ 12(1)ರ ಅನ್ವಯ ಸರ್ಕಾರಕ್ಕೆ ಶಿಫಾರಸು ಮಾಡಲಾಗಿದೆ. 5 ವರ್ಷಗಳಲ್ಲಿ ಲೋಕಾಯುಕ್ತರು ಒಟ್ಟು 304 ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಸಾರ್ವಜನಿಕರ ಕುಂದುಕೊರತೆಗಳ ನಿವಾರಣೆ ಮಾಡಲು ಪ್ರಯತ್ನಿಸಿದ್ದಾರೆ.

### ಸರ್ಕಾರಕ್ಕೆ ಪ್ರಸ್ತಾವನೆ

ಸ್ಥಳೀಯ ಆಡಳಿತ ಸಂಸ್ಥೆಗಳಾದ ಪಟ್ಟಣ ಪಂಚಾಯಿತಿ, ನಗರ ಪಾಲಿಕೆ ಮತ್ತು ಮಹಾ ನಗರ ಪಾಲಿಕೆ ಸದಸ್ಯರು, ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ವಿರುದ್ಧ ದುರ್ನಡತೆಗಳ ಆರೋಪಗಳು ಕೇಳಿಬಂದಾಗ ಅವರನ್ನು ಆಯಾ ಸ್ಥಾನದಿಂದ ಹಾಗೂ ಮುಂದಿನ 6 ವರ್ಷಗಳ ಅವಧಿಗೆ ಸದಸ್ಯತ್ವ ಸ್ಥಾನಕ್ಕೆ ಸ್ಪರ್ಧಿಸದಂತೆ ಅನರ್ಹಗೊಳಿಸಲು ಕರ್ನಾಟಕ ನಗರ ಪಾಲಿಕೆಗಳ ಕಾಯ್ದೆ 1961ಕ್ಕೆ ಮತ್ತು ಮಹಾ ನಗರ ಪಾಲಿಕೆಗಳ ಕಾಯ್ದೆ- 1975ಕ್ಕೆ ತಿದ್ದುಪಡಿ ತರಲು ಸರ್ಕಾರಕ್ಕೆ ಲೋಕಾಯುಕ್ತದಿಂದ ಪ್ರಸ್ತಾವನೆ ಕಳುಹಿಸಲಾಗಿದೆ.

### ಎಸಿಬಿ ರದ್ದುಗೊಳಿಸಬೇಕು...

ಎಸಿಬಿ ರಚನೆಯಿಂದ ಲೋಕಾಯುಕ್ತದ ಅಧಿಕಾರ ಮೊಟಕಾಗಿದೆ ಎಂಬುದು ನಾನು ಇಲ್ಲಿಗೆ ಬರುವಾಗಲೇ ಗೊತ್ತಿತ್ತು. ಎಸಿಬಿಯನ್ನು ರದ್ದುಗೊಳಿಸಿ ಲೋಕಾಯುಕ್ತಕ್ಕೆ ಈ ಹಿಂದೆ ಇದ್ದಂತಹ ಅಧಿಕಾರ ನೀಡಬೇಕು. ಆಗ ಭ್ರಷ್ಟರನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಟ್ಟಹಾಕಬಹುದು. ಎಸಿಬಿಯ ಅಧಿಕಾರ ಅವಶ್ಯವಿದ್ದರೆ ಲೋಕಾಯುಕ್ತಕ್ಕೆ ಬಳಸಲು ಅನುಮತಿ ನೀಡಬೇಕು. ಆಗ ಲೋಕಾಯುಕ್ತಕ್ಕೆ ಹೆಚ್ಚಿನ ಬಲ ಸಿಗುತ್ತದೆ. ಈ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಅಧಿಕಾರಕ್ಕೆ ಬಂದ ಸಮಯದಲ್ಲಿ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಇತ್ತು. ಆದರೆ, ಹಲವಾರು ಕಾರಣಗಳಿಂದ ರಿಟ್ ಅರ್ಜಿ ತೀರ್ಮಾನ ಆಗಿಲ್ಲ. ಆ ರಿಟ್ ಅರ್ಜಿ ಬೇಗ ತೀರ್ಮಾನ ಆಗದಿದ್ದದ್ದು ನನಗೆ ಬೇಸರ ತಂದಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಿ. ವಿಶ್ವನಾಥ ಶೆಟ್ಟಿ ಲೋಕಾಯುಕ್ತ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಪತ್ರಿಕೆ = ಹೊಸ ದಿಗಂತ
ದಿನಾಂಕ = 07.07.2022

## ಮಾನ್ವಿ ದುರ್ಘಟನೆ: ಎಸಿಎಸ್ ಸೇರಿ 7 ಜನಕ್ಕೆ ನೋಟಿಸ್

# ಸ್ವಯಂಪ್ರೇರಿತ ಪ್ರಕರಣ ದಾಖಲು

• ದಿಗಂತ ವರದಿ, ಬೆಂಗಳೂರು

ಮೂರು ದಿನಗಳ ಹಿಂದೆ ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನಲ್ಲಿ ಕಲುಷಿತ ನೀರು ಕುಡಿದು ಮಹಿಳೆಯೊಬ್ಬರು ಮೃತಪಟ್ಟು, 40ಕ್ಕೂ ಹೆಚ್ಚು ಜನರು ಅಸ್ವಸ್ಥರಾಗಿದ್ದರು. ಈ ದುರ್ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಕರ್ನಾಟಕ ಲೋಕಾಯುಕ್ತ ಏಳು ಜನರ ವಿರುದ್ಧ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದೆ.

ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ನಿಯಮ 7(1)(ಬಿ) ಮತ್ತು 9(3)(ಎ) ರನ್ವಯ ಏಳು ಮಂದಿ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ನೋಟಿಸು ನೀಡಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಸಿಎಸ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನಿರ್ದೇಶಕರು, ರಾಯಚೂರು ಡಿಸಿ, ಜಿಪಂ ಸಿಇಒ, ಮಾನ್ವಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ, ಗೋರ್ಕಲ್ ಗ್ರಾಮ ಪಂಚಾಯತ್ ಪಿಡಿಒ ಮತ್ತು ಅಧ್ಯಕ್ಷರ ವಿರುದ್ಧ ಪ್ರಕರಣ ದಾಖಲಾಗಿದೆ.

**ಪತ್ರಿಕಾ ವರದಿ ಆಧರಿಸಿ ಪ್ರಕರಣ ದಾಖಲು:** ಮಾನ್ವಿ ತಾಲೂಕಿನ ಮಲ್ಲದಿನ್ನಿ, ಜುಕೂರು ಗ್ರಾಮಗಳಲ್ಲಿ ಕಲುಷಿತ ನೀರು ಕುಡಿದು ಬಾಧಿತರಾದ ಜುಕೂರಿನ ಲಕ್ಷ್ಮೀ ವೀರೇಶ ಎಂಬುವರು ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದರು. ➤2




**ತನಿಖೆಗೆ ಆದೇಶ: ನ್ಯಾ. ಪಾಟೀಲ್**

ಸರ್ಕಾರ ಗ್ರಾಮೀಣ ಪ್ರದೇಶದ ಎಲ್ಲಾ ಮನೆಗಳಿಗೆ ಸುರಕ್ಷಿತ ಕುಡಿಯುವ ನೀರೊದಗಿಸಲು ಶುದ್ಧ ನೀರು, ಜಲ ಜೀವನ್ ಮಿಷನ್ ಇತ್ಯಾದಿ ಯೋಜನೆಗಳನ್ನು ಜಾರಿಗೊಳಿಸಿದೆ. ಆದರೆ, ಮಾನ್ವಿ ತಾಲೂಕಿನ ಮಲ್ಲದಿನ್ನಿ ಮತ್ತು ಜುಕೂರು ಗ್ರಾಮಗಳಲ್ಲಿ ಅಳವಡಿಸಿರುವ ನೀರು ಶುದ್ಧೀಕರಣ ಘಟಕಗಳಿಗೆ ವಿದ್ಯುತ್ ಪೂರೈಕೆಗೆ ಪರ್ಯಾಯ ವ್ಯವಸ್ಥೆ ಮಾಡುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆಂದು ಮಾಧ್ಯಮಗಳು ವರದಿ ಮಾಡಿದ್ದು, ತನಿಖೆಗೆ ಆದೇಶಿಸಲಾಗಿದೆ ಎಂದು ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ್ ಹೇಳಿದ್ದಾರೆ.

ಪತ್ರಿಕೆ: ಪ್ರಜಾವಾಣಿ
ದಿನಾಂಕ: 07.07.2022.

# ಕಲುಷಿತ ನೀರು: ವಿಚಾರಣೆ ಆರಂಭಿಸಿದ ಲೋಕಾಯುಕ್ತ

ಪ್ರಜಾವಾಣಿ ವಾರ್ತೆ

ವರದಿ ಪರಿಣಾಮ

ಬೆಂಗಳೂರು: ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಗೋರ್ಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಲ್ಲಂಪಲ್ಲಿ ಮತ್ತು ಬುಕೋರ ಗ್ರಾಮಗಳಲ್ಲಿ ಕಲುಷಿತ ನೀರು ಕುಡಿದು 8 ಮಂದಿ ಸಾವಿಗೀಡಾಗಿ, ಹಲವರು ಅನಾರೋಗ್ಯ ಪೀಡಿತರಾದ ಘಟನೆ ಕುರಿತು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು, ವಿಚಾರಣೆ ಆರಂಭಿಸಿದ್ದಾರೆ.

'ಕಲುಷಿತ ನೀರು ಕುಡಿದು ಮಕ್ಕಳ ಸಾವು: 40ಕ್ಕೂ ಹೆಚ್ಚು ಜನ ಅಸ್ವಸ್ಥ' ಶೀರ್ಷಿಕೆ ಅಡಿಯಲ್ಲಿ 'ಪ್ರಜಾವಾಣಿ'ಯ ಜುಲೈ 4ರ ಸಂಚಿಕೆಯಲ್ಲಿ ವರದಿ ಪ್ರಕಟವಾಗಿತ್ತು. ವರದಿಯ ತುಣುಕನ್ನು ಲಗತ್ತಿಸಿ ಲೋಕಾಯುಕ್ತರಿಗೆ ಇ-ಮೇಲ್ ಕಳುಹಿಸಿದ್ದ 'ಸ್ವಚ್ಛ ಹೋರಾಟಗಾರರ ವೇದಿಕೆ'ಯ ಎಚ್.ಎಂ. ವೆಂಕಟೇಶ್, ಘಟನೆಗೆ ಕಾರಣರಾದವರ ವಿರುದ್ಧ ಕ್ರಮ ಜರುಗಿಸುವಂತೆ ಮನವಿ ಮಾಡಿದ್ದರು. ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ ಕೊಂಡು ವಿಚಾರಣೆ ಆರಂಭಿಸಿರುವ ಲೋಕಾಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಗ್ರಾಮೀಣ ಕುಡಿಯುವ ನೀರು ಸರಬರಾಜು ವಿಭಾಗದ ನಿರ್ದೇಶಕರು, ರಾಯಚೂರು ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಸಿಇಒ, ಮಾನ್ವಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ, ಗೋರ್ಕಲ್ ಗ್ರಾಮ ಪಂಚಾಯಿತಿ ಪಿಡಿಒ ಹಾಗೂ ಅಧ್ಯಕ್ಷರಿಗೆ ನೋಟಿಸ್ ಜಾರಿಗೊಳಿಸಿದ್ದಾರೆ.

'ತಕ್ಷಣದಿಂದಲೇ ಎರಡೂ ಗ್ರಾಮಗಳ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಗೆ ವ್ಯವಸ್ಥೆ ಮಾಡಬೇಕು. ಈ ಕುರಿತು ಆಗಸ್ಟ್ 25ರಂದು ನಡೆಯುವ ವಿಚಾರಣೆ ವೇಳೆ ವರದಿ ಸಲ್ಲಿಸಬೇಕು' ಎಂದು ಲೋಕಾಯುಕ್ತರು ಪ್ರತಿವಾದಿಗಳಿಗೆ ನಿರ್ದೇಶನ ನೀಡಿದ್ದಾರೆ.

ಎರಡೂ ಗ್ರಾಮಗಳಿಗೆ [illegible] ನೀರು, [illegible] ವರದಿ ಸಲ್ಲಿಸುವಂತೆ ರಾಯಚೂರು ಎಸ್‌ಪಿಗೆ ಆದೇಶಿಸಿದ್ದಾರೆ.




THE NEW INDIAN EXPRESS

Thursday, July, 07, 2022 12:06:43 AM

Search

STOCK MARKET BSE 53823.93 ▲ 589.16(1.11%) NSE 16011.15 ▲ 175.80(1.11%)

Home › Cities › Bengaluru

# Lokayukta orders probe into death of villagers due to consumption of polluted water in Raichur District

*According to a media report, due to disruption in electric supply, the water purification units were not functioning. As a result, Tungabhadra river water was supplied without being treated.*

Published: 07th July 2022 09:38 AM | Last Updated: 07th July 2022 09:38 AM

A+ A A-




Image used for representational purposes (Photo | EPS)

**By Express News Service**

BENGALURU: Initiating suomoto proceedings on the media reports about the death of a woman and 40 persons who fell ill after consuming contaminated water in two villages of Manvi taluk of Raichur district, Karnataka Lokayukta Justice BS Patil ordered the police wing attached to the anti-corruption watchdog to conduct an investigation into the tragic incident.

Initiating proceedings after receiving an e-mail attached a media report from social activist HM Venkatesh, Justice Patil stated in the order that the media report also stated that so far 8 people died on account of consuming contaminated water.

According to a media report, due to disruption in electric supply, the water purification units were not functioning. As a result of the same, Tungabhadra river water was supplied without treating the same which was the main reason for causing health hazards to the people.

Quoting this, Justice Patil observed that the right to access drinking water is a fundamental right to life guaranteed under Article 21 of the constitution. As per Section 58 of the Karnataka Grama Swaraj and Panchayat Raj Act, it is the basic function of Grama Panchayat to maintain and monitor water supply schemes within the Grama Panchayat area and failure on the part of authorities in

maintaining the water purification uni
fundamental right but also amounts to
Section 2(10) of the Karnataka Lokayukta Act, he added.

Impleading Additional Chief Secretary, Rural Development and Panchayat Raj and other concerned authorities as respondents to the proceedings, Justice Patil directed them to provide unhindered pure and safe drinking water to the villagers forthwith and submit a report, including whether any compensation is paid to the legal heirs of the deceased.

Pointing out that still defecation in open areas has been resorted to in the rural areas of Raichur district, even though toilets have been constructed under Swach Bharath Mission and some of them have not been utilising the toilets though they have been constructed, no proper water facility has been provided, Justice Patil sought an explanation from Director of Rural Drinking Water and Sanitation, Deputy Commissioner and Chief Executive Officer of Raichur district.

More From The Section

## ಲೋಕಾಯುಕ್ತರ ಪ್ರವಾಸ

**ವಿಜಯಪುರ:** [illegible]

ವಿಜಯಪುರ ಜಿಲ್ಲೆ RTO ಕಛೇರಿಯು ಭೇಟಿ



# ...ಜನರ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಕ್ರಮ

[illegible]



[illegible]

ವಿಜಯವಾಣಿ
ದಿನಾಂಕ - ೨೦. ಜುಲೈ. ೨೦೨೨

# ಸಬ್‌ರಿಜಿಸ್ಟ್ರಾರ್‌ಗಳಿಗೆ ಲೋಕಾಯುಕ್ತ ಚಾಟಿ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯ ಸರ್ಕಾರಕ್ಕೆ ಹೆಚ್ಚು ಆದಾಯ ತಂದುಕೊಡುವ ಸಬ್‌ರಿಜಿಸ್ಟ್ರಾರ್ ಕಚೇರಿಗಳಲ್ಲಿನ ಅವ್ಯವಸ್ಥೆ ಮತ್ತು ಅವ್ಯವಹಾರಗಳನ್ನು ಲೋಕಾಯುಕ್ತ ಸಂಸ್ಥೆ ಪತ್ತೆ ಹಚ್ಚಿ ಸಂಬಂಧಪಟ್ಟವರಿಗೆ ಚಾಟಿ ಬೀಸಿದೆ.



## ರೆವಿನ್ಯೂ ಸೈಟ್ ನೋಂದಣಿ

ಕೆಲ ಸಬ್‌ರಿಜಿಸ್ಟ್ರಾರ್ ಕಚೇರಿಗಳಲ್ಲಿ ಇ-ಖಾತಾ ಇಲ್ಲದ ರೆವಿನ್ಯೂ ಸೈಟುಗಳನ್ನು ನೋಂದಣಿ ಮಾಡಿರುವುದು ಕಂಡುಬಂದಿದೆ. ಒಂದೇ ಮೊಬೈಲ್ ನಂಬರ್‌ನಡಿ ನೂರಾರು ಇಸಿ ಪಡೆದಿರುವುದು ಮತ್ತು ರಿಜಿಸ್ಟ್ರಾರ್ ಮದುವೆಗೆ ಅರ್ಜಿ ಸಲ್ಲಿಸಿರುವ ಮಾಹಿತಿಯನ್ನು ನೋಟಿಸ್ ಬೋರ್ಡ್‌ನಲ್ಲಿ ಪ್ರದರ್ಶನ ಮಾಡದೆ ನಿರ್ಲಕ್ಷ್ಯ ತೋರಿಸುತ್ತಿದ್ದಾರೆ.

ಉಪ ಲೋಕಾಯುಕ್ತ ಕೆ.ಎನ್. ಫಣೀಂದ್ರ ಮತ್ತು ಪೊಲೀಸ್ ಅಧಿಕಾರಿಗಳ ನೇತೃತ್ವದ ವಿಶೇಷ ತಂಡ ಬೆಂಗಳೂರು ನಗರದ 43 ಸಬ್ ರಿಜಿಸ್ಟ್ರಾರ್ ಕಚೇರಿಗಳಿಗೆ ಭೇಟಿ ಕೊಟ್ಟು ಪರಿಶೀಲನೆ ನಡೆಸಿತ್ತು. ಇಲ್ಲಿನ ಅವ್ಯವಸ್ಥೆ ಮತ್ತು ಅವ್ಯವಹಾರಗಳ ಕುರಿತು ವಿಶೇಷ ತಂಡ ಲೋಕಾಯುಕ್ತರಿಗೆ ವರದಿ ಒಪ್ಪಿಸಿತ್ತು. ಸಮಗ್ರವಾಗಿ ಪರಿಶೀಲನೆ ನಡೆಸಿದ ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ್, ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ, ನೋಂದಣಿ ಮತ್ತು ಮುದ್ರಾಂಕ ಇಲಾಖೆ ಆಯುಕ್ತರು, ಜಿಲ್ಲಾ ನೋಂದಣಾಧಿಕಾರಿಗಳು ಸೇರಿ 7 ಹಿರಿಯ ಅಧಿಕಾರಿಗಳನ್ನು ಉದ್ದೇಶಿಸಿ ಆದೇಶ ಹೊರಡಿಸಿದ್ದಾರೆ. ಕಚೇರಿಗಳಲ್ಲಿನ ಲೋಪ-ದೋಷ ಮತ್ತು ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆ ಗಳನ್ನು ಸರಿಪಡಿಸುವುದರ ಬಗ್ಗೆ ಕೈಗೊಳ್ಳುವ ಮುಂದಿನ ಕ್ರಮಗಳ ಕುರಿತು ನಿಗದಿತ ಸಮಯದಲ್ಲಿ ಉತ್ತರ ನೀಡುವಂತೆ ಸೂಚಿಸಿದ್ದಾರೆ. ಇದನ್ನು 43 ಸಬ್‌ರಿಜಿಸ್ಟ್ರಾರ್ ಕಚೇರಿಗಳಲ್ಲಿ ಕಂಡುಬಂದಿರುವ ಲೋಪ-ದೋಷದ ಮತ್ತು ಕೇಳಿ ಬಂದಿರುವ ಆರೋಪದ ಕುರಿತು ಆಯಾ ಸಬ್ ರಿಜಿಸ್ಟ್ರಾರ್‌ಗಳು ಸ್ಪಷ್ಟನೆ ನೀಡುವಂತೆ ಆದೇಶಿಸಿದ್ದಾರೆ. ಉಪ ನೋಂದಣಾಧಿಕಾರಿ ಸೇರಿ ಎಲ್ಲ ಅಧಿಕಾರಿ, ಸಿಬ್ಬಂದಿ ಹಾಜರಾತಿ ಬುಕ್‌ನಲ್ಲಿ ಸಹಿ ಮಾಡುತ್ತಿಲ್ಲ. ನೋಂದಣಿ ಶುಲ್ಕ ಮತ್ತು ಸ್ಕ್ಯಾನಿಂಗ್ ಶುಲ್ಕ ನೆಪದಲ್ಲಿ ಏಜೆಂಟ್‌ಗಳು ಜನರಿಂದ ಹೆಚ್ಚಿನ ಹಣ ವಸೂಲಿ ಮಾಡುತ್ತಿರುವ ಆರೋಪ ಕೇಳಿಬಂದಿದೆ. ಭ್ರಷ್ಟಾಚಾರ ನಿಗ್ರಹ ದಳ ಮತ್ತು ಲೋಕಾಯುಕ್ತ ಸಂಸ್ಥೆಗಳ ಜಾಗೃತಿ ಮೂಡಿಸುವ ಫಲಕಗಳ ಪ್ರದರ್ಶನ ಮಾಡದೆ ಇರುವುದು ಕಂಡುಬಂದಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಪ್ರಜಾವಾಣಿ

ದಿನಾಂಕ = 20 July 2022

ಲೋಕಾಯುಕ್ತ ನ್ಯಾಯಮೂರ್ತಿಗಳಿಂದ ಸ್ವಯಂ ಪ್ರೇರಿತ ಪ್ರಕರಣ ದಾಖಲು

# ಉಪ ನೋಂದಣಿ ಕಚೇರಿಗಳಲ್ಲಿ ಅಕ್ರಮ: ಆರಂಭವಾದ ವಿಚಾರಣೆ

## 'ಸ್ಥಿರಾಸ್ತಿ ನೋಂದಣಿಗೆ ₹1 ಲಕ್ಷ ಲಂಚ!'

ಉದಯವಾಣಿ
ದಿನಾಂಕ: ೨೦. ಜುಲೈ ೨೦೨೨.

# 43 ಸಬ್ ರಿಜಿಸ್ಟ್ರಾರ್ ಕಚೇರಿ ಮೇಲೆ ಲೋಕಾ ದಾಳಿ

- ನಗರದ ಉಪ ನೋಂದಣಾಧಿಕಾರಿ ಕಚೇರಿಗಳಲ್ಲಿ ಅಕ್ರಮಗಳು ಪತ್ತೆ

[illegible]

ಸಂಯುಕ್ತ ಕರ್ನಾಟಕ

ದಿನಾಂಕ = ೨೦. ಜುಲೈ ೨೦೨೨

# ನೋಂದಣಿ ಕಚೇರಿ ದುರಾಡಳಿತ ತನಿಖೆಗೆ ಲೋಕಾಯುಕ್ತರ ಆದೇಶ

ಬೆಂಗಳೂರು: ನಗರದ ವ್ಯಾಪ್ತಿಗೆ ಒಳಪಡುವ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ದುರಾಡಳಿತ ಪರಾಕಾಷ್ಠೆಗೆ ತಲುಪಿದೆ. ಉಪ ನೋಂದಣಾಧಿಕಾರಿಗಳ ಕಚೇರಿಗಳ ದುರಾಡಳಿತ, ಕರ್ತವ್ಯ ಲೋಪ, ನಿರ್ಲಕ್ಷ್ಯ ಇನ್ನಿತರ ವಿಷಯಗಳ ಆಧಾರದ ಬಗ್ಗೆ ಸ್ವಯಂ ಪ್ರೇರಿತ ಕೇಸು ದಾಖಲಿಸಿ ತನಿಖೆ ನಡೆಸುವಂತೆ ಲೋಕಾಯುಕ್ತ ನ್ಯಾ.ಬಿ. ಎಸ್. ಪಾಟೀಲ್ ಆದೇಶಿಸಿದ್ದಾರೆ.

ಉಪ ನೋಂದಣಾಧಿಕಾರಿಗಳ ಕಚೇರಿಗಳಲ್ಲಿನ ದುರಾಡಳಿತ ಪತ್ತೆ ಮಾಡಿರುವ ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ್ ಅವರು, ಉಪ ಲೋಕಾಯುಕ್ತ ನ್ಯಾ. ಕೆ.ಎನ್ ಫಣೀಂದ್ರ, ಲೋಕಾಯುಕ್ತ ಪೊಲೀಸ್ ಅಧಿಕಾರಿಗಳ ಜತೆ ಚರ್ಚಿಸಿ ಅವರಂತೆ ಸ್ವಯಂ ಪ್ರೇರಿತ ಕೇಸು ದಾಖಲಿಸಿ ತನಿಖೆಗೆ ಸೂಚಿಸಿದ್ದಾರೆ. ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಒಳಗೊಂಡಂತೆ ಇಲಾಖೆಗಳ ಮುಖ್ಯಸ್ಥರು ಹಾಗೂ ಉಪ ನೋಂದಣಾಧಿಕಾರಿಗಳನ್ನು ಆರೋಪಿಯನ್ನಾಗಿ ಮಾಡಲಾಗಿದೆ. ಪ್ರತಿ ಉಪ ನೋಂದಣಾಧಿಕಾರಿ ಕಚೇರಿ ಅವ್ಯವಸ್ಥೆ ಕುರಿತು ವರದಿ ನೀಡಲು ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ್, ಈ ಕುರಿತು ವರದಿ ನೀಡಲು ಸರ್ಕಾರಕ್ಕೆ ಸೆ.೭ರ ಗಡುವು ನೀಡಿದ್ದಾರೆ. ಉಪ ನೋಂದಣಾಧಿಕಾರಿಗಳ ಕಚೇರಿಗಳಲ್ಲಿನ ಭ್ರಷ್ಟಾಚಾರ ಬಗ್ಗೆ ಸಾರ್ವಜನಿಕರು ಸಾಕಷ್ಟು ದೂರುಗಳು ಬಂದಿದ್ದವು. ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸರು, ಲೋಕಾಯುಕ್ತ ನ್ಯಾಯಮೂರ್ತಿಗಳು ಬೆಂಗಳೂರಿನ ವಿವಿಧ ಉಪ ನೋಂದಣಾಧಿಕಾರಿ ಕಚೇರಿಗಳ ಮೇಲೆ ದಾಳಿ ಮಾಡಿದ್ದರು. ಈ ವೇಳೆ ಉಪ ನೋಂದಣಾಧಿಕಾರಿಗಳ ಕಚೇರಿಗಳಲ್ಲಿನ ದುರಾಡಳಿತ ಬಯಲಿಗೆ ಬಂದಿತ್ತು.

ಹೊಸ ದಿಗಂತ
ದಿನಾಂಕ: ೨೦. ಜುಲೈ ೨೦೨೨.

ಸಬ್ ರಿಜಿಸ್ಟ್ರಾರ್ ಕಚೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ: ಲೋಕಾದಿಂದ ಸ್ವಯಂ ಪ್ರಕರಣ ದಾಖಲು

# ದುರಾಡಳಿತದಿಂದ ಮಿತಿಮೀರಿದ ಭ್ರಷ್ಟಾಚಾರ

**ನಗರದ 43 ಕಚೇರಿಗಳಿಗೆ ಭೇಟಿ**

[illegible]

[illegible]

DECCAN HERALD

Date: 20. July 2022.

# Touts call shots at sub registrar offices: Lokayukta

**Inspection by 10 teams finds several irregularities**


BENGALURU, DHNS

A spot inspection of 26 sub registrar offices on the instruction of Lokayukta has exposed the rot in property registration system where touts pull the strings, prompting the anti-corruption authority to take up a suo moto case.

Following complaints of harassment by the public, Lokayukta Justice B S Patil formed 10 teams which inspected 43 sub registrar offices in Bengaluru Urban district. The exercise found several irregularities — from the collection of "more amount than fee" to lack of transparency in documentation.

In an order issued on Tuesday, Justice Patil said "it is impossible to believe that such middlemen/touts could operate from the premises of the offices without the connivance of sub registrars and other staff".

At the offices in Malleswaram, Hesaraghatta, Mahadevapura and Kengeri, the teams found mediators "were collecting more than the total amount of stamp fees, registration and scanning charges".




Middlemen collect more amount for stamp fee, registration etc

Report says it's difficult to differentiate between officials and touts

The order quoted the report on the Bommanahalli office: "It was difficult to differentiate between officials and touts since the touts were acting as officials to execute the job."

A mediator named Satyanarayana was found in the sub registrar's chamber at Basavanagudi. In JP Nagar sub registrar's office, the team found Shivayogaiah. "The sub registrar didn't provide a satisfactory explanation for his presence," the team noted.

The order cited several instances of demand for "extra" money. In Sarjapur, a woman alleged that a middleman demanded Rs 38,000 extra and accepted Rs 30,000 in cash. Bharat, who brought his differently-abled mother to Banashankari office, said officials deliberately delayed the process by favouring an agent who brought eight files at once.

Despite clear rules, properties were registered without E-Khata in respect of revenue sites in Peenya, Laggere and Nagarbhavi. The Lokayukta issued notice to Revenue Department principal secretary, Inspector General of Registration and Commissioner of Stamps, five district registrars, additional district registrar of BDA and 40 sub registrars.

The case is likely to be taken up for hearing on Sept 6.

THE NEW INDIAN EXPRESS

Date = 20. July 2022.

# Massive irregularities in 43 sub-registrars' offices

EXPRESS NEWS SERVICE @ Bengaluru

SURPRISE visits by 10 teams of Karnataka Lokayukta sleuths for four days have unearthed shocking irregularities and mal-administration in 43 sub-registrars offices in Bengaluru. Most of the irregularities are common across all the places raided.

Touts collect commission ranging from Rs 10,000 to 20,000 for each property in the city, Rs 40,000 to 1 lakh in panchayat limits, which is more than the total amount of the stamp fee, registration and scanning charges.

It is difficult to differentiate between officials and touts since the middlemen act as officials to execute the job. Sub-registrars and staffers neither wear identity cards nor mark attendance. Names and vigilance awareness boards are not displayed, closed circuit TV (CCTV) cameras are not installed and the server (Kavery Property Registration Software) is down most of the time, causing inconvenience in registration of documents.

CONTINUED ON: P4

# 'Touts operating freely'

CONTINUED FROM PAGE 1

THERE is more. Cash declaration registers are not maintained, PAN numbers are not mentioned in documents to evade payment of income tax, registration of revenue sites is done illegally and higher officials neither supervise nor take any action.

With an aim to extend the surprise raids across the state in a phased manner and take remedial measures to curb corruption, judicial officers were involved for the first time in the 10 teams comprising police officials who visited the sub-registrars offices for four days. After the visits, the teams have submitted reports to Karnataka Lokayukta, Justice B S Patil.

"It is unfortunate that these irregularities are causing harassment to the public and no action seems to have been taken and irregularities prima-facie make out a case of mal-administration and derelictions," observed Justice Patil while initiating suo motu proceedings and calling for explanation from the government.

"The reports submitted indicate complaints were received on the spot from the public, who alleged collection of so-called administration charges for registration of documents. Had there been proper and continuous supervision by higher officers, these irregularities could have been prevented and a citizen-friendly system in these offices could have been put in place," the Lokayukta observed.

THE TIMES OF INDIA

DATE= 20. July 2022

# Lokayukta exposes graft in 43 sub-registrar offices

TIMES NEWS NETWORK

**Bengaluru:** The Lokayukta has issued notices to all 43 sub-registrars in Bengaluru Urban district after discovering malpractices and irregularities in the functioning of these offices, which are visited by the common man for works such as property and marriage registrations. The Lokayukta, Justice BS Patil, has posted the matter for hearing on September 6.

The Lokayukta had constituted 10 teams to visit the sub-registrar offices and report on irregularities and illegalities, along with the common corrupt practices in vogue. Based on inputs received from different teams, the Lokayukta report stated that in almost all sub-registrar offices, no CCTV cameras were found to be installed and touts and middlemen were seen collecting money from the public visiting these offices for property registrations.

**SOME BRAZEN LAPSES**

- Due to late arrival, sub-registars didn't sign in the register
- Touts collected money for all government works
- Middlemen collected more money than actual government-approved amounts
- Administration charges were being collected illegally
- Server problems caused greater hardship to the public

Source: Lokayukta report

"In most of the offices, cash declaration registers for both regular and outsourced employees weren't maintained. And the ones who had maintained these registers had the same entry for almost all days. Offices were seen collecting administrative charges illegally," the report added. In a violation, the sub-registrar at Gandhinagar had appointed two private individuals at his office.

**Evasion of income tax**

The teams discovered that in all property registration summaries, the PAN numbers of property owners weren't mentioned deliberately to avoid payment of income tax. Similarly, most of the offices hadn't maintained a separate registry for issuing encumbrance certificates. Further, the middlemen collected more money than what's prescribed by the government towards stamp fees, registration and scanning charges.

The teams were shocked to see private persons operating from the cabin of the sub-registrar in JP Nagar, Basavanagudi, Rajajinagar and Dasanapura offices. At Begur and Bommanahalli offices, the teams found it difficult to differentiate between officials and touts, with the latter acting as officials to execute the jobs. At Rajajinagar office, a few outsiders were even provided with separate cabins and computers.

*Full report: toi.in*

THE TIMES OF INDIA

DATE = 20. July 2022

# Lokayukta exposes graft in 43 sub-registrar offices

Times News Network

**Bengaluru:** The Lokayukta has issued notices to all 43 sub-registrars in Bengaluru Urban district after discovering malpractices and irregularities in the functioning of these offices, which are visited by the common man for works such as property and marriage registrations. The Lokayukta, Justice BS Patil, has posted the matter for hearing on September 6.

The Lokayukta had constituted 10 teams to visit the sub-registrar offices and report on irregularities and illegalities, along with the common corrupt practices in vogue. Based on inputs received from different teams, the Lokayukta report stated that in almost all sub-registrar offices, no CCTV cameras were found to be installed and touts and middlemen were seen collecting money from the public visiting these offices for property registrations.

**SOME BRAZEN LAPSES**

- Due to late arrival, sub-registars didn't sign in the register
- Touts collected money for all government works
- Middlemen collected more money than actual government-approved amounts
- Administration charges were being collected illegally
- Server problems caused greater hardship to the public

Source: Lokayukta report

"In most of the offices, cash declaration registers for both regular and outsourced employees weren't maintained. And the ones who had maintained these registers had the same entry for almost all days. Offices were seen collecting administrative charges illegally," the report added. In a violation, the sub-registrar at Gandhinagar had appointed two private individuals at his office.

**Evasion of income tax**

The teams discovered that in all property registration summaries, the PAN numbers of property owners weren't mentioned deliberately to avoid payment of income tax. Similarly, most of the offices hadn't maintained a separate registry for issuing encumbrance certificates. Further, the middlemen collected more money than what's prescribed by the government towards stamp fees, registration and scanning charges.

The teams were shocked to see private persons operating from the cabin of the sub-registrar in JP Nagar, Basavanagudi, Rajajinagar and Dasanapura offices. At Begur and Bommanahalli offices, the teams found it difficult to differentiate between officials and touts, with the latter acting as officials to execute the jobs. At Rajajinagar office, a few outsiders were even provided with separate cabins and computers.

*Full report: toi.in*

THE HINDU
DATE = 20 July 2022.

# 'Identifying officials and touts at sub-registrar offices no easy task'

## Lokayukta teams find touts collecting registration charges over specified amount

SPECIAL CORRESPONDENT
BENGALURU

Sub-registrar offices in the State, which have the dubious distinction of harassing the public, were left exposed. Following complaints from the public, 10 teams of Lokayukta officials carried out inspections of sub-registrar offices in Bengaluru and other parts.

During the inspection, they found touts and middlemen inside the offices and also found them allegedly collecting stamp fees, registration charges, and scanning charges that were more than specified.

**In office cabin**

The touts allegedly collected charges of ₹10,000 to ₹20,000 for city properties and ₹40,000 to ₹1 lakh for properties that fall in the limits of panchayats. At several sub-registrar offices, Lokayukta officials found touts in the office cabin of sub-registrars.

"It was difficult to differentiate between officials and touts since touts were acting as officials to execute the job," said Lokayukta officials in their inspection report. The officials also found dereliction of duty on the part of sub-registrars and their staff members that include not wearing identity cards during working hours, name boards and designation of officials were not displayed, non-functional CCTV cameras, and cash register not being maintained for outsourced employees.

In June, following complaints from the public, Upa Lokayukta K.N. Phaneendra held a meeting and a decision was taken to form teams to inspect the sub-registrars offices. Ten teams of Lokayukta were formed and inspections were carried out at 43 offices in Bengaluru and other places.

**Suo motu action**

After finding irregularities and illegalities during the inspection, Lokayukta B.S. Patil has initiated *suo motu* proceedings.

In an order issued on Tuesday, the Lokayukta said: "It is unfortunate that the middlemen are allowed to operate within the premises of sub-registrar offices. They are collecting more money than the prescribed fee and stamp duty from the public to get the documents registered and also to obtain various certified copies from the office of the sub-registrar. It is impossible to believe that such middlemen/touts could operate from the premises of the offices without connivance of the sub-registrars and other staff. Therefore, stringent action is required to be initiated against such officers who have connived with touts to harass the public for extraneous considerations."

The order also pointed out lack of supervision on the part of higher-ups in the department in functioning of sub-registrar offices.

The Lokayukta has instructed the Principal Secretary of Revenue Department, Inspector General of Registration, and Commissioner of Stamps, and other senior officials to file separate reports addressing the irregularities and illegalities. Sub-registrars and staff who were allegedly involved in illegalities and dereliction of duty have been asked to respond.

DECCAN HERALD

Dated - 6th August, 2022

# Lokayukta case against Kolar authorities over basic amenities

BENGALURU, DHNS: The Lokayukta has initiated a suo motu case against the Urban Development Department (UDD) and the Kolar Urban Development Authority (KUDA) for failing to provide basic amenities to a layout formed in 1994.

Following a complaint by the Sri Devaraj Urs Layout Residents' Welfare Association, the Lokayukta had ordered an inquiry by the police on June 6 which raised several gaps in the administration.

The KUDA developed the layout on 121 acres and three guntas in 1994. As many as 1,426 sites have been allotted and many are still being allotted by the authorities. For residents of 148 houses built in the layout, officials have failed to provide the basic amenities despite having funds to the tune of Rs 77.74 crore.

The Lokayukta flagged the findings by the police, including the lack of a full-time commissioner, vacant posts of assistant executive engineer, accountant and other key personnel, which has hit the development works.

With regard to the report's recommendations, the Lokayukta has sought objections from the UDD and the KUDA.

INDIAN EXPRESS
dated - 1st August, 2022.

# Staff crunch persists in Victoria Hospital

NAMRATA SINDWANI
@ Bengaluru

DESPITE the Upa Lokayukta, during his surprise visit to Victoria Hospital in early April, revealing that the government-run facility faced staff crunch, irregularities in pharmacies and other discrepancies, many of these problems still persist. Hospital authorities said that no new recruitments have been made, though they have sent a report to the health department, requesting fresh appointments.

Medical Superintendent Dr Ramesh Krishna K had submitted a report to the Lokayukta after the surprise inspection, agreeing that more manpower is needed with rise in patients inflow. The hospital has a daily footfall of around 1,000 patients and pharmacists said that they were being overburdened.

Two pharmacists had been posted on OPD duty because of shortage of staff and a centralised medicine counter was also opened. Officers have been asked to continue their work for now. Under the Smart City project, five electric buggies were allotted to the hospital, but there is a shortage of two drivers, Dr Krishna told the Lokayukta.

Another administrative official said the hospital has 322 nursing staff, who have to work in nine buildings and 22 departments. The hospital is adding more beds, ICUs, wards and OPDs, but is not recruiting new staff, which is affecting quality of care. Budget constraint could be one of the reasons for freezing hiring, he added.

The present staff strength was sanctioned 25 years ago and has not been revised since, officials said. Dr Ravi K, Director-cum-Dean, BMCRI, said the health department was informed about the staff shortage in April, but no action was taken, he added.

ಪತ್ರಿಕೆ : ವಿಜಯವಾಣಿ
ದಿನಾಂಕ : 05. ಆಗಸ್ಟ್ 2022

# ಲೋಕದ ಡೊಂಕಿನತ್ತ ಗಮನ

## ಸಮುದಾಯ, ಸಮಷ್ಟಿ ಸಮಸ್ಯೆಗಳ ಕಡೆಗೆ ಲೋಕಾಯುಕ್ತ ಚಿತ್ತ

■ ವಿಲಾಸ ಮೇಲಗಿರಿ ಬೆಂಗಳೂರು

ದಶಕದ ಹಿಂದೆ ಭ್ರಷ್ಟರ ಪಾಲಿಗೆ ದುಃಸ್ವಪ್ನವಾಗಿದ್ದ ಲೋಕಾಯುಕ್ತ ಸಂಸ್ಥೆಯ ಅಧಿಕಾರ ಮೊಟಕುಗೊಳಿಸಲಾಗಿದೆ. ಲೋಕಾಯುಕ್ತ ಬಲಪಡಿಸಬೇಕೆಂಬ ಕೂಗು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ. ಇನ್ನೊಂದೆಡೆ, ಲೋಕಾಯುಕ್ತರ ಅಧಿಕಾರಕ್ಕೆ ಕತ್ತರಿ ಹಾಕಿರುವ ಪ್ರಕರಣದ ವಿಚಾರಣೆ ಹೈಕೋರ್ಟ್‌ನಲ್ಲಿ ಪೂರ್ಣಗೊಂಡಿದ್ದು, ತೀರ್ಪು ಕಾಯ್ದಿರಿಸಲಾಗಿದೆ. ಈ ನಡುವೆ ಒಬ್ಬ ವ್ಯಕ್ತಿ, ಒಂದು ಪ್ರಕರಣ ವಿಚಾರಣೆ ನಡೆಸುತ್ತಿದ್ದ ಲೋಕಾಯುಕ್ತ ಈಗ ತನ್ನ ಕಾರ್ಯಕ್ಷೇತ್ರವನ್ನು ವಿಸ್ತರಿಸಿಕೊಂಡಿದೆ. ಕಾರ್ಯವೈಖರಿಯನ್ನು ಬದಲಿಸಿಕೊಂಡಿದೆ!

ವ್ಯಕ್ತಿ, ಪ್ರಕರಣ ಕೇಂದ್ರಿತ ತನಿಖೆಯಿಂದ ಸಮುದಾಯ ಆಧಾರಿತ ಕಾರ್ಯಕ್ರಮಗಳ ಮೇಲೆ ಕಣ್ಣು ನೆಟ್ಟಿದೆ. ಸಮಾಜದ ಅಂಕು-ಡೊಂಕು ತಿದ್ದಲು ಸ್ಪಷ್ಟ ರೂಪು-ರೇಷೆ ಸಿದ್ಧಪಡಿಸಿ ಜಾರಿಗೊಳಿಸಿದೆ. ಸರ್ಕಾರದ ಪ್ರಮುಖ ಯೋಜನೆಗಳ ಜಾರಿ ಮೇಲೆ ನಿಗಾ ಇರಿಸಿದೆ, ಅಧಿಕಾರಿಗಳು ಅತ್ತ-ಇತ್ತ ಅಲ್ಲಾಡದಂತೆ ಚಾಟಿ ಬೀಸುವ ಕೆಲಸಕ್ಕೆ ಕೈಹಾಕಿದೆ.

> ಲೋಕಾಯುಕ್ತರು ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ಕೆಲವು ಸಲಹೆ-ಸೂಚನೆ ನೀಡಿದ್ದಾರೆ. ಅದರ ಅನ್ವಯ ನಾವು ಕೆಲವು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದ್ದೇವೆ. ಮನೆ ಶೌಚಾಲಯ ಮತ್ತು ಸಮುದಾಯ ಶೌಚಾಲಯಕ್ಕೆ ಒತ್ತುಕೊಟ್ಟಿದ್ದೇವೆ. ಶೌಚಾಲಯಕ್ಕೆ ಸರ್ಕಾರ ನೀಡುವ ಸಹಾಯಧನ ದುರುಪಯೋಗವಾಗದಂತೆ ಮಾನಿಟರ್ ಮಾಡುತ್ತಿದ್ದೇವೆ.
> | [illegible] ನಿರ್ದೇಶಕರು, ಸ್ವಚ್ಛ ಭಾರತ ಮಿಷನ್

**ಮಗ್ಗಲು ಬದಲು:** ಒಬ್ಬ ವ್ಯಕ್ತಿ, ಒಂದು ಪ್ರಕರಣಕ್ಕೆ ನ್ಯಾಯ ಕೊಡಿಸುವುದು ಎಷ್ಟು ಮುಖ್ಯವೋ, ಸಮಾಜದ ಮತ್ತು ಸಮುದಾಯ ಆಧಾರಿತ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆಯದಂತೆ ನೋಡುವುದೂ ಅಷ್ಟೇ ಪ್ರಾಮುಖ್ಯವಾಗಿದೆ. [illegible] ಮಾಡುವಲ್ಲಿ ಮುಖ್ಯವಾದ ಹೆಜ್ಜೆ ಇಟ್ಟಿದೆ.

ಮೊದಲೆಲ್ಲ ಲೋಕಾಯುಕ್ತರು ಸರ್ಕಾರಿ ಕಚೇರಿಗಳ ಮೇಲೆ ಹಠಾತ್ ದಾಳಿ ನಡೆಸಿ ಅಕ್ರಮ ಪತ್ತೆ ಮಾಡುತ್ತಿದ್ದರು. ಲೋಪ ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನು ತರಾಟೆ ತೆಗೆದುಕೊಳ್ಳುತ್ತಿದ್ದರು. ಜತೆಗೆ ಅವರ ವಿರುದ್ಧ ಕಾನೂನು ಕ್ರಮ ಜರುಗಿಸುತ್ತಿದ್ದರು. ಆದರೀಗ, ಲೋಕಾಯುಕ್ತರೇ ಖುದ್ದು ಇಲಾಖೆ ಮುಖ್ಯಸ್ಥರನ್ನು ಕಚೇರಿಗೆ ಕರೆಸಿ ಸರ್ಕಾರದ ಯೋಜನೆಗಳ ರೂಪುರೇಷೆ, ಯೋಜನಾ ವೆಚ್ಚ, ಅನುಷ್ಠಾನದ ಹಂತಗಳು, ಕಾಲಮಿತಿ, ಗುತ್ತಿಗೆ ಅವಧಿ, ಕಾಮಗಾರಿ ನಿರ್ವಹಿಸುವ ಸಂಸ್ಥೆಯ ವಿವರ ಮತ್ತಿತರ ಮಾಹಿತಿಗಳನ್ನು ಪಡೆಯುತ್ತಿದ್ದಾರೆ.

**ಕರ್ತವ್ಯ ನಿರ್ವಹಣೆಯಲ್ಲಿ ಬದಲಾವಣೆ:** ಮೊದಲು ದೂರು ಬಂದ ಕೆಲವೇ ಕೆಲವು ಪ್ರಕರಣಗಳ ಮೇಲೆ ಲೋಕಾಯುಕ್ತರು ದೃಷ್ಟಿ ಹರಿಸುತ್ತಿದ್ದರು. ನಿರ್ದಿಷ್ಟ ಪ್ರಕರಣ/ಕಾರ್ಯಕ್ರಮಕ್ಕೆ ಸೀಮಿತವಾಗಿ ಕಾರ್ಯನಿರ್ವಹಿಸುತ್ತಿದ್ದರು. ಇನ್ನು ಕೆಲ ಸಂದರ್ಭಗಳಲ್ಲಿ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಮಾಡುತ್ತಿದ್ದರು. ಕಾಲ ಕಾಲಕ್ಕೆ ಬಿಸಿ ಮುಟ್ಟಿಸುವ ಆದೇಶ, ಸುತ್ತೋಲೆ ಹೊರಡಿಸಿ, ಲೋಕಾಯುಕ್ತ ಪೊಲೀಸರಿಗೆ ನಿರ್ದೇಶನಗಳನ್ನು ನೀಡುತ್ತಿದ್ದರು.

ಈಗ ಲೋಕಾಯುಕ್ತ ಪೊಲೀಸರು ಮಾಡಬೇಕಾದ ಕರ್ತವ್ಯ, ಕಾರ್ಯವಿಧಾನಗಳನ್ನು ನಿರ್ದಿಷ್ಟವಾಗಿ ಒಂದು ಕೈಪಿಡಿ ರೂಪದಲ್ಲಿ ನೀಡಲಾಗಿದೆ. ಅಲ್ಲದೆ, ಮೊದಲಿಗಿಂತ ಲೋಕಾಯುಕ್ತ ಪೊಲೀಸರ ಜವಾಬ್ದಾರಿಗಳನ್ನು ಹೆಚ್ಚಿಸಲಾಗಿದೆ.

### ದೂರು ಇಲ್ಲದಿದ್ದರೂ ಕಚೇರಿ ಭೇಟಿ

ತಾಲೂಕು ಕಚೇರಿ, ಕಂದಾಯ ನಿರೀಕ್ಷಕರ ಕಚೇರಿ, ಗ್ರಾಮ ಲೆಕ್ಕಿಗರ ಕಚೇರಿ, ಭೂ ದಾಖಲೆಗಳ ಸಹಾಯಕ ನಿರ್ದೇಶಕರು, [illegible] ಕಚೇರಿಗಳಲ್ಲಿ ಸಾರ್ವಜನಿಕರಿಗೆ ಒದಗಿಸಬೇಕಾದ ಸೇವೆಗಳಲ್ಲಿ ಅನಗತ್ಯ ವಿಳಂಬ, ಬೇಜವಾಬ್ದಾರಿತನ ಹಾಗೂ ದುರಾಡಳಿತದ ಆರೋಪಗಳಿದ್ದಾಗ ತಿದ್ದಿಕೊಳ್ಳಲು 2-3 ದಿನ ಕಾಲಾವಕಾಶ ನೀಡಲಾಗುತ್ತಿದೆ. ನಂತರವೂ ಪರಿಹಾರ ಕಾಣದೇ ಹೋದರೆ ಸ್ಥಳಕ್ಕೆ ಭೇಟಿ ನೀಡಿ ತನಿಖೆ ನಡೆಸಿ ವರದಿ ಸಲ್ಲಿಸಲು ಸೂಚಿಸಲಾಗಿದೆ.






> ಅಧಿಕಾರಿಗಳ ಸಣ್ಣಪುಟ್ಟ ತಪ್ಪು ಹುಡುಕಿ ಇನ್ಸಿಡೆಂಟ್ ಕೇಸ್ ಮಾಡುವುದು, ಛೀಮಾರಿ ಹಾಕಿ ದೂಡುವುದು ನಮ್ಮ ಉದ್ದೇಶವಲ್ಲ. ಸಮುದಾಯ ಆಧಾರಿತ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನಕ್ಕೆ ನಾವು ಒತ್ತುಕೊಟ್ಟಿದ್ದೇವೆ. ಭ್ರಷ್ಟಾಚಾರ ರಹಿತವಾಗಿ ಕಾಮಗಾರಿಗಳು ಅನುಷ್ಠಾನವಾಗಬೇಕು. ಈ ನಿಟ್ಟಿನಲ್ಲಿ ಅಧೀನ ಅಧಿಕಾರಿಗಳಿಗೆ 26 ಕಾರ್ಯಸೂಚಿಗಳನ್ನು ಕೊಟ್ಟು ಮೇಲ್ವಿಚಾರಣೆಯನ್ನು ಚುರುಕು ಮಾಡಿದ್ದೇವೆ. ಇದಕ್ಕೆ ಉತ್ತಮ ಸ್ಪಂದನೆಯೂ ಸಿಕ್ಕಿದೆ. ಜನರಿಗೆ ಅನುಕೂಲವೂ ಆಗುತ್ತಿದೆ.
> | ಬಿ.ಎಸ್. ಪಾಟೀಲ್ ಲೋಕಾಯುಕ್ತರು

[illegible] ಜವಾಬ್ದಾರಿಗಳನ್ನು ಹೆಚ್ಚಿಸಲಾಗಿದೆ.

**ದುರಾಡಳಿತ ತಪ್ಪಿಸಲು ದೂರ ದೃಷ್ಟಿ:** ಸಾರ್ವಜನಿಕ ಕುಂದುಕೊರತೆ ನಿವಾರಿಸಲು ಮತ್ತು ದುರಾಡಳಿತ ತಪ್ಪಿಸಲು ಅಗತ್ಯ ಮಾಹಿತಿಯನ್ನು ಪಡೆಯಲು ಸುತ್ತೋಲೆ/ಮಾರ್ಗಸೂಚಿ ಹೊರಡಿಸಲಾಗಿದೆ.

**ಉದ್ಯೋಗ ಖಾತ್ರಿ ಖಾತ್ರಿಪಡಿಸುವ ಕೆಲಸ:** ಲೋಕಾಯುಕ್ತ ಸಂಸ್ಥೆ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅಕ್ರಮ ನಡೆದಿರುವ ಹಿನ್ನೆಲೆ 2007-2012 ರವರೆಗಿನ ಕಾಮಗಾರಿಗಳ ತನಿಖೆ ನಡೆಸುತ್ತಿದೆ. ಜತೆಗೆ ಈ ಯೋಜನೆಯಲ್ಲಿನ ಲೋಪಗಳು ಕಂಡುಬಂದರೆ ಆಗ್ಗಾಗ್ಗೆ ತನಿಖೆ ನಡೆಸಲು ಪೊಲೀಸರಿಗೆ ನಿರ್ದೇಶನ ನೀಡಲಾಗಿದೆ.

**ತಿಂಗಳಿಗೊಮ್ಮೆ ದೂರು ಸ್ವೀಕಾರ:** ಪ್ರತಿ ಜಿಲ್ಲಾ ಲೋಕಾಯುಕ್ತ ಕಚೇರಿಯಿಂದ ಇನ್‌ಸ್ಪೆಕ್ಟರ್ ಅಥವಾ ಅವರಿಗಿಂತ ಮೇಲಿನ ಅಧಿಕಾರಿ ತಿಂಗಳಿಗೊಮ್ಮೆ ತಾಲೂಕುಗಳಿಗೆ ಭೇಟಿ ನೀಡಿ ಜನರಿಂದ ದೂರು ಸ್ವೀಕರಿಸಲಿದ್ದಾರೆ. ತಾಲೂಕುಗಳಿಂದ ಜಿಲ್ಲಾ ಕೇಂದ್ರ ಕಚೇರಿಗೆ ಬಂದು ದೂರು ಸಲ್ಲಿಸಲು ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವ ಹಿನ್ನೆಲೆಯಲ್ಲಿ ಈ ಉಪಕ್ರಮ ಕೈಗೊಳ್ಳಲಾಗಿದೆ.

**ಕುಂದು ಕೊರತೆ ಆಲಿಸಿ ಕ್ರಮ:** ಕೃಷಿ, ತೋಟಗಾರಿಕೆ ಇಲಾಖೆ, ರೈತ ಸಂಪರ್ಕ ಕೇಂದ್ರ, ಕೃಷಿ ಮಾರುಕಟ್ಟೆ ಸಮಿತಿಗಳ ಕಾರ್ಯನಿರ್ವಹಣೆ ಮೇಲೂ ನಿಗಾ ಇರಿಸಲಿದ್ದಾರೆ. ಗುಣಮಟ್ಟದ ಬೀಜ, ರಸಗೊಬ್ಬರ ಸಕಾಲಕ್ಕೆ ವಿತರಣೆ ಆಗಿದ್ದನ್ನು ಖಚಿತಪಡಿಸಿ ವರದಿ ಸಲ್ಲಿಸಲಿದ್ದಾರೆ. ಆರೋಗ್ಯ ಕೇಂದ್ರ, ಅಂಗನವಾಡಿ ಕೇಂದ್ರ, ಹಾಸ್ಟೆಲ್, ಶಾಲೆಗಳಿಗೂ ಭೇಟಿ ನೀಡಿ ಕುಂದುಕೊರತೆ ಆಲಿಸುವ ಅಧಿಕಾರ ಹೊಂದಿದ್ದಾರೆ.

**ಶೌಚಾಲಯ ಸದ್ಬಳಕೆಗೆ ಸೂಚನೆ:** ಸರ್ಕಾರ ನಿರ್ಮಿಸಿರುವ ಸಾರ್ವಜನಿಕ ಶೌಚಾಲಯ ಮತ್ತು ಸರ್ಕಾರದ ಸಹಾಯಧನದಿಂದ ಮನೆಗಳಲ್ಲಿ ನಿರ್ಮಿಸಿರುವ ಶೌಚಾಲಯ ಬಳಕೆಯಾಗುವಂತೆ ನೋಡಿಕೊಳ್ಳಲಿದ್ದಾರೆ.

**ಕಸದ ಮೇಲೂ ಕಣ್ಣು:** ಕಸದ ಅವೈಜ್ಞಾನಿಕ ವಿಲೇವಾರಿ ಮೇಲೂ ಲೋಕಾಯುಕ್ತ ಪೊಲೀಸರ ಕಣ್ಣು ಬಿದ್ದಿದೆ. ಯಾವ ಯಾವ ಸ್ಥಳದಲ್ಲಿ ಕಸವನ್ನು ಅವೈಜ್ಞಾನಿಕವಾಗಿ ಚೆಲ್ಲಲಾಗಿದೆ ಎಂಬುದನ್ನು ಪತ್ತೆ ಹಚ್ಚಿ ಅದನ್ನು ಸ್ಥಳೀಯ ಆಡಳಿತದ ಗಮನಕ್ಕೆ ತರಲಿದ್ದಾರೆ. ಕೆರೆ ಮತ್ತು ಸರ್ಕಾರಿ ಜಮೀನು ಒತ್ತುವರಿ, ಅನಧಿಕೃತ ನಿರ್ಮಾಣ ಮತ್ತು ಅಕ್ರಮ ಗಣಿಗಾರಿಕೆಯನ್ನು ಲೋಕಾಯುಕ್ತ ಪೊಲೀಸರು ಪತ್ತೆ ಮಾಡಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಲಿದ್ದಾರೆ.

"PRAJAVANI" daily news paper

dtd: 8.8.2022.

# ಮೂಲಸೌಕರ್ಯ ಒದಗಿಸದ ಇಲಾಖೆ: ವಿಚಾರಣೆ ಆರಂಭಿಸಿದ ಲೋಕಾಯುಕ್ತ

[illegible]

PAPER = DECCAN HERALD

DATE = 25. 08. 2022.

The workshops will be held between 2.30 pm and 4.40 pm and live performances from 5.30 pm to 7 pm on all the days. Aimed at encouraging youth and exposing them to Indian art and culture, the workshops and concerts are free and open to all.

## BWSSB water adalat today

BENGALURU, DHNS: The Bangalore Water Supply and Sewerage Board (BWSSB) will hold a water adalat in various parts of the city between 9.30 am and 11 am on Thursday.

Grievances related to water billing, delay in converting domestic connections to non-domestic ones, and sanctioning water supply and sanitary connections, among other issues, will be settled at the event.

Consumers from the BWSSB's (South-2)-2, (South-2)-1, (Southwest-6), (Southwest-5), (Southeast-1)-3, (East-2)-3, (Northwest-2), (North-1)-2, and (North-1)-1 subdivisions can take part.

Call 1916 for details or to report any problems related to water supply. Complaints can be registered on WhatsApp number 8762228888.

## IN THE CITY

**GENERAL**

**Hamsajyothi Trust:** Release of Na Prahlad Rao's book Hejje Guruthu by H S Venkatesha Murthy; Nayana auditorium, 10.30 am

**Forest Department:** Photo exhibition; Cricketer Roger Binny, Environmentalist Suresh Heblikar to be present; Chitrakala Parishath, Kumara Krupa Road; 11.30 am

**Sharadha Pratishthana:** Release of Beluru Raghunandan's drama – Akkai Jeevana Horata, based on the life of Akkai Padmashali; Kalagrama, Mallathalli; 5 pm

**Pragna Prava:** Release of J Nandakumar's book 'Lok, Beyond Folk'; Indian Institute of World Culture, BP Wadia Road; 5 pm

**Kannada Yuvajana Sangha:** Lectures on Bengaluru's history by ... Srinivas; Sangha...

# Lokayukta inspects BBMP, govt hospitals

### Plaints by citizens lead to review of doctors' availability and cleanliness

SNEHA RAMESH
BENGALURU, DHNS



Following many complaints against the lack of proper facilities across government and BBMP-run hospitals, 10 teams constituted by the Lokayukta paid a surprise visit to 11 government and BBMP hospitals in the city on Wednesday.

According to Lokayukta sources, the officials were asked to review a number of factors that affect the quality of healthcare provided at these facilities.

From verifying if an adequate number of doctors were available at the hospitals to reviewing cleanliness and waste disposal measures put in place, the officials have submitted a detailed report, sources said.

The officials also checked the documents in the hospital administration.

The Lokayukta officials interrogated some of the doctors at the hospitals and gathered details about the functioning, including details about machineries, staff, beds and facilities given to the patients.

Speaking to *DH*, Lokayukta Justice B S Patil said they are on a mission to ensure quality healthcare.

"On the one hand, we have just come out of the pandemic, on the other there is a rise in the number of dengue cases across the State and hence there is an immediate need to ensure sufficient health services are available to the public. Though the government spends crores of rupees on these facilities, there are complaints, pushing us to inspect the state of the hospitals," Justice Patil said.

**Facilities verified by inspection teams**

- Proper treatment to patients
- Cleanliness and waste disposal
- Availability of duty doctors and paramedical staff
- Stock registry for medicines and surgical equipment
- Steps taken to prevent pilferage or sale of medicines outside
- Laboratory testing facilities
- Availability of ambulance facilities
- Supply of oxygen
- Implementation of Ayushman Bharath Yojana and Yashaswini Healthcare Scheme

Asked what the general observations were, Patil said many of the hospitals did not treat patients with respect and in many others doctors were not present.

"One of our teams noted that a patient was made to lie down in a corner, without providing basic facilities at one of the hospitals that we inspected. At Bowring Hospital, our officers observed a heap of garbage which had piled up for nearly three days," Patil added.

That apart, officials also observed that many doctors were not available at the facilities during working hours.

"There are instances where the doctors in these hospitals come sign and leave. We will look into all these issues and make them accountable," said Patil.

The officials plan to visit more hospitals on Thursday and prepare a comprehensive report on the state of affairs.

"We will ensure cases are registered and action taken against erring officials and measures are taken to improve the quality of the facilities provided," Patil said.

BBMP Special Commissioner (Health) Dr Trilok Chandra said the civic body is yet to get an official communication from the Lokayukta about taking action.

"We will take action based on their recommendation. So far, we have not got any official communication," Dr Chandra said.

After the High Court's order to merge the Anti-Corruption Bureau (ACB) with the Karnataka Lokayukta, this is the first visit of the Lokayukta to the hospitals.

**Hospitals inspected**

Victoria, Bowring and Lady Curzon, Palace Guttahalli Maternity Home, Magadi Road Maternity Home, KC General, Minto Eye, Babu Jagjivan Ram Memorial, Vani Vilas, Halasuru Referral Hospital and H Siddaiah Road Referral Hospital.

ಪತ್ರಿಕೆ : ಉದಯವಾಣಿ
ದಿನಾಂಕ : ೨೫.೦೮.೨೦೨೨

# ಆಸ್ಪತ್ರೆಗಳಿಗೆ ಲೋಕಾ ಪೊಲೀಸರಿಂದ ಶಾಕ್

ಬೆಂಗಳೂರು: ಸರ್ಕಾರಿ ಆಸ್ಪತ್ರೆಗಳ ನಿರ್ವಹಣೆಗಳ ಕೊರತೆ ಬಗ್ಗೆ ಬಂದ ದೂರುಗಳ ಆಧಾರದ ಮೇಲೆ ಲೋಕಾಯುಕ್ತ ಪೊಲೀಸರು ನಗರದ 10 ಆಸ್ಪತ್ರೆಗಳಿಗೆ ಬುಧವಾರ ದಿಢೀರ್ ಭೇಟಿ ಕೊಟ್ಟು ಪರಿಶೀಲಿಸಿದರು.

[illegible]

ಪತ್ರಿಕೆ - ವಿಜಯ ಕರ್ನಾಟಕ

ದಿನಾಂಕ - 25.08.2022

## ಬೌರಿಂಗ್, ಕೆ.ಸಿ ಜನರಲ್ ಸೇರಿದಂತೆ 10 ಆಸ್ಪತ್ರೆಗಳಲ್ಲಿ ಕಾರ್ಯಾಚರಣೆ

# ಆಸ್ಪತ್ರೆ ಮೇಲೆ ಲೋಕಾ ದಾಳಿ

■ ವಿಕ ಸುದ್ದಿಲೋಕ ಬೆಂಗಳೂರು




[illegible]

### ಅವ್ಯವಸ್ಥೆಗಳ ಬಗ್ಗೆ ಮಾಹಿತಿ ಸಂಗ್ರಹ

[illegible]

### ಸರಣಿ ಸಭೆ

[illegible]

ಪತ್ರಿಕೆ = ಕನ್ನಡ ಪ್ರಭ

ದಿನಾಂಕ = ೨೫. ೦೮. ೨೦೨೨

# ವಿಕ್ಟೋರಿಯಾ, ಬೌರಿಂಗ್ ಆಸ್ಪತ್ರೆಗೆ ಲೋಕಾಯುಕ್ತರ ದಿಢೀರ್ ಭೇಟಿ

ಬೆಂಗಳೂರು: ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಸಂಬಂಧ ಸಾರ್ವಜನಿಕರಿಂದ ವ್ಯಾಪಕ ದೂರುಗಳು ಕೇಳಿ ಬಂದ ಹಿನ್ನೆಲೆಯಲ್ಲಿ ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್ ನೇತೃತ್ವದಲ್ಲಿ ಲೋಕಾಯುಕ್ತ ಪೊಲೀಸರ ತಂಡವು ನಗರದ 10 ಸರ್ಕಾರಿ ಆಸ್ಪತ್ರೆಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಿದೆ. ವಿಕ್ಟೋರಿಯಾ ಆಸ್ಪತ್ರೆ, ಬೌರಿಂಗ್, ಕೆ.ಸಿ.ಜನರಲ್, ಮಿಂಟೋ ಕಣ್ಣಿನ ಆಸ್ಪತ್ರೆ, ವಾಣಿವಿಲಾಸ್, ಡಾ.ಬಾಬು ಜಗಜೀವನ್ ರಾಮ್ ಆಸ್ಪತ್ರೆ, ಜಯನಗರ ಜನರಲ್ ಆಸ್ಪತ್ರೆ, [illegible] ಆಸ್ಪತ್ರೆ ಸೇರಿದಂತೆ ಇತರ ಆಸ್ಪತ್ರೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಯಿತು. ಸರ್ಕಾರಿ ಆಸ್ಪತ್ರೆಯಲ್ಲಿ [illegible]

ಪತ್ರಿಕೆ = ಹೊಸ ದಿಗಂತ
ದಿನಾಂಕ = 25-08-2022.

೧೨ ಹೊಸ ದಿಗಂತ
ಗುರುವಾರ, 25 ಆಗಸ್ಟ್ 2022, ಬೆಂಗಳೂರು

## ಆಸ್ಪತ್ರೆಗೆ ಲೋಕಾಯುಕ್ತರ ಭೇಟಿ: ಸೌಲಭ್ಯಗಳ ಕುರಿತು ಪರಿಶೀಲನೆ

# ಕೋವಿಡ್ ಜತೆ ಸಾಂಕ್ರಾಮಿಕ

ಬೆಂಗಳೂರು: ರಾಜ್ಯದಲ್ಲಿ ಕೋವಿಡ್ ಸಾಂಕ್ರಾಮಿಕದ ಜೊತೆಗೆ ಇತರೆ ಸಾಂಕ್ರಾಮಿಕ ರೋಗಗಳು ವ್ಯಾಪಿಸುತ್ತಿದೆ. ಬಡವರು ಸರ್ಕಾರಿ ಆಸ್ಪತ್ರೆಯನ್ನೇ ನೆಚ್ಚಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿನ ವ್ಯವಸ್ಥೆಗಳ ಕುರಿತು ಗಮನಹರಿಸಲು, ಬಿಸಿ ಮುಟ್ಟಿಸಲು ಲೋಕಾಯುಕ್ತ ಮುಂದಾಗಿದೆ. ಬುಧವಾರ ನಗರದ ಲೇಡಿ ಕರ್ಜನ್ ಬೌರಿಂಗ್ ಆಸ್ಪತ್ರೆಗೆ ಲೋಕಾಯುಕ್ತ ನ್ಯಾ. ಬಿ.ಎಸ್.ಪಾಟೀಲ್ ಅವರು ಏಕಾಏಕಿ ಭೇಟಿ ನೀಡಿದ್ದಾರೆ.



ಅಲ್ಲದೇ ಲೋಕಾಯುಕ್ತ ಪೊಲೀಸರು ಮತ್ತು ನ್ಯಾಯಿಕ ಅಧಿಕಾರಿಗಳ 10 ತಂಡಗಳು ನಗರದ ಸರ್ಕಾರಿ, ಬಿಬಿಎಂಪಿ ಆಸ್ಪತ್ರೆಗಳಿಗೆ ಭೇಟಿ ನೀಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ವ್ಯವಸ್ಥೆ ಬಗ್ಗೆ ಪರಿಶೀಲಿಸಿದರು.

**ಕಡತ, ಸೌಲಭ್ಯಗಳ ಪರಿಶೀಲನೆ:** ಸರ್ಕಾರಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಇಲ್ಲದಿರುವುದು, ಮೂಲಸೌಕರ್ಯದ ಕೊರತೆ ಹಾಗೂ ತ್ವರಿತ ಚಿಕಿತ್ಸೆಗೆ ಸ್ಪಂದಿಸದಿರುವ ಬಗ್ಗೆ ಸಾರ್ವಜನಿಕರಿಂದ ವ್ಯಾಪಕ ದೂರು ಕೇಳಿಬಂದಿದೆ. ಅದ್ದರಿಂದ

ನ್ಯಾ. ಬಿ.ಎಸ್. ಪಾಟೀಲ್ ಮತ್ತು ಉಪಲೋಕಾಯುಕ್ತ ನ್ಯಾ. ಕೆ.ಎನ್. ಫಣೀಂದ್ರ ನೇತೃತ್ವದ ತಂಡ ಎಡಿಜಿಪಿ ಹಾಗೂ ಎಸ್ಪಿಗಳ ಸಮ್ಮುಖದಲ್ಲಿ ಪ್ರತ್ಯೇಕ ತಂಡ ರಚಿಸಿ ತಪಾಸಣೆ ನಡೆಸಿದೆ. ಆಸ್ಪತ್ರೆಗಳ ವಿಭಾಗಾಲಯಗಳ ವಿಭಾಗದ ಕಡತಗಳ ಪರಿಶೀಲನೆ, ಹೊರ ಮತ್ತು ಒಳರೋಗಿಗಳ ದಾಖಲಾತಿ, ಸಿಬ್ಬಂದಿ ಹಾಜರಾತಿ ಬಗ್ಗೆಯೂ ಪರಿಶೀಲಿಸಿದೆ.




> ಈ ಹಿಂದೆ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ, ಹುನಗುಂದ ಇಳಕಲ್‌ನ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸಿದಾಗ ಉತ್ತಮ ಫಲಿತಾಂಶ ಸಿಕ್ಕಿದೆ. ಈಗ ಎಲ್ಲೆಡೆ ಡೆಂಘಿ, ಎಚ್1ಎನ್1, ಚಿಕೂನ್‌ಗುನ್ಯ ಜ್ವರದ ರೋಗಗಳು ವ್ಯಾಪಿಸಿದೆ. ಬಡವರಿಗೆ ಉತ್ತಮ ಚಿಕಿತ್ಸೆ ಲಭಿಸಬೇಕೆಂದು ಈ ಕ್ರಮ ಕೈಗೊಳ್ಳಲಾಗಿದೆ.
>
> ■ ನ್ಯಾ. ಬಿ.ಎಸ್. ಪಾಟೀಲ್,
> ಕರ್ನಾಟಕ ಲೋಕಾಯುಕ್ತ

**ಇಳಕಲ್‌ನಲ್ಲಿ ಬೀರಿದ ಪರಿಣಾಮ:** ಸರ್ಕಾರಿ ಆಸ್ಪತ್ರೆಯಲ್ಲಿ ಮೂಲಸೌಕರ್ಯದ ಕೊರತೆ ಒಂದು ಸಮಸ್ಯೆಯಾದರೆ, ಕೆಲವೊಮ್ಮೆ ಮೂಲಸೌಕರ್ಯಗಳ ಜೊತೆಗೆ ಸುಧಾರಿತ ಆಧುನಿಕ ಸೌಲಭ್ಯಗಳಿದ್ದರೂ ಬಡವರಿಗೆ ಸೂಕ್ತ ಚಿಕಿತ್ಸೆ ಲಭ್ಯವಾಗುವುದಿಲ್ಲ. ಇಂಥದ್ದೊಂದು ಸಮಸ್ಯೆ ಮೂರು ತಿಂಗಳ ಹಿಂದೆ ಬಾಗಲಕೋಟೆ ಜಿಲ್ಲೆಯ ಹುನಗುಂದ ಇಳಕಲ್ ಸರ್ಕಾರಿ ಆಸ್ಪತ್ರೆಯಲ್ಲಿ ಲೋಕಾಯುಕ್ತರ ಗಮನಕ್ಕೆ ಬಂದಿತ್ತು. ಅವರು ದಿಢೀರ್ ಭೇಟಿ ನೀಡಿದಾಗ ಆಸ್ಪತ್ರೆಯಲ್ಲಿ ಒಂದೇ ಒಂದು ಹೆರಿಗೆ ಆಗುತ್ತಿಲ್ಲ ಎಂಬುದು ಬಹಿರಂಗವಾಗಿತ್ತು. ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ, ಕ್ರಮ ಕೈಗೊಂಡ ಬಳಿಕ ಸ್ತ್ರೀರೋಗ ತಜ್ಞರನ್ನು ನೇಮಿಸಿದ್ದು, ಜುಲೈನಲ್ಲಿ 30 ಹೆರಿಗೆಗಳಾಗಿವೆ.

ಪ್ರಸಕ್ತ ರೋಗಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಬಡವರಿಗೆ ಗುಣಮಟ್ಟದ ಚಿಕಿತ್ಸೆ ದೊರೆಯುವುದನ್ನು ಖಾತ್ರಿಪಡಿಸಿಕೊಳ್ಳುವುದಕ್ಕಾಗಿ ರಾಜ್ಯದ ವಿವಿಧ ಭಾಗದಲ್ಲಿ ದಿಢೀರ್ ಭೇಟಿ ನೀಡಲು ಯೋಜನೆ ರೂಪಿಸಿದ್ದಾಗಿ ಲೋಕಾಯುಕ್ತ ನ್ಯಾ. ಬಿ.ಎಸ್.ಪಾಟೀಲ್ ಹೊಸದಿಗಂತಕ್ಕೆ ತಿಳಿಸಿದ್ದಾರೆ.

### ಲೋಕಾಯುಕ್ತ ತಂಡ ಭೇಟಿ ಕೊಟ್ಟ ಆಸ್ಪತ್ರೆಗಳು

ವಿಕ್ಟೋರಿಯಾ ಆಸ್ಪತ್ರೆ, ಇನ್ಸ್ಟಿಟ್ಯೂಟ್ ಆಫ್ ನೆಫ್ರೋ ಯುರಾಲಜಿ, ಬೌರಿಂಗ್ ಅಂಡ್ ಲೇಡಿ ಕರ್ಜನ್ ಆಸ್ಪತ್ರೆ, ಕೆ.ಸಿ.ಜನರಲ್ ಆಸ್ಪತ್ರೆ, ಮಿಂಟೋ ಕಣ್ಣಿನ ಆಸ್ಪತ್ರೆ, ವಾಣಿವಿಲಾಸ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ, ಡಾ.ಬಾಬು ಜಗಜೀವನ್ ರಾಮ್ ನಗರ ಜನರಲ್ ಆಸ್ಪತ್ರೆ, ಹಲಸೂರು ರೆಫರಲ್ ಆಸ್ಪತ್ರೆ, ಸಿದ್ದಯ್ಯ ರಸ್ತೆಯ ರೆಫರಲ್ ಆಸ್ಪತ್ರೆ, [illegible] ಗುಟ್ಟಹಳ್ಳಿಯ ಹೆರಿಗೆ ಆಸ್ಪತ್ರೆ, ಮಾಗಡಿ ರಸ್ತೆಯ ಹೆರಿಗೆ ಆಸ್ಪತ್ರೆ.

PAPER = DECCAN HERALD
DATE = 03. September 2022.

# Lokayukta summons 50 docs, officials after hospital visits

BENGALURU, DHNS

The Lokayukta, which conducted surprise visits across 21 government and BBMP-run hospitals last week, has summoned over 50 doctors and officials from three prominent hospitals based on the illegalities and irregularities recorded during their visit.

The surprise visits were planned following multiple complaints regarding poor facilities at the government-run health facilities, including the ones run by the Bruhat Bengaluru Mahanagara Palike.

According to sources in the Lokayukta, 56 doctors and officials from Lady Curzon and Bowring, nine doctors and officials from Jayanagar General, and seven doctors and officials from KC General have been asked to appear or send their replies to the Lokayukta before October 20.

The order issued also directed them to take "remedial steps to relieve the hardships faced by the patients and submit an action report before the stipulated time".

The principal secretary to the government, department of health and family welfare; commissioner, health and family welfare services; mission director, health and family welfare services; and director, medical education, health and family welfare services, are among the officials who have been asked to respond to the order.

Considering that providing quality healthcare to the needy is the responsibility of the authorities, the Lokayukta has initiated suo-motu proceedings using the powers vested to them under Section 7(1) and Section 9(3)(a) of the Karnataka Lokayukta Act, 1984.

Poor hygiene and cleanliness, shortage of medicines, and lack of manpower were among the major drawbacks noticed in the hospitals during the Lokayukta's visit.

ಪತ್ರಿಕೆ: ಹೊಸ ದಿಗಂತ

ದಿನಾಂಕ: 03.09.2022

# 3 ಆಸ್ಪತ್ರೆ ವಿರುದ್ಧ ಲೋಕಾಯುಕ್ತ ಸ್ವಯಂಪ್ರೇರಿತ ದೂರು




**ಬೆಂಗಳೂರು:** ಆಗಸ್ಟ್ ಕೊನೆಯ ವಾರದಲ್ಲಿ ನಗರದ ವಿವಿಧ ಆಸ್ಪತ್ರೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಕರ್ನಾಟಕ ಲೋಕಾಯುಕ್ತ ಇದೀಗ ಮೂರು ಆಸ್ಪತ್ರೆಗಳ ವಿರುದ್ಧ ಸ್ವಯಂಪ್ರೇರಿತ ದೂರುಗಳನ್ನು ದಾಖಲಿಸಿ, 70ಕ್ಕೂ ಹೆಚ್ಚು ಮಂದಿಗೆ ನೋಟಿಸು ಜಾರಿ ಮಾಡಿದೆ.

ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ್ ಸಹಿತ ಲೋಕಾಯುಕ್ತ ಪೊಲೀಸರು ಮತ್ತು ನ್ಯಾಯಿಕ ಅಧಿಕಾರಿಗಳ 10 ತಂಡಗಳು ಆ.24 ರಂದು ನಗರದ ಸರ್ಕಾರಿ, ಬಿಬಿಎಂಪಿ ಆಸ್ಪತ್ರೆಗಳಿಗೆ ಭೇಟಿ ನೀಡಿ ಸರ್ಕಾರಿ ಆಸ್ಪತ್ರೆಗಳಲ್ಲಿ ವ್ಯವಸ್ಥೆ ಬಗ್ಗೆ ಪರಿಶೀಲನೆ ನಡೆಸಿದ್ದರು. ಈ ವೇಳೆ ಶಿವಾಜಿನಗರದಲ್ಲಿರುವ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ, ಮಲ್ಲೇಶ್ವರದ ಕೆ.ಸಿ.ಜನರಲ್ ಆಸ್ಪತ್ರೆ ಮತ್ತು ಜಯನಗರದ ಜನರಲ್ ಆಸ್ಪತ್ರೆಗಳ ವಿರುದ್ಧ ಸ್ವಯಂಪ್ರೇರಿತ ದೂರುಗಳನ್ನು ದಾಖಲಿಸಿಕೊಳ್ಳಲಾಗಿದೆ.

ಲೋಕಾಯುಕ್ತ ಪರಿಶೀಲನೆಯ ವೇಳೆ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ ಅನೇಕ ವೈದ್ಯರು ಹಾಜರಿ ಪುಸ್ತಕದಲ್ಲಿ ಸಹಿ ಮಾಡದಿರುವುದು, ಔಷಧಿಯ ದಾಸ್ತಾನಿನ ಕೊರತೆ, ಸ್ವಚ್ಛ ನಿರ್ವಹಣೆಯ ಕೊರತೆ, ಸಾರ್ವಜನಿಕರಿಗೆ ಅನುಕೂಲವಾಗುವ ಸಹಾಯವಾಣಿ ಇಲ್ಲದಿರುವುದು, ಹಳೆಯ ಮತ್ತು ನಿರುಪಯುಕ್ತ ವಸ್ತುಗಳ ವಿಲೇವಾರಿ ಮಾಡದಿರುವುದು, ಶೌಚಾಲಯಗಳ ಸ್ವಚ್ಛತೆಯ ಕೊರತೆ, ನಗದು ಘೋಷಣೆ ನೋಂದಣಿ ಸರಿಯಾಗಿ ನಿರ್ವಹಣೆ ಮಾಡದಿರುವುದು, ವಾರ್ಡ್‌ಗಳಲ್ಲಿ ನೈರ್ಮಲ್ಯ ಕೊರತೆ, ವೈದ್ಯಕೀಯ ಕಾನೂನು ಪ್ರಕರಣ (ಎಂಎಲ್‌ಸಿ)ಗಳ ದಾಖಲಾತಿ ಸಮರ್ಪಕವಾಗಿಲ್ಲದಿರುವುದು ಮುಂತಾದ ಲೋಪಗಳನ್ನು ಪತ್ತೆ ಮಾಡಲಾಗಿತ್ತು.

ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ್ ಅವರು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು 56 ಮಂದಿಗೆ ನೋಟಿಸು ಜಾರಿ ಮಾಡಿದ್ದಾರೆ. ವೈದ್ಯಕೀಯ ಶಿಕ್ಷಣ ಇಲಾಖೆಯ ಕಾರ್ಯದರ್ಶಿ, ಆಸ್ಪತ್ರೆಯ ನಿರ್ದೇಶಕರು, ವೈದ್ಯಕೀಯ ವ್ಯವಸ್ಥಾಪಕರ ಸಹಿತ ಕರ್ತವ್ಯ ಲೋಪವೆಸಗಿದ ವೈದ್ಯರಿಗೂ ನೋಟಿಸು ಜಾರಿ ಮಾಡಲಾಗಿದೆ.

### ಕೆಸಿ ಜನರಲ್ ಆಸ್ತಿ ಒತ್ತುವರಿ

ಮಲ್ಲೇಶ್ವರದ ಜನರಲ್ ಆಸ್ಪತ್ರೆಯಲ್ಲಿ ಜನರಲ್ ವಾರ್ಡ್‌ಗಳ ಶೌಚಾಲಯಗಳಲ್ಲಿ ಸ್ವಚ್ಛತೆ ಕೊರತೆ, ಆಸ್ಪತ್ರೆಯ ಆಸ್ತಿಯನ್ನು ಹಲವರು ಒತ್ತುವರಿ ಮಾಡಿರುವುದು, ಆಸ್ಪತ್ರೆಯಲ್ಲಿ ಕರ್ತವ್ಯದಲ್ಲಿರುವ ವೈದ್ಯರು ಹೊರಗೆ ಪ್ರ್ಯಾಕ್ಟೀಸ್ ಮಾಡುತ್ತಿರುವುದು, ಎಸ್ಕಲೇಟರ್ ಕಾರ್ಯನಿರ್ವಹಿಸದಿರುವುದು, ನಗದು ಘೋಷಣೆ ನೋಂದಣಿ ಸರಿಯಾಗಿ ನಿರ್ವಹಣೆ ಮಾಡದಿರುವುದು, ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಸ್ಥಗಿತಗೊಂಡಿರುವುದು ಸಹಿತ ಹಲವು ಲೋಪಗಳು ಪತ್ತೆಯಾಗಿದ್ದವು. ಅದಕ್ಕಾಗಿ 7 ಜನರಿಗೆ ನೋಟಿಸು ನೀಡಲಾಗಿದೆ.

### ಜಯನಗರದ ಜನರಲ್ ಆಸ್ಪತ್ರೆ

ಜಯನಗರದ ಜನರಲ್ ಆಸ್ಪತ್ರೆಯಲ್ಲಿ ಪರಿಶೀಲನೆಯ ವೇಳೆ 35 ಮಂದಿ ಕ್ಷಯ ರೋಗಿಗಳು ಇತರರ ಜೊತೆಗೆ ಇರುತ್ತಿರುವುದು, ದಾನಿಗಳಿಂದ ಬಂದಿರುವ ಎಕ್ಸ್‌ರೇ ಮತ್ತು ವೆಂಟಿಲೇಟರ್‌ಗಳನ್ನು ಬಳಕೆ ಮಾಡದಿರುವುದು, ಹಳೆಯ ಆಸ್ಪತ್ರೆ ಕಟ್ಟಡ, ದಂತ ವಿಭಾಗದಲ್ಲಿ ಸ್ವಚ್ಛತೆಯ ಕೊರತೆ, ಬಿಪಿಎಲ್ ಕಾರ್ಡುದಾರರಿಗೆ ಇರುವ ಸೌಲಭ್ಯಗಳ ಮಾಹಿತಿಯನ್ನು ಸೂಚನಾಫಲಕದಲ್ಲಿ ಪ್ರದರ್ಶಿಸದೇ ಇರುವುದು, ನಗದು ಘೋಷಣೆ ನೋಂದಣಿ ಸರಿಯಾಗಿ ನಿರ್ವಹಣೆ ಮಾಡದಿರುವುದು ಮುಂತಾದ ಲೋಪಗಳು ಕಂಡು ಬಂದಿದ್ದವು. ಈ ಹಿನ್ನೆಲೆಯಲ್ಲಿ 9 ಮಂದಿಗೆ ನೋಟಿಸು ನೀಡಲಾಗಿದೆ.

# ಆಸ್ಪತ್ರೆ ಅವ್ಯವಸ್ಥೆ: ವರದಿ ಕೇಳಿದ ಲೋಕಾಯುಕ್ತ

**ಬೆಂಗಳೂರು:** ನಗರದ ಕೆ.ಸಿ.ಜನರಲ್, ಬೌರಿಂಗ್, ಜಯನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಅವ್ಯವಸ್ಥೆ ಕಂಡು ಬಂದ ಹಿನ್ನೆಲೆಯಲ್ಲಿ ಸೆ.20ರೊಳಗೆ ಸ್ಪಷ್ಟನೆ ನೀಡುವಂತೆ ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಆಯುಕ್ತರು, ನಿರ್ದೇಶಕರು ಸೇರಿದಂತೆ ಇತರೆ ಅಧಿಕಾರಿಗಳಿಗೆ ಲೋಕಾಯುಕ್ತ ನ್ಯಾ. ಬಿ.ಎಸ್.ಪಾಟೀಲ್ ಸೂಚನೆ ನೀಡಿದ್ದಾರೆ.



ಆಸ್ಪತ್ರೆಯಲ್ಲಿನ ವೈದ್ಯಕೀಯ ವ್ಯವಸ್ಥೆ ಮತ್ತು ಮೂಲ ಸೌಕರ್ಯ ಕುರಿತು ಲೋಕಾಯುಕ್ತರ ನೇತೃತ್ವದಲ್ಲಿ ಲೋಕಾಯುಕ್ತ ಅಧಿಕಾರಿಗಳು ಆ.22ರಂದು ನಗರದ ವಿವಿಧ ಆಸ್ಪತ್ರೆಗೆ ಭೇಟಿ ನೀಡಿದ್ದರು. ಈ ವೇಳೆ ಹಲವು ಆಸ್ಪತ್ರೆಯಲ್ಲಿನ ಅವ್ಯವಸ್ಥೆಯನ್ನು ಪತ್ತೆ ಹಚ್ಚಲಾಗಿತ್ತು. ಕೆ.ಸಿ.ಜನರಲ್, ಬೌರಿಂಗ್, ಜಯನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಹೆಚ್ಚಿನ ಮೂಲಸೌಕರ್ಯ ಕೊರತೆ ಕಂಡು ಬಂದ ಹಿನ್ನೆಲೆಯಲ್ಲಿ ಶುಕ್ರವಾರ ಹಿರಿಯ ಅಧಿಕಾರಿಗಳ ಜತೆ ಸಭೆ ನಡೆಸಲಾಯಿತು. ಸಭೆಯಲ್ಲಿ ಆಸ್ಪತ್ರೆಯಲ್ಲಿನ ವೈದ್ಯಕೀಯ ಅವ್ಯವಸ್ಥೆ ಮತ್ತು ಮೂಲಸೌಕರ್ಯ ಇಲ್ಲದಿರುವುದಕ್ಕೆ ಕಾರಣ ನೀಡುವಂತೆ ಲೋಕಾಯುಕ್ತರು ಸೂಚನೆ ನೀಡಿದ್ದಾರೆ.

ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಆಯುಕ್ತರು, ನಿರ್ದೇಶಕರು, ಕೆ.ಸಿ.ಜನರಲ್, ಬೌರಿಂಗ್, ಜಯನಗರದ ಸಾರ್ವಜನಿಕ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರು ಸೇರಿದಂತೆ ಇತರರಿಗೆ ಸ್ಪಷ್ಟನೆ ನೀಡುವಂತೆ ನಿರ್ದೇಶನ ನೀಡಲಾಗಿದೆ. ಆಸ್ಪತ್ರೆಯಲ್ಲಿ ಶೌಚಾಲಯ ಸ್ವಚ್ಛತೆ ಇಲ್ಲದಿರುವುದು, ಆಸ್ಪತ್ರೆಯ ಜಾಗವನ್ನು ಖಾಸಗಿ ವ್ಯಕ್ತಿಗಳು ಕಬಳಿಸಿರುವುದು, ವೈದ್ಯರು ಮತ್ತು ಸಿಬ್ಬಂದಿ ಕೊರತೆ ಸೇರಿದಂತೆ ಇತರೆ ಮೂಲ ಸೌಕರ್ಯ ಇಲ್ಲದಿರುವುದರ ಕುರಿತು ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

ಕನ್ನಡಪ್ರಭ Sat, 03 September 2022
https://kpepaper.asianetnews.com/c/69972146

ಪತ್ರಿಕೆ: ಪ್ರಜಾವಾಣಿ

ದಿನಾಂಕ: 03. 09. 2022

ಪ್ರಜಾವಾಣಿ ಶನಿವಾರ • ಸೆಪ್ಟೆಂಬರ್ 3, 2022


ಹೈಕೋರ್ಟ್ ಆದೇಶದಂತೆ ಎಸಿಬಿಯಲ್ಲಿನ ಕಡತಗಳನ್ನು ವರ್ಗಾಯಿಸಲು ಕೋರಿಕೆ

# ಪ್ರಕರಣ ಹಸ್ತಾಂತರಕ್ಕೆ ಲೋಕಾಯುಕ್ತ ಪತ್ರ

• ವಿ.ಎಸ್.ಸುಬ್ರಹ್ಮಣ್ಯ

ಬೆಂಗಳೂರು: ... ಲೋಕಾಯುಕ್ತ ಪೊಲೀಸ್ ... 3,149 ಪ್ರಕರಣಗಳು ಎಸಿಬಿಯಲ್ಲಿ ತನಿಖಾ ಹಂತದಲ್ಲಿವೆ. ...

## ಸಿಬ್ಬಂದಿ ಬಲ ಹೆಚ್ಚಿಸಲು ಪ್ರಸ್ತಾವ



ಸ್ಥಿತಿಯು ಎಸಿಬಿಯಲ್ಲಿರುವ ... ಕೋರಿದ್ದೇನೆ.

ನ್ಯಾ. ಬಿ.ಎಸ್. ಪಾಟೀಲ, ಲೋಕಾಯುಕ್ತ

PAPER= THE HINDU

DATE= 03. September. 2022

# Lokayukta initiates proceedings against three hospitals for lapses

SPECIAL CORRESPONDENT
BENGALURU

ಶಿವಮೊಗ್ಗ ಜಿಲ್ಲೆಯಲ್ಲಿ ಕೆರೆಗಳ ಸಂರಕ್ಷಣೆ, ಒತ್ತುವರಿ ತೆರವು ಮತ್ತು ಪುನರುಜ್ಜೀವನ ಕುರಿತಾಗಿ ಲೋಕಾಯುಕ್ತ ಸಂಸ್ಥೆ ಸ್ವಯಂ ಪ್ರೇರಿತ ದೂರನ್ನು ದಾಖಲಿಸಿಕೊಂಡಿದೆ. ಕೆರೆಗಳ ಒತ್ತುವರಿ ತೆರವುಗೊಳಿಸಿ ಸಂರಕ್ಷಿಸಲು ಗಡುವನ್ನು ನಿಗದಿಪಡಿಸಲಾಗಿದ್ದು, ನಿಯಮಿತವಾಗಿ ಈ ಕುರಿತು ವಿಚಾರಣೆಯನ್ನು ನಡೆಸಲಾಗುವುದು. ಜಿಲ್ಲೆಯಲ್ಲಿ ದಾಖಲೆಯಲ್ಲಿಯೇ ಅತಿ ಹೆಚ್ಚು 6ಸಾವಿರಕ್ಕೂ ಅಧಿಕ ಕೆರೆಗಳಿದ್ದು ಇವುಗಳ ಸರ್ವೇ ಕಾರ್ಯವನ್ನು ಪೂರ್ಣಗೊಳಿಸಲು ಸೂಚನೆ ನೀಡಲಾಗಿದೆ. ಆದ್ಯತೆ ಮೇರೆಗೆ ಈ ಕಾರ್ಯವನ್ನು ಕೈಗೊಂಡು ವರದಿಯನ್ನು ಸಲ್ಲಿಸಬೇಕು. ಇದೇ ರೀತಿ ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿರುವ ಕೆರೆಗಳ ಸ್ಥಿತಿಗತಿ ಕುರಿತು ವರದಿಯನ್ನು ಪ್ರತ್ಯೇಕವಾಗಿ ಸಲ್ಲಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಉದ್ಯೋಗ ಖಾತ್ರಿ:** ಗ್ರಾಮೀಣ ಪ್ರದೇಶದಲ್ಲಿ ಪ್ರತಿಯೊಬ್ಬರಿಗೂ ಉದ್ಯೋಗ ಕಲ್ಪಿಸುವ ಉದ್ಯೋಗ ಖಾತ್ರಿ ಯೋಜನೆಯ ಅನುಷ್ಠಾನ ಸರಿಯಾಗಿ ಆಗುತ್ತಿಲ್ಲ. ಈ ಕುರಿತು 5ಲಕ್ಷ ಪ್ರಕರಣಗಳು ಲೋಕಾಯುಕ್ತದ ಮುಂದಿವೆ. ಯುದ್ಧೋಪಾದಿಯಲ್ಲಿ ಪ್ರಕರಣಗಳ ವಿಲೇವಾರಿ ಮಾಡಲಾಗುತ್ತಿದೆ. ಉದ್ಯೋಗ ಖಾತ್ರಿ ಯೋಜನೆ ಜಾರಿಯ ಸರಿಯಾದ ದಾಖಲೆಗಳನ್ನು ನಿರ್ವಹಿಸದ ಪಿಡಿಓಗಳ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಯೋಜನೆ ಅನುಷ್ಠಾನ ಸಮರ್ಪಕವಾಗಿ ನಿರ್ವಹಿಸದಿದ್ದರೆ ಇಲಾಖೆಯ ಎಲ್ಲಾ ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಹೇಳಿದರು.

**ವಸತಿ ಯೋಜನೆ ಅನುಷ್ಠಾನ:** ವಿವಿಧ ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮವಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ಈ ದೂರುಗಳ ವಿಚಾರಣೆಯನ್ನು ಮಾಡಲಾಗುತ್ತಿದೆ. ಇದೇ ರೀತಿ ನೀರಾವರಿ, ಕೃಷಿ, ಆರೋಗ್ಯ ಕ್ಷೇತ್ರ ಸೇರಿದಂತೆ ಎಲ್ಲಾ ಇಲಾಖೆಗಳು ಜನಕಲ್ಯಾಣ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಹೇಳಿದರು.

**ಪಟ್ಟಿ ಸಿದ್ಧಪಡಿಸಲು ಸೂಚನೆ:** ಲೋಕಾಯುಕ್ತ ಸಂಸ್ಥೆಯಲ್ಲಿ ಪ್ರಸ್ತುತ ಪೂರ್ಣ ಪ್ರಮಾಣದ ಅಧಿಕಾರಿ ಸಿಬ್ಬಂದಿಗಳಿದ್ದು, ನ್ಯಾಯಾಂಗ ವಿಭಾಗ, ಪೊಲೀಸ್ ವಿಭಾಗ, ಆಂತರಿಕ ಗುಪ್ತಚರ ವಿಭಾಗ, ಆಡಳಿತ ವಿಭಾಗ, ತಾಂತ್ರಿಕ ವಿಭಾಗ ಕಾರ್ಯ ನಿರ್ವಹಿಸುತ್ತಿದೆ. ಪ್ರತಿ ಜಿಲ್ಲೆಯಲ್ಲಿ ಜನಕಂಟಕರಾಗಿರುವ ಸರ್ಕಾರಿ ಅಧಿಕಾರಿ, ಸಿಬ್ಬಂದಿಗಳ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತಿದೆ. ಆದರ ಪ್ರಕಾರ ದಾಳಿಗಳನ್ನು ನಡೆಸಿ ಭ್ರಷ್ಟ ವ್ಯವಸ್ಥೆಯನ್ನು ಮಟ್ಟ ಹಾಕಲು ಎಲ್ಲಾ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಇದೇ ರೀತಿ ಉತ್ತಮವಾಗಿ ಕಾರ್ಯನಿರ್ವಹಿಸುವ ಅಧಿಕಾರಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯವೂ ನಡೆಯಬೇಕಿದೆ ಎಂದು ಹೇಳಿದರು.

**ಎಚ್ಚರಿಕೆ:** ಜನರು ಭ್ರಷ್ಟಾಚಾರದ ವಿರುದ್ಧ ಹೋರಾಟದಲ್ಲಿ ಕೈಜೋಡಿಸಬೇಕು. ಇದೇ ವೇಳೆ ಕೆಲವರು ಸುಳ್ಳು ದೂರುಗಳನ್ನು ದಾಖಲಿಸಿ ವಸೂಲಿ ದಂಧೆಗೆ ಮಾಡುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ಅಂತಹ ಪ್ರಕರಣಗಳಲ್ಲಿ ಲೋಕಾಯುಕ್ತ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಎಚ್ಚರಿಸಿದರು.

ಜಿಲ್ಲಾಧಿಕಾರಿ ಡಾ.ಆರ್.ಸೆಲ್ವಮಣಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎನ್.ಡಿ.ಪ್ರಕಾಶ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕೆ.ಟಿ.ಹನುಮಂತಪ್ಪ, ಲೋಕಾಯುಕ್ತ ಡಿ.ವೈ.ಎಸ್.ಪಿ ಮೃತ್ಯುಂಜಯ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ಪತ್ರಿಕೆ, 06.01.2023

"ವಾಯ್ಸ್ ಆಫ್ ಶಿವಮೊಗ್ಗ" ದಿನ ಪತ್ರಿಕೆ ದಿ:06/01/2023

voiceofshimoga@gmail.com ಬಿಡಿಪ್ರತಿ ಬೆಲೆ 1 ರೂ. ಮಾಸಿಕ ಚಂದಾ : ರೂ.35/-

# ಭ್ರಷ್ಟ ಅಧಿಕಾರಿಗಳ ವಿರುದ್ಧ ತ್ವರಿತ ಕಾನೂನು ಕ್ರಮ : ಲೋಕಾಯುಕ್ತ ಬಿ.ಎಸ್.ಪಾಟೀಲ್ ಎಚ್ಚರಿಕೆ



ಶಿವಮೊಗ್ಗ : ಕಡತ ವಿಲೇವಾರಿಯಲ್ಲಿ ವಿಳಂಬ, ಕರ್ತವ್ಯ ಲೋಪ, ಅಧಿಕಾರದ ದುರುಪಯೋಗ, ಭ್ರಷ್ಟಾಚಾರದಂತಹ ಅಕ್ರಮ ಚಟುವಟಿಕೆಗಳನ್ನು ನಡೆಸುವ ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಸೂಕ್ತ ಕಾನೂನು ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳಲಾಗುವುದು ಎಂದು ಲೋಕಾಯುಕ್ತ ಬಿ.ಎಸ್. ಪಾಟೀಲ್ ಅವರು ಎಚ್ಚರಿಕೆ ನೀಡಿದರು.

ಅವರು ಗುರುವಾರ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲಾ ಇಲಾಖೆಗಳ ಮುಖ್ಯಸ್ಥರ ಸಭೆಯನ್ನು ನಡೆಸಿ ಮಾತನಾಡಿದರು.

ಶಿವಮೊಗ್ಗ ಜಿಲ್ಲೆಯಲ್ಲಿ ಕೆರೆಗಳ ಸಂರಕ್ಷಣೆ, ಒತ್ತುವರಿ ತೆರವು ಮತ್ತು ಪುನರುಜ್ಜೀವನ ಕುರಿತಾಗಿ ಲೋಕಾಯುಕ್ತ ಸಂಸ್ಥೆ ಸ್ವಯಂ ಪ್ರೇರಿತ ದೂರನ್ನು ದಾಖಲಿಸಿಕೊಂಡಿದೆ. ಕೆರೆಗಳ ಒತ್ತುವರಿ ತೆರವುಗೊಳಿಸಿ ಸಂರಕ್ಷಿಸಲು ಗುರಿಯನ್ನು ನಿಗದಿಪಡಿಸಲಾಗಿದ್ದು, ನಿಯಮಿತವಾಗಿ ಈ ಕುರಿತು ವಿಚಾರಣೆಯನ್ನು ನಡೆಸಲಾಗುವುದು. ಜಿಲ್ಲೆಯಲ್ಲಿ ರಾಜ್ಯದಲ್ಲಿಯೇ ಅತಿ ಹೆಚ್ಚು 6ಸಾವಿರಕ್ಕೂ ಅಧಿಕ ಕೆರೆಗಳಿದ್ದು, ಇವುಗಳ ಸರ್ವೇ ಕಾರ್ಯವನ್ನು ಪೂರ್ಣಗೊಳಿಸಲು ಸೂಚಿಸಲಾಗಿದೆ. ಆದಷ್ಟು ಬೇಗ ಈ ಕಾರ್ಯವನ್ನು ಕೈಗೊಂಡು ವರದಿಯನ್ನು ಸಲ್ಲಿಸಬೇಕು. ಇದೇ ರೀತಿ ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿರುವ ಕೆರೆಗಳ ಸ್ಥಿತಿಗತಿ ಕುರಿತು ವರದಿಯನ್ನು ಪ್ರತ್ಯೇಕವಾಗಿ ಸಲ್ಲಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಉದ್ಯೋಗ ಖಾತ್ರಿ: ಗ್ರಾಮೀಣ ಪ್ರದೇಶದಲ್ಲಿ ಪ್ರತಿಯೊಬ್ಬರಿಗೂ ಉದ್ಯೋಗ ಕಲ್ಪಿಸುವ ಉದ್ಯೋಗ ಖಾತ್ರಿ ಯೋಜನೆಯ ಅನುಷ್ಠಾನ ಸರಿಯಾಗಿ ಆಗುತ್ತಿಲ್ಲ. ಈ ಕುರಿತು [illegible] ಪ್ರಕರಣಗಳು ಲೋಕಾಯುಕ್ತದ ಮುಂದಿವೆ. ಯುದ್ಧೋಪಾದಿಯಲ್ಲಿ ಪ್ರಕರಣಗಳ ವಿಲೇವಾರಿ ಮಾಡಲಾಗುತ್ತಿದೆ. ಉದ್ಯೋಗ ಖಾತ್ರಿ ಯೋಜನೆ ಜಾರಿಯ ಕುರಿತಾದ ದಾಖಲೆಗಳನ್ನು ನಿರ್ವಹಿಸದ ಪಿಡಿಓಗಳ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಯೋಜನೆ ಅನುಷ್ಠಾನ ಸಮರ್ಪಕವಾಗಿ ನಿರ್ವಹಿಸದಿದ್ದರೆ ಇಲಾಖೆಯ ಎಲ್ಲಾ ಹಂತಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಹೇಳಿದರು.

ವಸತಿ ಯೋಜನೆ ಅನುಷ್ಠಾನ: ವಿವಿಧ ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮವಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ಈ ದೂರುಗಳ ವಿಚಾರಣೆಯನ್ನು ಮಾಡಲಾಗುತ್ತಿದೆ. ಇದೇ ರೀತಿ ನೀರಾವರಿ, ಕೃಷಿ, ಆರೋಗ್ಯ ಕ್ಷೇತ್ರ ಸೇರಿದಂತೆ ಎಲ್ಲಾ ಇಲಾಖೆಗಳು ಜನಕಲ್ಯಾಣ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಹೇಳಿದರು.

ಪಟ್ಟಿ ಸಿದ್ಧಪಡಿಸಲು ಸೂಚನೆ: ಲೋಕಾಯುಕ್ತ ಸಂಸ್ಥೆಯಲ್ಲಿ ಪ್ರಸ್ತುತ ಪೂರ್ಣ ಪ್ರಮಾಣದ ಅಧಿಕಾರಿ ಸಿಬ್ಬಂದಿಗಳಿದ್ದು, ನ್ಯಾಯಾಂಗ ವಿಭಾಗ, ಪೊಲೀಸ್ ವಿಭಾಗ, ಆಂತರಿಕ ಗುಪ್ತಚರ ವಿಭಾಗ, ಆಡಳಿತ ವಿಭಾಗ, ತಾಂತ್ರಿಕ ವಿಭಾಗ ಕಾರ್ಯ ನಿರ್ವಹಿಸುತ್ತಿದೆ. ಪ್ರತಿ ಜಿಲ್ಲೆಯಲ್ಲಿ ಜನಕಂಟಕರಾಗಿರುವ ಸರ್ಕಾರಿ ಅಧಿಕಾರಿ, ಸಿಬ್ಬಂದಿಗಳ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತಿದೆ. ಅದರ ಪ್ರಕಾರ ದಾಳಿಗಳನ್ನು ನಡೆಸಿ ಭ್ರಷ್ಟ ವ್ಯವಸ್ಥೆಯನ್ನು ಮಟ್ಟ ಹಾಕಲು ಎಲ್ಲಾ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಇದೇ ರೀತಿ ಉತ್ತಮವಾಗಿ ಕಾರ್ಯನಿರ್ವಹಿಸುವ ಅಧಿಕಾರಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯವೂ ನಡೆಯಬೇಕಿದೆ ಎಂದು ಹೇಳಿದರು.

ಎಚ್ಚರಿಕೆ: ಜನರು ಭ್ರಷ್ಟಾಚಾರದ ವಿರುದ್ಧ ಹೋರಾಟದಲ್ಲಿ ಕೈಜೋಡಿಸಬೇಕು. ಇದೇ ವೇಳೆ ಕೆಲವರು ಸುಳ್ಳು ದೂರು ನೀಡಿ, ದಾಖಲಿಸಿ ವಸೂಲಿ ದಂಧೆ ಮಾಡುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ಅಂತಹ ಪ್ರಕರಣಗಳಲ್ಲಿ ಲೋಕಾಯುಕ್ತ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಎಚ್ಚರಿಸಿದರು.

ಜಿಲ್ಲಾಧಿಕಾರಿ ಡಾ.ಆರ್. ಸೆಲ್ವಮಣಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎನ್.ಡಿ. ಪ್ರಕಾಶ್, [illegible] ಲೋಕಾಯುಕ್ತ [illegible] ಮೃತ್ಯುಂಜಯ, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಮದ್ಯದಂಗಡಿ ಬಗ್ಗೆ ಕ್ರಮಕೈಗೊಳ್ಳದ ಅಧಿಕಾರಿ ವಿರುದ್ಧ ಕ್ರಮಕ್ಕೆ ಆಗ್ರಹ

ಶಿವಮೊಗ್ಗ: ಭದ್ರಾವತಿ ತಾಲ್ಲೂಕಿನ ಡೈರಿ ಸರ್ಕಲ್‌ನಲ್ಲಿರುವ ಮದ್ಯದ ಅಂಗಡಿಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಹಲವು ಬಾರಿ ಅಬಕಾರಿ ಆಯುಕ್ತರಿಗೆ ಮನವಿ ನೀಡಿದ್ದರೂ ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯ ಲೋಪ ಎಸಗಿರುವ ಜಿಲ್ಲಾ ಅಬಕಾರಿ ಆಯುಕ್ತರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಆಗ್ರಹಿಸಿ ಸಂಯುಕ್ತ ಜನತಾದಳ ರಾಜ್ಯ ಕಾರ್ಯದರ್ಶಿ ಶಶಿಕುಮಾರ್ ಎಸ್.ಗೌಡ ಲೋಕಾಯುಕ್ತ ನ್ಯಾಯಮೂರ್ತಿಗಳಿಗೆ ಇಂದು ಮನವಿ ಸಲ್ಲಿಸಿದರು.

ಮದ್ಯದಂಗಡಿಯಿಂದ ಪಾದಚಾರಿಗಳಿಗೆ ಮತ್ತು ಕಾರ್ಮಿಕರಿಗೆ, ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಮದ್ಯಪಾನ ಮಾಡಿದ ಗುಂಪುಗಳು ಗಲಾಟೆ ಮಾಡಿ ಹೊಡೆದಾಡಿಕೊಳ್ಳುತ್ತಿರುವುದರಿಂದ ಸಾರ್ವಜನಿಕರು ಭಯಭೀತರಾಗಿದ್ದಾರೆ. ಈ ಬಗ್ಗೆ 2021 ರಲ್ಲಿ ಭದ್ರಾವತಿ ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. 2 ವರ್ಷಗಳಿಂದ ಸತತವಾಗಿ ಮದ್ಯದಂಗಡಿ ಸ್ಥಳಾಂತರಕ್ಕೆ ಆಯುಕ್ತರಿಗೆ ಹಾಗೂ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಕ್ರಮಕೈಗೊಂಡಿಲ್ಲವಾದ್ದರಿಂದ ಅಬಕಾರಿ ಆಯುಕ್ತರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಅವರು ಮನವಿ ಸಲ್ಲಿಸಿದ್ದಾರೆ.

# "ಮಲೆನಾಡು ಮಿತ್ರ" ದಿನ ಪತ್ರಿಕೆ ದಿ:06/01/2023

## ಭ್ರಷ್ಟ ಅಧಿಕಾರಿಗಳಿಗೆ ಕಾದಿದೆ ಶಿಕ್ಷೆ : ಲೋಕಾಯುಕ್ತ ಬಿ. ಎಸ್. ಪಾಟೀಲ್ ಎಚ್ಚರಿಕೆ



**ಜಿಲ್ಲೆಯಲ್ಲಿರುವ ಎಲ್ಲಾ 6032 ಕೆರೆಗಳನ್ನು ಶೀಘ್ರವಾಗಿ ಸರ್ವೇ ಮಾಡಿ ಒತ್ತುವರಿ ತೆರವು ಮಾಡಿಸಬೇಕು. ಕೆಲವು ಕೆರೆಗಳನ್ನು ಒತ್ತುವರಿ ಮಾಡಿ ಅಡಿಕೆ ತೋಟ ಮಾಡಿಕೊಂಡಿರುವ ಬಗ್ಗೆಯೂ ಮಾಹಿತಿ ಇದೆ. ಅಂತಹವುಗಳನ್ನು ಮುಲಾಜಿಲ್ಲದೆ ಖುಲ್ಲಾ ಮಾಡಬೇಕು. ಕೊಳಚೆ ನೀರು ಸೇರದಂತೆ ಕ್ರಮ ಕೈಗೊಳ್ಳಿ. ಈ ಸಂಬಂಧ ತಪ್ಪಾದರೆ ತಹಶೀಲ್ದಾರರನ್ನು ಹೊಣೆಯಾಗಿಸಲಾಗುವುದು.**

**। ಬಿ. ಎಸ್. ಪಾಟೀಲ್, ಲೋಕಾಯುಕ್ತರು**

**ಶಿವಮೊಗ್ಗ, ಜ. 06:**

ನಿಗದಿತ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಮಾಡಿದ ಭ್ರಷ್ಟ ಅಧಿಕಾರಿಗಳನ್ನು ಮಟ್ಟಹಾಕಲಾಗುವುದು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ. ಎಸ್. ಪಾಟೀಲ್ ಅಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಈಗ ಲೋಕಾಯುಕ್ತ ಇನ್ನಷ್ಟು ತಾಂತ್ರಿಕ ಸಿಬ್ಬಂದಿಗಳೊಂದಿಗೆ ಬಲವಾಗಿದೆ. ಪ್ರತಿ ಜಿಲ್ಲೆಯಲ್ಲಿರುವ ಭ್ರಷ್ಟ ಅಧಿಕಾರಿಗಳನ್ನು ಪತ್ತೆ ಮಾಡಿ ಅವರ ಆಸ್ತಿ, ಆದಾಯವನ್ನು ಶೋಧಿಸಿ ಅವರ ಮೇಲೆ ದಾಳಿ ನಡೆಸಿ, ಕೇಸು ಹಾಕಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಕೆಲಸವನ್ನು ಯುದ್ಧೋಪಾದಿಯಲ್ಲಿ ಮಾಡಲು ಲೋಕಾಯುಕ್ತ ಎಸ್ಪಿ, ಡಿವೈಎಸ್ಪಿಗಳಿಗೆ ಸೂಚಿಸಲಾಗಿದೆ. ಭ್ರಷ್ಟ ಅಧಿಕಾರಿಗಳ ಅಕ್ರಮ ಆಸ್ತಿ ಪತ್ತೆ ಮಾಡಿ ಅದನ್ನು ಹರಾಜು ಮಾಡುವವರೆಗೆ ಲೋಕಾಯುಕ್ತ ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಸಂಬಳಕ್ಕೆ ತಕ್ಕಂತೆ ಶುದ್ಧ ಮನಸ್ಸಿನಿಂದ ಕೆಲಸದ ಮೇಲೆ ಪೂಜ್ಯ ಭಾವನೆಯಿಂದ ಆತ್ಮಸಂತೋಷದಿಂದ ಕೆಲಸ ಮಾಡಿ. ನೀವು ಶುದ್ಧ ಹಸ್ತರಾಗಿ ನಿಮ್ಮ ಕೈ ಕೆಳಗಿನ ಅಧಿಕಾರಿಗಳನ್ನು ಹದ್ದುಬಸ್ತಿನಲ್ಲಿಡಿ. ಸರ್ಕಾರದ ಕೆಲಸ ದೇವರ ಕೆಲಸ ಎಂದು ಭಾವಿಸಿ. ಸಾರ್ವಜನಿಕರನ್ನು ಅಲೆದಾಡಿಸಬೇಡಿ. ಸರ್ಕಾರದ ಯಾವುದೇ ಅಧಿಕಾರಿ, ಸಿಬ್ಬಂದಿಗಳಿಗೆ ಕಡಿಮೆ ವೇತನ ನೀಡುತ್ತಿಲ್ಲ. ಅದನ್ನು ಪಡೆದು ಸಾರ್ವಜನಿಕರಿಂದ ಲಂಚ, ಸಾರ್ವಜನಿಕ ಯೋಜನೆಗಳಲ್ಲಿ ಲೋಪ ಮಾಡಿ ಹಣ ಕಬಳಿಸಿದರೆ ಬಿಡುವುದಿಲ್ಲ ಎಂದ ಅವರು, ಅಂತಹವರನ್ನು ಪತ್ತೆ ಮಾಡಲು ವಿವಿಧ ಘಟಕಗಳನ್ನು ಮಾಡಲಾಗಿದೆ. ಅದರಲ್ಲಿ ಲೋಕಾಯುಕ್ತ ಬೇಹುಗಾರಿಕೆ ವಿಭಾಗ ಅತ್ಯಂತ ಸಮರ್ಥವಾಗಿ ಕೆಲಸ ಮಾಡುತ್ತಿದೆ ಎಂದರು.

ಸರ್ವೇ ಇಲಾಖೆಯವರು ವ್ಯಾಜ್ಯಗಳ ನೆಪ ಹೇಳದೆ, ಯಾವುದೇ ಸಬೂಬು ಹೇಳದೆ ಅಳತೆ ಮಾಡಿ ಒತ್ತುವರಿ ಎಷ್ಟಾಗಿದೆ ಎಂದು ವರದಿ ನೀಡುವಂತೆ ಸೂಚಿಸಿದ ಅವರು, ಹೊಸನಗರ ತಾಲ್ಲೂಕಿನಲ್ಲಿ ನಡೆಯುತ್ತಿರುವ ಅನಧಿಕೃತ ಗಣಿಗಾರಿಕೆ ಸೇರಿದಂತೆ ಜಿಲ್ಲೆಯಲ್ಲಿ ಎಲ್ಲಾ ರೀತಿಯ ಅನಧಿಕೃತ ಗಣಿಗಾರಿಕೆ ನಿಲ್ಲಿಸಲು ಕ್ರಮ ಕೈಗೊಳ್ಳುವಂತೆ ಆದೇಶಿಸಿದ ಅವರು, ಅನಧಿಕೃತವಾಗಿ ಕಂಡು ಬಂದರೆ ಅಂತಹ ವ್ಯಕ್ತಿಗಳ ಮೇಲೆ ಕೇಸು ಹಾಕುವಂತೆ ಹೇಳಿದರು.

ಲೋಕಾಯುಕ್ತದ ನಡೆ ಇನ್ನು ಮುಂದೆ ಶಿಸ್ತು ಮತ್ತು ಪವರ್ ಇರುತ್ತದೆ. ಮುಗ್ಧ ಜನರನ್ನು ದೋಚುವ ನಟೋರಿಯಸ್ ಅಧಿಕಾರಿಗಳ ಲಿಸ್ಟ್ ಮಾಡಲಾಗಿದೆ. ಅವರ ಮನೆಯ ಹಾಗೂ ಆಸ್ತಿಪಾಸ್ತಿಗಳ ಮೇಲೆ ಮುಲಾಜಿಲ್ಲದೆ ರೈಡ್ ಮಾಡುತ್ತೇವೆ ಎಂದ ಅವರು, ಉದ್ಯೋಗ ಖಾತ್ರಿ ಯೋಜನೆಯಲ್ಲಿ ಬಹಳಷ್ಟು ಭ್ರಷ್ಟಾಚಾರ ಆಗಿದು

(3ನೇ ಪುಟಕ್ಕೆ)

## ಭ್ರಷ್ಟ ಅಧಿಕಾರಿಗಳಿಗೆ ಕಾದಿದೆ ಶಿಕ್ಷೆ : ಲೋಕಾಯುಕ್ತ ಬಿ. ಎಸ್. ಪಾಟೀಲ್ ಎಚ್ಚರಿಕೆ

(ಮೊದಲನೇ ಪುಟದಿಂದ)

ವುದು ನಮ್ಮ ಮುಂದೆ ಇದೆ. ಇಡೀ ರಾಜ್ಯದಲ್ಲಿ 5 ಲಕ್ಷ ಕೇಸುಗಳು ದಾಖಲಾಗಿವೆ. ಇಷ್ಟು ಕೇಸುಗಳನ್ನು ದಾಖಲಿಸಿಕೊಂಡು ವಿಚಾರಣೆ ನಡೆಸಲಾಗುವುದು. ಸ್ಥಳೀಯ ಸಂಸ್ಥೆಗಳು ಸ್ವಚ್ಛತೆ ಬಗ್ಗೆ ಗಮನಹರಿಸಬೇಕು. ಈ ಬಗ್ಗೆ ಅಧಿಕಾರಿಗಳು ಕೂಡ ನಿಗಾ ವಹಿಸಬೇಕು. ಬೆಳಗ್ಗೆಯೇ ಒಂದು ಸುತ್ತು ನಗರ ಪ್ರದಕ್ಷಿಣೆ ಮಾಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಆರ್. ಸೆಲ್ವಮಣಿ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ್, ಹನುಮಂತಪ್ಪ ಲೋಕಾಯುಕ್ತ ಎಸ್ಪಿ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

**"DECCAN HERALD" DAILY NEWS PAPER DATE:07-01-2023.**

# l take timely action against nt govt officials: Lokayukta

**s must
t pro-
emes
ely**

, DHNS

Patil prom-
ould initiate
inary action
ernment of-

g at a meet-
various de-
n Friday. He
s registered
in the en-
es in the dis-
s concerned
l to clear the
akes and fix
will observe
conduct the

rict has over
ighest in the



Lokayukta B S Patil (fourth from left) speaks at a meeting in Shivamogga on Friday. DH PHOTO

State. The authorities concerned have been directed to complete the survey of lakes and submit a report on a priority basis. Besides, they have been asked to submit another report on the state of lakes in the City limits.

Referring to Mahatma Gandhi National Rural Employment Guarantee Act, he said, the scheme is not being implemented properly and over five lakh cases are pending before the Lokayukta. "We are disposing off the cases on a war footing," he said.

He directed the officials concerned to take action against the panchayat development officers for not maintaining the documents related to the scheme. He also warned that all the officials will be held liable if it is not implemented effectively.

On the housing scheme, there are complaints about the selection of beneficiaries under various housing schemes and the Lokayukta is conducting a probe. Similarly, all departments must implement pro-people schemes effectively, he said.

He said, Lokayukta has permanent staff, and judiciary, police, intelligence, administrative, and technical wings are functioning in the institute. "We are preparing a list of government officials who indulged in corruption in all districts across the State. The officials will raid the premises of such officials to tackle corruption. Lokayukta will also identify officials who are discharging their duties promptly and encourage them to carry on their good work," he said.

He said, some people are collecting money from people after lodging fake cases with Lokayukta. "We will take suitable steps against such people," he said.

Deputy Commissioner R Selvamani, Zilla Panchayat Chief Executive Officer N D Prakash, Chief Conservator of Forests K T Hanumantappa, Lokayukta DySP Mrityunjay and district-level officials were present in the meeting.

45

"ಪ್ರಜಾವಾಣಿ" ದಿನ ಪತ್ರಿಕೆ ದಿ: 07/01/2023

6:53 ಸೂರ್ಯಾಸ್ತ : 6:14 ಚಂದ್ರೋದಯ: ಸಂ. 6:37 ಚಂದ್ರಾಸ್ತ: ಬೆ. 7:56 ಶುಕ್ರವಾರದ ಹವಾಮಾನ : ಗರಿಷ್ಠ 31° ಕನಿಷ್ಠ 17° ಪ್ರಜಾವಾಣಿ

### ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಎಚ್ಚರಿಕೆ

# ಭ್ರಷ್ಟ ಅಧಿಕಾರಿಗಳ ವಿರುದ್ಧ ತ್ವರಿತ ಕ್ರಮ

ಪ್ರಜಾವಾಣಿ ವಾರ್ತೆ . ೦೭.೦೧.೨೦೨೩

**ಮುಖ್ಯಾಂಶಗಳು**

- ಜಿಲ್ಲೆಯಲ್ಲಿ ರಾಜ್ಯದಲ್ಲಿಯೇ ಅತಿ ಹೆಚ್ಚು 6000ಕ್ಕೂ ಹೆಚ್ಚು ಕೆರೆಗಳು
- ಲೋಕಾಯುಕ್ತದ ಮುಂದಿವೆ 5 ಲಕ್ಷ ಪ್ರಕರಣಗಳು
- ದಾಖಲೆ ನಿರ್ವಹಿಸದ ಪಿಡಿಒ ವಿರುದ್ಧ ಕ್ರಮಕ್ಕೆ ಸೂಚನೆ




ಶಿವಮೊಗ್ಗದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಮಾತನಾಡಿದರು.

ಶಿವಮೊಗ್ಗ: ಕಚೇರಿ ವಿಲೇವಾರಿಯಲ್ಲಿ ವಿಳಂಬ, ಕರ್ತವ್ಯ ಲೋಪ, ಅಧಿಕಾರದ ದುರುಪಯೋಗ, ಭ್ರಷ್ಟಾಚಾರದಂತಹ ಅಕ್ರಮ ಚಟುವಟಿಕೆ ನಡೆಸುವ ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಸೂಕ್ತ ಕಾನೂನು ಕ್ರಮ ತ್ವರಿತವಾಗಿ ಕೈಗೊಳ್ಳಲಾಗುವುದು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಎಚ್ಚರಿಕೆ ನೀಡಿದರು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲೆಯ ಎಲ್ಲ ಇಲಾಖೆಗಳ ಮುಖ್ಯಸ್ಥರ ಸಭೆ ನಡೆಸಿ ಅವರು ಮಾತನಾಡಿದರು.

ಶಿವಮೊಗ್ಗ ಜಿಲ್ಲೆಯಲ್ಲಿ ಕೆರೆಗಳ ಸಂರಕ್ಷಣೆ, ಒತ್ತುವರಿ ತೆರವು ಮತ್ತು ಪುನರುಜ್ಜೀವನ ಕುರಿತಾಗಿ ಲೋಕಾಯುಕ್ತ ಸಂಸ್ಥೆ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದೆ. ಕೆರೆಗಳ ಒತ್ತುವರಿ ತೆರವುಗೊಳಿಸಿ ಸಂರಕ್ಷಿಸಲು ಗುರಿ ನಿಗದಿಪಡಿಸಲಾಗಿದೆ. ನಿಯಮಿತವಾಗಿ ಈ ಕುರಿತು ವಿಚಾರಣೆ ನಡೆಸಲಾಗುವುದು. ಜಿಲ್ಲೆಯಲ್ಲಿ ರಾಜ್ಯದಲ್ಲಿಯೇ ಅತಿ ಹೆಚ್ಚು, 6000ಕ್ಕೂ ಹೆಚ್ಚು ಕೆರೆಗಳಿದ್ದು, ಇವುಗಳ ಸರ್ವೆ ಕಾರ್ಯ ಪೂರ್ಣಗೊಳಿಸಲು ಸೂಚನೆ ನೀಡಲಾಗಿದೆ. ಅದರ ಮೇರೆಗೆ ಈ ಕಾರ್ಯವನ್ನು ಕೈಗೊಂಡು ವರದಿ ಸಲ್ಲಿಸಬೇಕು. ಇದೇ ರೀತಿ ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿರುವ ಕೆರೆಗಳ ಸ್ಥಿತಿಗತಿ ಕುರಿತು ವರದಿ ಪ್ರತ್ಯೇಕವಾಗಿ ಸಲ್ಲಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಉದ್ಯೋಗ ಖಾತ್ರಿ:** ಗ್ರಾಮೀಣ ಪ್ರದೇಶದಲ್ಲಿ ಪ್ರತಿಯೊಬ್ಬರಿಗೂ ಉದ್ಯೋಗ ಕಲ್ಪಿಸಲು ಉದ್ಯೋಗ ಖಾತ್ರಿ ಯೋಜನೆಯ ಅನುಷ್ಠಾನ ಸರಿಯಾಗಿ ಆಗುತ್ತಿಲ್ಲ. ಈ ಕುರಿತು 5 ಲಕ್ಷ ಪ್ರಕರಣ ಲೋಕಾಯುಕ್ತದ ಮುಂದಿವೆ. ಯಾದಗಿರಿ ಜಿಲ್ಲೆಯಲ್ಲಿ ಪ್ರಕರಣಗಳ ವಿಲೇವಾರಿ ಮಾಡಲಾಗುತ್ತಿದೆ. ಉದ್ಯೋಗ ಖಾತ್ರಿ ಯೋಜನೆ ಕಾರ್ಯ ಸರಿಯಾದ ದಾಖಲೆಗಳನ್ನು ನಿರ್ವಹಿಸದ ಪಿಡಿಒಗಳ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಯೋಜನೆ ಅನುಷ್ಠಾನ ಸಮರ್ಪಕವಾಗಿ ನಿರ್ವಹಿಸದಿದ್ದರೆ ಇಲಾಖೆಯ ಎಲ್ಲ ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಹೇಳಿದರು.

**ವಸತಿ ಯೋಜನೆ ಅನುಷ್ಠಾನ:** ವಿವಿಧ ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮವಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ಈ ದೂರುಗಳ ವಿಚಾರಣೆ ಮಾಡಲಾಗುತ್ತಿದೆ. ಇದೇ ರೀತಿ ಪೌರಾಡಳಿತ, ಕೃಷಿ, ಆರೋಗ್ಯ ಕ್ಷೇತ್ರ ಸೇರಿ ಎಲ್ಲ ಇಲಾಖೆಗಳ ಜನಕಲ್ಯಾಣ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದರು.

**ಪಟ್ಟಿ ಸಿದ್ಧಪಡಿಸಲು ಸೂಚನೆ:** ಲೋಕಾಯುಕ್ತ ಸಂಸ್ಥೆಯಲ್ಲಿ ಪ್ರಸ್ತುತ ಪೂರ್ಣ ಪ್ರಮಾಣದ ಅಧಿಕಾರ ಇದ್ದು, ಇದು ನ್ಯಾಯಾಂಗ ವಿಭಾಗ, ಪೊಲೀಸ್ ವಿಭಾಗ, ಆಂತರಿಕ ಗುಪ್ತಚರ ವಿಭಾಗ, ಆಡಳಿತ ವಿಭಾಗ, ತಾಂತ್ರಿಕ ವಿಭಾಗ ಕಾರ್ಯ ನಿರ್ವಹಿಸುತ್ತಿದೆ. ಪ್ರತಿ ಜಿಲ್ಲೆಯಲ್ಲಿ ಜನಸಂಪರ್ಕಕ್ಕಾಗಿರುವ ಸರ್ಕಾರಿ ಅಧಿಕಾರಿ, ಸಿಬ್ಬಂದಿಯ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತಿದೆ. ಅವರ ಪ್ರತಿದಿನದ ದಾಖಲೆಗಳನ್ನು ಪಡೆದು ಭ್ರಷ್ಟ ವ್ಯಕ್ತಿ ಮತ್ತು ಹಾಳು ಎಲ್ಲ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಇದೇ ರೀತಿ ಉತ್ತಮವಾಗಿ ಕಾರ್ಯ ನಿರ್ವಹಿಸುವ ಅಧಿಕಾರಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯವನ್ನೂ ನಡೆಸಬೇಕಿದೆ ಎಂದು ಹೇಳಿದರು.

**ಎಚ್ಚರಿಕೆ:** ಜನರು ಭ್ರಷ್ಟಾಚಾರದ ವಿರುದ್ಧ ಹೋರಾಟದಲ್ಲಿ ಕೈಜೋಡಿಸಬೇಕು. ಇದೇ ವೇಳೆ ಕೆಲವರು ಸುಳ್ಳು ದೂರುಗಳನ್ನು ದಾಖಲಿಸಿ ವಸೂಲಿ ದಂಧೆ ಮಾಡುತ್ತಿರುವ ಬಗ್ಗೆ ದೂರು ಬರುತ್ತಿದ್ದು, ಅಂತಹ ಪ್ರಕರಣಗಳಲ್ಲಿ ಲೋಕಾಯುಕ್ತ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಎಚ್ಚರಿಸಿದರು.

ಜಿಲ್ಲಾಧಿಕಾರಿ ಡಾ.ಆರ್.ಸೆಲ್ವಮಣಿ, ಜಿಲ್ಲಾ ಪಂಚಾಯಿತಿ ಸಿಇಒ ಎನ್.ಡಿ. ಪ್ರಕಾಶ್, ಎಸಿಪಿ ಡಾ.ಕೆ.ಜಿ. ಹನುಮಂತಪ್ಪ, ಲೋಕಾಯುಕ್ತ ಡಿ.ವೈ.ಎಸ್.ಪಿ ಮೃತ್ಯುಂಜಯ, ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

“ವಿಜಯವಾಣಿ” ದಿನ ಪತ್ರಿಕೆ ದಿ: 07/01/2023

ವಿಜಯವಾಣಿ 7/1/23

# ಲೋಕಾದಿಂದ ಜಿಲ್ಲಾವಾರು ಭ್ರಷ್ಟರ ಪಟ್ಟಿ ಸಿದ್ಧ

## ಕಂಟಕವಾಗಿರುವ ಅಧಿಕಾರಿ, ಸಿಬ್ಬಂದಿ ಪತ್ತೆಗೆ ಕ್ರಮ | ನ್ಯಾ. ಬಿ.ಎಸ್.ಪಾಟೀಲ್ ಎಚ್ಚರಿಕೆ

■ ವಿಜಯವಾಣಿ ಸುದ್ದಿಜಾಲ ಶಿವಮೊಗ್ಗ

ಪ್ರತಿ ಜಿಲ್ಲೆಯಲ್ಲೂ ಜನಸಾಮಾನ್ಯರಿಗೆ ಕಂಟಕ (ನಟೋರಿಯಸ್) ಆಗಿರುವ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿ ಪಟ್ಟಿ ಸಿದ್ಧಪಡಿಸುತ್ತಿದ್ದು ಕಚೇರಿಗಳು ಅಥವಾ ಇಲಾಖೆಗಳ ಮೇಲೆ ದಿಢೀರ್ ದಾಳಿ ನಡೆಸಿ ಭ್ರಷ್ಟ ವ್ಯವಸ್ಥೆಯನ್ನು ಮಟ್ಟ ಹಾಕಲು ಲೋಕಾಯುಕ್ತ ಎಸ್ಪಿ, ಡಿವೈಎಸ್ಪಿಗಳಿಗೆ ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಹೇಳಿದರು.

■ ಸರ್ಕಾರಿ ಕಚೇರಿಗಳ ಮೇಲೆ ದಿಢೀರ್ ದಾಳಿಗೆ ಸೂಚನೆ

ಡಿಸಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆ ನಡೆಸಿದ ಅವರು, ಪ್ರಸ್ತುತ ಲೋಕಾಯುಕ್ತದಲ್ಲಿ ಪೂರ್ಣ ಪ್ರಮಾಣದ ಅಧಿಕಾರಿ-ಸಿಬ್ಬಂದಿ ಇದ್ದು ಅವರ ಸಹಾಯದಿಂದ ಭ್ರಷ್ಟರ ಆಸ್ತಿ-ಪಾಸ್ತಿ ಮುಟ್ಟುಗೋಲು ಹಾಕಿಕೊಳ್ಳಲು [illegible] ಎಂದರು.

ಬಾಕಿ ಪ್ರಕರಣಗಳನ್ನು ಬೇಗ ಮುಗಿಸುವ ಮೂಲಕ ಲೋಕಾಯುಕ್ತಕ್ಕೆ ಸರ್ಕಾರ ಬಲ ತುಂಬಿದೆ. 24ರಿಂದ 25 ಎಸ್ಪಿಗಳು, 48ರಿಂದ 50 ಡಿವೈಎಸ್ಪಿಗಳಿದ್ದಾರೆ. ನ್ಯಾಯಾಂಗ ವಿಭಾಗ, ಪೊಲೀಸ್ ವಿಭಾಗ, ಆಂತರಿಕ ಗುಪ್ತಚರ ವಿಭಾಗ, ಆಡಳಿತ ವಿಭಾಗ, ತಾಂತ್ರಿಕ ವಿಭಾಗ ಕಾರ್ಯ ನಿರ್ವಹಿಸುತ್ತಿವೆ. ಭ್ರಷ್ಟಾಚಾರ ಮುಕ್ತ ಸಮಾಜಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕಿದೆ ಎಂದು ಮನವಿ ಮಾಡಿದರು.

ಬಹಳಷ್ಟು ಅಧಿಕಾರಿಗಳು [illegible] ಸಂಪಾದನೆ ಮಾಡಿ ಬಂಗಲೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದಾರೆ. ಪ್ರಾಮಾಣಿಕವಾಗಿ ದುಡಿಯ [illegible] ಜನಸಾಮಾನ್ಯರ ತೆರಿಗೆಯಿಂದ [illegible] ಜೀವನ ನಡೆಸುವುದಕ್ಕೆ ನಾವು ನಾಚಬೇಕು. ಎಲ್ಲರೂ ಪ್ರಾಮಾಣಿಕರಾಗಿದ್ದರೂ [illegible] ಎಂದು ಎಚ್ಚರಿಕೆ ನೀಡಿದರು. ಡಿಸಿ ಡಾ. ಆರ್.ಸೆಲ್ವಮಣಿ, ಜಿಪಂ ಸಿಇಒ ಎನ್.ಡಿ.ಪ್ರಕಾಶ್, ಮಹಾನಗರ ಪಾಲಿಕೆ ಆಯುಕ್ತ ಡಾ. ಕೆ.ವಿ.ಹನುಮಂತಪ್ಪ, ಲೋಕಾಯುಕ್ತ ಎಸ್ಪಿ ಎನ್.ವಾಸುದೇವರಾಮ, ಲೋಕಾಯುಕ್ತ ಡಿವೈಎಸ್ಪಿ ಎನ್.ಮೃತ್ಯುಂಜಯ ಇದ್ದರು.



ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯಲ್ಲಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ್, ಡಾ. ಆರ್. ಸೆಲ್ವಮಣಿ, ಎನ್.ಡಿ.ಪ್ರಕಾಶ್, ಎನ್.ವಾಸುದೇವರಾಮ, ಡಾ. ಕೆ.ವಿ.ಹನುಮಂತಪ್ಪ, ಎನ್.ಮೃತ್ಯುಂಜಯ ಇದ್ದರು.

### ವಸತಿ ಯೋಜನೆಯಲ್ಲೂ ಅಕ್ರಮ

ವಿವಿಧ ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮವಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ಈ ದೂರುಗಳ ವಿಚಾರಣೆಯನ್ನು ಮಾಡಲಾಗುತ್ತಿದೆ. ಇದೇ ರೀತಿ ಕಂದಾಯ, ಕೃಷಿ, ಆರೋಗ್ಯ ಕ್ಷೇತ್ರ ಸೇರಿದಂತೆ ಎಲ್ಲ ಇಲಾಖೆಗಳು ಜನಕಲ್ಯಾಣ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಜನರು ಭ್ರಷ್ಟಾಚಾರದ ವಿರುದ್ಧ ಹೋರಾಟದಲ್ಲಿ ಕೈಜೋಡಿಸಬೇಕು. ಇದೇ ವೇಳೆ ಕೆಲವರು ಸುಳ್ಳು ದೂರುಗಳನ್ನು ದಾಖಲಿಸಿ ಬ್ಲ್ಯಾಕ್‌ಮೇಲ್ ಮಾಡುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ಅಂತಹ ಪ್ರಕರಣಗಳಲ್ಲಿ ಲೋಕಾಯುಕ್ತ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಬಿ.ಎಸ್.ಪಾಟೀಲ್ ಎಚ್ಚರಿಸಿದರು.

### ಕೆರೆ ಸರ್ವೆ, ಒತ್ತುವರಿ ತೆರವು ಗುರಿ ದ್ವಿಗುಣ

ರಾಜ್ಯದ ಕರ್ನಾಟಕ ಭಾಗದಲ್ಲಿ 150ರಿಂದ 200 ಕೆರೆಗಳಿವೆ. ಆದರೆ 6,600ಕ್ಕೂ ಅಧಿಕ ಕೆರೆಗಳನ್ನು ಹೊಂದಿರುವ ಶಿವಮೊಗ್ಗ ಜಿಲ್ಲೆಯು ಜನತೆ ನಿಜಕ್ಕೂ ಭಾಗ್ಯವಂತರು. ಪೂರ್ವಿಕರು ನಿರ್ಮಿಸಿರುವ ಕೆರೆಗಳನ್ನು ಜೀವಂತವಾಗಿಡಬೇಕು. ಆ ನಿಟ್ಟಿನಲ್ಲಿ ಕೆರೆಗಳ ಸಂರಕ್ಷಣೆ, ಒತ್ತುವರಿ ತೆರವು ಮತ್ತು ಪುನಶ್ಚೇತನ ಮಾಡುವುದಕ್ಕೆ ಆಡಳಿತ ಯಂತ್ರ ವಿಶೇಷ ಗಮನ ಹರಿಸಬೇಕು ಎಂದು ಬಿ.ಎಸ್.ಪಾಟೀಲ್ ಸೂಚನೆ ನೀಡಿದರು. 2018ರಲ್ಲಿ ಕೆರೆ ಒತ್ತುವರಿ ಸಂಬಂಧ ಲೋಕಾಯುಕ್ತ ಸಂಸ್ಥೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿತ್ತು. ಕೆರೆಗಳ ಒತ್ತುವರಿ ತೆರವುಗೊಳಿಸಿ ಸಂರಕ್ಷಿಸಲು ಗುರಿ ನಿಗದಿಪಡಿಸಿದ್ದು ಇದುವರೆಗೆ ಶೇ. 40 ಕೆರೆಗಳ ಸರ್ವೆ ಆಗಿದ್ದು, ಬೇಗ ಶೀಘ್ರವಾಗಿ ಸರ್ವೆ ಮಾಡಬೇಕು. ಒತ್ತುವರಿ ತೆರವು, ಪುನಶ್ಚೇತನ ಕಾರ್ಯದ ಗುರಿ ದುಪ್ಪಟ್ಟಾಗಬೇಕು. ಎಲ್ಲ ತಹಸೀಲ್ದಾರ್‌ಗಳು ಮತ್ತು ಸರ್ವೆ ಅಧಿಕಾರಿಗಳು ಮುತುವರ್ಜಿ ವಹಿಸಿ ಕೆಲಸ ಮಾಡಬೇಕು. ಅಲ್ಲದೆ ಮುಂದೆ ಈ ಕಾರ್ಯ ಮತ್ತಷ್ಟು ಶೀಘ್ರಗೊಂಡು ವರದಿ ಸಲ್ಲಿಸಬೇಕು. ಬಾಕಿ ಇರುವ [illegible] ಕೆರೆಗಳ ಸ್ಥಿತಿಗತಿ ಕುರಿತು ಒಂದು ತಿಂಗಳೊಳಗೆ ಪ್ರತ್ಯೇಕವಾಗಿ ವರದಿ ಸಲ್ಲಿಸುವಂತೆ ಆಯುಕ್ತ ಕೆ.ಮಾಯಣ್ಣಗೌಡ ಅವರಿಗೆ ಸೂಚಿಸಿದರು.

### ಸಮರೋಪಾದಿ ಕೆಲಸ ಮಾಡಿ

ಕೋವಿಡ್ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರಿ ಅಧಿಕಾರಿಗಳು-ಸಿಬ್ಬಂದಿ ಸಾಕಷ್ಟು ಶ್ರಮ ವಹಿಸಿ ಕೆಲಸ ಮಾಡಿದ್ದರು. ಹಾಗಾಗಿ ಸಿಬ್ಬಂದಿ ಕೊರತೆ ಇದ್ದರೂ ಇರುವ ಸಂಪನ್ಮೂಲ ಬಳಕೆ ಮಾಡಿಕೊಂಡು ಯುದ್ಧೋಪಾದಿಯಲ್ಲಿ ಕೆಲಸ ಮಾಡಬೇಕು. ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡಬೇಕು ಮತ್ತು ಶ್ರಮವನ್ನು ಗುರುತಿಸಬೇಕು. ನೌಕರರು ತಮ್ಮ ಕೆಲಸದ ಬಗ್ಗೆ ಗೌರವ, ಶ್ರದ್ಧೆ ಹೊಂದಿರಬೇಕು. ಸಂಪಾದನೆ ಮಾಡುವುದೇ ಉದ್ದೇಶ ಆಗಬಾರದು. ಆಸೆ-ಆಮಿಷಗಳಿಗೆ ಒಳಗಾಗಬಾರದು. ನಿಷ್ಠೆಯಿಂದ ಕೆಲಸ ಮಾಡಿದಾಗ ಒಳ್ಳೆಯ ವಾತಾವರಣ ಸೃಷ್ಟಿ ಆಗಲಿದೆ. ಇಲ್ಲವಾದರೆ ಇಡೀ ವ್ಯವಸ್ಥೆಯೇ ಕಲುಷಿತವಾಗಲಿದೆ ಎಂದು ಬಿ.ಎಸ್.ಪಾಟೀಲ್ ಹೇಳಿದರು.

### ಔಷಧದಲ್ಲಿ ಹಣ ಮಾಡುವುದು ದ್ರೋಹ

ಔಷಧದ ಹೆಸರಲ್ಲಿ ಜನರಿಗೆ ಮೋಸ ಮಾಡಿ ಹಣ ಗಳಿಸುವುದು ದ್ರೋಹದ ಕೆಲಸ. ಇದನ್ನು ಯಾರೂ ಕ್ಷಮಿಸಲಾರರು ಎಂದು ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ಕಿಡಿಕಾರಿದರು. ಗ್ರಾಮೀಣ ಭಾಗಕ್ಕೆ ವೈದ್ಯರು ಹೋಗುತ್ತಿಲ್ಲ. ಜನರಿಗೆ ಸರಿಯಾಗಿ ವೈದ್ಯಕೀಯ ಸೇವೆ ಸಿಗುತ್ತಿಲ್ಲ ಎಂದು ದೂರುಗಳು ಬರುತ್ತಿದ್ದು ಇನ್ಮುಂದೆ ಲೋಕಾಯುಕ್ತ ಅಧಿಕಾರಿಗಳು ದಿಢೀರ್ ಭೇಟಿ ನೀಡಿ ಪರಿಶೀಲಿಸುವರು. ವೈದ್ಯರು ಕರ್ತವ್ಯದಲ್ಲಿ ಇಲ್ಲದಿದ್ದರೆ ಆನ್‌ಲೈನ್‌ನಲ್ಲೇ ದೂರು ದಾಖಲಿಸುವರು. ಅಂತಹ ಪಡೆಯುವುದು ಇತ್ಯಾದಿ ಕಂಡುಬಂದರೆ ಸ್ಥಳದಲ್ಲೇ ಕ್ರಮ ಕೈಗೊಳ್ಳುವಂತೆ ಲೋಕಾಯುಕ್ತ ಎಸ್ಪಿ ಎನ್.ವಾಸುದೇವರಾಮ ಅವರಿಗೆ ಸೂಚನೆ ನೀಡಿದರು.

# ವಿವಿಧ ಕಚೇರಿಗಳಿಗೆ ಲೋಕಾಯುಕ್ತ ಭೇಟಿ

## ಉಪನೋಂದಣಿ ಕಚೇರಿ, ಪಶುಪಾಲನಾ ಇಲಾಖೆ ಕಾರ್ಯವೈಖರಿ ಪರಿಶೀಲನೆ

ಪ್ರಜಾವಾಣಿ ವಾರ್ತೆ

ವಿಜಯಪುರ: ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಶುಕ್ರವಾರ ನಗರದ ಉಪ ನೋಂದಣಿ ಕಚೇರಿ, ಪಶುಪಾಲನಾ ಇಲಾಖೆಯ ಎನಿಮಲ್ ಬರ್ಥ್ ಕಂಟ್ರೋಲ್ ಸೆಂಟರ್‌ಗಳಿಗೆ ಭೇಟಿ ನೀಡಿ ಕಚೇರಿ ಕಾರ್ಯವೈಖರಿಗಳ ಕುರಿತು ಪರಿಶೀಲನೆ ನಡೆಸಿದರು.

ನಗರದ ಜಿಲ್ಲಾಸ್ಪತ್ರೆ ಆವರಣದಲ್ಲಿರುವ ಹೈಟೆಕ್ ಪಂಚಕರ್ಮ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಸರ್ಕಾರದಿಂದ ₹3 ಕೋಟಿ ಖರ್ಚು ಮಾಡಿ ಕಟ್ಟಡ ನಿರ್ಮಿಸಿದರೂ ಸಹ ಯಾವುದೇ ವೈದ್ಯಾಧಿಕಾರಿ, ಸಿಬ್ಬಂದಿ, ತಂತ್ರಜ್ಞರ ನೇಮಕವಾಗದೇ ಸರ್ಕಾರದ ಹಣ ವ್ಯಯಿಸಿ ಇದರ ಲಾಭ ಸಾರ್ವಜನಿಕರಿಗೆ ದೊರೆಯದೇ ಇರುವುದರ ಕುರಿತು ಅಸಮಾಧಾನ ವ್ಯಕ್ತಪಡಿಸಿದರು. ಈ ಕುರಿತು ಸ್ವಯಂ ಪ್ರೇರಿತ ದೂರು ದಾಖಲಿಸುವುದಾಗಿ ಹೇಳಿದರು.

ಉಪ ನೋಂದಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಶೋಧನಾ ಪ್ರಮಾಣ ಪತ್ರ (ಇಸಿ) ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಕುರಿತು ಸಾರ್ವಜನಿಕ ದೂರಿನ ಹಿನ್ನಲೆಯಲ್ಲಿ ಸಾರ್ವಜನಿಕರು ಎಲ್ಲ ತಮ್ಮ ಕಾರ್ಯಗಳನ್ನು ಬಿಟ್ಟು, ಸರ್ಕಾರಿ ಕಚೇರಿಗಳಿಗೆ ಬಂದಾಗ ಪಾರದರ್ಶಕವಾಗಿ ಕಾರ್ಯನಿರ್ವಹಿಸುವ ಮೂಲಕ ತಾಂತ್ರಿಕ ತೊಂದರೆಗಳನ್ನು ನಿವಾರಿಸಿಕೊಂಡು ಶೋಧನಾ ಪ್ರಮಾಣ ಪತ್ರ ಸೇರಿದಂತೆ ಯಾವುದೇ ಕಾಗದಪತ್ರಗಳನ್ನು ನೀಡಲು ಕ್ರಮ ವಹಿಸಬೇಕು. ಶೋಧನಾ ಪ್ರಮಾಣ ಪತ್ರ ನೀಡಲು ಆನ್‌ಲೈನ್ ಅರ್ಜಿ ಸಲ್ಲಿಸಿ, ಬಾಂಡ್‌ರೈಟರ್ ಬಳಿಗೆ ಹೋಗಿ ಅರ್ಜಿ ಸಲ್ಲಿಸಿ ಎಂದು ವಿಳಂಬ ಮಾಡದೇ ಇರುವ ಸಮಸ್ಯೆಗಳನ್ನು ಇತ್ಯರ್ಥಪಡಿಸಿಕೊಂಡು ಸರಾಗವಾಗಿ ಸಾರ್ವಜನಿಕರಿಗೆ ಸೇವೆ ಸಲ್ಲಿಸುವಂತೆ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು.



ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಶುಕ್ರವಾರ ನಗರದ ವಿವಿಧ ಕಚೇರಿಗಳಿಗೆ ಭೇಟಿ ನೀಡಿ ಕಾರ್ಯವೈಖರಿಗಳ ಕುರಿತು ಪರಿಶೀಲನೆ ನಡೆಸಿದರು.

ಎನಿಮಲ್ ಬರ್ಥ್ ಕಂಟ್ರೋಲ್ ಸೆಂಟರ್‌ಗೆ ಭೇಟಿ ನೀಡಿದ ನ್ಯಾಯಮೂರ್ತಿಗಳು ಕೇಂದ್ರದಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿ, ನಗರದಲ್ಲಿ ನಾಯಿಗಳನ್ನು ಕೇಂದ್ರಕ್ಕೆ ತಂದು ಶಸ್ತ್ರ ಚಿಕಿತ್ಸೆ ನೀಡಿ, ನಾಲ್ಕು ದಿನ ಆರೈಕೆ ಮಾಡಿ, ರ್‍ಯಾಬಿಸ್ ಲಸಿಕೆ ನೀಡುವ ಅಚ್ಚುಕಟ್ಟು ನಿರ್ವಹಣೆ ಕುರಿತು ಪ್ರಶಂಸೆ ವ್ಯಕ್ತಪಡಿಸಿದರು.

ಕೇಂದ್ರದ ಪಶು ವೈದ್ಯಾಧಿಕಾರಿ ಡಾ.ಆನಂದ ನಾವದಗಿ ಮಾತನಾಡಿ, ನಗರದಲ್ಲಿ ಪ್ರತಿ ದಿನ 20 ನಾಯಿಗಳ ಗುರಿಯಂತೆ ಒಟ್ಟು ವರ್ಷದಲ್ಲಿ 5500 ರಿಂದ 6000 ನಾಯಿಗಳಿಗೆ ಸಂತಾನ ಶಸ್ತ್ರ ಚಿಕಿತ್ಸೆ ಗುರಿ ಹೊಂದಲಾಗಿದೆ. ಈ ಕೇಂದ್ರದಿಂದ ಸುಮಾರು 600 ನಾಯಿಗಳ ಶಸ್ತ್ರ ಚಿಕಿತ್ಸೆಗೊಳಪಡಿಸಿ ರೇಬಿಸ್ ಲಸಿಕೆ ನೀಡಿ, ಮತ್ತೆ ಅದೇ ಜಾಗದಲ್ಲಿ ಬಿಡಲಾಗಿದೆ. ಕರ್ನಾಟಕದಲ್ಲಿಯೇ ವಿಜಯಪುರ ಕೇಂದ್ರ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಲೋಕಾಯುಕ್ತ ಎಸ್.ಪಿ. ಅನಿತಾ ಹದ್ದಣ್ಣವರ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಪಶು ಸಂಗೋಪನಾ ಉಪನಿರ್ದೇಶಕ ಎ.ಎಸ್.ಘೋಣಸಗಿ, ಪರಿಸರ ಎಂಜಿನಿಯರ್ ಅಶೋಕ ಸಜ್ಜನ, ಜಿಲ್ಲಾ ನೊಂದಣಾಧಿಕಾರಿ ಜಿ.ಆರ್.ನಾಡಗೌಡ, ಹಿರಿಯ ಉಪ ನೊಂದಣಾಧಿಕಾರಿ ಬಿ.ಎಸ್.ಬಿರಾದಾರ, ಲೋಕಾಯುಕ್ತ ಡಿವೈಎಸ್‌ಪಿ ಅರುಣ ನಾಯಕ, ಸಿಪಿಐ ಆನಂದ ಟಕ್ಕಣ್ಣವರ, ಆನಂದ ಡೋಣಿ ಹಾಗೂ ಇತರರು ಇದ್ದರು.

ಪತ್ರಿಕೆ - (ಪ್ರ) ಜಾವಾಣಿ

# ಕಲುಷಿತ ನೀರು ಪೂರೈಕೆಯಾಗದಿರಲಿ

## ವಿವಿಧ ಅಧಿಕಾರಿಗಳೊಂದಿಗೆ ಸಭೆ | ಪಾಟೀಲ ಖಡಕ್ ಸೂಚನೆ

**ವಿಜಯಪುರ:** ಜಿಲ್ಲೆಯಲ್ಲಿ ಕಲುಷಿತ ನೀರಿನ ಸಮಸ್ಯೆ ಆಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ ಎಸ್ ಪಾಟೀಲ್ ಹೇಳಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಕಲುಷಿತ ನೀರಿನ ಘಟನೆಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು. ಗ್ರಾಮೀಣಾಭಿವೃದ್ಧಿ ಇಲಾಖೆ ಈ ವಿಚಾರದಲ್ಲಿ ನಿರ್ಲಕ್ಷ್ಯ ಮಾಡಬಾರದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಜಿಲ್ಲೆಯ ಮಕ್ಕಳಿಗೆ ಉತ್ಕೃಷ್ಟ, ಗುಣಮಟ್ಟವಾದ ಶಿಕ್ಷಣ, ವಿವಿಧ ವಸತಿ ನಿಲಯಗಳ ವಿದ್ಯಾರ್ಥಿಗಳು ಹಾಗೂ ಅಂಗನವಾಡಿ ಮಕ್ಕಳ ಆರೋಗ್ಯ ಕಾಳಜಿ, ತ್ಯಾಜ್ಯ ನಿರ್ವಹಣೆ, ನಗರದ ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಜನರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಮಾದರಿಯಾಗಿ ಕಾರ್ಯನಿರ್ವಹಿಸುವ ಮೂಲಕ ಮಾದರಿ ಜಿಲ್ಲೆಯನ್ನಾಗಿಸಲು ಶ್ರಮಿಸುವಂತೆ ಅಧಿಕಾರಿಗಳಿಗೆ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಸೂಚನೆ ನೀಡಿದರು.

ಸಾರ್ವಜನಿಕ ಸಮಸ್ಯೆಗಳಿಗೆ ತತಕ್ಷಣ ಸ್ಪಂದಿಸಬೇಕು. ಜಿಲ್ಲೆಯ ಎಲ್ಲ ತಾಲೂಕಾ ಆಸ್ಪತ್ರೆಗಳು ಜನಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಅಂಗನವಾಡಿ ಕೇಂದ್ರಗಳಿಗೆ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಂದಿನ ಪೀಳಿಗೆಗೆ ಕೆರೆ, ಕಟ್ಟೆ, ಬಾವಿ ಸೇರಿದಂತೆ ಜಲಮೂಲಗಳನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಇದರ ಸಂರಕ್ಷಣ ಜೊತೆಗೆ ಒತ್ತುವರಿಯಾಗಂದಂತೆ ಕ್ರಮ ವಹಿಸಬೇಕು. ಅಗತ್ಯವಿದ್ದಲ್ಲಿ ನಿರ್ಮಾಣ ಮಾಡಿಕೊಂಡು ಸುಸಜ್ಜಿತವಾಗಿಟ್ಟುಕೊಳ್ಳಬೇಕು. ಅಗತ್ಯವಿದ್ದೆಡೆ ನೀರು ಸಂರಕ್ಷಣಾ ಮಾಡಿ ಕಲುಷಿತವಾಗದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿನ ವಿ?ಯದಲ್ಲಿ ಯಾವುದೇ ಲೋಪವಾಗದಂತೆ ಕಾರ್ಯನಿರ್ವಹಿಸಿ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ವಹಿಸಬೇಕು. ಜಿಲ್ಲೆಯಲ್ಲಿನ ಕೆರೆ ಕಟ್ಟೆ ಮತ್ತು ರಾಜ ಕಾಲುವೆ ನಿರ್ವಹಣೆಗೆ ಜೊತೆಗೆ ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



> ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಪರಿಕರಗಳನ್ನು ದಾಸ್ತಾನಿಟ್ಟುಕೊಂಡು ರೈತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು. ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆ ಇತ್ಯರ್ಥಗೊಳಿಸಿ.
>
> ■ ಬಿ.ಎಸ್.ಪಾಟೀಲ್
> **ಲೋಕಾಯುಕ್ತ ನ್ಯಾಯಮೂರ್ತಿ**

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಮಾತನಾಡಿದರು.

ಸಭೆಯಲ್ಲಿ ಲೋಕಾಯುಕ್ತ ಎಸ್.ಪಿ. ಅನಿತಾ ಹದ್ದಣ್ಣವರ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಸಂತೋಷ ಕುಂದರ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ವಲಯ ಅರಣ್ಯಾಧಿಕಾರಿ ಪ್ರಶಾಂತ ಇದ್ದರು.

### ಮಕ್ಕಳಿಗೆ ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ನೀಡಿ

ಮಕ್ಕಳ ಭವಿಷ್ಯ ರೂಪಿಸುವುದೆಂದರೆ ರಾಷ್ಟ್ರದ ಭವಿಷ್ಯ ರೂಪಿಸಿದಂತೆ. ಮಗುವಿನ ಆರೋಗ್ಯ ಬಹುಮುಖ್ಯವಾಗಿರುತ್ತದೆ. ವಿದ್ಯೆ ನೀಡುವ ಜೊತೆಗೆ ಮಕ್ಕಳ ಆರೋಗ್ಯ ವ್ಯವಸ್ಥೆ ಕುರಿತು ಕಾಳಜಿ ವಹಿಸಬೇಕು. ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವಂತಹ ಶಿಕ್ಷಣ ನೀಡಬೇಕು. ಹೆಮ್ಮರವಾದ ಗುರಿ ಹೊಂದುವಂತೆ ಪ್ರೇರೆಪಿಸಬೇಕು. ಪರಿಧಿ ಹಾಕಿಕೊಳ್ಳದೇ ವಿಸ್ತರಿಸಿಕೊಳ್ಳಬೇಕು. ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಜಿಲ್ಲೆಯ ಶೈಕ್ಷಣಿಕ ಉನ್ನತಿಗೆ ಶ್ರಮಿಸಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್ .ಪಾಟೀಲ್ ಸೂಚನೆ ನೀಡಿದರು.

ಹೊಸದಿಗಂತ

ಪತ್ರಿಕೆ:- ಹೊಸ ದಿಗಂತ

ಸಂಯುಕ್ತ ಕರ್ನಾಟಕ

## ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಸೂಚನೆ

# ವಿದ್ಯಾರ್ಥಿಗಳ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ



ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಜಿಲ್ಲೆಯ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ವಿಜಯಪುರ: ಜಿಲ್ಲೆಯ ಮಕ್ಕಳಿಗೆ ಉತ್ಕೃಷ್ಟ, ಗುಣಮಟ್ಟವಾದ ಶಿಕ್ಷಣ, ವಿವಿಧ ವಸತಿ ನಿಲಯಗಳ ವಿದ್ಯಾರ್ಥಿಗಳು ಹಾಗೂ ಅಂಗನವಾಡಿ ಮಕ್ಕಳ ಆರೋಗ್ಯ ಕಾಳಜಿ, ತ್ಯಾಜ್ಯ ನಿರ್ವಹಣೆ, ನಗರದ ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಜನರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಬೇಕು ಎಂದು ಅಧಿಕಾರಿಗಳಿಗೆ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಕ್ಕಳ ಭವಿಷ್ಯ ರೂಪಿಸುವುದೆಂದರೆ ರಾಷ್ಟ್ರದ ಭವಿಷ್ಯ ರೂಪಿಸಿದಂತೆ. ಮಗುವಿನ ಆರೋಗ್ಯ ಬಹುಮುಖ್ಯವಾಗಿರುತ್ತದೆ. ವಿದ್ಯೆ ನೀಡುವ ಜೊತೆಗೆ ಮಕ್ಕಳ ಆರೋಗ್ಯ ವ್ಯವಸ್ಥೆ ಕುರಿತು ಕಾಳಜಿ ವಹಿಸಬೇಕು. ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವಂತಹ ಶಿಕ್ಷಣ ನೀಡಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯ ಎಲ್ಲ ತಾಲೂಕಾ ಆಸ್ಪತ್ರೆಗಳು ಜನಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಅಂಗನವಾಡಿ ಕೇಂದ್ರಗಳಿಗೆ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ, ಅಲ್ಲಿನ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳು ವ್ಯವಸ್ಥಿತವಾಗಿರುವಂತೆ ನೋಡಿಕೊಳ್ಳಬೇಕು. ಸಾರ್ವಜನಿಕರಿಂದ ಯಾವುದೇ ದೂರುಗಳು ಬರದ ಹಾಗೆ ಉತ್ತಮ ವೈದ್ಯಕೀಯ ವ್ಯವಸ್ಥೆ ಒದಗಿಸಬೇಕು. ವೈದ್ಯರ ಕೊರತೆ ಇರುವ ಬಗ್ಗೆ ವರದಿ ನೀಡಬೇಕು. ಯಾವುದೇ ಸಮಸ್ಯೆ ಉಲ್ಬಣವಾಗದಂತೆ ಸಾರ್ವಜನಿಕರಿಗೆ ಸೇವೆ ಒದಗಿಸಬೇಕು. ಖಾಸಗಿ ಆಸ್ಪತ್ರೆಗಳನ್ನು ಮೀರಿಸುವಂತಹ ವೈದ್ಯಕೀಯ ಸೇವೆ ನೀಡುವುದರ ಮೂಲಕ ಜನರಲ್ಲಿ ಸರ್ಕಾರಿ ಆಸ್ಪತ್ರೆಗಳ ಕುರಿತು ಆತ್ಮವಿಶ್ವಾಸ ಹೆಚ್ಚಿಸಬೇಕು ಎಂದು ಹೇಳಿದರು.

ಮುಂದಿನ ಪೀಳಿಗೆಗೆ ಕೆರೆ, ಕಟ್ಟೆ, ಬಾವಿ ಸೇರಿದಂತೆ ಜಲಮೂಲಗಳನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಇದರಸಂರಕ್ಷಣೆಜೊತೆಗೆಒತ್ತುವರಿಯಾಗಂದಂತೆ ಕ್ರಮ ವಹಿಸಬೇಕು. ಅಗತ್ಯವಿದ್ದಲ್ಲಿ ನಿರ್ಮಾಣ ಮಾಡಿಕೊಂಡು ಸುಸಜ್ಜಿತವಾಗಿಟ್ಟುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

### ಸ್ವಚ್ಛತೆಗೆ ಆದ್ಯತೆ...

ಘನತ್ಯಾಜ್ಯ ವಿಲೇವಾರಿಯಲ್ಲಿ ಶ್ರದ್ಧೆಯಿಂದ ಕೆಲಸ ಮಾಡಿ, ಸಾರ್ವಜನಿಕರಲ್ಲಿ ನಮ್ಮ ನಗರ ಎಂಬ ಭಾವನೆ ಮೂಡಬೇಕು. ಈ ದಿಸೆಯಲ್ಲಿ ಸ್ವಯಂ ಸೇವಕರನ್ನು ಬಳಸಿಕೊಂಡು ಅಚ್ಚುಕಟ್ಟಾಗಿ ತ್ಯಾಜ್ಯ ನಿರ್ವಹಣೆ ಮಾಡಬೇಕು. ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಬಯಲು ಶೌಚ ಮುಕ್ತ ಗ್ರಾಮಗಳನ್ನಾಗಿಸಲು ಅಧಿಕಾರಿಗಳು ಜನರೊಂದಿಗೆ ಬೆರೆತು ಜನರ ಮನವೊಲಿಸುವ ಪ್ರಯತ್ನ ಮಾಡಬೇಕು.

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಪರಿಕರಗಳನ್ನು ದಾಸ್ತಾನಿಟ್ಟುಕೊಂಡು ರೈತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು. ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆ ಇತ್ಯರ್ಥಕ್ಕೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ, ಜಿಲ್ಲೆಯ ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಿಷನ್ ವಿದ್ಯಾಮರ ಮೂಲಕ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಲಾಗುತ್ತಿದೆ. ಒನಕೆ ಓಬವ್ವ ಕರಾಟೆ ತರಬೇತಿ, ಬಿಸಿಎಂ ಹಾಸ್ಟೆಲ್‌ನ ಯಲಗೂರೇಶ ನಾಯಕ ಎಂಬ ವಿದ್ಯಾರ್ಥಿ ಐಎಎಸ್ ರ‍್ಯಾಂಕ್ ಪಡೆದಿದ್ದು, ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ. ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ಪಾಸಾದ 60 ಜನ ವಿದ್ಯಾರ್ಥಿಗಳಿಗೆ ಎರಡು ದಿನ ಶೈಕ್ಷಣಿಕ ಪ್ರವಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನದ ಬಿಸಿಯೂಟ ತಯಾರಿಸುವ ಸುಮಾರು 5580 ಸಿಬ್ಬಂದಿಗಳಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ತಯಾರಿಸಿದ ಎಫ್ರಾನ್-ಸಮವಸ್ತ್ರಗಳನ್ನು ವಿತರಿಸುವ ಮೂಲಕ ಶುದ್ಧ, ಸ್ವಚ್ಛ ಆಹಾರ ತಯಾರಿಕೆ ಜೊತೆಗೆ ಶಿಸ್ತುಬದ್ಧತೆ ಪ್ರದರ್ಶನದೊಂದಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಆರ್ಥಿಕತೆಯನ್ನು ಸದೃಢಗೊಳಿಸಲು ಪ್ರಯತ್ನಿಸಲಾಗಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಈ ಬಾರಿ ಜಿಲ್ಲೆ 11ನೇ ರ‍್ಯಾಂಕ್ ಪಡೆಯುವ ಮೂಲಕ ಶೈಕ್ಷಣಿಕ ಗುಣಮಟ್ಟದ ಸುಧಾರಿಸುವ ನಿಟ್ಟಿನಲ್ಲಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಲೋಕಾಯುಕ್ತ ಎಸ್‌ಪಿ ಅನಿತಾ ಹದ್ದಣ್ಣವರ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಸಂತೋಷ ಕುಂದರ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ವಲಯ ಅರಣ್ಯಾಧಿಕಾರಿ ಪ್ರಶಾಂತ ಸೇರಿದಂತೆ ವಿವಿಧ ಅಧಿಕಾರಿಗಳು ಇದ್ದರು.

ಪತ್ರಿಕೆ- ಸಂಯುಕ್ತ ಕರ್ನಾಟಕ
ದಿನಾಂಕ:- 10. ಜೂನ್ 2023

# ಕೆರೆ ಪುನಶ್ಚೇತನ, ಬಯಲು ಶೌಚಮುಕ್ತ ಜಿಲ್ಲೆಯನ್ನಾಗಿಸಿ

■ **ವಿಕ ಸುದ್ದಿಲೋಕ** ವಿಜಯಪುರ

ಜಿಲ್ಲೆಯಾದ್ಯಂತ ಕೆರೆಗಳ ಸಮೀಕ್ಷೆ ಕೈಗೊಂಡು ಒತ್ತುವರಿ ತೆರವುಗೊಳಿಸಿ ಪುನಶ್ಚೇತನಗೊಳಿಸಿ, ಬಯಲು ಶೌಚ ಮುಕ್ತ ಜಿಲ್ಲೆಯನ್ನಾಗಿಸಲು ಶ್ರಮಿಸಿ. ಕುಡಿಯುವ ನೀರು ಕಲುಷಿತಗೊಳ್ಳದಂತೆ ಕ್ರಮ ವಹಿಸಿ. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಮಾದರಿ ಜಿಲ್ಲೆಯನ್ನಾಗಿಸಲು ಶ್ರಮಿಸುವಂತೆ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಧಿಕಾರಿಗಳಿಗೆ ಸೂಚನೆ ನೀಡಿದರು.



ವಿಜಯಪುರದಲ್ಲಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಪ್ರಗತಿ ಪರಿಶೀಲನೆ ಸಭೆ ನಡೆಸಿದರು.

ವಿಜಯ ಕರ್ನಾಟಕ

## ಲೋಕಾಯುಕ್ತರಿಂದ ಬಿ.ಎಸ್.ಪಾಟೀಲರಿಂದ ಪ್ರಗತಿ ಪರಿಶೀಲನೆ

ನಗರದ ಜಿಪಂ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ಸಭೆ ನಡೆಸಿದ ಅವರು, ಮಕ್ಕಳ ಆರೋಗ್ಯ ವ್ಯವಸ್ಥೆ ಕುರಿತು ಕಾಳಜಿ ವಹಿಸಿ, ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವಂಥ ಶಿಕ್ಷಣ ನೀಡಬೇಕು. ಜಿಲ್ಲೆಯ ಶೈಕ್ಷಣಿಕ ಉನ್ನತಿಗೆ ಶ್ರಮಿಸಬೇಕು ಎಂದು ಸೂಚನೆ ನೀಡಿದರು.

ವಸತಿ ನಿಲಯಗಳಲ್ಲಿ ಸ್ವಚ್ಛತೆ ಕಾಯ್ದುಕೊಳ್ಳಬೇಕು. ಕಲೆ, ಸಾಹಿತ್ಯ ಪಠ್ಯೇತರ ಚಟುವಟಿಕೆಗಳನ್ನು ಕೈಗೊಂಡು ವಸತಿ ಶಾಲೆ, ವಸತಿ ನಿಲಯಗಳಲ್ಲಿ ಮಕ್ಕಳಲ್ಲಿ ಸೃಜನಾತ್ಮಕತೆ ಹುಟ್ಟು ಹಾಕುವಂತೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಬೇಕು. ತಾಲೂಕು ಆಸ್ಪತ್ರೆಗಳು ಜನಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆ ನೀಡಬೇಕು. ಅಂಗನವಾಡಿ ಕೇಂದ್ರಗಳಿಗೆ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಮೂಲ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸುವಂತೆ ನಿರ್ದೇಶನ ನೀಡಿದರು.

ಸರಕಾರಿ ಆಸ್ಪತ್ರೆಗಳು ವ್ಯವಸ್ಥಿತವಾಗಿರುವಂತೆ ನೋಡಿಕೊಳ್ಳಬೇಕು. ಸಾರ್ವಜನಿಕರಿಂದ ದೂರು ಬರದ ಹಾಗೆ ಉತ್ತಮ ವೈದ್ಯಕೀಯ ವ್ಯವಸ್ಥೆ ಒದಗಿಸಬೇಕು. ವೈದ್ಯರ ಕೊರತೆ ಬಗ್ಗೆ ವರದಿ ನೀಡಬೇಕು. ಯಾವುದೇ ಸಮಸ್ಯೆ ಉಲ್ಬಣವಾಗದಂತೆ ಸೇವೆ ಒದಗಿಸಬೇಕು. ಖಾಸಗಿ ಆಸ್ಪತ್ರೆಗಳನ್ನು ಮೀರಿಸುವಂಥ ಸೇವೆ ನೀಡಿ ಸರಕಾರಿ ಆಸ್ಪತ್ರೆಗಳ ಕುರಿತು ಆತ್ಮವಿಶ್ವಾಸ ಹೆಚ್ಚಿಸಬೇಕೆಂದರು.

**ಜಲಮೂಲಗಳ ಸಂರಕ್ಷಣೆ:** ಮುಂದಿನ ಪೀಳಿಗೆಗೆ ಕೆರೆ, ಕಟ್ಟೆ, ಬಾವಿ ಸೇರಿದಂತೆ ಜಲಮೂಲಗಳನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಕೆರೆಗಳ ಒತ್ತುವರಿಯಾಗದಂತೆ ಕ್ರಮ ವಹಿಸಬೇಕು. ಅಗತ್ಯವಿದ್ದಲ್ಲಿ ನಿರ್ಮಾಣ ಮಾಡಿಕೊಂಡು ಸುಸಜ್ಜಿತವಾಗಿಟ್ಟುಕೊಳ್ಳಬೇಕು. ಕೆರೆಗಳ ನೀರು ಕಲುಷಿತವಾಗದಂತೆ ನೋಡಿಕೊಳ್ಳಬೇಕು. ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ವಹಿಸಬೇಕು. ಜಿಲ್ಲೆಯಲ್ಲಿನ ಕೆರೆ ಕಟ್ಟೆ ಮತ್ತು ರಾಜ ಕಾಲುವೆ ನಿರ್ವಹಣೆ ಜತೆಗೆ ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಸ್ವಚ್ಛತೆಗೆ ಆದ್ಯತೆ ಇರಲಿ:** ಘನತ್ಯಾಜ್ಯ ವಿಲೇವಾರಿಯಲ್ಲಿ ಜಿಲ್ಲೆ ಮಾದರಿಯಾಗಬೇಕು. ಸಾರ್ವಜನಿಕರಲ್ಲಿ ನಮ್ಮ ನಗರ ಎಂಬ ಭಾವನೆ ಮೂಡಬೇಕು. ಈ ದಿಸೆಯಲ್ಲಿ ಸ್ವಯಂ ಸೇವಕರನ್ನು ಬಳಸಿಕೊಂಡು ಅಚ್ಚುಕಟ್ಟಾಗಿ ತ್ಯಾಜ್ಯ ನಿರ್ವಹಣೆ ಮಾಡುವಂತೆ ಅಧಿಕಾರಿಗಳಿಗೆ ನ್ಯಾ.ಬಿ.ಎಸ್.ಪಾಟೀಲ ಸೂಚಿಸಿದರು.

ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಬಯಲು ಶೌಚ ಮುಕ್ತ ಗ್ರಾಮಗಳಾಗಬೇಕು. ಅಧಿಕಾರಿಗಳು ಜನರೊಂದಿಗೆ ಬೆರೆತು ಜನರ ಮನವೊಲಿಸುವ ಪ್ರಯತ್ನ ಮಾಡಬೇಕು. ಪ್ರತಿ ಗ್ರಾಮದಲ್ಲಿ ಜಾಗೃತಿ ಮೂಡಿಸುವಂತೆ ಸೂಚನೆ ನೀಡಿದರು.

ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಪರಿಕರಗಳನ್ನು ದಾಸ್ತಾನಿಟ್ಟುಕೊಂಡು ರೈತರಿಗೆ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು. ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆ ಇತ್ಯರ್ಥಕ್ಕೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು. ಜಿಲ್ಲಾಧಿಕಾರಿ ಡಾ.ವಿಜಯ ಮಹಾಂತೇಶ ದಾನಮ್ಮನವರ ಮಾತನಾಡಿ, ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಿಷನ್ ವಿದ್ಯಾಪುರ ಮೂಲಕ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಲಾಗುತ್ತಿದೆ. »II

ಪತ್ರಿಕೆ:- ವಿಜಯ ಕರ್ನಾಟಕ

ಪ್ರಜಾವಾಣಿ ಶನಿವಾರ • ಜೂನ್ 10, 2023

### • ಅಧಿಕಾರಿಗಳಿಗೆ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್ ಪಾಟೀಲ ಸೂಚನೆ

# ಚರಂಡಿ ನೀರು ಕೆರೆ ಸೇರದಂತೆ ಕ್ರಮವಹಿಸಿ

ಪ್ರಜಾವಾಣಿ ವಾರ್ತೆ



ವಿಜಯಪುರ ನಗರದ ಜಿಲ್ಲಾ ಪಂಚಾಯಿತಿಯ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯಲ್ಲಿ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್ ಪಾಟೀಲ ಮಾತನಾಡಿದರು. ಲೋಕಾಯುಕ್ತ ಎಸ್‌ಪಿ ಅನಿತಾ ಹದ್ದಣ್ಣವರ, ಮಹಾದೇವ ಮುರಗಿ, ಸಂತೋಷ ಕುಂದರ, ಶಂಕರ ಮಾರಿಹಾಳ, ವಿಜಯಕುಮಾರ ಆಜೂರ, ಪ್ರಶಾಂತ ಇದ್ದಾರೆ

ವಿಜಯಪುರ: ಜಿಲ್ಲೆಯಲ್ಲಿನ 157 ಕೆರೆಗಳು ಒತ್ತುವರಿಯಾಗದಂತೆ ನೋಡಿಕೊಳ್ಳಬೇಕು. ಕೆರೆ ತುಂಬುವ ಯೋಜನೆಯಡಿ ಜಿಲ್ಲೆಯ ಎಲ್ಲ ಕೆರೆಗಳನ್ನು ಒಳಪಡಿಸಬೇಕು. ಕೆರೆಗಳ ಜಾಗವನ್ನು ಸರ್ವೇ ಮಾಡುವ ಮೂಲಕ ಒತ್ತುವರಿಯಾಗಿರುವ ಜಾಗವನ್ನು ತೆರವುಗೊಳಿಸುವ ಕೆಲಸ ಮಾಡಬೇಕು ಎಂದು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್ ಪಾಟೀಲ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯಿತಿಯ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಪಟ್ಟಣದ ಹತ್ತಿರ ಇರುವ ಕೆರೆಗಳಿಗೆ ಚರಂಡಿ ನೀರು ಹೋಗದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿನ ಕೆರೆಗಳಿಗೆ ಚರಂಡಿ ನೀರು ಹೋಗುವ ಪರಿಣಾಮ ಸಾಂಕ್ರಾಮಿಕ ರೋಗ ಹಾಗೂ ವಿವಿಧ ಕಾಯಿಲೆಗಳಿಗೆ ಬಲಿಯಾಗಬೇಕಾಗುತ್ತದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ನಿರ್ಲಕ್ಷವಹಿಸದೆ ಕೆರೆಗೆ ಚರಂಡಿ ನೀರು ಸೇರದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲೆಯ ಮಡಿಕೇಶ್ವರ ಟ್ಯಾಂಕ್ ಸೇರಿದಂತೆ ಎಲ್ಲೆಡೆ ಜಲ ಪರೀಕ್ಷೆ ಮಾಡಿ ಊರಿಗೆ ನೀರು ಸರಬರಾಜು ಮಾಡಬೇಕು. ಚರಂಡಿ ನೀರನ್ನು ಮೂರು ಹಂತದಲ್ಲಿ ತಡೆಯುವ ಕೆಲಸ ಮಾಡಬೇಕು. ಇನ್ನೈನ್ ಟ್ರೇಡ್ ಮ್ಯಾನೇಜ್, ಹಾಗೂ ಸೆಪ್ಟಿಕ್ ಟ್ಯಾಂಕ್‌ಗಳನ್ನು ನಿರ್ಮಿಸಿ ಕೊಳಚೆ ನೀರು ಇಂಗಿ ಸ್ವಚ್ಛ ಮಾಡಿ ನಂತರ ಕೆರೆಗೆ ಹಾಗೂ ಹಳ್ಳಕ್ಕೆ ಹೋಗುವಂತೆ ಮಾಡಬೇಕು ಎಂದರು.

ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ಕ್ರಮ ಕೈಗೊಳ್ಳಬೇಕು. ಹಳ್ಳಿಗಳ ವಾರ್ಡ್‌ಗಳಲ್ಲಿ ಸಿಬ್ಬಂದಿಗಳನ್ನು ನೇಮಿಸಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಗ್ರಾಮೀಣ ಭಾಗದಲ್ಲಿ ಕಸ ವಿಲೇವಾರಿಗೆ ಎಸ್.ಆರ್. ಎಲ್.ಎಂ ನಲ್ಲಿ ತರಬೇತಿ ನೀಡಲಾಗಿರುವ ಮಹಿಳೆಯರ ಸ್ವಚ್ಛತಾ ಕಾರ್ಯ ಪರಿಶೀಲನೆಗೆ ಮೇಲ್ವಿಚಾರಕರನ್ನು ನೇಮಕ ಮಾಡಬೇಕು ಎಂದರು.

ಗ್ರಾಮೀಣ ಭಾಗದಲ್ಲಿ ಇನ್ನೂ ಬಯಲು ಮುಕ್ತ ಶೌಚಾಲಯ ಕಂಡಿಲ್ಲ. ಈ ನಿಟ್ಟಿನಲ್ಲಿ ಅಧಿಕಾರಿಗಳು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡಬೇಕು. ಜನರ ಮನಸ್ಥಿತಿ ಅರಿತು, ಒಳ್ಳೆಯದನ್ನು ಮಾಡಲು ಪ್ರಯತ್ನಿಸಬೇಕು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಶೌಚಾಲಯ, ಸಾರ್ವಜನಿಕ ಶೌಚಾಲಯ ಹಾಗೂ ಗುಂಡಿಗಳ ನಿರ್ಮಾಣ ಮಾಡಬೇಕು ಎಂದರು.

ಜಿಲ್ಲೆಯಲ್ಲಿನ ಅಂಗನವಾಡಿ ಕೇಂದ್ರಗಳಲ್ಲಿ ಕಟ್ಟಡ, ಸ್ವಚ್ಛತೆ ಹಾಗೂ ಊಟದ ಸಮಸ್ಯೆಗಳು ಆಗದಂತೆ ಕಾರ್ಯನಿರ್ವಹಿಸಬೇಕು. ತಾಲ್ಲೂಕು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸಬೇಕಿದೆ. ಸರ್ಕಾರಿ ವೈದ್ಯರು ಸರಿಯಾದ ಸಮಯಕ್ಕೆ ಆಸ್ಪತ್ರೆಗೆ ಹಾಜರಾಗದಿದ್ದರೆ ಅದು ಅಕ್ಷಮ್ಯ ಅಪರಾಧ ಅಂತಹ ಪ್ರಕರಣಗಳು ಕಂಡು ಬಂದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಿದರು.

ಮುಂಗಾರು ಬೆಳೆ ಬಿತ್ತನೆ ಪ್ರಾರಂಭವಾಗಿರುವ ಹಿನ್ನೆಲೆ ರೈತರಿಗೆ ನಿಗದಿತ ದರದಲ್ಲಿ ಬೀಜ ಮತ್ತು ರಸಗೊಬ್ಬರಗಳು ಸಿಗುವಂತಾಗಬೇಕು. ನಿಗದಿತ ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವ ಅಂಗಡಿಗಳು ಗಮನಕ್ಕೆ ಬಂದರೆ ಅಂತವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು. ಜಿಲ್ಲೆಯ ರೈತರಿಗೆ ಬೀಜ ಮತ್ತು ರಸ ಗೊಬ್ಬರ ಕಡಿಮೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ, ಲೋಕಾಯುಕ್ತ ಎಸ್. ಪಿ. ಅನಿತಾ ಹದ್ದಣ್ಣವರ, ಹೆಚ್ಚುವರಿ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶ ಸಂತೋಷ ಕುಂದರ, ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ವಲಯ ಅರಣ್ಯಾಧಿಕಾರಿ ಪ್ರಶಾಂತ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

## 'ವಿದ್ಯಾರ್ಥಿಗಳಿಗೆ ಕೋಚಿಂಗ್'

ಜಿಲ್ಲಾಧಿಕಾರಿ ಡಾ.ವಿಜಯ ಮಹಾಂತೇಶ ದಾನಮ್ಮನವರ ಮಾತನಾಡಿ, ಜಿಲ್ಲೆಯ ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಿಷನ್ ವಿದ್ಯಾಪುರ ಮೂಲಕ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಲಾಗುತ್ತಿದೆ. ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ಪಾಸಾದ 60 ಜನ ವಿದ್ಯಾರ್ಥಿಗಳಿಗೆ ಎರಡು ದಿನ ಶೈಕ್ಷಣಿಕ ಪ್ರವಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನದ ಬಿಸಿಯೂಟ ತಯಾರಿಸುವ ಸುಮಾರು 5580 ಸಿಬ್ಬಂದಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ತಯಾರಿಸಿದ ಎಫ್ರಾನ್-ಸಮವಸ್ತ್ರಗಳನ್ನು ವಿತರಿಸುವ ಮೂಲಕ ಶುದ್ಧ, ಸ್ವಚ್ಛ ಆಹಾರ ತಯಾರಿಕೆ ಜೊತೆಗೆ ಶಿಸ್ತುಬದ್ಧತೆ ಪ್ರದರ್ಶನದೊಂದಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಆರ್ಥಿಕತೆಯನ್ನು ಸದೃಢಗೊಳಿಸಲು ಪ್ರಯತ್ನಿಸಲಾಗಿದೆ ಎಂದು ಹೇಳಿದರು

ಪತ್ರಿಕೆ :- ಪ್ರಜಾವಾಣಿ
ದಿನಾಂಕ :- 10. ಜೂನ್. 2023

# ಜನಸೇವೆಯಲ್ಲಿ ವಿಳಂಬವಾದರೆ ಶಿಸ್ತುಕ್ರಮ

## ಎನಿಮಲ್ ಬರ್ತ್ ಕಂಟ್ರೋಲ್ ಸೆಂಟರ್‌ನಲ್ಲಿ ಸಿಬ್ಬಂದಿ ಕೊರತೆಗೆ ಪಾಟೀಲ ಆಕ್ರೋಶ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಶುಕ್ರವಾರ ನಗರದ ಉಪ ನೋಂದಣಿ ಕಚೇರಿ, ಪಶುಪಾಲನಾ ಇಲಾಖೆ ಎನಿಮಲ್ ಬರ್ತ ಕಂಟ್ರೋಲ್ ಸೆಂಟರ್‌ಗೆ ಭೇಟಿ ನೀಡಿ ಕಚೇರಿ ಕಾರ್ಯವೈಖರಿಗಳ ಕುರಿತು ಪರಿಶೀಲನೆ ನಡೆಸಿದರು.

ನಗರದ ಜಿಲ್ಲಾಸ್ಪತ್ರೆ ಆವರಣದಲ್ಲಿರುವ ಹೈಟೆಕ್ ಪಂಚಕರ್ಮ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸರ್ಕಾರದಿಂದ 3 ಕೋಟಿ ಖರ್ಚು ಮಾಡಿ ಕಟ್ಟಡ ನಿರ್ಮಿಸಿದರೂ ಸಹ ಯಾವುದೇ ವೈದ್ಯಾಧಿಕಾರಿ, ಸಿಬ್ಬಂದಿ, ತಂತ್ರಜ್ಞರ ನೇಮಕವಾಗದೇ ಸರ್ಕಾರದ ಹಣ ವ್ಯಯಿಸಿ ಇದರ ಲಾಭ ಸಾರ್ವಜನಿಕರಿಗೆ ದೊರೆಯದೇ ಇರುವುದರಿಂದ ಅಸಮಾಧಾನ ವ್ಯಕ್ತಪಡಿಸಿದರಲ್ಲದೇ, ಈ ಕುರಿತು ಸ್ವಯಂಪ್ರೇರಿತ ದೂರು ದಾಖಲಿಸುವುದಾಗಿ ಹೇಳಿದರು.

ಉಪ ನೋಂದಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಋಣಭಾರ ಪ್ರಮಾಣ ಪತ್ರ (ಇಸಿ) ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಕುರಿತು ಸಾರ್ವಜನಿಕ ದೂರಿನ ಹಿನ್ನಲೆಯಲ್ಲಿ ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಬಂದಾಗ ಪಾರದರ್ಶಕವಾಗಿ ಕಾರ್ಯನಿರ್ವಹಿಸುವ ಮೂಲಕ ತಾಂತ್ರಿಕ ತೊಂದರೆಗಳನ್ನು ನಿವಾರಿಸಿಕೊಂಡು ಋಣಭಾರ ಪ್ರಮಾಣಪತ್ರ ಸೇರಿ ಯಾವುದೇ ಕಾಗದಪತ್ರಗಳನ್ನು ನೀಡಲು ಕ್ರಮವಹಿಸಬೇಕು. ಋಣಭಾರ ಪ್ರಮಾಣಪತ್ರ ನೀಡಲು ಆನ್‌ಲೈನ್ ಅರ್ಜಿ ಸಲ್ಲಿಸಿ, ಬಾಂಡ್‌ರೈಟರ್ ಬಳಿಗೆ ಹೋಗಿ ಅರ್ಜಿ ಸಲ್ಲಿಸಿ, ಎಂದು ವಿಳಂಬ ಮಾಡದೇ ಇರುವ ಸಮಸ್ಯೆ ಇತ್ಯರ್ಥಪಡಿಸಿ ಸರಾಗವಾಗಿ ಸಾರ್ವಜನಿಕರಿಗೆ ಸೇವೆ ಸಲ್ಲಿಸುವಂತೆ ಕ್ರಮವಹಿಸಬೇಕು. ಕಚೇರಿಯನ್ನು ಆಧುನೀಕರಣಗೊಳಿಸಿ, ತಂತ್ರಜ್ಞಾನವನ್ನು ಅಳವಡಿಸಿಕೊಂಡು ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವಂತೆ ಅವರು ಸೂಚನೆ ನೀಡಿದರು.



ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ವಿಜಯಪುರದಲ್ಲಿ ಶುಕ್ರವಾರ ಉಪ ನೋಂದಣಾಧಿಕಾರಿ ಕಚೇರಿಗೆ ಭೇಟಿ ನೀಡಿ ಪರಿಶೀಲಿಸಿದರು.

- ಸರ್ಕಾರದಿಂದ 3 ಕೋಟಿ ಖರ್ಚು ಮಾಡಿ ಕಟ್ಟಡ ನಿರ್ಮಿಸಿದರೂ ಸಹ ಯಾವುದೇ ವೈದ್ಯಾಧಿಕಾರಿ, ಸಿಬ್ಬಂದಿ, ತಂತ್ರಜ್ಞರ ನೇಮಕವಾಗದೇ ಸರ್ಕಾರದ ಹಣ ವ್ಯಯಿಸಿ ಇದರ ಲಾಭ ಸಾರ್ವಜನಿಕರಿಗೆ ದೊರೆಯದೇ ಇರುವುದರಿಂದ ಅಸಮಾಧಾನ, ಸ್ವಯಂಪ್ರೇರಿತ ದೂರು ದಾಖಲಿಸುವುದಾಗಿ ಹೇಳಿಕೆ
- ಉಪ ನೋಂದಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಋಣಭಾರ ಪ್ರಮಾಣ ಪತ್ರ (ಇಸಿ) ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಕುರಿತು ಸಾರ್ವಜನಿಕ ದೂರು

ಎನಿಮಲ್ ಬರ್ತ್ ಕಂಟ್ರೋಲ್ ಸೆಂಟರ್‌ಗೆ ಭೇಟಿ ನೀಡಿದ ನ್ಯಾಯಮೂರ್ತಿಗಳು ಕೇಂದ್ರದಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿ, ನಗರದಲ್ಲಿ ನಾಯಿಗಳನ್ನು ಕೇಂದ್ರಕ್ಕೆ ತಂದು ಶಸ್ತ್ರ ಚಿಕಿತ್ಸೆ ನೀಡಿ, ನಾಲ್ಕು ದಿನ ಆರೈಕೆ ಮಾಡಿ, ರೇಬಿಸ್ ಲಸಿಕೆ ನೀಡುವ ಅಚ್ಚುಕಟ್ಟು ನಿರ್ವಹಣೆ ಕುರಿತು ಪ್ರಶಂಸೆ ವ್ಯಕ್ತಪಡಿಸಿದರು.

ಕೇಂದ್ರದ ಪಶು ವೈದ್ಯಾಧಿಕಾರಿ ಡಾ. ಆನಂದ ನಾವದಗಿ ಅವರು ಮಾತನಾಡಿ, ನಗರದಲ್ಲಿ ಪ್ರತಿ ದಿನ 20 ನಾಯಿಗಳ ಗುರಿಯಂತೆ ಒಟ್ಟು ವರ್ಷದಲ್ಲಿ 5500 ರಿಂದ 6000 ನಾಯಿಗಳಿಗೆ ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ ಮಾಡುವ ಗುರಿ ಹೊಂದಲಾಗಿದೆ. ಈ ಕೇಂದ್ರದಿಂದ ಸುಮಾರು 600 ನಾಯಿಗಳ ಶಸ್ತ್ರಚಿಕಿತ್ಸೆಗೊಳಪಡಿಸಿ ರೇಬಿಸ್ ಲಸಿಕೆ ನೀಡಿ, ಮತ್ತೆ ಅದೇ ಜಾಗದಲ್ಲಿ ಬಿಡಲಾಗಿದೆ. ಕರ್ನಾಟಕದಲ್ಲಿಯೇ ವಿಜಯಪುರ ಕೇಂದ್ರ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಲೋಕಾಯುಕ್ತ ಎಸ್‌ಪಿ ಅನಿತಾ ಹದ್ದಣ್ಣವರ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಎ.ಎಸ್.ಫೌಣಸಗಿ, ಪರಿಸರ ಅಭಿಯಂತರ ಅಶೋಕ ಸಜ್ಜನ, ಜಿಲ್ಲಾ ನೋಂದಣಾಧಿಕಾರಿ ಜಿ.ಆರ್.ನಾಡಗೌಡ, ಹಿರಿಯ ಉಪ ನೋಂದಣಾಧಿಕಾರಿ ಬಿ.ಎಸ್.ಬಿರಾದಾರ, ಲೋಕಾಯುಕ್ತ ಡಿವೈಎಸ್‌ಪಿ ಅರುಣ ನಾಯಕ, ಸಿಪಿಐ ಆನಂದ ಟಕ್ಕಣ್ಣವರ, ಆನಂದ ಡೋಣಿ ಹಾಗೂ ಇತರರು ಉಪಸ್ಥಿತರಿದ್ದರು.

ಪತ್ರಿಕೆ:- ಕನ್ನಡ ಪ್ರಭ

# ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ

ವಿಜಯಪುರ: ಜಿಲ್ಲೆಯ ಮಕ್ಕಳಿಗೆ ಉತ್ಕೃಷ್ಟ, ಗುಣಮಟ್ಟವಾದ ಶಿಕ್ಷಣ, ವಿವಿಧ ವಸತಿ ನಿಲಯಗಳ ವಿದ್ಯಾರ್ಥಿಗಳು ಹಾಗೂ ಅಂಗನವಾಡಿ ಮಕ್ಕಳ ಆರೋಗ್ಯ ಕಾಳಜಿ, ತ್ಯಾಜ್ಯ ನಿರ್ವಹಣೆ, ನಗರದ ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಜನರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಮಾದರಿಯಾಗಿ ಕಾರ್ಯನಿರ್ವ ಹಿಸುವ ಮೂಲಕ ಮಾದರಿ ಜಿಲ್ಲೆಯ ನ್ನಾಗಿಸಲು ಶ್ರಮಿಸುವಂತೆ ಅಧಿಕಾರಿಗಳಿಗೆ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ. ಎಸ್.ಪಾಟೀಲ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಕ್ಕಳ ಭವಿಷ್ಯ ರೂಪಿಸುವುದೆಂದರೆ ರಾಷ್ಟ್ರದ ಭವಿಷ್ಯ ರೂಪಿಸಿದಂತೆ. ಮಗುವಿನ ಆರೋಗ್ಯ ಬಹುಮು ಖ್ಯವಾಗಿರುತ್ತದೆ. ವಿದ್ಯೆ ನೀಡುವ ಜತೆಗೆ ಮಕ್ಕಳ ಆರೋಗ್ಯ ವ್ಯವಸ್ಥೆ ಕುರಿತು ಕಾಳಜಿ ವಹಿಸಬೇಕು. ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವಂತಹ ಶಿಕ್ಷಣ ನೀಡಬೇಕು. ಹೆಮ್ಮರವಾದ ಗುರಿ ಹೊಂದುವಂತೆ ಪ್ರೇರೇಪಿಸಬೇಕು ಎಂದು ಅವರು ಸೂಚನೆ ನೀಡಿದರು.

ಸಾರ್ವಜನಿಕ ಸಮಸ್ಯೆಗಳಿಗೆ ತತಕ್ಷಣ ಸ್ಪಂದಿಸಬೇಕು. ಜಿಲ್ಲೆಯ ಎಲ್ಲ ತಾಲೂಕಾ ಆಸ್ಪತ್ರೆಗಳು ಜನಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಅಂಗನವಾಡಿ ಕೇಂದ್ರಗಳಿಗೆ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಲೋಕಾಯುಕ್ತ ಎಸ್.ಪಿ. ಅನಿತಾ ಹದ್ದಣ್ಣವರ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಸಂತೋಷ ಕುಂದರ, ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ವಲಯ ಅರಣ್ಯಾಧಿಕಾರಿ ಪ್ರಶಾಂತ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.



ಜಿಪಂ ಸಭಾಂಗಣದಲ್ಲಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

> ಜಿಲ್ಲೆಯ ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಿಷನ್ ವಿದ್ಯಾಪುರ ಮೂಲಕ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಲಾಗುತ್ತಿದೆ. ಒನಕೆ ಓಬವ್ವ ಕರಾಟೆ ತರಬೇತಿ, ಬಿಸಿಎಂ ಹಾಸ್ಟೆಲ್‌ನ ಯಲಗೂರೇಶ ನಾಯಕ ಎಂಬ ವಿದ್ಯಾರ್ಥಿ ಐಎಎಸ್‌ನಲ್ಲಿ ರ್‍ಯಾಂಕ್ ಪಡೆದಿದ್ದು, ಜಿಲ್ಲೆಗೆ ಹೆಮ್ಮೆ ತಂದಿದೆ. ಶುದ್ಧ, ಸ್ವಚ್ಛ ಆಹಾರ ತಯಾರಿಕೆ ಜತೆಗೆ ಶಿಸ್ತುಬದ್ಧತೆಗಾಗಿ 5580 ಬಿಸಿಯೂಟದ ಸಮವಸ್ತ್ರದ ಕಿಟ್ ವಿತರಿಸಲಾಗಿದೆ.
>
> -ಡಾ.ವಿಜಯಮಹಾಂತೇಶ ದಾನಮ್ಮನವರ
> ಜಿಲ್ಲಾಧಿಕಾರಿ

ವಿಶ್ವವಾಣಿ

ಪತ್ರಿಕೆ ವಿಶ್ವವಾಣಿ

# 'Check wastewater seeping into lakes'

## Lokayukta tells officials to clear encroachment of lakes

VIJAYAPURA, DHNS

Karnataka Lokayukta Justice B S Patil has directed the officials to check the seepage of drainage water into the lakes near the towns and preserve the water sources.

Addressing district-level officers at a meeting here on Friday, he said that action should be taken to protect 157 lakes in the district from encroachments. All the lakes should be covered under the tank filling project to increase the water table. The lake bed area should be surveyed and encroached portions should be cleared immediately, he said.

Stressing on the need to prevent the flow of wastewater into the lakes, he said that seepage of drainage water into the lakes would result in the spreading of the diseases. The officials should not neglect such issues but take strict action immediately, he said.

Officials should focus on cleanliness in rural areas by deploying adequate staff for solid waste management. Villages are not totally free from open defecation. Therefore, there is a need to construct toilets in every house. The Social Welfare Department should focus on providing quality food in the hostels apart from maintaining hygiene and organising various cultural programmes, he explained.

"Taluk government hospitals and primary health centres should provide proper medical care to the people. They also need to provide detailed reports to Lokayukta about the shortage of doctors and other staff. Strict action will be taken if the doctors did not attend to their duties. The Agriculture Department officials should supply seeds and fertilisers to the farmers at the prescribed rates," he said.



Karnataka Lokayukta Justice B S Patil speaks at a meeting with officials in Vijayapura on Friday. DC Vijayamahantesh Danammanavar, Lokayukta SP Anita Haddannavar, Additional DC Mahadev Muragi and others are seen. DH PHOTO

Deputy Commissioner Vijayamahantesh Danammanavar said that discipline is being maintained by distributing uniforms to 5,580 midday meal workers along with providing good quality food to the children.

The study tour will also be conducted for 60 students who have passed the SSLC examination with higher grades, he added. Lokayukta SP Anita Haddannavar, Additional DC Mahadev Muragi, District Legal Service Authority member secretary and senior judge Santosh Kundar and others were present.

Paper:- Deccan Herald

# ಮಾದರಿ ಜಿಲ್ಲೆಯಾಗಿಸಲು ಸೇವೆ ಮಾಡಿ

ಉದಯವಾಣಿ

## | ಶಿಕ್ಷಣ, ಆರೋಗ್ಯ ಸೇವೆಗೆ ಆದ್ಯತೆ ನೀಡಲು ಲೋಕಾಯುಕ್ತರ ಸೂಚನೆ | ಜಲಮೂಲಗಳ ರಕ್ಷಣೆಗೆ ತಾಕೀತು




ವಿಜಯಪುರ: ಲೋಕಾಯುಕ್ತ ನ್ಯಾಯಮೂರ್ತಿ ಎಸ್.ಬಿ.ಪಾಟೀಲ ಅಧ್ಯಕ್ಷತೆಯಲ್ಲಿ ಜಿಪಂ ಸಭಾಂಗಣದಲ್ಲಿ ಜಿಲ್ಲೆಯ ಅಧಿಕಾರಿಗಳ ಪ್ರಗತಿ ಪರಿಶೀಲನೆ ನಡೆಯಿತು.

ವಿಜಯಪುರ: ಜಿಲ್ಲೆಯ ಮಕ್ಕಳಿಗೆ ಉತ್ಕೃಷ್ಟ ಗುಣಮಟ್ಟವಾದ ಶಿಕ್ಷಣ, ವಿವಿಧ ವಸತಿ ನಿಲಯಗಳು, ಅಂಗನವಾಡಿ ಮಕ್ಕಳ ಆರೋಗ್ಯ ಕಾಳಜಿ ಪೂರ್ವಕ ಸೇವೆ ಸಲ್ಲಿಸಬೇಕು. ಆ ಮೂಲಕ ವಿಜಯಪುರ ಮಾದರಿ ಜಿಲ್ಲೆಯಾಗಿ ರೂಪಿಸಲು ಪ್ರಾಮಾಣಿಕ ಸೇವೆ ಮಾಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಎಸ್.ಬಿ.ಪಾಟೀಲ ತಾಕೀತು ಮಾಡಿದರು.

ಶುಕ್ರವಾರ ನಗರದ ಜಿಪಂ ಸಭಾಂಗಣದಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ಜರುಗಿದ ವಿಜಯಪುರ ಜಿಲ್ಲೆಯ ಅಧಿಕಾರಿಗಳ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಮಕ್ಕಳ ಭವಿಷ್ಯ ರೂಪಿಸುವುದೆಂದರೆ ರಾಷ್ಟ್ರದ ಭವಿಷ್ಯ ರೂಪಿಸಿದಂತೆ. ಮಗುವಿನ ಆರೋಗ್ಯವೂ ಮುಖ್ಯ ಎಂದರು.

ಜಿಲ್ಲೆಯ ವಿವಿಧ ಸರ್ಕಾರಿ ವಸತಿ ನಿಲಯಗಳು, ವಸತಿ ಶಾಲೆಗಳಲ್ಲಿ ಮಕ್ಕಳನ್ನು ಆಕರ್ಷಿಸುವ ಮಟ್ಟದಲ್ಲಿ ಸ್ವಚ್ಛತೆಯನ್ನು ಶಿಸ್ತುಬದ್ಧವಾಗಿ ಕೈಗೊಳ್ಳಬೇಕು. ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಬೇಕು. ಜಿಲ್ಲೆ ಮುಂಬರುವ ದಿನಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಲು ಪಠ್ಯೇತರ ಚಟುವಟಿಕೆ ಕೈಗೊಳ್ಳಬೇಕು. ವಸತಿ ನಿಲಯ-ವಸತಿ ಶಾಲೆಗಳ ಮಕ್ಕಳಲ್ಲಿ ಸೃಜನಾತ್ಮಕತೆ ಸೃಷ್ಟಿಸುವಂತೆ ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಶಿಕ್ಷಣದಂತೆ ಆರೋಗ್ಯ ವ್ಯವಸ್ಥೆಯು ಅತಿ ಮುಖ್ಯವಾಗಿದ್ದು ಜಿಲ್ಲೆಯ ಸರ್ಕಾರಿ ತಾಲೂಕಾಸ್ಪತ್ರೆಗಳು ಜನರಿಗೆ ಉತ್ತಮ ಆರೋಗ್ಯ ಸೇವೆ ನೀಡಲು ಪ್ರಾಮಾಣಿಕ ಸೇವೆ ಸಲ್ಲಿಸಬೇಕು. ಅಧಿಕಾರಿಗಳು ಅಂಗನವಾಡಿ ಕೇಂದ್ರಗಳಿಗೆ ಕಾಲಕಾಲಕ್ಕೆ ಭೇಟಿ ನೀಡಿ, ಮೂಲಭೂತ ಸೌಲಭ್ಯಗಳ ಪರಿಶೀಲನೆ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಂದ ದೂರು ಬರದಂತೆ ಹಾಗೂ ಖಾಸಗಿ ಆಸ್ಪತ್ರೆಗಳ ಸೇವೆಯನ್ನು ಮೀರಿಸುವಂತೆ ವ್ಯವಸ್ಥಿತವಾಗಿ ವೈದ್ಯಕೀಯ ಸೇವೆ ನೀಡಬೇಕು. ವೈದ್ಯರ ಕೊರತೆ ಇದ್ದಲ್ಲಿ ವರದಿ ಸಲ್ಲಿಸುವಂತೆ ಸೂಚಿಸಿದರು. ಜಿಲ್ಲೆಯಲ್ಲಿ ಆರೋಗ್ಯ ಸಂಬಂಧಿ ಯಾವುದೇ ಸಮಸ್ಯೆ ಉಲ್ಬಣವಾಗದಂತೆ ಸಾರ್ವಜನಿಕರಿಗೆ ಸೇವೆ ಒದಗಿಸಬೇಕು.

ಮುಂದಿನ ಪೀಳಿಗೆಗೆ ಕೆರೆ, ಕಟ್ಟೆ, ಬಾವಿ ಸೇರಿದಂತೆ ಜಲಮೂಲಗಳನ್ನು ಸಂರಕ್ಷಿಸುವ ಜವಾಬ್ದಾರಿ ನಮ್ಮ ಮೇಲಿದೆ. ಜಲಮೂಲಗಳ ಸಂರಕ್ಷಣೆ ಜೊತೆಗೆ ಒತ್ತುವರಿ ಆಗದಂತೆ ಕ್ರಮ ಕೈಗೊಳ್ಳಬೇಕು. ನೀರು ಸಂರಕ್ಷಣೆ ಮಾಡಿ ಜಲಮೂಲ ಕಲುಷಿತವಾಗದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕುಡಿಯುವ ನೀರಿನ ವಿಷಯದಲ್ಲಿ ಯಾವುದೇ ಲೋಪವಾಗದಂತೆ ಕಾರ್ಯನಿರ್ವಹಿಸಿ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ವಹಿಸಬೇಕು. ಜಿಲ್ಲೆಯಲ್ಲಿನ ಕೆರೆ ಕಟ್ಟೆ ಮತ್ತು ರಾಜ ಕಾಲುವೆ ನಿರ್ವಹಣೆಗೆ ಜೊತೆಗೆ ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಡಾ। ವಿ.ಬಿ.ದಾನಮ್ಮನವರ ಸಭೆಗೆ ಮಾಹಿತಿ ನೀಡಿ, ಜಿಲ್ಲೆಯ ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಿಷನ್ ವಿದ್ಯಾಪುರ ಮೂಲಕ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಲಾಗುತ್ತಿದೆ. ಒನಕೆ ಓಬವ್ವ ಕರಾಟೆ ತರಬೇತಿ ನೀಡಲಾಗುತ್ತಿದೆ. ಬಿಸಿಎಂ ಹಾಸ್ಟೆಲ್ ವಿದ್ಯಾರ್ಥಿ ಯಲಗೂರೇಶ ನಾಯಕ ಯುಪಿಎಸ್‌ಸಿ ರ್‍ಯಾಂಕ್ ಪಡೆದಿದ್ದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಇದಲ್ಲದೇ ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ಪಾಸಾದ 60 ಜನ ವಿದ್ಯಾರ್ಥಿಗಳಿಗೆ ವಿಶೇಷ ಶೈಕ್ಷಣಿಕ ಪ್ರವಾಸ ನಡೆಸಲಾಗಿದೆ. ಅಕ್ಷರ ದಾಸೋಹ ಯೋಜನೆಯ 5580 ಸಿಬ್ಬಂದಿಗೆ ಸ್ವಸಹಾಯ ಸಂಘದ ಸದಸ್ಯರಿಂದ ತಯಾರಿಸಿದ ಎಪ್ರಾನ್-ಸಮವಸ್ತ್ರ ವಿತರಿಸಲಾಗಿದೆ ಎಂದು ವಿವರಿಸಿದರು.

ಶುದ್ಧ ಸ್ವಚ್ಛ ಆಹಾರ ತಯಾರಿಕೆ ಜೊತೆಗೆ ಶಿಸ್ತುಬದ್ಧತೆ ಪ್ರದರ್ಶನದೊಂದಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಆರ್ಥಿಕತೆಯನ್ನು ಸದೃಢಗೊಳಿಸಲು ಪ್ರಯತ್ನಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಈ ಬಾರಿ ಜಿಲ್ಲೆ 11ನೇ ರ್‍ಯಾಂಕ್ ಪಡೆದಿದ್ದು ಶೈಕ್ಷಣಿಕ ಗುಣಮಟ್ಟದ ಸುಧಾರಿಸುವಲ್ಲಿ ಕೈಗೊಂಡ ಕ್ರಮಗಳು ಫಲ ನೀಡಿವೆ ಎಂದು ವಿವರ ನೀಡಿದರು.

ಸಭೆಯಲ್ಲಿ ಲೋಕಾಯುಕ್ತ ಎಸ್‌ಪಿ ಅನಿತಾ ಹದ್ದಣ್ಣವರ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವಿಲ್ ನ್ಯಾಯಾಧೀಶ ಸಂತೋಷ ಕುಂದರ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ವಲಯ ಅರಣ್ಯಾಧಿಕಾರಿ ಪ್ರಶಾಂತ ಸೇರಿದಂತೆ ವಿವಿಧ ಅಧಿಕಾರಿಗಳು ಇದ್ದರು.

### ಬಯಲು ಶೌಚಮುಕ್ತ ಜಿಲ್ಲೆಯಾಗಲಿ: ಪಾಟೀಲ

ವಿಜಯಪುರ ಜಿಲ್ಲೆಯನ್ನು ಬಯಲು ಶೌಚ ಮುಕ್ತ ಮಾಡಲು ಶ್ರಮಿಸಬೇಕು. ಈ ವಿಷಯದಲ್ಲಿ ಅಧಿಕಾರಿಗಳು ಜನರೊಂದಿಗೆ ಬೆರೆತು, ಮನವೊಲಿಸುವ ಪ್ರಯತ್ನ ಮಾಡಬೇಕು. ಗ್ರಾಮೀಣ ಭಾಗದ ಜನರಲ್ಲಿ ಜಾಗೃತಿ ಮೂಡಿಸಲು ಅಧಿಕಾರಿಗಳು ಕಾರ್ಯಕ್ರಮ ರೂಪಿಸಬೇಕು ಎಸ್.ಬಿ.ಪಾಟೀಲ ಎಂದರು. ಘನತ್ಯಾಜ್ಯ ವಿಲೇವಾರಿಯಲ್ಲಿ ವಿಜಯಪುರ ಜಿಲ್ಲೆ ಮಾದರಿಯಾಗಬೇಕು. ಸಾರ್ವಜನಿಕರಲ್ಲಿ ನಮ್ಮ ನಗರವನ್ನು ಸ್ವಚ್ಛವಾಗಿ ಇರಿಸಿಕೊಳ್ಳುವ ಕುರಿತು ಜಾಗೃತಿ ಮೂಡಿಸಬೇಕು. ಇದಕ್ಕಾಗಿ ಸ್ವಯಂ ಸೇವಕರನ್ನು ಬಳಸಿಕೊಂಡು, ನಗರದ ಸ್ವಚ್ಛತೆ ಹಾಗೂ ಘನತ್ಯಾಜ್ಯ ವೈಜ್ಞಾನಿಕ ನಿರ್ವಹಣೆ ಮಾಡಬೇಕು. ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ವಿಶೇಷ ಆದ್ಯತೆ ನೀಡಬೇಕು ಎಂದು ಸೂಚಿಸಿದರು. ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಪರಿಕರಗಳನ್ನು ದಾಸ್ತಾನು ಮಾಡಿಕೊಂಡು, ರೈತರಿಗೆ ಯಾವ ತೊಂದರೆ ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು. ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆ ಇತ್ಯರ್ಥಕ್ಕೆ ಕ್ರಮ ವಹಿಸುವಂತೆ ಲೋಕಾಯುಕ್ತ ನ್ಯಾ। ಎಸ್.ಬಿ.ಪಾಟೀಲ ಸೂಚಿಸಿದರು.

ಪತ್ರಿಕೆ- ಉದಯವಾಣಿ

# ಮಾದರಿ ಜಿಲ್ಲೆಯಾಗಿಸಲು ಶ್ರಮಿಸಿ

ಕನ್ನಡ ಪ್ರಭ

## ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಲೋಕಾಯುಕ್ತ ನ್ಯಾ.ಪಾಟೀಲ ಸೂಚನೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಜಿಲ್ಲೆಯ ಮಕ್ಕಳಿಗೆ ಉತ್ಕೃಷ್ಟ, ಗುಣಮಟ್ಟವಾದ ಶಿಕ್ಷಣ, ವಿವಿಧ ವಸತಿನಿಲಯಗಳ ವಿದ್ಯಾರ್ಥಿಗಳು ಹಾಗೂ ಅಂಗನವಾಡಿ ಮಕ್ಕಳ ಆರೋಗ್ಯ ಕಾಳಜಿ, ತ್ಯಾಜ್ಯ ನಿರ್ವಹಣೆ, ನಗರದ ಸ್ವಚ್ಛತೆ, ಕುಡಿಯುವ ನೀರು ಸೇರಿದಂತೆ ಜನರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಮಾದರಿಯಾಗಿ ಕಾರ್ಯ ನಿರ್ವಹಿಸುವ ಮೂಲಕ ಮಾದರಿ ಜಿಲ್ಲೆಯನ್ನಾಗಿಸಲು ಶ್ರಮಿಸುವಂತೆ ಅಧಿಕಾರಿಗಳಿಗೆ ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲೆಯ ವಿವಿಧ ಅಧಿಕಾರಿಗಳೊಂದಿಗೆ ಶುಕ್ರವಾರ ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಮಕ್ಕಳ ಭವಿಷ್ಯ ರೂಪಿಸುವುದೆಂದರೆ ರಾಷ್ಟ್ರದ ಭವಿಷ್ಯ ರೂಪಿಸಿದಂತೆ. ಮಗುವಿನ ಆರೋಗ್ಯ ಬಹುಮುಖ್ಯ ಆಗಿರುತ್ತದೆ. ವಿದ್ಯೆ ನೀಡುವ ಜೊತೆಗೆ ಮಕ್ಕಳ ಆರೋಗ್ಯ ವ್ಯವಸ್ಥೆ ಕುರಿತು ಕಾಳಜಿ ವಹಿಸಬೇಕು. ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವ ಶಿಕ್ಷಣ ನೀಡಬೇಕು. ಹೆಮ್ಮರವಾದ ಗುರಿ ಹೊಂದುವಂತೆ ಪ್ರೇರೇಪಿಸಬೇಕು. ಪರಿಧಿ ಹಾಕಿಕೊಳ್ಳದೇ ವಿಸ್ತರಿಸಿಕೊಳ್ಳಬೇಕು. ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಜಿಲ್ಲೆಯ ಶೈಕ್ಷಣಿಕ ಉನ್ನತಿಗೆ ಶ್ರಮಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯ ವಿವಿಧ ಸರ್ಕಾರಿ ವಸತಿನಿಲಯಗಳಲ್ಲಿ ಸ್ವಚ್ಛತೆ ಶಿಸ್ತುಬದ್ಧವಾಗಿ ಕಾಯ್ದುಕೊಳ್ಳಬೇಕು. ವಸತಿನಿಲಯಗಳು ಮತ್ತು ವಸತಿ ಶಾಲೆಗಳು ಮಕ್ಕಳನ್ನು ಆಕರ್ಷಿಸುವಂತಿರಬೇಕು. ಸ್ವಚ್ಛತೆ ಶಿಸ್ತುಬದ್ಧ ರೂಢಿಗತ ಮತ್ತು ಯೋಜನಾಬದ್ಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಬೇಕು. ಜಿಲ್ಲೆ ಮುಂಬರುವ ದಿನಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸಾಧನೆಗೈಯ್ಯುವ ನಿಟ್ಟಿನಲ್ಲಿ ಕಲೆ, ಸಾಹಿತ್ಯ ಪಠ್ಯೇತರ ಚಟುವಟಿಕೆಗಳನ್ನು ಕೈಗೊಂಡು ವಸತಿ ಶಾಲೆ, ವಸತಿ ನಿಲಯಗಳಲ್ಲಿ ಮಕ್ಕಳ ಸೃಜನಾತ್ಮಕತೆ ಹುಟ್ಟುಹಾಕಬೇಕು. ಮಕ್ಕಳಲ್ಲಿ ಹುದುಗಿರುವ ಸೂಕ್ತ ಪ್ರತಿಭೆಯನ್ನು ಅನಾವರಣಗೊಳಿಸಲು ಸೃಜನಾತ್ಮಕ ಪಠ್ಯೇತರ ಚಟುವಟಿಕೆ ಹಮ್ಮಿಕೊಳ್ಳುವಂತೆ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕ ಸಮಸ್ಯೆಗಳಿಗೆ ತತಕ್ಷಣ ಸ್ಪಂದಿಸಬೇಕು. ಜಿಲ್ಲೆಯ ಎಲ್ಲ ತಾಲೂಕು ಆಸ್ಪತ್ರೆಗಳು ಜನಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಅಂಗನವಾಡಿ ಕೇಂದ್ರಗಳಿಗೆ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಿಕ್ಷಣದಂತೆ ಆರೋಗ್ಯ ವ್ಯವಸ್ಥೆಯು ಅತಿ ಮುಖ್ಯವಾಗಿರುವುದರಿಂದ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳು ವ್ಯವಸ್ಥಿತವಾಗಿರುವಂತೆ ನೋಡಿಕೊಳ್ಳಬೇಕು. ಸಾರ್ವಜನಿಕರಿಂದ ಯಾವುದೇ ದೂರುಗಳು ಬರದ ಹಾಗೆ ಉತ್ತಮ ವೈದ್ಯಕೀಯ ವ್ಯವಸ್ಥೆ ಒದಗಿಸಬೇಕು. ವೈದ್ಯರ ಕೊರತೆ ಇರುವ ಬಗ್ಗೆ ವರದಿ ನೀಡಬೇಕು. ಯಾವುದೇ ಸಮಸ್ಯೆ ಉಲ್ಬವಾಗದಂತೆ ಸಾರ್ವಜನಿಕರಿಗೆ ಸೇವೆ ಒದಗಿಸಬೇಕು. ಖಾಸಗಿ ಆಸ್ಪತ್ರೆಗಳನ್ನು ಮೀರಿಸುವಂತಹ ವೈದ್ಯಕೀಯ ಸೇವೆ ನೀಡುವುದರ ಮೂಲಕ ಜನರಲ್ಲಿ ಸರ್ಕಾರಿ ಆಸ್ಪತ್ರೆಗಳ ಕುರಿತು ಆತ್ಮವಿಶ್ವಾಸ ಹೆಚ್ಚಿಸಬೇಕು ಎಂದು ಹೇಳಿದರು.

ಮುಂದಿನ ಪೀಳಿಗೆಗೆ ಕೆರೆ, ಕಟ್ಟೆ, ಬಾವಿ ಸೇರಿದಂತೆ ಜಲಮೂಲಗಳನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಇದರ ಸಂರಕ್ಷಣ ಜೊತೆಗೆ ಒತ್ತುವರಿಯಾಗಂದಂತೆ ಕ್ರಮ ವಹಿಸಬೇಕು. ಅಗತ್ಯವಿದ್ದಲ್ಲಿ ನಿರ್ಮಾಣ ಮಾಡಿಕೊಂಡು ಸುಸಜ್ಜಿತವಾಗಿಟ್ಟುಕೊಳ್ಳಬೇಕು. ಅಗತ್ಯವಿದ್ದೆಡೆ ನೀರು ಸಂರಕ್ಷಣಾ ಮಾಡಿ ಕಲುಷಿತವಾಗದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿನ ವಿಷಯದಲ್ಲಿ ಯಾವುದೇ ಲೋಪವಾಗದಂತೆ ಕಾರ್ಯ ನಿರ್ವಹಿಸಿ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ವಹಿಸಬೇಕು. ಜಿಲ್ಲೆಯಲ್ಲಿನ ಕೆರೆ ಕಟ್ಟೆ ಮತ್ತು ರಾಜ ಕಾಲುವೆ ನಿರ್ವಹಣೆಗೆ ಜೊತೆಗೆ ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಸ್ವಚ್ಛತೆಗೆ ಆದ್ಯತೆ:** ಘನತ್ಯಾಜ್ಯ ವಿಲೇವಾರಿಯಲ್ಲಿ ಜಿಲ್ಲೆ ಮಾದರಿಯಾಗಬೇಕು. ಸಾರ್ವಜನಿಕರಲ್ಲಿ ನಮ್ಮ ನಗರ ಎಂಬ ಭಾವನೆ ಮೂಡಬೇಕು. ಈ ದಿಸೆಯಲ್ಲಿ ಸ್ವಯಂ ಸೇವಕರನ್ನು ಬಳಸಿಕೊಂಡು ಅಚ್ಚುಕಟ್ಟಾಗಿ ತ್ಯಾಜ್ಯ ನಿರ್ವಹಣೆ ಮಾಡಬೇಕು. ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಬಯಲು ಶೌಚ ಮುಕ್ತ ಗ್ರಾಮಗಳಾಗಬೇಕು. ಅಧಿಕಾರಿಗಳು ಜನರೊಂದಿಗೆ ಬೆರೆತು ಜನರ ಮನವೊಲಿಸುವ ಪ್ರಯತ್ನ ಮಾಡಬೇಕು. ಬಯಲು ಶೌಚ ಪದ್ಧತಿಗೆ ಮುಕ್ತಿ ಹಾಕಬೇಕು. ಪ್ರತಿ ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನರಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು. ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಪರಿಕರಗಳನ್ನು ದಾಸ್ತಾನಿಟ್ಟುಕೊಂಡು ರೈತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು. ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಿ ಸಮಸ್ಯೆ ಇತ್ಯರ್ಥಕ್ಕೆ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಮಾತನಾಡಿ, ಜಿಲ್ಲೆಯ ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಿಷನ್ ವಿದ್ಯಾಪುರ ಮೂಲಕ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಲಾಗುತ್ತಿದೆ. ಒನಕೆ ಓಬವ್ವ ಕರಾಟೆ ತರಬೇತಿ, ಬಿಸಿಎಂ ಹಾಸ್ಟೇಲ್‌ನ ಯಲಗೂರೇಶ ನಾಯಕ ಎಂಬ ವಿದ್ಯಾರ್ಥಿ ಐಎಎಸ್ ರ‍್ಯಾಂಕ್ ಪಡೆದಿದ್ದು, ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ. ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ಪಾಸಾದ 60 ಜನ ವಿದ್ಯಾರ್ಥಿಗಳಿಗೆ ಎರಡು ದಿನ ಶೈಕ್ಷಣಿಕ ಪ್ರವಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನದ ಬಿಸಿಯೂಟ ತಯಾರಿಸುವ ಸುಮಾರು 5580 ಸಿಬ್ಬಂದಿಗಳಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ತಯಾರಿಸಿದ ಎಫ್ರಾನ್-ಸಮವಸ್ತ್ರಗಳನ್ನು ವಿತರಿಸುವ ಮೂಲಕ ಶುದ್ಧ, ಸ್ವಚ್ಛ ಆಹಾರ ತಯಾರಿಕೆ ಜೊತೆಗೆ ಶಿಸ್ತುಬದ್ಧತೆ ಪ್ರದರ್ಶನದೊಂದಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಆರ್ಥಿಕತೆಯನ್ನು ಸದೃಢಗೊಳಿಸಲು ಪ್ರಯತ್ನಿಸಲಾಗಿದೆ. ಎಸ್ಸೆಸ್ಸೆಲ್ಸಿ ಪರೀಕೆಯಲ್ಲಿ ಈ ಬಾರಿ ಜಿಲ್ಲೆ 11ನೇ ರ‍್ಯಾಂಕ್ ಪಡೆಯುವ ಮೂಲಕ ಶೈಕ್ಷಣಿಕ ಗುಣಮಟ್ಟದ ಸುಧಾರಿಸುವ ನಿಟ್ಟಿನಲ್ಲಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಲೋಕಾಯುಕ್ತ ಎಸ್.ಪಿ.ಅನಿತಾ ಹದ್ದಣ್ಣವರ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಿರಿಯ ಸಿವಿಲ್ ನ್ಯಾಯಾಧೀಶ ಸಂತೋಷ ಕುಂದರ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ವಲಯ ಅರಣ್ಯಾಧಿಕಾರಿ ಪ್ರಶಾಂತ ಸೇರಿ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.



### ಹಣ ದುರ್ಬಳಕೆ ವಿರುದ್ಧ ಕಠಿಣ ಕ್ರಮ

**ವಿಜಯಪುರ:** ಕೆಲಸ ಮಾಡದೇ ಹಣ ದುರ್ಬಳಕೆ ಮಾಡಿಕೊಂಡಿರುವ ಪ್ರಕರಣಗಳ ವಿಷಯವನ್ನು ಗಂಭೀರವಾಗಿ ಪರಿಗಣಿಸಿತಪ್ಪಿತಸ್ಥರವಿರುದ್ಧಕಠಿಣಕ್ರಮಜರುಗಿಸಲಾಗುವುದು ಎಂದು ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ ಎಚ್ಚರಿಕೆ ನೀಡಿದರು. ಪ್ರಗತಿ ಪರಿಶೀಲನೆ ಸಭೆ ನಂತರ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಭ್ರಷ್ಟಾಚಾರ ವಿರುದ್ಧ ದಿಟ್ಟ ಕ್ರಮ ಕೈಗೊಳ್ಳಲಾಗುವುದು. ದಾಳಿ ಮೂಲಕ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲಾಗುವುದು ಎಂದೂ ಅವರು ಹೇಳಿದರು. ಹಣ ಪೋಲು, ಕಳಪೆ ಕಾಮಗಾರಿ ಸೇರಿದಂತೆ ಮುಂತಾದ ವಿಷಯಗಳ ಬಗ್ಗೆ ಸಾರ್ವಜನಿಕರಿಂದ ಸುಮಾರು 15 ಸಾವಿರ ದೂರುಗಳು ಬಂದಿದ್ದು, ಅವುಗಳನ್ನು ಪರಿಶೀಲನೆ ಮಾಡಿ ಕ್ರಮ ಜರುಗಿಸಲಾಗುವುದು ಎಂದರು. ಬಯಲು ಶೌಚ ನಿರ್ಮೂಲನೆಗೆ ಕೈಗೊಂಡ ಕ್ರಮಗಳ ಬಗ್ಗೆಯೂ ವರದಿ ಕೇಳಲಾಗುತ್ತಿದೆ. ಕಲುಷಿತ ನೀರು ಪೂರೈಕೆಯಂಥ ಘಟನೆಗಳು ಮರುಕಳಿಸಬಾರದು ಎಂದು ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಹೇಳಿದರು.

ಪತ್ರಿಕೆ: ಕನ್ನಡ ಪ್ರಭ

### ಲೋಕಾಯುಕ್ತ ನ್ಯಾಯಮೂರ್ತಿ ಪಾಟೀಲ ಸೂಚನೆ | ಜಿಲ್ಲಾಮಟ್ಟದ ಪ್ರಗತಿ ಪರಿಶೀಲನೆ ಸಭೆ

# ಮಾದರಿ ಜಿಲ್ಲೆಯಾಗಿಸಲು ಶ್ರಮಿಸಿ




ವಿಜಯವಾಣಿ ಚಿತ್ರ

ವಿಜಯಪುರದ ಜಿಪಂ ಸಭಾಂಗಣದಲ್ಲಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿದರು. ಲೋಕಾಯುಕ್ತ ಎಸ್‌ಪಿ ಅನಿತಾ ಹದ್ದಣ್ಣವರ, ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಮತ್ತಿತರರಿದ್ದಾರೆ.

■ ವಿಜಯವಾಣಿ ಸುದ್ದಿಜಾಲ ವಿಜಯಪುರ

ಬಯಲು ಶೌಚಮುಕ್ತ ಗ್ರಾಮಗಳ ನಿರ್ಮಾಣ, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ವಿವಿಧ ವಸತಿ ನಿಲಯ ಹಾಗೂ ಅಂಗನವಾಡಿ ಮಕ್ಕಳ ಆರೋಗ್ಯದ ಕಾಳಜಿ, ತ್ಯಾಜ್ಯ ನಿರ್ವಹಣೆ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನದೊಂದಿಗೆ ಜಿಲ್ಲೆಯನ್ನು ರಾಜ್ಯದಲ್ಲಿಯೇ ಮಾದರಿಯನ್ನಾಗಿಸುವ ನಿಟ್ಟಿನಲ್ಲಿ ಶ್ರಮವಹಿಸಿ ಎಂದು ಅಧಿಕಾರಿಗಳಿಗೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಸೂಚಿಸಿದರು.

ನಗರದ ಜಿಪಂ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ ಸಭೆ ನಡೆಸಿದ ಅವರು, ಮಕ್ಕಳ ಭವಿಷ್ಯ ರೂಪಿಸುವುದೆಂದರೆ ರಾಷ್ಟ್ರದ ಭವಿಷ್ಯ ರೂಪಿಸಿದಂತೆ. ಮಗುವಿನ ಆರೋಗ್ಯ ಬಹುಮುಖ್ಯವಾಗಿರುತ್ತದೆ. ವಿದ್ಯೆ ನೀಡುವ ಜತೆಗೆ ಮಕ್ಕಳ ಆರೋಗ್ಯ ವ್ಯವಸ್ಥೆ ಕುರಿತು ಕಾಳಜಿ ವಹಿಸಬೇಕು. ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವಂತಹ ಶಿಕ್ಷಣ ನೀಡಬೇಕು. ಹಿರಿದಾದ ಗುರಿ ಹೊಂದುವಂತೆ ಪ್ರೇರೇಪಿಸಬೇಕು. ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಜಿಲ್ಲೆಯ ಶೈಕ್ಷಣಿಕ ಉನ್ನತಿಗೆ ಶ್ರಮಿಸಬೇಕು ಎಂದರು. ಸರ್ಕಾರಿ ವಸತಿ ನಿಲಯಗಳಲ್ಲಿ ಸ್ವಚ್ಛತೆ ಕಾಯ್ದುಕೊಳ್ಳಬೇಕು. ವಸತಿ ನಿಲಯಗಳು ಮತ್ತು ವಸತಿ ಶಾಲೆಗಳು ಮಕ್ಕಳನ್ನು ಆಕರ್ಷಿಸುವಂತಿರಬೇಕು. ಸ್ವಚ್ಛತೆ ಶಿಸ್ತುಬದ್ಧ ರೂಢಿಗತ ಮತ್ತು ಯೋಜನಾಬದ್ಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಬೇಕು. ಜಿಲ್ಲೆ ಮುಂಬರುವ ದಿನಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸಾಧನೆ ನಿಟ್ಟಿನಲ್ಲಿ ಕಲೆ, ಸಾಹಿತ್ಯ ಪಠ್ಯೇತರ ಚಟುವಟಿಕೆಗಳನ್ನ ಕೈಗೊಂಡು ವಸತಿ ಶಾಲೆ, ವಸತಿ ನಿಲಯಗಳಲ್ಲಿ ಮಕ್ಕಳ ಸೃಜನಾತ್ಮಕತೆ ಹುಟ್ಟುಹಾಕಬೇಕು. ಮಕ್ಕಳಲ್ಲಿ ಹುದುಗಿರುವ ಸೂಕ್ತ ಪ್ರತಿಭೆಯನ್ನು ಅನಾವರಣಗೊಳಿಸಲು ಸೃಜನಾತ್ಮಕ ಪಠ್ಯೇತರ ಚಟುವಟಿಕೆ ಹಮ್ಮಿಕೊಳ್ಳುವಂತೆ ಸಮಾಜಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

**ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ:** ಸಾರ್ವಜನಿಕ ಸಮಸ್ಯೆಗಳಿಗೆ ತತ್‌ಕ್ಷಣ ಸ್ಪಂದಿಸಬೇಕು. ತಾಲೂಕು ಆಸ್ಪತ್ರೆಗಳು ಜನಸಾಮಾನ್ಯರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ಅಂಗನವಾಡಿ ಕೇಂದ್ರಗಳಿಗೆ ಅಧಿಕಾರಿಗಳು ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಮೂಲ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸುವಂತೆ ಸೂಚಿಸಿದರು.

ಶಿಕ್ಷಣದಂತೆ ಆರೋಗ್ಯ ವ್ಯವಸ್ಥೆಯು ಅತಿ ಮುಖ್ಯವಾಗಿರುವುದರಿಂದ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳು ವ್ಯವಸ್ಥಿತವಾಗಿರುವಂತೆ ನೋಡಿಕೊಳ್ಳಬೇಕು. ಸಾರ್ವಜನಿಕರಿಂದ ಯಾವುದೇ ದೂರುಗಳು ಬರದ ಹಾಗೆ ಉತ್ತಮ ವೈದ್ಯಕೀಯ ವ್ಯವಸ್ಥೆ ಒದಗಿಸಬೇಕು. ವೈದ್ಯರ ಕೊರತೆ ಇರುವ ಬಗ್ಗೆ ವರದಿ ನೀಡಬೇಕು. ಯಾವುದೇ ಸಮಸ್ಯೆ ಉಲ್ಬಣವಾಗದಂತೆ ಸಾರ್ವಜನಿಕರಿಗೆ ಸೇವೆ ಒದಗಿಸಬೇಕು. ಖಾಸಗಿ ಆಸ್ಪತ್ರೆಗಳನ್ನು ಮೀರಿಸುವಂತಹ ವೈದ್ಯಕೀಯ ಸೇವೆ ನೀಡುವುದರ ಮೂಲಕ ಜನರಲ್ಲಿ ಸರ್ಕಾರಿ ಆಸ್ಪತ್ರೆಗಳ ಕುರಿತು ಆತ್ಮವಿಶ್ವಾಸ ಹೆಚ್ಚಿಸಬೇಕು ಎಂದು ಹೇಳಿದರು.

**ಸ್ವಚ್ಛತೆಗೆ ಆದ್ಯತೆ:** ಘನತ್ಯಾಜ್ಯ ವಿಲೇವಾರಿಯಲ್ಲಿ ಜಿಲ್ಲೆ ಮಾದರಿಯಾಗಬೇಕು. ಸಾರ್ವಜನಿಕರಲ್ಲಿ ನಮ್ಮ ನಗರ ಎಂಬ ಭಾವನೆ ಮೂಡಬೇಕು. ಈ ದಿಸೆಯಲ್ಲಿ ಸ್ವಯಂ ಸೇವಕರನ್ನು ಬಳಸಿಕೊಂಡು ಅಚ್ಚುಕಟ್ಟಾಗಿ ತ್ಯಾಜ್ಯ ನಿರ್ವಹಣೆ ಮಾಡಬೇಕು. ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಬಯಲು ಶೌಚಮುಕ್ತ ಗ್ರಾಮಗಳಾಗಬೇಕು. ಅಧಿಕಾರಿಗಳು ಜನರೊಂದಿಗೆ ಬೆರೆತು ಜನರ ಮನವೊಲಿಸುವ ಪ್ರಯತ್ನ ಮಾಡಬೇಕು. ಬಯಲು ಶೌಚ ಪದ್ಧತಿಗೆ ಮುಕ್ತಿ ನೀಡಬೇಕು ಎಂದರು.

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ, ರಸಗೊಬ್ಬರ, ಕೃಷಿ ಪರಿಕರಗಳನ್ನು ದಾಸ್ತಾನಿಟ್ಟುಕೊಂಡು ರೈತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು ಎಂದರು. ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಮಾತನಾಡಿ, ಜಿಲ್ಲೆಯ ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಿಷನ್ ವಿದ್ಯಾಪುರ ಮೂಲಕ ವಿದ್ಯಾರ್ಥಿಗಳಿಗೆ ಕೋಚಿಂಗ್ ನೀಡಲಾಗುತ್ತಿದೆ. ಒನಕೆ ಓಬವ್ವ ಕರಾಟೆ ತರಬೇತಿ, ಬಿಸಿಎಂ ಹಾಸ್ಟೇಲ್‌ನ ಯಲಗೂರೇಶ ನಾಯಕ ಎಂಬ ವಿದ್ಯಾರ್ಥಿ ಐಎಎಸ್ ರ್‍ಯಾಂಕ್ ಪಡೆದಿದ್ದು, ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ. ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ಪಾಸಾದ 60 ವಿದ್ಯಾರ್ಥಿಗಳಿಗೆ ಎರಡು ದಿನ ಶೈಕ್ಷಣಿಕ ಪ್ರವಾಸ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನದ ಬಿಸಿಯೂಟ ತಯಾರಿಸುವ ಸುಮಾರು 5,580 ಸಿಬ್ಬಂದಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ತಯಾರಿಸಿದ ಏಪ್ರಾನ್-ಸಮವಸ್ತ್ರಗಳನ್ನು ವಿತರಿಸುವ ಮೂಲಕ ಶುದ್ಧ, ಸ್ವಚ್ಛ ಆಹಾರ ತಯಾರಿಕೆ ಜತೆಗೆ ಶಿಸ್ತುಬದ್ಧತೆ ಪ್ರದರ್ಶನದೊಂದಿಗೆ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಆರ್ಥಿಕತೆಯನ್ನು ಸದೃಢಗೊಳಿಸಲು ಪ್ರಯತ್ನಿಸಲಾಗಿದೆ ಎಂದರು. ಲೋಕಾಯುಕ್ತ ಎಸ್‌ಪಿ ಅನಿತಾ ಹದ್ದಣ್ಣವರ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವ್ಹಿಲ್ ನ್ಯಾಯಾಧೀಶ ಸಂತೋಷ ಕುಂದರ, ಎಎಸ್‌ಪಿ ಶಂಕರ ಮಾರಿಹಾಳ, ಜಿಪಂ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ವಲಯ ಅರಣ್ಯಾಧಿಕಾರಿ ಪ್ರಶಾಂತ ಮತ್ತಿತರರಿದ್ದರು.

> **ಲೋಕಾಯುಕ್ತ ನ್ಯಾಯಮೂರ್ತಿ ಹುದ್ದೆ ಅಲಂಕರಿಸಿದ ಮೇಲೆ 15 ಸಾವಿರ ಪ್ರಕರಣ ದಾಖಲಾಗಿವೆ.** ಅವುಗಳನ್ನು ಗಂಭೀರವಾಗಿ ಪರಿಗಣಿಸಿ ಸಮರೋಪಾದಿಯಲ್ಲಿ ತನಿಖೆ ನಡೆಸಲಾಗುತ್ತಿದೆ. ರಾಜ್ಯದ 11 ಚೆಕ್‌ಪೋಸ್ಟ್ ಗಳ ಮೇಲೆ ದಾಳಿ ನಡೆಸಲಾಗಿದೆ. ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸಕಲ ಕ್ರಮ ಕೈಗೊಳ್ಳಲಾಗಿದೆ. ಕಾಲಕಾಲಕ್ಕೆ ದಾಳಿ ನಡೆಸುವುದರ ಜತೆಗೆ ದೂರು ಆಧರಿಸಿ ಟ್ರ್ಯಾಪ್ ಕೂಡ ಮಾಡಲಾಗುತ್ತಿದೆ. ಭ್ರಷ್ಟಾಚಾರ ತಡೆಗೆ ಸಾರ್ವಜನಿಕರ ಸಹಕಾರವೂ ಅಗತ್ಯ.
>
> | ಬಿ.ಎಸ್. ಪಾಟೀಲ,
> ಲೋಕಾಯುಕ್ತ ನ್ಯಾಯಮೂರ್ತಿ

## ಜಲಮೂಲಗಳ ಸಂರಕ್ಷಣೆ

ಕೆರೆ, ಕಟ್ಟೆ, ಬಾವಿ ಸೇರಿದಂತೆ ಜಲಮೂಲಗಳನ್ನು ಉಳಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಇದರ ಸಂರಕ್ಷಣೆ ಜೊತೆಗೆ ಒತ್ತುವರಿಯಾಗದಂತೆ ಕ್ರಮವಹಿಸಬೇಕು. ಅಗತ್ಯವಿದ್ದಲ್ಲಿ ನಿರ್ಮಾಣ ಮಾಡಿಕೊಂಡು ಸುಸಜ್ಜಿತವಾಗಿಟ್ಟುಕೊಳ್ಳಬೇಕು. ಅಗತ್ಯವಿದ್ದೆಡೆ ನೀರು ಸಂರಕ್ಷಣೆ ಮಾಡಿ ಕಲುಷಿತವಾಗದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿನ ವಿಷಯದಲ್ಲಿ ಯಾವುದೇ ಲೋಪವಾಗದಂತೆ ಕಾರ್ಯನಿರ್ವಹಿಸಿ ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮ ವಹಿಸಬೇಕು. ಜಿಲ್ಲೆಯಲ್ಲಿನ ಕೆರೆ ಕಟ್ಟೆ ಮತ್ತು ರಾಜಕಾಲುವೆ ನಿರ್ವಹಣೆಗೆ ಜತೆಗೆ ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪತ್ರಿಕೆ- ವಿಜಯವಾಣಿ

# ೋಕಾಯುಕ್ತರಿಗೆ ರಾಜ್ಯ ರೈತ ಸಂಘ, ಹಸಿರು ಸೇನೆಯವರ ಮನವಿ, ತನಿಖೆಗೆ ಆಗ್ರಹ

ಸುದ್ದಿಲೋಕ ದೇವರಹಿಪ್ಪರಗಿ
ು ಸೇರಿದಂತೆ ವಿಜಯಪುರ
ಲ್ಲಿ ಫಸಲ್ ಬೀಮಾ
ನೆಯಿಂದ ರೈತರಿಗೆ ಯಾವುದೇ
ಪ್ರಯೋಜನವಾಗದೆ
ಯೋಜನೆ ದುರುಪಯೋಗ
ದೆ. ಅದನ್ನು ತನಿಖೆ ಮಾಡಿಸಿ
ಅನುಕೂಲ
ೂಡಬೇಕೆಂದು ರಾಜ್ಯ ರೈತ
ಹಾಗೂ ಹಸಿರು ಸೇನೆ ಪದಾಧಿ
ಿ ಲೋಕಾಯುಕ್ತರಿಗೆ ಮನವಿ
ರು.

ಯಪುರದ ಜಿಪಂ
ಗಣದಲ್ಲಿ ನಡೆದ
ಯುಕ್ತರ ಅದಾಲತ್‌ನಲ್ಲಿ
ಸಲ್ಲಿಸಿದ ರೈತ ಸಂಘದ ಪದಾಧಿ
ು, ರೈತರಿಗೆ
ೂಲವಾಗಲೆಂದು ಪ್ರಕೃತಿ
ದ್ದರೂ ವಿಮ ಕೈ ಹಿಡಿಯಲೆಂದು
ರ ಫಸಲ್ ಬೀಮಾ
ಜನೆಯನ್ನು ಜಾರಿಗೆ ತಂದಿದೆ.
ಫಸಲ್ ಬೀಮಾ
ಜನೆಯಡಿಯಲ್ಲಿ ತುಂಬಿಸಿಕೊಳ್ಳಲಾದ ವಿಮೆಗೆ ಯಾವುದೇ ರೀತಿಯ ವಿಮೆ ನೀಡದೆ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ. ಪ್ರತಿ ಸಲ ರೈತರೆಲ್ಲರೂ ಪ್ರಕೃತಿ ಕೈಕೊಟ್ಟರೆ ವಿಮೆಯಾದರೂ ಕೈ ಹಿಡಿಯುವುದು ಎಂಬ ಭರವಸೆಯೊಂದಿಗೆ ಇಟ್ಟುಕೊಂಡು ಫಸಲ್ ಭೀಮಾ ಯೋಜನೆಯಡಿಯಲ್ಲಿ ವಿಮೆ ಹಣ ತುಂಬುತ್ತಿದ್ದಾರೆ.

ಕಳೆದ 3-4 ವರ್ಷಗಳಿಂದ ಬೆಳೆ ವಿಮೆ ಕಂತು ಪಾವತಿಸಿದವರಿಗೆ ಪರಿಹಾರ ಸಿಕ್ಕಿಲ್ಲ, ವಿಮೆ ಕಂಪನಿ ಅಧಿಕಾರಿಗಳು ಹಾಗೂ ಏಜೆಂಟರು ತಮಗೆ ಬೇಕಾದ ಬೆಳೆ ನಿರ್ಣಯಿಸಿ, ಬೇಕಾದ ರೈತರಿಗೆ ಜಾರಿಗೊಳಿಸುವುದು ನಡೆದಿದೆ. ಅದಕ್ಕಾಗಿ ಸಂಪೂರ್ಣ ತನಿಖೆ ನಡೆಸಿ ಅರ್ಹ ರೈತರಿಗೆ ಪಸಲ್ ಬೀಮಾ ಯೋಜನೆಯ ವಿಮಾ ಹಣ ಬರುವಂತೆ ಕ್ರಮ ಕೈಕೊಳ್ಳಬೇಕೆಂದು ರೈತಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಸಂಗಮೇಶ ಸಗರ, ಜಿಲ್ಲಾ ಸಂಚಾಲಕ ರಾಮನಗೌಡ ಪಾಟೀಲ, ಗೌರವಾಧ್ಯಕ್ಷ ಕಲ್ಲಪ್ಪಣ್ಣ ಪಾರಶೆಟ್ಟಿ ಬಳ್ಳಾರಿ ಜಿಲ್ಲಾಧ್ಯಕ್ಷ ರಾಘವೇಂದ್ರ ಸಿ, ಸಂಗಪ್ಪ ಚಟ್ಟರಕಿ, ಬಸವರಾಜ ಪಾಟೀಲ, ರಮೇಶ ಹೊಸಮನಿ, ಮೌನೇಶ ಬಡಿಗೇರ ಸೇರಿದಂತೆ ರೈತಸಂಘದ ಪದಾಧಿಕಾರಿಗಳು, ಕಾರ್ಯಕರ್ತರು ಸಾರ್ವಜನಿಕರು ಉಪಸ್ಥಿತರಿದ್ದರು.

(V. K.)



ದೇವರಹಿಪ್ಪರಗಿ ತಾಲೂಕು ಸೇರಿದಂತೆ ಜಿಲ್ಲೆಯಾದ್ಯಂತ ಫಸಲ್ ಬೀಮಾ ಯೋಜನೆಯಡಿಯಲ್ಲಿ ರೈತರಿಗೆ ಸೂಕ್ತ ರೀತಿಯಲ್ಲಿ ವಿಮಾ ಪರಿಹಾರ ದೊರಕುವಂತೆ ಕ್ರಮ ಕೈಕೊಳ್ಳಬೇಕೆಂದು ರೈತಸಂಘದ ಪರವಾಗಿ ಮನವಿ ಲೋಕಾಯುಕ್ತರಿಗೆ ಮನವಿ ಸಲ್ಲಿಸಲಾಯಿತು.

**ನ್ಯಾಯ ಒದಗಿಸಿ** ಮಳೆಯನ್ನೇ ನಂಬಿದ ಜಿಲ್ಲೆಯ ರೈತರು ಈ ಭಾಗದಲ್ಲಿ ಅತೀವೃಷ್ಟಿ ಹಾಗೂ ಅನಾವೃಷ್ಟಿಗಳಿಂದ ಬೆಳೆಗಳು ಹಾನಿಗೀಡಾಗಿ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ, ಆದರೆ ಕಳೆದ 2-3 ವರ್ಷಗಳಿಂದ ಬೆಳೆ ವಿಮೆ ಬಾರದೇ ಪರಿತಪಿಸುವಂತಾಗಿದೆ. ಸಂಬಂಧಿಸಿದವರು ರೈತರ ಜಮೀನುಗಳಿಗೆ ಬಂದು ಸಮೀಕ್ಷೆ ಮಾಡುವುದಿಲ್ಲ. ವಿಮಾ ಕಂಪನಿಯವರು ಕೇವಲ ಅಧಿಕಾರ ಶಾಹಿಗಳಿಗೆ ಮಣೆ ಹಾಕುತ್ತ ಅರ್ಹ ಫಲಾನುಭವಿಗಳಿಗೆ ಫಸಲ್ ಬೀಮಾ ಯೋಜನೆ ತಲುಪದಂತಾಗಿದೆ. ಇದರಿಂದ ಸಾಕಷ್ಟು ಗೊಂದಲಗಳಿವೆ, ಅದಕ್ಕಾಗಿ ಮಾನ್ಯ ಗೌರವಾನ್ವಿತ ಲೋಕಾಯುಕ್ತರು ಇದನ್ನು ಸೂಕ್ತ ತನಿಖೆಮಾಡಿ ರೈತರಿಗೆ ನ್ಯಾಯ ಒದಗಿಸಿಕೊಡಬೇಕು.

ಪತ್ರಿಕೆ: ವಿಜಯ ಕರ್ನಾಟಕ.



ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಗದಗ ಜಿಲ್ಲಾ ಆಸ್ಪತ್ರೆಗೆ ಶುಕ್ರವಾರ ಭೇಟಿ ನೀಡಿ ಪರಿಶೀಲಿಸಿದರು

## ಜಿಲ್ಲಾ ಆಸ್ಪತ್ರೆಗೆ ಲೋಕಾಯುಕ್ತರ ಭೇಟಿ

ಗದಗ: ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಶುಕ್ರವಾರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಸೌಲಭ್ಯಗಳ ಪರಿಶೀಲನೆ ನಡೆಸಿದರು.

ಜಿಲ್ಲಾ ಆಸ್ಪತ್ರೆಯ ಹೊರ ರೋಗಿಗಳ ವಿಭಾಗ, ನವಜಾತ ಶಿಶುಗಳ ವಿಭಾಗ, ಐಸಿಯು ಸೇರಿದಂತೆ ವಿವಿಧ ವಿಭಾಗಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲಿಸಿದರು. ಆಸ್ಪತ್ರೆಯಲ್ಲಿನ ಸ್ವಚ್ಛತೆ, ಕಾವಲುಗಾರರು ಇಲ್ಲದೇ ಇರುವ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಅವರು, ಈ ಕುರಿತು ಗಮನ ಹರಿಸುವಂತೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಆಸ್ಪತ್ರೆಗೆ ಬಂದಿದ್ದ ರೋಗಿಗಳ ಸಮಸ್ಯೆ ಆಲಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಲ್ಲಾ ಪಂಚಾಯ್ತಿ ಸಿಇಒ ಡಾ.ಸುಶೀಲಾ ಬಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಲೋಕಾಯುಕ್ತ ಎಸ್‌ಪಿ ಸತೀಶ್ ಎಸ್.ಚಿಟಗುಬ್ಬಿ, ಎಡಿಸಿ ಮಾರುತಿ ಎಂ.ಪಿ., ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಎಸ್.ಕರಿಗೌಡರ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ, ಲೋಕಾಯುಕ್ತ ಇನ್‌ಸ್ಪೆಕ್ಟರ್ ರವಿ ಪುರುಷೋತ್ತಮ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವೈದ್ಯಾಧಿಕಾರಿಗಳು ಇದ್ದರು.

ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಭಿಮತ

# ಕಾಯಕ ತೃಪ್ತಿಯೇ ಜೀವನ ಸಂತೋಷ

ಪ್ರಜಾವಾಣಿ ವಾರ್ತೆ

ಗದಗ: 'ಯಾವುದೇ ವ್ಯಕ್ತಿಯಾಗಲೀ ಮಾಡುವ ಕೆಲಸದಲ್ಲಿ ತೃಪ್ತಿ ಇದ್ದರೆ ಅದೇ ಜೀವನದ ನಿಜವಾದ ಸಂತೋಷ. ನಮ್ಮ ವೃತ್ತಿ ಬದುಕಿನಲ್ಲಿ ದೊರಕಿದ ಅನುಭವಗಳನ್ನು ಮುಂದಿನ ಪೀಳಿಗೆಗೆ ದಾಟಿಸುವ ಪ್ರಯತ್ನವನ್ನು ಪ್ರತಿಯೊಬ್ಬರೂ ಮಾಡಬೇಕು. ನಾವು ಮಾಡಿದ ಕೆಲಸಗಳು ಸತ್ತ ನಂತರವೂ ನಮ್ಮ ಹೆಸರು ಮೂಡಿಸುವಂತೆ ಇರಬೇಕು' ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಹೇಳಿದರು.

ನಗರದ ಮಾಂಗಲ್ಯ ಮಂದಿರದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಡಾ. ಶೇಖರ ಡಿ. ಸಜ್ಜನವರ ಅವರ 'ಮಾಹಿತಿ ಹಕ್ಕು ಅಧಿನಿಯಮ 2005'ರ ಪರಿಷ್ಕೃತ ಮೂರನೇ ಆವೃತ್ತಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

'ಡಾ.ಶೇಖರ ಸಜ್ಜನರ ಅವರು ಬಹುಮುಖಿ ಆಸಕ್ತಿ ಹೊಂದಿದ್ದು, ಸಮಾಜಕ್ಕಾಗಿ ಏನಾದರೂ ಮಾಡಬೇಕು ಎಂಬ ತುಡಿತ ಹೊಂದಿದವರು. ಅವರೊಳಗೆ ಇರುವ ತುಡಿತದ ಫಲವಾಗಿಯೇ ಅವರು ವಿವಿಧ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದಾರೆ. ಅದರ ಜತೆಗೆ ಪುಸ್ತಕವನ್ನೂ ಬರೆದಿದ್ದಾರೆ. ಮಾಹಿತಿ ಆಯುಕ್ತರಾಗಿ ಗುರುತರವಾದ ಕೆಲಸ ಮಾಡಿದ್ದಾರೆ. ಮಾಹಿತಿ ಹಕ್ಕು ಎಂಬುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅತಿ ಮುಖ್ಯ. ಮಾಹಿತಿ ಸಿಗದಿದ್ದರೆ ವಿಶ್ಲೇಷಣೆ ಸಾಧ್ಯವಿಲ್ಲ' ಎಂದರು.

> ಮಾಹಿತಿ ಹಕ್ಕು ಕಾಯ್ದೆ ಜಾರಿ ಬಳಿಕ ದೇಶದಲ್ಲಿ ಭ್ರಷ್ಟಾಚಾರಕ್ಕೆ ಸ್ವಲ್ಪ ಪ್ರಮಾಣದಲ್ಲಿ ಕಡಿವಾಣ ಬಿದ್ದಿದೆ. ಆಡಳಿತಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು ಅರ್ಜಿ ನೀಡಿ ಪಡೆಯಬಹುದು
>
> ಡಾ. ಶೇಖರ ಡಿ.ಸಜ್ಜನರ, ಕರ್ನಾಟಕ ಮಾಹಿತಿ ಆಯೋಗದ ವಿಶ್ರಾಂತ ಆಯುಕ್ತ

'ಸಾಮಾಜಿಕ ಬದುಕು, ಭಾವನಾತ್ಮಕ ತುಡಿತ, ಬೌದ್ಧಿಕ ಪ್ರಬುದ್ಧತೆ ಜತೆಗೆ ಸಮಾಜದಲ್ಲಿ ನಮ್ಮ ಹೆಜ್ಜೆ ಗುರುತುಗಳನ್ನು ಮೂಡಿಸುವಂತಹ ಸಮತೋಲನದ ಬದುಕನ್ನು ಎಲ್ಲರೂ ರೂಢಿಸಿಕೊಳ್ಳಬೇಕು' ಎಂದು ಹೇಳಿದರು.



ಗದಗ ನಗರದ ಮಾಂಗಲ್ಯ ಮಂದಿರದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಡಾ.ಶೇಖರ ಡಿ. ಸಜ್ಜನವರ ಅವರ 'ಮಾಹಿತಿ ಹಕ್ಕು ಅಧಿನಿಯಮ 2005'ರ ಪರಿಷ್ಕೃತ ಮೂರನೇ ಆವೃತ್ತಿಯನ್ನು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಲೋಕಾರ್ಪಣೆ ಮಾಡಿದರು

ಗ್ರಂಥ ಕರ್ತೃ ಕರ್ನಾಟಕ ಮಾಹಿತಿ ಆಯೋಗದ ವಿಶ್ರಾಂತ ಆಯುಕ್ತ ಡಾ. ಶೇಖರ ಡಿ.ಸಜ್ಜನರ ಮಾತನಾಡಿ, 'ಸರ್ಕಾರದ ವಿವಿಧ ಇಲಾಖೆಗಳಷ್ಟೇ ಅಲ್ಲದೇ ಸರ್ಕಾರದಿಂದ ಗಣನೀಯ ಪ್ರಮಾಣದಲ್ಲಿ ಅನುದಾನ ಪಡೆಯುವ ಖಾಸಗಿ ಸಂಸ್ಥೆಗಳು ಕೂಡ ಮಾಹಿತಿ ಹಕ್ಕು ಕಾಯ್ದೆ ಅಡಿ ಬರುತ್ತವೆ' ಎಂದು ಹೇಳಿದರು.

ಗದಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ ಕೆ., ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಎಸ್‌ಪಿ ಬಿಎಸ್. ನೇಮಗೌಡ, ಜಿಲ್ಲಾ ಪಂಚಾಯ್ತಿ ಸಿಇಒ ಡಾ. ಸುಶೀಲಾ ಬಿ., ನಿವೃತ್ತ ನ್ಯಾಯಾಧೀಶ ಎಸ್. ಜಿ.ಪಲ್ಲೇದ ವೇದಿಕೆಯಲ್ಲಿ ಇದ್ದರು.

ನಿವೃತ್ತ ಪ್ರಾಚಾರ್ಯ ಡಾ.ಜಿ.ಬಿ. ಪಾಟೀಲ ನಿರೂಪಿಸಿದರು.

ಪ್ರಜಾವಾಣಿ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ:-08/07/2023 ರಂದು ಪ್ರಕಟವಾದ ಪುಟ3.



ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಗದಗ ಜಿಲ್ಲಾ ಆಸ್ಪತ್ರೆಗೆ ಶುಕ್ರವಾರ ಭೇಟಿ ನೀಡಿ ಪರಿಶೀಲಿಸಿದರು

## ಜಿಲ್ಲಾ ಆಸ್ಪತ್ರೆಗೆ ಲೋಕಾಯುಕ್ತರ ಭೇಟಿ

ಗದಗ: ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಶುಕ್ರವಾರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಸೌಲಭ್ಯಗಳ ಪರಿಶೀಲನೆ ನಡೆಸಿದರು.

ಜಿಲ್ಲಾ ಆಸ್ಪತ್ರೆಯ ಹೊರ ರೋಗಿಗಳ ವಿಭಾಗ, ನವಜಾತ ಶಿಶುಗಳ ವಿಭಾಗ, ಐಸಿಯು ಸೇರಿದಂತೆ ವಿವಿಧ ವಿಭಾಗಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲಿಸಿದರು. ಆಸ್ಪತ್ರೆಯಲ್ಲಿನ ಸ್ವಚ್ಛತೆ, ಕಾವಲುಗಾರರು ಇಲ್ಲದೇ ಇರುವ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಅವರು, ಈ ಕುರಿತು ಗಮನ ಹರಿಸುವಂತೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಆಸ್ಪತ್ರೆಗೆ ಬಂದಿದ್ದ ರೋಗಿಗಳ ಸಮಸ್ಯೆ ಆಲಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಲ್ಲಾ ಪಂಚಾಯ್ತಿ ಸಿಇಒ ಡಾ.ಸುಶೀಲಾ ಬಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಲೋಕಾಯುಕ್ತ ಎಸ್‌ಪಿ ಸತೀಶ್ ಎಸ್.ಚಿಟಗುಬ್ಬಿ, ಎಡಿಸಿ ಮಾರುತಿ ಎಂ.ಪಿ., ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಎಸ್.ಕರಿಗೌಡರ, ಲೋಕಾಯುಕ್ತ ಡಿ.ವೈ.ಎಸ್.ಪಿ. ಶಂಕರ ರಾಗಿ, ಲೋಕಾಯುಕ್ತ ಇನ್‌ಸ್ಪೆಕ್ಟರ್ ರವಿ ಪುರುಷೋತ್ತಮ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವೈದ್ಯಾಧಿಕಾರಿಗಳು ಇದ್ದರು.

### ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಭಿಮತ

# ಕಾಯಕ ತೃಪ್ತಿಯೇ ಜೀವನ ಸಂತೋಷ

ಪ್ರಜಾವಾಣಿ ವಾರ್ತೆ

ಗದಗ: 'ಯಾವುದೇ ವ್ಯಕ್ತಿಯಾಗಲೀ ಮಾಡುವ ಕೆಲಸದಲ್ಲಿ ತೃಪ್ತಿ ಇದ್ದರೆ ಅದೇ ಜೀವನದ ನಿಜವಾದ ಸಂತೋಷ. ನಮ್ಮ ವೃತ್ತಿ ಬದುಕಿನಲ್ಲಿ ದೊರಕಿದ ಅನುಭವಗಳನ್ನು ಮುಂದಿನ ಪೀಳಿಗೆಗೆ ದಾಟಿಸುವ ಪ್ರಯತ್ನವನ್ನು ಪ್ರತಿಯೊಬ್ಬರೂ ಮಾಡಬೇಕು. ನಾವು ಮಾಡಿದ ಕೆಲಸಗಳು ಸತ್ತ ನಂತರವೂ ನಮ್ಮ ನೆನಪು ಮೂಡಿಸುವಂತೆ ಇರಬೇಕು' ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಹೇಳಿದರು.

ನಗರದ ಮಾಂಗಲ್ಯ ಮಂದಿರದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಡಾ. ಶೇಖರ ಡಿ. ಸಜ್ಜನವರ ಅವರ 'ಮಾಹಿತಿ ಹಕ್ಕು ಅಧಿನಿಯಮ 2005'ರ ಪರಿಷ್ಕೃತ ಮೂರನೇ ಆವೃತ್ತಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

'ಡಾ.ಶೇಖರ ಸಜ್ಜನರ ಅವರು ಬಹುಮುಖಿ ಆಸಕ್ತಿ ಹೊಂದಿದ್ದು, ಸಮಾಜಕ್ಕಾಗಿ ಏನಾದರೂ ಮಾಡಬೇಕು ಎಂಬ ತುಡಿತ ಹೊಂದಿದವರು. ಅವರೊಳಗೆ ಇರುವ ತುಡಿತದ ಫಲವಾಗಿಯೇ ಅವರು ವಿವಿಧ ಕ್ಷೇತ್ರದಲ್ಲಿ ತೊಡಗಿಸಿಕೊಂಡಿದ್ದಾರೆ. ಅದರ ಜತೆಗೆ ಪುಸ್ತಕವನ್ನೂ ಬರೆದಿದ್ದಾರೆ. ಮಾಹಿತಿ ಆಯುಕ್ತರಾಗಿ ಗುರುತರವಾದ ಕೆಲಸ ಮಾಡಿದ್ದಾರೆ. ಮಾಹಿತಿ ಹಕ್ಕು ಎಂಬುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅತಿ ಮುಖ್ಯ. ಮಾಹಿತಿ ಸಿಗದಿದ್ದರೆ ವಿಶ್ಲೇಷಣೆ ಸಾಧ್ಯವಿಲ್ಲ' ಎಂದರು.

> ಮಾಹಿತಿ ಹಕ್ಕು ಕಾಯ್ದೆ ಜಾರಿ ಬಳಿಕ ದೇಶದಲ್ಲಿ ಭ್ರಷ್ಟಾಚಾರಕ್ಕೆ ಸ್ವಲ್ಪ ಪ್ರಮಾಣದಲ್ಲಿ ಕಡಿವಾಣ ಬಿದ್ದಿದೆ. ಆಡಳಿತಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು ಅರ್ಜಿ ನೀಡಿ ಪಡೆಯಬಹುದು
>
> ಡಾ. ಶೇಖರ ಡಿ.ಸಜ್ಜನರ, ಕರ್ನಾಟಕ ಮಾಹಿತಿ ಆಯೋಗದ ವಿಶ್ರಾಂತ ಆಯುಕ್ತ

'ಸಾಮಾಜಿಕ ಬದುಕು, ಭಾವನಾತ್ಮಕ ತುಡಿತ, ಬೌದ್ಧಿಕ ಪ್ರಬುದ್ಧತೆ ಜತೆಗೆ ಸಮಾಜದಲ್ಲಿ ನಮ್ಮ ಹೆಜ್ಜೆ ಗುರುತುಗಳನ್ನು ಮೂಡಿಸುವಂತಹ ಸಮತೋಲನದ ಬದುಕನ್ನು ಎಲ್ಲರೂ ರೂಢಿಸಿಕೊಳ್ಳಬೇಕು' ಎಂದು ಹೇಳಿದರು.



ಗದಗ ನಗರದ ಮಾಂಗಲ್ಯ ಮಂದಿರದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ ಡಾ.ಶೇಖರ ಡಿ. ಸಜ್ಜನವರ ಅವರ 'ಮಾಹಿತಿ ಹಕ್ಕು ಅಧಿನಿಯಮ 2005'ರ ಪರಿಷ್ಕೃತ ಮೂರನೇ ಆವೃತ್ತಿಯನ್ನು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಲೋಕಾರ್ಪಣೆ ಮಾಡಿದರು

ಗ್ರಂಥ ಕರ್ತೃ ಕರ್ನಾಟಕ ಮಾಹಿತಿ ಆಯೋಗದ ವಿಶ್ರಾಂತ ಆಯುಕ್ತ ಡಾ. ಶೇಖರ ಡಿ.ಸಜ್ಜನರ ಮಾತನಾಡಿ, 'ಸರ್ಕಾರದ ವಿವಿಧ ಇಲಾಖೆಗಳಷ್ಟೇ ಅಲ್ಲದೇ ಸರ್ಕಾರದಿಂದ ಗಣನೀಯ ಪ್ರಮಾಣದಲ್ಲಿ ಅನುದಾನ ಪಡೆಯುವ ಖಾಸಗಿ ಸಂಸ್ಥೆಗಳು ಕೂಡ ಮಾಹಿತಿ ಹಕ್ಕು ಕಾಯ್ದೆ ಅಡಿ ಬರುತ್ತವೆ' ಎಂದು ಹೇಳಿದರು.

ಗದಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ ಕೆ., ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಎಸ್‌ಪಿ ಬಿ.ಎಸ್. ನೇಮಗೌಡ, ಜಿಲ್ಲಾ ಪಂಚಾಯ್ತಿ ಸಿಇಒ ಡಾ. ಸುಶೀಲಾ ಬಿ., ನಿವೃತ್ತ ನ್ಯಾಯಾಧೀಶ ಎಸ್.ಜಿ.ಪಲ್ಲೇದ ವೇದಿಕೆಯಲ್ಲಿ ಇದ್ದರು.

ನಿವೃತ್ತ ಪ್ರಾಚಾರ್ಯ ಡಾ.ಜಿ.ಬಿ. ಪಾಟೀಲ ನಿರೂಪಿಸಿದರು.

ಪ್ರಜಾವಾಣಿ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ:- 08/07/2023 ರಂದು ಪ್ರಕಟವಾದ ಸುದ್ದಿ.

ನವೋದಯ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ:08.07.2023 ರಂದು ಪ್ರಕಟವಾದ ಮಾಹಿತಿ.

**ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲರಿಂದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ**

# ನೌಕರರು ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆಗೈಯ್ಯಬೇಕು; ಸರ್ಕಾರಿ ಸೇವೆಯಲ್ಲಿ ಪ್ರಾಮಾಣಿಕತೆ-ಸೇವಾ ಮನೋಭಾವನೆ ಮೈಗೂಡಿಸಿಕೊಳ್ಳಿ



ಗದಗ, ಜು. 7. ಸರ್ಕಾರಿ ನೌಕರರು ತಮ್ಮ ದೈನಂದಿನ ಕರ್ತವ್ಯದಲ್ಲಿ ಪ್ರಾಮಾಣಿಕತೆ, ಸೇವಾ ಮನೋಭಾವನೆಯನ್ನು ಮೈಗೂಡಿಸಿಕೊಳ್ಳಬೇಕು. ನೌಕರರು ಸೇವಾ ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆ ಮಾಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರಿ ನೌಕರಿಗೆ ಸೇರುವಾಗ ಅಪಾರ ಶ್ರಮಪಟ್ಟು ನಿಮ್ಮ ಹೆತ್ತವರು ವಿದ್ಯಾಭ್ಯಾಸ ನೀಡಿ ನೌಕರಿ ಪಡೆದಿರುತ್ತೀರಿ. ಸೇರಿದ ತಕ್ಷಣ ಎಲ್ಲರಂತೆ ಸರ್ಕಾರಿಸೇವೆಯನ್ನು ನಿರಾಸಕ್ತಿಯಿಂದ ನಿರ್ವಹಿಸುವುದು ಬೇಜವಾಬ್ದಾರಿ ಹಾಗೂ ಅಕ್ರಮ ವ್ಯವಹಾರದಲ್ಲಿ ತೊಡಗಿಕೊಳ್ಳುವುದನ್ನು ಬಿಟ್ಟು ಹೆತ್ತವರ ಆಶೋತ್ತರಗಳಿಗೆ ಬೆಲೆ ನೀಡಿ ಕರ್ತವ್ಯದಲ್ಲಿ ಸೇವಾ ಮನೋಭಾವನೆಯನ್ನು ಹಾಗೂ ಪ್ರಾಮಾಣಿಕತೆಯನ್ನು ನಿರಂತರವಾಗಿ ಪಾಲಿಸಬೇಕು ಎಂದರು.

ಸರ್ಕಾರಿ ನೌಕರಿಯನ್ನು ಪ್ರಾಮಾಣಿಕತೆಯಿಂದ ನಿರ್ವಹಿಸದೇ ಇದ್ದಲ್ಲಿ ನಿಷ್ಕಾಳಜಿ ತೋರಿದರೆ, ಭ್ರಷ್ಟಾಚಾರದಲ್ಲಿ ಪಾಲ್ಗೊಂಡರೆ ಅನಗತ್ಯ ಸಾರ್ವಜನಿಕರಿಗೆ ಕಿರುಕುಳ ನೀಡಿದರೆ, ಲಂಚ ಪಡೆದರೆ ಅಥವಾ ಲಂಚಕ್ಕೆ ಸರಿಸಮಾನವಾಗಿ ಬೇರೆ ಸಹಾಯ ಪಡೆದರೆ ನಿಮ್ಮ ಮೇಲೆ ದೂರುಗಳು ಖಂಡಿತವಾಗಿಯೂ ಬರುತ್ತವೆ. ಆಗ ನಿಮ್ಮನ್ನು ತನಿಖೆಗೆ ಒಳಪಡಿಸಬೇಕಾಗುತ್ತದೆ. ತನಿಖೆಯಲ್ಲಿ ತಪ್ಪಿತಸ್ಥರಾದರೆ ಅಥವಾ ಆರೋಪ ಸಾಬೀತಾದರೆ ಸರ್ಕಾರಿ ನೌಕರಿಗೆ ತೊಂದರೆಯಾಗುತ್ತದೆ ಅಲ್ಲದೇ ಸಮಾಜದಲ್ಲಿ ನಿಮ್ಮ ಗೌರವಕ್ಕೆ ಸೇವೆ ಧಕ್ಕೆ ತಂದುಕೊಳ್ಳುತ್ತೀರಿ. ಆದಷ್ಟು ಕರ್ತವ್ಯದಲ್ಲಿ ಶ್ರದ್ಧೆ ಪ್ರಾಮಾಣಿಕತೆ, ಸಹಾಯ ಮಾಡುವ ಮನೋಭಾವ ರೂಢಿಸಿಕೊಳ್ಳಬೇಕು. ಜೊತೆಗೆ ನಿಮ್ಮನ್ನು ನೀವು ಸಂಪೂರ್ಣವಾಗಿ ಸೇವೆಗೆ ಅರ್ಪಿಸಿಕೊಳ್ಳಬೇಕು ಎಂದರು.

ಮೂಲಭೂತ ಹಕ್ಕುಗಳಂತೆ ಮೂಲಭೂತ ಕರ್ತವ್ಯಗಳ ಪಾಲನೆಯನ್ನು ನಿರ್ವಹಿಸಬೇಕು. ಸರ್ಕಾರಿ ನೌಕರಿ ಕಾರ್ಯ ವ್ಯಾಪ್ತಿಯಲ್ಲಿ ಶ್ರೇಷ್ಠತೆ ಕಾಯ್ದುಕೊಳ್ಳಬೇಕು. ಜೊತೆಗೆ ನಮ್ಮ ಸಹೋದ್ಯೋಗಿಗಳಿಗೂ ಈ ಕುರಿತು ತಿಳುವಳಿಕೆ ನೀಡಬೇಕು. ಅಡಿಕೆ ಕದ್ದರೂ ಕಳ್ಳ ಆನೆ ಕದ್ದರೂ ಕಳ್ಳ ಎಂಬುದನ್ನು ಅರಿತು ಕರ್ತವ್ಯ ನಿರ್ವಹಣೆ ನಿಮ್ಮದಾಗಲಿ ಎಂದರು.

ಸಮಾಜದಲ್ಲಿ ಗೌರವಯುತ ಜೀವನ ನಡೆಸಲು ಸರ್ಕಾರ ನಿಮ್ಮ ಕೆಲಸಕ್ಕೆ ತಕ್ಕಂತೆ ವೇತನ ಸೌಲಭ್ಯಗಳನ್ನು ಕಾಲಕಾಲಕ್ಕೆ ಒದಗಿಸುತ್ತಾ ಬಂದಿದೆ. ನೀವು ಮಾಡುವ ಕೆಲಸದಲ್ಲಿ ಒಳ್ಳೆಯ ಅಧಿಕಾರಿಯಾಗಲು ಸಾಕಷ್ಟು ಅವಕಾಶಗಳಿವೆ. ನಿಮ್ಮ ಮನಸ್ಸಿನಲ್ಲಿರುವ ಉತ್ತಮ ಯೋಚನೆಗಳಿಂದ ಸಮಾಜಕ್ಕೆ ನಿಮ್ಮದೇ ಆದಂತಹ ಕೊಡುಗೆ ನೀಡಲು ನೀವು ಮುಂದಾಗಬೇಕು.

(2ನೇ ಪುಟಕ್ಕೆ)

# ಜಿಲ್ಲಾ ಆಸ್ಪತ್ರೆಗೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಭೇಟಿ ಪರಿಶೀಲನೆ

ಗದಗ, ಜು. 7. ಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ಎಸ್ .ಪಾಟೀಲ ಅವರು ಶುಕ್ರವಾರ ದಂದು ನಗರದ ಹೊರ ವಲಯದಲ್ಲಿರುವ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದರು. ಜಿಲ್ಲಾ ಆಸ್ಪತ್ರೆಯ ಹೊರ ರೋಗಿಗಳ ವಿಭಾಗ, ನವಜಾತ ಶಿಶುಗಳ ವಿಭಾಗ, ಆಯ್.ಸಿ.ಯು ಸೇರಿದಂತೆ ವಿವಿಧ ವಿಭಾಗಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದರು.

ಆಸ್ಪತ್ರೆಯಲ್ಲಿನ ಸ್ವಚ್ಛತೆ, ಕಾವಲುಗಾರರು ಇಲ್ಲದೇ ಇರುವ ಕುರಿತು ಅಸಮಾಧಾನ ವ್ಯಕ್ತ ಪಡಿಸಿ ಈ ಕುರಿತು ಗಮನ ಹರಿಸುವಂತೆ ಸೂಚನೇ ನೀಡಿದರು. ಇದೇ ಸಂದರ್ಭದಲ್ಲಿ ಆಸ್ಪತ್ರೆಗೆ ಆಗಮಿಸಿದ ರೋಗಿಗಳ ಅಹ್ವಾಲು ಆಲಿಸಿದರು.



ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ, ಎಂ.ಎಲ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್.ನೇಮಗೌಡ, ಲೋಕಾಯುಕ್ತ ಅಧೀಕ್ಷಕ ಸತೀಶ. ಎಸ್.ಚಿಟಗುಬ್ಬಿ, ಅಪರ ಜಿಲ್ಲಾಧಿಕಾರಿ ಮಾರುತಿ.ಎಂ.ಪಿ, ಜಿಮ್ಸ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಎಸ್.ಕರಿಗೌಡರ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ, ಲೋಕಾಯುಕ್ತ ಇನ್ಸಪೆಕ್ಟರ್ ರವಿ ಪುರುಷೋತ್ತಮ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವೈದ್ಯಾಧಿಕಾರಿಗಳು ಹಾಜರಿದ್ದರು.

ನವೋದಯ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ:08.07.2023 ರಂದು ಪ್ರಕಟವಾದ ಮಾಹಿತಿ.

(ಒಂದನೇಯ ಪುಟದಿಂದ)

# ನೌಕರರು ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆಗೈಯ್ಯಬೇಕು: ಸರ್ಕಾರಿ ಸೇವೆಯಲ್ಲಿ ಪ್ರಾಮಾಣಿಕತೆ-ಸೇವಾ ಮನೋಭಾವನೆ ಮೈಗೂಡಿಸಿಕೊಳ್ಳಿ



ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಪ್ರತಿ ಹಳ್ಳಿ, ಮನೆ ಮನೆಗಳಲ್ಲಿಯೂ ಶೌಚಾಲಯ ನಿರ್ಮಾಣದ ಗುರಿಯನ್ನು ಸಾಧಿಸಬೇಕು. ಜೊತೆಗೆ ಸಾರ್ವಜನಿಕರಿಗೆ ಇರುವ ಅನುದಾನದಲ್ಲಿಯೇ ಉತ್ತಮ ಸೇವೆಗಳನ್ನು ಮೂಲಸೌಕರ್ಯಗಳನ್ನು ಒದಗಿಸಬೇಕು. ಶೌಚಾಲಯ ಇಲ್ಲದಿದ್ದರೆ ಏನಾಗುತ್ತದೆ ಎಂಬುದನ್ನು ಸರಿಯಾಗಿ ಜನಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಿಳುವಳಿಕೆ ಹೇಳಿ ಶೌಚಾಲಯ [illegible] ಬಳಸುವ ಕುರಿತು ಮನವರಿಕೆ ಮಾಡಿಕೊಡಬೇಕು ಎಂದರು.

[illegible] ತಮ್ಮ ಕಾರ್ಯವ್ಯಾಪ್ತಿಯಲ್ಲಿರುವ ಪ್ರಕರಣಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಬೇಕು. ಅಧಿಕಾರಿಗಳು ಸ್ಮಾರ್ಟ್ ವರ್ಕ್ ಮಾಡುವುದನ್ನು ರೂಢಿಸಿಕೊಳ್ಳಬೇಕು. ರೈತರಿಗೆ ತಹಶೀಲ್ದಾರ ಕಚೇರಿಗೆ ಅಲೆದಾಡಿಸುವುದನ್ನು ತಪ್ಪಿಸಿ ಸಾಧ್ಯವಾದಲ್ಲಿ ತಾವುಗಳೇ ರೈತರ ಮನೆಗಳಿಗೆ ತೆರಳಿ ಸೇವೆ ನೀಡಬೇಕು. ಶಿಕ್ಷಣ ಕ್ಷೇತ್ರದಲ್ಲಿ ಗದಗ ಜಿಲ್ಲೆ ಮಾದರಿ ಜಿಲ್ಲೆಯಾಗಿಸಲು ಸಂಬಂಧಿತ ಅಧಿಕಾರಿಗಳು ಗಮನಹರಿಸಬೇಕು. ಶಾಲೆಗಳಲ್ಲಿ ಶುದ್ಧ ಬೆಳಕು, ಗಾಳಿ, ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ನೈತಿಕ ಶಿಕ್ಷಣ ನೀಡಬೇಕು. ಶಾಲಾ ವಾತಾವರಣ ಶುದ್ಧವಾಗಿರಬೇಕು. ಉತ್ತಮ ವಾತಾವರಣದಲ್ಲಿ ಮಕ್ಕಳು ತಮ್ಮ ವಿದ್ಯಾರ್ಜನೆಯನ್ನು ಯಾವುದೇ ಆತಂಕವಿಲ್ಲದೇ ನಡೆಸುವಂತಿರಬೇಕು ಎಂದು ಹೇಳಿದರು.

ಜಿಲ್ಲಾಸ್ಪತ್ರೆ ಸೇರಿದಂತೆ ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆಗೆ ಗಮನ ಕೊಡಬೇಕು. ಆರೋಗ್ಯ ಸುಧಾರಣೆಗಾಗಿ ಬರುವ ರೋಗಿಗಳಿಗೆ ಅಲ್ಲಿಯ ವಾತಾವರಣ ಮತ್ತಷ್ಟು ಆರೋಗ್ಯ ಕೆಡಿಸುವಂತಿರಬಾರದು. ಉತ್ತಮ ದರ್ಜೆಯ ಔಷಧೋಪಚಾರದೊಂದಿಗೆ ಅಲ್ಲಿನ ವೈದ್ಯರು ಸೇವೆ ನೀಡಬೇಕು. ಸಮಾಜದ ಎಲ್ಲ ವರ್ಗದ ಜನರಿಗೂ ಉತ್ತಮ ಆರೋಗ್ಯ ಸೇವೆಗಳು ತಲುಪಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕಾರ್ಯಪ್ರವೃತ್ತರಾಗಬೇಕು.

ನಗರ ಪ್ರದೇಶಗಳ ಸ್ವಚ್ಛತೆಗಳ ಕುರಿತು ಸ್ಥಳೀಯ ಆಡಳಿತಗಳು ಕೈಗೊಂಡ ಕ್ರಮಗಳ ಬಗ್ಗೆ ವಿವರ ಪಡೆದು ಮಾತನಾಡಿದ ಅವರು ಕೊಳಚೆ ಪ್ರದೇಶ, ಒಳಚರಂಡಿ ವ್ಯವಸ್ಥೆ, ಘನ ತ್ಯಾಜ್ಯ ವಿಲೇವಾರಿ, ಸ್ವಚ್ಛತೆ ಹಾಗೂ ಪೌರ ಕಾರ್ಮಿಕರ ಬಗ್ಗೆ ಸಾಕಷ್ಟು ದೂರುಗಳು ಲೋಕಾಯುಕ್ತದಲ್ಲಿ ದಾಖಲೆಯಾಗುತ್ತವೆ. ಸರ್ಕಾರಿ ಸೇವೆಯಲ್ಲಿ ಆದಷ್ಟು ಪಾರದರ್ಶಕತೆ ಅಳವಡಿಸಿಕೊಳ್ಳಬೇಕು. ದೂರುಗಳಿಗೆ ಆಸ್ಪದ ನೀಡದಂತೆ ತಮ್ಮ ಕಾರ್ಯ ಇರಬೇಕು.

ಕಾಮಗಾರಿ ಅನುಷ್ಠಾನ ಏಜೆನ್ಸಿಗಳಾದ ಲೋಕೋಪಯೋಗಿ ಇಲಾಖೆ, ಕೆಆರ್‌ಐಡಿಎಲ್, ಜಿ.ಪಂ.ಪಿಆರ್‌ಇಡಿ, ನಿರ್ಮಿತಿ ಕೇಂದ್ರಗಳು ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳುವೆಡೆ ಸಾಗಬೇಕು. ಅನುಷ್ಠಾನ ಏಜೆನ್ಸಿಗಳ ಮೇಲೂ ಸಹ ಸಾಕಷ್ಟು ದೂರುಗಳು ದಾಖಲಾಗಿವೆ. ಕಾಮಗಾರಿಗಳನ್ನು ಕಳಪೆ ಕೈಗೊಳ್ಳದೇ ಗುಣಮಟ್ಟ ಕಾಯ್ದುಕೊಳ್ಳುವೆಡೆ ಅನುಷ್ಠಾನ ಏಜೆನ್ಸಿಗಳು ಕಾರ್ಯನಿರ್ವಹಿಸಬೇಕು.

ಪ್ರತಿ ತಾಲೂಕಿನ ಎರಡು ಕುಗ್ರಾಮಗಳ ಸರ್ಕಾರಿ ಶಾಲೆಗಳಿಗೆ ಪೊಲೀಸ ಇಲಾಖೆಯ ಉನ್ನತ ಅಧಿಕಾರಿಗಳು ಆಕಸ್ಮಿಕ ಭೇಟಿ ನೀಡಿ ಶಾಲೆಗಳಲ್ಲಿ ನೀಡುವ ಶಿಕ್ಷಣ, ಗುಣಮಟ್ಟ ಹಾಗೂ ಮೂಲ ಸೌಕರ್ಯಗಳ ಕುರಿತು ಪರಿಶೀಲಿಸಿ ವರದಿ ಸಲ್ಲಿಸಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಅಭ್ಯಸಿಸುವ ಮಕ್ಕಳಿಗೆ ಉತ್ತಮ ಪೌಷ್ಟಿಕ ಆಹಾರ ಒದಗಿಸಿ ಕಟ್ಟಡಗಳ ಕಿಟಕಿ ಬಾಗಿಲುಗಳಿಗೆ ಸೊಳ್ಳೆ ಪರದೆಗಳನ್ನು ಅಳವಡಿಸಲು ಕ್ರಮ ಕೈಗೊಳ್ಳುವಂತೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ತಿಳಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಪಂ ಸಿಇಒ ಡಾ. ಸುಶೀಲಾ ಬಿ, ಜಿಲ್ಲಾ ಪೊಲೀಸ ಅಧೀಕ್ಷಕ ಬಿ.ಎಸ್. ನೇಮಗೌಡ ಅವರು ಜಿಲ್ಲೆಯ ಕಾರ್ಯವ್ಯಾಪ್ತಿ ಹಾಗೂ ಪ್ರಮುಖ ವಿಷಯಗಳ ಕುರಿತು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಲೋಕಾಯುಕ್ತ ಅಧೀಕ್ಷಕ ಸತೀಶ ಎಸ್ ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಹಾಜರಿದ್ದರು.

ವಿಜಯವಾಣಿ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ: 08.07.2023 ರಂದು ಪ್ರಕಟವಾದ ಮಾಹಿತಿ.

## ವೈದ್ಯಕೀಯ ಅಧಿಕಾರಿಗಳಿಗೆ ಲೋಕಾಯುಕ್ತ ನ್ಯಾ. ಬಿ.ಎಸ್. ಪಾಟೀಲ ಎಚ್ಚರಿಕೆ

# ತಪ್ಪೆಸಗಿದರೆ ಕ್ರಮ ಎದುರಿಸಲು ಸಿದ್ಧರಾಗಿ

ಗದಗ: ಕರ್ತವ್ಯ ನಿರ್ಲಕ್ಷಿಸುವ ಅಧಿಕಾರಿಗಳನ್ನು ಶಿಕ್ಷಿಸಲು ಕಾನೂನಿನಲ್ಲಿ ಅವಕಾಶ ಇದೆ. ಲೋಕಾಯುಕ್ತ ಕಾಯ್ದೆ ಮತ್ತು ಭ್ರಷ್ಟಾಚಾರ ನಿಷೇಧ ಕಾಯ್ದೆಗಳಡಿ ನಿಮ್ಮನ್ನು ಆರೋಪಿ ಸ್ಥಾನದಲ್ಲಿ ನಿಲ್ಲಿಸಬಹುದು. ದೂರು ದಾಖಲಿಸಲು ಅವಕಾಶ ಮಾಡಿಕೊಡಬೇಡಿ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಶುಕ್ರವಾರ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆ ನಡೆಸಿದ ಅವರು, ಜಿಲ್ಲೆಯಲ್ಲಿ ಬಯಲು ಬಹಿರ್ದೆಸೆ, ಆಸ್ಪತ್ರೆಗಳಲ್ಲಿ ಅಸಮರ್ಪಕ ವೈದ್ಯಕೀಯಸೇವೆ, ಗ್ರಾಮೀಣಾಭಿವೃದ್ಧಿ ವಿಷಯಗಳಿಗೆ ಸಂಬಂಧಿಸಿದಂತೆ ಅಧಿಕಾರಿಗಳಿಗೆ ಹಲವು ಸೂಚನೆಗಳನ್ನು ನೀಡಿದರು.

ಆಸ್ಪತ್ರೆಗಳಲ್ಲಿ ವೈದ್ಯರು, ಉಪಕರಣಗಳಿದ್ದರೂ ರೋಗಿಗಳಿಗೆ ಸಮರ್ಪಕ ಸೇವೆ ಸಿಗುತ್ತಿಲ್ಲ. ಸರ್ಕಾರದಿಂದ ಹಣ ಮಾತ್ರ ಖರ್ಚಾಗುತ್ತಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಕಳವಳ ವ್ಯಕ್ತಪಡಿಸಿದರು. ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಗಳ ಅಗತ್ಯ, ಔಷಧ ವಿತರಣೆ, ವೈದ್ಯರಿಂದ ರೋಗಿಗಳ ಜತೆ ಸಮಾಲೋಚನೆ, ಖಾಲಿ ಹುದ್ದೆಗಳ ಭರ್ತಿ ಕುರಿತು ಲೋಕಾಯುಕ್ತರು ಚರ್ಚಿಸಿದರು.

ಗ್ರಾಮೀಣಾಭಿವೃದ್ಧಿ ಅಧಿಕಾರಿಗಳಿಗೆ ಪಾಠ ಮಾಡಿದ ಲೋಕಾಯುಕ್ತರು, ಸರ್ಕಾರವು ಬಯಲು ಬಹಿರ್ದೆಸೆ ಮುಕ್ತ ಮಾಡಲು ಸಾಕಷ್ಟು ಅನುದಾನ ವಿನಿಯೋಗಿಸುತ್ತಿದೆ. ಆದರೆ, ಜಿಲ್ಲೆಯಲ್ಲಿ ಬಹಿರ್ದೆಸೆಮುಕ್ತ ಎಂದು ಘೋಷಿಸಿಕೊಂಡ ಹಳ್ಳಿಗಳಲ್ಲೂ ಇದು ಜಾರಿಯಲ್ಲಿದೆ. ಗ್ರಾಮೀಣರು ಮುಗ್ಧರು, ನೀವು ತಿಳಿಸಿ ಹೇಳಿದರೆ ಕೇಳುತ್ತಾರೆ. ಅವರ ಜತೆ ಸೂಕ್ಷ್ಮವಾಗಿ ವರ್ತಿಸಿದರೆ ಉತ್ತಮ ಬಾಂಧವ್ಯ ಹೊಂದುತ್ತಾರೆ. ಶೌಚಗೃಹ ಇಲ್ಲದ ಮನೆ, ಶೌಚಗೃಹ ಇದ್ದರೂ ಬಳಸದ ಮನೆಗಳನ್ನು ಗುರುತಿಸಿ ಎಚ್ಚರಿಕೆ ನೀಡಬೇಕು ಎಂದರು.

**ಕಂದಾಯ ಇಲಾಖೆ:** ಖಾತಾ ಬದಲಾವಣೆ ಸೇರಿ ಹಲವು ದೂರುಗಳು ಕಂದಾಯ ಇಲಾಖೆಗೆ ತೂಗುಕತ್ತಿಯಾಗಿವೆ. ಕಂದಾಯ ಅಧಿಕಾರಿಗಳು ಅರ್ಜಿ ವಿಲೇವಾರಿಗೆ ವಿಳಂಬ ನೀತಿ ಮಾಡಿದರೆ ಕ್ರಮ ಗ್ಯಾರಂಟಿ. ನಿಮ್ಮಲ್ಲಿ ಎಷ್ಟು ಕೇಸ್‌ಗಳು ಪೆಂಡಿಂಗ್ ಇವೆ. ಎಷ್ಟು ಅವಧಿಯಲ್ಲಿ ವಿಲೇವಾರಿ ಮಾಡುತ್ತೀರಿ ಎಂಬುದರ ಮಾಹಿತಿ ಕೊಡಿ ಎಂದು ಸೂಚಿಸಿದರು.

ಲೋಕಾಯುಕ್ತ ಅಧಿಕಾರಿಗಳಿಂದ ಜಿಲ್ಲೆಯಲ್ಲಿ ಎರಡು ಶಾಲೆಗಳಿಗೆ ಭೇಟಿ ನೀಡಿ ಪರೀಕ್ಷೆ ನಡೆಸಲಾಗುವುದು. ಲೋಪ ಕಂಡುಬಂದರೆ ಆರೋಪಿ ಸ್ಥಾನದಲ್ಲಿ ನಿಮ್ಮನ್ನೇ ನಿಲ್ಲಿಸಲಾಗುತ್ತದೆ ಎಂದು ಶಿಕ್ಷಣ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ನಗರದ ಸ್ವಚ್ಛತೆ ಬಗ್ಗೆ ನ್ಯಾಯಮೂರ್ತಿಗಳು ಅಸಮಧಾನ ವ್ಯಕ್ತಪಡಿಸಿದರು. ಒಳಚರಂಡಿ ಬ್ಲಾಕೇಜ್‌ಗಳನ್ನು ಸರಿಪಡಿಸುವಂತೆ ಸೂಚಿದರು. ನಗರಸಭೆಯಲ್ಲಿ ಸಿಬ್ಬಂದಿ ಕೊರತೆ ಇದೆ ಎಂದು ನಗರಸಭೆ ಪೌರಾಯುಕ್ತ ರಮೇಶ್ ಸುಣಗಾರ ಸಮಜಾಯಿಷಿ ನೀಡುತ್ತಿದ್ದಂತೆ, ಇಂತಹ ಕಾರಣ ನೀಡಬಾರದು. ಕಾಲಕ್ಕೆ ತಕ್ಕಂತೆ ನಿಮ್ಮ ಯೋಗದಾನ ಬದಲಾಯಿಸಿಕೊಳ್ಳಬೇಕು ಎಂದು ಲೋಕಾಯುಕ್ತರು ಸೂಚಿಸಿದರು. ಹಾಸ್ಟೆಲ್‌ಗಳಲ್ಲಿ ಯೋಗ ಕಡ್ಡಾಯಗೊಳಿಸಿ ಎಂದು ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಇಲಾಖೆ ಅಧಿಕಾರಿಗೆ ತಿಳಿಸಿದರು.



ಲೋಕಾ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಶುಕ್ರವಾರ ಗದಗ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಪಂ ಸಿಇಒ ಸುಶೀಲಾ ಬಿ, ಇತರರಿದ್ದರು.

### ಜಿಲ್ಲಾಸ್ಪತ್ರೆಗೆ ಭೇಟಿ

**ನಗರದ ಹೊರ ವಲಯದ ಜಿಲ್ಲಾಸ್ಪತ್ರೆಗೆ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಭೇಟಿ ನೀಡಿ ಪರಿಶೀಲಿಸಿದರು. ಹೊರ ರೋಗಿಗಳ ಆಸನ ವ್ಯವಸ್ಥೆ, ಕಾವಲುಗಾರರು ಇರದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಆಸ್ಪತ್ರೆಯಲ್ಲಿ ರೋಗಿಗಳು ತಮ್ಮ ಅಳಲನ್ನು ತೋಡಿಕೊಂಡಿದ್ದರಿಂದ ಸ್ಥಳದಲ್ಲಿ ಮೇಲ್ವಿಚಾರಣೆ ನಡೆಸಲು ಲೋಕಾಯುಕ್ತ ಕಚೇರಿಯಿಂದ ಅಧಿಕಾರಿ ನಿಯೋಜನೆ ಮಾಡುತ್ತೇನೆ. ವೈದ್ಯರು ತಮ್ಮ ಸೇವೆಯಲ್ಲಿ ನಿರ್ಲಕ್ಷ್ಯ ವಹಿಸಿದರೆ ದೂರು ದಾಖಲಿಸಲಾಗುವುದು ಎಂದು ವೈದ್ಯಾಧಿಕಾರಿಗೆ ಸ್ಥಳದಲ್ಲಿಯೇ ಸೂಚನೆ ನೀಡಿದರು.**

ನಮ್ಮ ಗದಗ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ: 08.07.2023 ರಂದು ಪ್ರಕಟವಾದ ಮಾಹಿತಿ.

# ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ

**ವಿಕ ಸುದ್ದಿಲೋಕ** ಗದಗ

ಜನಸೇವಕರಾದ ಸರಕಾರಿ ಅಧಿಕಾರಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಕ್ಷಮತೆಯಿಂದ ಹಾಗೂ ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಹೇಳಿದರು.



ಗದಗ ನಗರದ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಮಾತನಾಡಿದರು.

ನಗರದ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಅಧಿಕಾರಿಗಳು ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸುಬೇಕು. ಯಾವುದೇ ಅಧಿಕಾರಿ, ಸಿಬ್ಬಂದಿಗಳ ಮೇಲೆ ಗುರುತರ ಆರೋಪ ಕೇಳಿ ಬಂದಲ್ಲಿ ಅಂತಹವರ ವಿರುದ್ಧ ಮೊಕದ್ದಮೆ ಹೂಡಿ ತಪ್ಪಿತಸ್ಥರಾಗಿದ್ದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ತಿಳಿಸಿದರು.

**ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ**

ಜಿಲ್ಲೆಯ ಕಂಪಾಯು, ಜಿಲ್ಲಾ ಪಂಚಾಯಿತಿ, ಸ್ಥಳೀಯ ಸಂಸ್ಥೆಗಳು, ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ದೂರುಗಳು ಬಂದಿದ್ದು ಈ ಕುರಿತು ನಮ್ಮ ಅಧಿಕಾರಿಗಳು ಪರಿಶೀಲನೆ ಮಾಡಿದ್ದು ಈ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ದೂರುಗಳಿಗೆ ಸಂಬಂಧಿಸಿದಂತೆ ಮೊಕದ್ದಮೆ ಹೂಡಿ ಅವುಗಳ ಕುರಿತು ಮೇಲ್ವಿಚಾರಣೆ ಮಾಡಿ ತಪಿತಸ್ಥರು ಯಾರೆಂದು ಕಂಡುಹಿಡಿಯಲಾಗುವದು. ಆಸ್ಪತ್ರೆಗಳಲ್ಲಿ ವೈದ್ಯರುಗಳು ಗೈರು ಹಾಜರಾಗುವುದು, ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೆ ಇರುದ್ಧುದು ಹಾಗೂ ಪ್ರಾಂಗಣವನ್ನು ಸ್ವಚ್ಛವಾಗಿಡದ ಕುರಿತು ಹಲವಾರು ವಿಷಯಗಳು ಗಮನಕ್ಕೆ ಬಂದಿದ್ದು, ಇವುಗಳ ಕುರಿತು ಪರಾಮರ್ಶಿಸಲಾಗುದ್ದುದು. ಜನ ಸೇವಕರು ತಮ್ಮ ಕಾರ್ಯಕ್ಷೇತ್ರದಲ್ಲಿ ಶ್ರೇಷ್ಠತೆ ಸಾಧಿಸಲು ಹೇಗೆ ಸಾಧ್ಯವಾಗುತ್ತದೆ ಎಂಬುದನ್ನು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ ಎಂದು ತಿಳಿಸಿದರು. >>III

ಪ್ರಜಾಪಥ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ: 08.07.2023 ರಂದು ಪ್ರಕಟವಾದ ಮಾಹಿತಿ.

# ಸೇವೆಯಲ್ಲಿ ಪ್ರಾಮಾಣಿಕತೆ ರೂಢಿಸಿಕೊಳ್ಳಿ

## ■ ಲೋಕಾ ನ್ಯಾಮೂ. ಬಿ.ಎಸ್. ಪಾಟೀಲರಿಂದ ಪ್ರಗತಿ ಪರಿಶೀಲನೆ

ಪ್ರಜಾಪಥ ವಾರ್ತೆ



ಗದಗ: ಸರ್ಕಾರಿ ನೌಕರರು ತಮ್ಮ ದೈನಂದಿನ ಕರ್ತವ್ಯದಲ್ಲಿ ಪ್ರಾಮಾಣಿಕತೆ, ಸೇವಾ ಮನೋ ಭಾವನೆ ಯನ್ನು ಮೈಗೂಡಿಸಿಕೊಳ್ಳಬೇಕು. ನೌಕರರು ಸೇವಾ ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆ ಮಾಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಪಂಚಾಯತ್ ಸಭಾಂಗಣ ದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗ ಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರಿ ನೌಕರಿಗೆ ಸೇರುವಾಗ ಅಪಾರ ಶ್ರಮಪಟ್ಟು ನಿಮ್ಮ ಹೆತ್ತವರು ವಿದ್ಯಾ ಭ್ಯಾಸ ನೀಡಿ ನೌಕರಿ ಪಡೆದಿರುತ್ತೀರಿ. ಸೇರಿದ ತಕ್ಷಣ ಎಲ್ಲರಂತೆ ಸರ್ಕಾರಿ ಸೇವೆ ಯನ್ನು ನಿರಾಸಕ್ತಿ ಯಿಂದ ನಿರ್ವಹಿ ಸುವುದು ಬೇಜ ವಾಬ್ದಾರಿ ಹಾಗೂ ಅಕ್ರಮ ವ್ಯವ ಹಾರದಲ್ಲಿ ತೊಡಗಿ ಕೊಳ್ಳುವುದನ್ನು ಬಿಟ್ಟು ಹೆತ್ತವರ ಆಶೋತ್ತರಗಳಿಗೆ ಬೆಲೆ ನೀಡಿದರೆ, ಲಂಚ ಪಡೆದರೆ ಅಥವಾ ಲಂಚಕ್ಕೆ ಸರಿಸಮಾನವಾಗಿ ಬೇರೆ ಸಹಾಯ ಪಡೆದರೆ ನಿಮ್ಮ ಮೇಲೆ ದೂರುಗಳು ಖಂಡಿತವಾಗಿಯೂ ಬರುತ್ತವೆ. ಆಗ ನಿಮ್ಮನ್ನು ತನಿಖೆಗ ಒಳಪಡಿಸಬೇಕಾಗುತ್ತದೆ. ತನಿಖೆಯಲ್ಲಿ ತಪ್ಪಿತಸ್ಥರಾದರೆ ಅಥವಾ ಆರೋಪ ಸಾಬೀತಾದರೆ ಸರ್ಕಾರಿ ನೌಕರಿಗೆ ತೊಂದರೆಯಾಗುತ್ತದೆ ಅಲ್ಲದೇ ಸಮಾಜದಲ್ಲಿ ನಿಮ್ಮ ಗೌರವಕ್ಕೆ ನೀವೇ ಧಕ್ಕೆ ತಂಧುಕೊಳ್ಳುತ್ತೀರಿ. ಆದಷ್ಟು ಕರ್ತವ್ಯದಲ್ಲಿ ಶ್ರದ್ಧೆ,ಪ್ರಾಮಾಣಿಕತೆ, ಸಹಾಯ ಮಾಡುವ ಮನೋಭಾವ ರೂಢಿಸಿಕೊಳ್ಳಬೇಕು. ಜೊತೆಗೆ ನಿಮ್ಮನ್ನು ನೀವು ಸಂಪೂರ್ಣವಾಗಿ ಸೇವೆಗೆ ಅರ್ಪಿಸಿಕೊಳ್ಳಬೇಕು ಅಡಿಕೆ ಕದ್ದರೂ ಕಳ್ಳ ಆನೆ ಕದ್ದರೂ ಕಳ್ಳ ಎಂಬುದನ್ನು ಅರಿತು ಕರ್ತವ್ಯ ನಿರ್ವಹಣೆ ನಿಮ್ಮದಾಗಲಿ ಎಂದರು.

ಸಮಾಜದಲ್ಲಿ ಗೌರವಯುತ ಜೀವನ ನಡೆಸಲು ಸರ್ಕಾರ ನಿಮ್ಮ ಕೆಲಸಕ್ಕೆ ತಕ್ಕಂತೆ ವೇತನ ಸೌಲಭ್ಯಗಳನ್ನು ಕಾಲಕಾಲಕ್ಕೆ ಒದಗಿಸುತ್ತಾ ಬಂದಿದೆ. ನೀವು ಮಾಡುವ ಕೆಲಸದಲ್ಲಿ ಒಳ್ಳೆಯ ಅಧಿಕಾರಿಯಾಗಲು ಸಾಕಷ್ಟು ಅವಕಾಶಗಳಿವೆ. ನಿಮ್ಮ ಮನಸ್ಸಿನ ಲ್ಲಿರುವ ಉತ್ತಮ ಯೋಚನೆಗಳಿಂದ ಸಮಾಜಕ್ಕೆ ನಿಮ್ಮದೇ ಆದಂತಹ ಕೊಡುಗೆ ನೀಡಲು ನೀವು ಮುಂದಾಗಬೇಕು.

▶▶ಕೊನೆ ಪುಟಕ್ಕೆ...

ವೇರಿಗುಡ್ ಮಾರ್ನಿಂಗ್ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ:08.07.2023 ರಂದು ಪ್ರಕಟವಾದ ಮಾಹಿತಿ.

# ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಪ್ಪಿತಸ್ಥರಾಗಿದ್ದರೆ ಶಿಕ್ಷೆಗೆಗುರಿಪಡಿಸಲಾಗುವದು: ಬಿ.ಎಸ್.ಪಾಟೀಲ

ವೇರಿಗುಡ್ ಮಾರ್ನಿಂಗ್ ಸುದ್ದಿ



ಗದಗ ಜು.7: ಜನಸೇವಕರಾದ ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿಕ್ಷಮತೆಯಿಂದ ಹಾಗೂ ಅವಿರತವಾಗಿ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿರು

ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುಬೇಕು. ಯಾವುದೇ ಅಧಿಕಾರಿ ಸಿಬ್ಬಂದಿಗಳ ಮೇಲಿ ಗುರುತರ ಆರೋಪ ಕೇಳಿ ಬಂದಲ್ಲಿ ಅಂತಹವರ ವಿರುದ್ಧ ಮೊಕದ್ದಮೆ ಹೂಡಿ ತಪ್ಪಿತಸ್ಥರಾಗಿದ್ದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವದು ಎಂದು ತಿಳಿಸಿದರು.

ಜಿಲ್ಲೆಯ ಕಂದಾಯ, ಜಿಲ್ಲಾ ಪಂಚಾಯತ, ಸ್ಥಳೀಯ ಸಂಸ್ಥೆಗಳು, ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ದೂರುಗಳು ಬಂದಿದ್ದು ಈ ಕುರಿತು ನಮ್ಮ ಅಧಿಕಾರಿಗಳು ಪರಿಶೀಲನೆ ಮಾಡಿದ್ದು ಈ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ದೂರುಗಳಿಗೆ ಸಂಬಂದಿಸಿದಂತೆ ಮೊಕದ್ದಮೆ ಹೂಡಿ ಅವುಗಳ ಕುರಿತು ಮೇಲ್ವಿಚಾರಣೆ ಮಾಡಿ ತಪಿತಸ್ಥರು ಯಾರೆಂದು ಕಂಡು ಹಿಡಿಯಲಾಗುವದು. ಆಸ್ಪತ್ರೆಗಳಲ್ಲಿ ವೈದ್ಯರುಗಳು ಗೈರು ಹಾಜರಾಗುವುದು, ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೆ ಇರುವದು ಹಾಗೂ ಪ್ರಾಂಗಣವನ್ನು ಸ್ವಚ್ಛವಾಗಿಡದ ಕುರಿತು ಹಲವಾರು ವಿಷಯಗಳು ಗಮನಕ್ಕೆ ಬಂದಿದ್ದು ಇವುಗಳ ಕುರಿತು ಪರಮಾರ್ಶಿಸಲಾಗುವದು. ಜನ ಸೇವಕರು ತಮ್ಮ ಕಾರ್ಯಕ್ಷೇತ್ರದಲ್ಲಿ ಶ್ರೇಷ್ಠತೆ ಸಾಧಿಸಲು ಹೇಗೆ ಸಾಧ್ಯವಾಗುತ್ತದೆ ಎಂಬುದನ್ನು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 28 ದೂರುಗಳು ದಾಖಲಾಗಿವೆ. ಈ ದೂರುಗಳಿಗೆ ಸಂಬಂಧಿಸಿದಂತೆ ಈಗಾಗಲೇ ನೋಟಿಸಗಳನ್ನು ಜಾರಿ ಮಾಡಿ ಮಾಹಿತಿ ಕ್ರೋಡಿಕರಿಸಿ ತನಿಖೆ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಹಲವಾರು ಸಮಸ್ಯಗಳಿದ್ದು ಆ ಸಮಸ್ಯೆಗಳನ್ನು ಯಾವ ರೀತಿ ಪರಿಹರಿಸಬೇಕು. ಒಂದು ವೇಳೆ ಸಮಸ್ಯೆಗಳನ್ನು ಪರಿಹರಿಸದಿದ್ದಲ್ಲಿ ಯಾವ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂಬ ಸೂಚನೆ ಅಧಿಕಾರಿಗಳಿಗೆ ನೀಡುವ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಲಾಗಿರುತ್ತದೆ. ಈ ಭೇಟಿ ಕೇವಲ ದೂರುಗಳನ್ನು ದಾಖಲಿಸಿಕೊಂಡು ತಪ್ಪಿತಸ್ಥರಿಗೆ ಶಿಕ್ಷೆಗೆ ಗುರುಪಡಿಸುವದರ ಜೊತೆಗೆ ಇಂತಹ ತಪ್ಪುಗಳ ಮರುಕಳಿಸಿದರಲಿ ಎಂಬ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಿ ಸಭೆ ಜರುಗಿಸಲಾಗಿದೆ ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕರ ಬಿ.ಎಸ್.ನೇಮಗೌಡ, ಲೊಕಾಯಕ್ತ ಅಧೀಕ್ಷ ಸತೀಶ.ಎಸ್.ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ.ಕೆ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ ಉಪಸ್ಥಿತರಿದ್ದರು.

ವೇರಿಗುಡ್ ಮಾರ್ನಿಂಗ್ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ:08.07.2023 ರಂದು ಪ್ರಕಟವಾದ ಮಾಹಿತಿ.

# ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಗದಗ ಜಿಲ್ಲಾ ಆಸ್ಪತ್ರೆಗೆ ಭೇಟಿ ಪರಿಶೀಲನೆ



ವೇರಿಗುಡ್ ಮಾರ್ನಿಂಗ್ ಸುದ್ದಿ

ಗದಗ ಜು.7: ಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ಎಸ್.ಪಾಟೀಲ ಅವರು ಶುಕ್ರವಾರ ದಂದು ನಗರದ ಹೊರ ವಲಯದಲ್ಲಿರುವ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದರು. ಜಿಲ್ಲಾ ಆಸ್ಪತ್ರೆಯ ಹೊರ ರೋಗಿಗಳ ವಿಭಾಗ, ನವಜಾತ ಶಿಶುಗಳ ವಿಭಾಗ, ಆಯ್.ಸಿ.ಯು ಸೇರಿದಂತೆ ವಿವಿಧ ವಿಭಾಗಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದರು. ಆಸ್ಪತ್ರೆಯಲ್ಲಿನ ಸ್ವಚ್ಛತೆ, ಕಾವಲುಗಾರರು ಇಲ್ಲದೇ ಇರುವ ಕುರಿತು ಅಸಮಾಧಾನ ವ್ಯಕ್ತ ಪಡಿಸಿ ಈ ಕುರಿತು ಗಮನ ಹರಿಸುವಂತೆ ಸೂಚನೇ ನೀಡಿದರು. ಇದೇ ಸಂದರ್ಭದಲ್ಲಿ ಆಸ್ಪತ್ರೆಗೆ ಆಗಮಿಸಿದ ರೋಗಿಗಳ ಅಹ್ವಾಲು ಆಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ. ಎಂ.ಎಲ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್.ನೇಮಗೌಡ, ಲೋಕಾಯುಕ್ತ ಅಧೀಕ್ಷಕ ಸತೀಶ. ಎಸ್.ಚಿಟಗುಬ್ಬಿ, ಅಪರ ಜಿಲ್ಲಾಧಿಕಾರಿ ಮಾರುತಿ.ಎಂ.ಪಿ, ಜಿಮ್ಸ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಎಸ್. ಕರಿಗೌಡರ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ, ಲೋಕಾಯುಕ್ತ ಇನ್ಸಪೆಕ್ಟರ ರವಿ ಪುರುಷೋತ್ತಮ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವೈದ್ಯಾಧಿಕಾರಿಗಳು ಹಾಜರಿದ್ದರು.

ಸಂಯುಕ್ತ ಕರ್ನಾಟಕ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ: 08.07.2023 ರಂದು ಪ್ರಕಟವಾದ ಮಾಹಿತಿ.

### ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲರಿಂದ ಜಿಲ್ಲಾ ಪ್ರಗತಿ ಪರಿಶೀಲನೆ । ಸೇವಾಭಾವ ಮೈಗೂಡಿಸಿಕೊಳ್ಳಿ

# ನೌಕರರು ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆ ಮಾಡಿ

ಗದಗ: ಸರ್ಕಾರಿ ನೌಕರರು ತಮ್ಮ ದೈನಂದಿನ ಕರ್ತವ್ಯದಲ್ಲಿ ಪ್ರಾಮಾಣಿಕತೆ, ಸೇವಾ ಮನೋಭಾವ ಮೈಗೂಡಿಸಿಕೊಳ್ಳಬೇಕು. ನೌಕರರು ಸೇವಾ ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆ ಮಾಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳೊಂದಿಗೆ ಶುಕ್ರವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಅಪಾರ ಶ್ರಮಪಟ್ಟು ನಿಮ್ಮ ಹೆತ್ತವರು ವಿದ್ಯಾಭ್ಯಾಸ ಕೊಡಿಸಿದ್ದರಿಂದ ನೌಕರಿ ಪಡೆದಿರುತ್ತೀರಿ. ನೌಕರಿಗೆ ಸೇರಿದ ತಕ್ಷಣ ಎಲ್ಲರಂತೆ ಸರ್ಕಾರಿ ಸೇವೆಯನ್ನು ನಿರಾಸಕ್ತಿಯಿಂದ ನಿರ್ವಹಿಸುವುದು ಬೇಜವಾಬ್ದಾರಿ ಹಾಗೂ ಅಕ್ರಮ ವ್ಯವಹಾರದಲ್ಲಿ ತೊಡಗಿಕೊಳ್ಳುವುದನ್ನು ಬಿಟ್ಟು ಹೆತ್ತವರ ಆಶೋತ್ತರಗಳಿಗೆ ಬೆಲೆ ನೀಡಿ ಕರ್ತವ್ಯದಲ್ಲಿ ಸೇವಾ ಮನೋಭಾವ, ಪ್ರಾಮಾಣಿಕತೆ ನಿರಂತರ



ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅಧಿಕಾರಿಗಳ ಸಭೆ ನಡೆಸಿದರು.

ಪಾಲಿಸಬೇಕು. ಸರ್ಕಾರಿ ನೌಕರಿ ಪ್ರಾಮಾಣಿಕತೆಯಿಂದ ನಿರ್ವಹಿಸದೆ ನಿಷ್ಕಾಳಜಿ ತೋರಿದರೆ, ಭ್ರಷ್ಟಾಚಾರದಲ್ಲಿ ತೊಡಗಿದರೆ, ಸಾರ್ವಜನಿಕರಿಗೆ ಕಿರುಕುಳ ನೀಡಿದರೆ, ಲಂಚ ಪಡೆದರೆ ಅಥವಾ ಲಂಚಕ್ಕೆ ಸರಿಸಮಾನವಾಗಿ ಬೇರೆ ಸಹಾಯಪಡೆದರೆದೂರುಗಳು ಖಂಡಿತವಾಗಿಯೂ ಬರುತ್ತವೆ. ಆಗ ನಿಮ್ಮನ್ನು ತನಿಖೆಗೆ ಒಳಪಡಿಸಬೇಕಾಗುತ್ತದೆ. ತನಿಖೆಯಲ್ಲಿ ತಪ್ಪಿತಸ್ಥರಾದರೆ, ಆರೋಪ ಸಾಬೀತಾದರೆ ಸರ್ಕಾರಿ ನೌಕರಿಗೆ ತೊಂದರೆ ಎಂದು ಎಚ್ಚರಿಸಿದರು.

ಮೂಲಭೂತ ಹಕ್ಕುಗಳಂತೆ ಮೂಲಭೂತ ಕರ್ತವ್ಯಗಳ ಪಾಲನೆ ನಿರ್ವಹಿಸಬೇಕು. ಸಮಾಜದಲ್ಲಿ ಗೌರವಯುತ ಜೀವನ ನಡೆಸಲು ಸರ್ಕಾರ ನಿಮ್ಮ ಕೆಲಸಕ್ಕೆ ತಕ್ಕಂತೆ ವೇತನ ಸೌಲಭ್ಯ ನೀಡಿದೆ. ನೀವು ಮಾಡುವ ಕೆಲಸದಲ್ಲಿ ಒಳ್ಳೆಯ ಅಧಿಕಾರಿಯಾಗಲು ಸಾಕಷ್ಟು ಅವಕಾಶಗಳಿವೆ. ನಿಮ್ಮ ಮನಸ್ಸಿನಲ್ಲಿರುವ ಉತ್ತಮ ಯೋಚನೆಗಳಿಂದ ಸಮಾಜಕ್ಕೆ ನಿಮ್ಮದೆಯಾದಂತಹ ಕೊಡುಗೆ ನೀಡಲು ನೀವು ಮುಂದಾಗಬೇಕು. ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳ ಕಾರ್ಯ ವ್ಯಾಪ್ತಿಯ ಪ್ರತಿ ಹಳ್ಳಿ, ಮನೆಮನೆಗಳಲ್ಲಿಯೂ ಶೌಚಾಲಯ ನಿರ್ಮಾಣದ ಗುರಿ ಸಾಧಿಸಬೇಕು. ಜೊತೆಗೆ ಸಾರ್ವಜನಿಕರಿಗಿರುವ ಅನುದಾನದಲ್ಲಿಯೇ ಉತ್ತಮ ಸೇವೆ, ಮೂಲ ಸೌಕರ್ಯ ಒದಗಿಸಬೇಕು. ಶೌಚಾಲಯ ಇಲ್ಲದಿದ್ದರೆ ಏನಾಗುತ್ತದೆ ಎಂಬುದನ್ನು ಸರಿಯಾಗಿ ಜನರಿಗೆ ಅರ್ಥವಾಗುವ ಭಾಷೆಯಲ್ಲಿ ತಿಳುವಳಿಕೆ ಹೇಳಿ ಶೌಚಾಲಯ ನಿರ್ಮಿಸಿಕೊಂಡು ಅದನ್ನು ಬಳಸುವ ಕುರಿತು ಮನವರಿಕೆ ಮಾಡಿಕೊಡಬೇಕು ಎಂದರು.

ಶಿಕ್ಷಣ ಕ್ಷೇತ್ರದಲ್ಲಿ ಗದಗ ಜಿಲ್ಲೆ ಮಾದರಿ ಜಿಲ್ಲೆಯಾಗಿಸಲು ಸಂಬಂಧಿತ ಅಧಿಕಾರಿಗಳು ಗಮನಹರಿಸಬೇಕು. ಶಾಲೆಗಳಲ್ಲಿ ಶುದ್ಧ ಬೆಳಕು, ಗಾಳಿ, ಕುಡಿಯುವ ನೀರು ಸೇರಿದಂತೆ ಮೂಲ ಸೌಕರ್ಯ ಒದಗಿಸಿ ನೈತಿಕ ಶಿಕ್ಷಣ ನೀಡಬೇಕು. ಶಾಲಾ ವಾತಾವರಣ ಶುದ್ಧವಾಗಿರಬೇಕು. ಉತ್ತಮ ವಾತಾವರಣದಲ್ಲಿ ಮಕ್ಕಳು ತಮ್ಮ ವಿದ್ಯಾರ್ಜನೆ ಯಾವುದೇ ಅಡೆತಡೆಯಿಲ್ಲದೇ ನಡೆಸುವಂತಿರಬೇಕು ಎಂದರು.

ಜಿಲ್ಲಾಧಿಕಾರಿ ವೈಶಾಲಿ .ಎಂ.ಎಲ್, ಜಿ.ಪಂ ಸಿಇಒ ಡಾ. ಸುಶೀಲಾ.ಬಿ, ಎಸ್‌ಪಿ ಬಿ.ಎಸ್. ನೇಮಗೌಡ ಅವರು ಜಿಲ್ಲೆಯ ಕಾರ್ಯವ್ಯಾಪ್ತಿ ಹಾಗೂ ಪ್ರಮುಖ ವಿಷಯಗಳ ಕುರಿತು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರಿಗೆ ಮಾಹಿತಿ ನೀಡಿದರು. ಸಭೆಯಲ್ಲಿ ಲೋಕಾಯುಕ್ತ ಅಧೀಕ್ಷಕ ಸತೀಶ ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಹಾಜರಿದ್ದರು.

ಕಿತ್ತೂರ ಕರ್ನಾಟಕ ಪ್ರಾದೇಶಿಕ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ: 08.07.2023 ರಂದು ಪ್ರಕಟವಾದ ಮಾಹಿತಿ.

# ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಪ್ಪಿತಸ್ಥರಾಗಿದ್ದರೆ ಶಿಕ್ಷೆಗೆ ಗುರಿಪಡಿಸಲಾಗುವದು

ಕಿತ್ತೂರ ಕರ್ನಾಟಕ ವಾರ್ತೆ

ಗದಗ, ೭ : ಜನಸೇವಕರಾದ ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಕ್ಷಮತೆಯಿಂದ ಹಾಗೂ ಅವಿರತವಾಗಿ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಹೇಳಿದರು.



ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿರು. ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುಬೇಕು. ಯಾವುದೇ ಅಧಿಕಾರಿ ಸಿಬ್ಬಂದಿಗಳ ಮೇಲೆ ಗುರುತರ ಆರೋಪ ಕೇಳಿ ಬಂದಲ್ಲಿ ಅಂತಹವರ ವಿರುದ್ಧ ಮೊಕದ್ದಮೆ ಹೂಡಿ ತಪ್ಪಿತಸ್ಥರಾಗಿದ್ದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವದು ಎಂದು ತಿಳಿಸಿದರು.

ಜಿಲ್ಲೆಯ ಕಂದಾಯ, ಜಿಲ್ಲಾ ಪಂಚಾಯತ, ಸ್ಥಳೀಯ ಸಂಸ್ಥೆಗಳು, ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ದೂರುಗಳು ಬಂದಿದ್ದು ಈ ಕುರಿತು ನಮ್ಮ ಅಧಿಕಾರಿಗಳು ಪರಿಶೀಲನೆ ಮಾಡಿದ್ದು ಈ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. (ಕೊನೆ ಪುಟಕ್ಕೆ)

(೧ನೇ ಪುಟದಿಂದ ಬಂದುದು)

# ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಪ್ಪಿತಸ್ಥರಾಗಿದ್ದರೆ ಶಿಕ್ಷೆಗೆ.....

ದೂರುಗಳಿಗೆ ಸಂಬಂದಿಸಿದಂತೆ ಮೊಕದ್ದಮೆ ಹೂಡಿ ಅವುಗಳ ಕುರಿತು ಮೇಲ್ವಿಚಾರಣೆ ಮಾಡಿ ತಪಿತಸ್ಥರು ಯಾ-ರೆಂದು ಕಂಡು ಹಿಡಿಯಲಾಗುವದು. ಆಸ್ಪತ್ರೆಗಳಲ್ಲಿ ವೈದ್ಯರುಗಳು ಗೈರು ಹಾಜರಾಗುವುದು, ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೆ ಇರುವದು ಹಾಗೂ ಪ್ರಾಂಗಣವನ್ನು ಸ್ವಚ್ಛವಾಗಿಡದ ಕುರಿತು ಹಲವಾರು ವಿಷಯಗಳು ಗಮನಕ್ಕೆ ಬಂದಿದ್ದು ಇವುಗಳ ಕುರಿತು ಪರಮಾರ್ಶಿಸಲಾಗುವದು. ಜನ ಸೇವಕರು ತಮ್ಮ ಕಾರ್ಯಕ್ಷೇತ್ರದಲ್ಲಿ ಶ್ರೇಷ್ಠತೆ ಸಾಧಿಸಲು ಹೇಗೆ ಸಾಧ್ಯವಾಗುತ್ತದೆ ಎಂಬುದನ್ನು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು ೨೮ ದೂರುಗಳು ದಾಖಲಾಗಿವೆ. ಈ ದೂರುಗಳಿಗೆ ಸಂಬಂಧಿಸಿದಂತೆ ಈಗಾಗಲೇ ನೋಟಿಸಗಳನ್ನು ಜಾರಿ ಮಾಡಿ ಮಾಹಿತಿ ಕ್ರೋಢಿಕರಿಸಿ ತನಿಖೆ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಹಲವಾರು ಸಮಸ್ಯಗಳಿದ್ದು ಆ ಸಮಸ್ಯೆಗಳನ್ನು ಯಾವ ರೀತಿ ಪರಿಹರಿಸಬೇಕು. ಒಂದು ವೇಳೆ ಸಮಸ್ಯೆಗಳನ್ನು ಪರಿಹರಿಸದಿದ್ದಲ್ಲಿ ಯಾವ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂಬ ಸೂಚನೆ ಅಧಿಕಾರಿಗಳಿಗೆ ನೀಡುವ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಲಾಗಿರುತ್ತದೆ. ಈ ಭೇಟಿ ಕೇವಲ ದೂರುಗಳನ್ನು ದಾಖಲಿಸಿಕೊಂಡು ತಪ್ಪಿತಸ್ಥರಿಗೆ ಶಿಕ್ಷೆಗೆ ಗುರುಪಡಿಸುವದರ ಜೊತೆಗೆ ಇಂತಹ ತಪ್ಪುಗಳ ಮರುಕಳಿಸದರಲಿ ಎಂಬ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಿ ಸಭೆ ಜರುಗಿಸಲಾಗಿದೆ ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕರ ಬಿ.ಎಸ್.ನೇಮಗೌಡ, ಲೋಕಾಯುಕ್ತ ಅಧೀಕ್ಷ ಸತೀಶ.ಎಸ್.ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ.ಕೆ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ ಉಪಸ್ಥಿತರಿದ್ದರು.

ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲರಿಂದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ

# ಪ್ರಾಮಾಣಿಕತೆ, ಸೇವಾ ಮನೋಭಾವನೆ ಮೈಗೂಡಿಸಿಕೊಳ್ಳಿ

**ವಿಕ ಸುದ್ದಿಲೋಕ** ಗದಗ

ಸರಕಾರಿ ನೌಕರರು ದೈನಂದಿನ ಕರ್ತವ್ಯದಲ್ಲಿ ಪ್ರಾಮಾಣಿಕತೆ, ಸೇವಾ ಮನೋಭಾವನೆ ಮೈಗೂಡಿಸಿಕೊಳ್ಳಬೇಕು. ನೌಕರರು ಸೇವಾ ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆ ಮಾಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಗದಗ ಜಿಪಂ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಮಾತನಾಡಿದರು.

## ಎಲ್ಲ ಜನರಿಗೂ ಉತ್ತಮ ಆರೋಗ್ಯ ಸೇವೆ ಸಿಗಲಿ

ನಗರದ ಜಿಪಂ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕರ್ತವ್ಯದಲ್ಲಿ ಶ್ರದ್ಧೆ ಪ್ರಾಮಾಣಿಕತೆ, ಸಹಾಯ ಮಾಡುವ ಮನೋಭಾವ ರೂಢಿಸಿಕೊಳ್ಳಬೇಕು. ಜತೆಗೆ ನಿಮ್ಮನ್ನು ನೀವು ಸಂಪೂರ್ಣವಾಗಿ ಸೇವೆಗೆ ಅರ್ಪಿಸಿಕೊಳ್ಳಬೇಕು. ಮೂಲಭೂತ ಹಕ್ಕುಗಳಂತೆ ಮೂಲಭೂತ ಕರ್ತವ್ಯಗಳ ಪಾಲನೆ ನಿರ್ವಹಿಸಬೇಕು. ಸರಕಾರಿ ನೌಕರಿ ಕಾರ್ಯ ವ್ಯಾಪ್ತಿಯಲ್ಲಿ ಶ್ರೇಷ್ಠತೆ ಕಾಯ್ದುಕೊಳ್ಳಬೇಕು ಎಂದರು.

ಜಿಲ್ಲಾಸ್ಪತ್ರೆ ಸೇರಿದಂತೆ ಜಿಲ್ಲೆಯ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆಗೆ ಗಮನ ಕೊಡಬೇಕು. ಆರೋಗ್ಯ ಸುಧಾರಣೆಗಾಗಿ ಬರುವ ರೋಗಿಗಳಿಗೆ ಅಲ್ಲಿಯ ವಾತಾವರಣ ಮತ್ತಷ್ಟು ಆರೋಗ್ಯ ಕೆಡಿಸುವಂತಿರಬಾರದು. ಉತ್ತಮ ದರ್ಜೆಯ ಔಷಧೋಪಚಾರದೊಂದಿಗೆ ವೈದ್ಯರು ಸೇವೆ ನೀಡಬೇಕು. ಸಮಾಜದ ಎಲ್ಲ ವರ್ಗದ ಜನರಿಗೂ ಉತ್ತಮ ಆರೋಗ್ಯ ಸೇವೆಗಳು ತಲುಪಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕಾರ್ಯಪ್ರವೃತ್ತರಾಗಬೇಕು ಎಂದರು.

## ಮೂಲ ಸೌಕರ್ಯ ಪರಿಶೀಲಿಸಿ ವರದಿ ಸಲ್ಲಿಸಬೇಕು

ನಗರ ಪ್ರದೇಶಗಳ ಸ್ಥಿತಿಗತಿ ಕುರಿತು ಸ್ಥಳೀಯ ಆಡಳಿತ ಕೈಗೊಂಡ ಕ್ರಮಗಳ ಬಗ್ಗೆ ವಿವರ ಪಡೆದು ಮಾತನಾಡಿದ ಅವರು, ಕೊಳಚೆ ಪ್ರದೇಶ, ಒಳಚರಂಡಿ ವ್ಯವಸ್ಥೆ, ಕಸ ವಿಲೇವಾರಿ, ಸ್ವಚ್ಛತೆ ಹಾಗೂ ಪೌರ ಕಾರ್ಮಿಕರ ಬಗ್ಗೆ ಸಾಕಷ್ಟು ದೂರುಗಳು ಲೋಕಾಯುಕ್ತದಲ್ಲಿ ದಾಖಲೆಯಾಗುತ್ತವೆ. ಸರಕಾರಿ ಸೇವೆಯಲ್ಲಿ ಆದಷ್ಟು ಪಾರದರ್ಶಕತೆ ಅಳವಡಿಸಿಕೊಳ್ಳಬೇಕು. ದೂರುಗಳಿಗೆ ಆಸ್ಪದ ನೀಡದಂತೆ ಕಾರ್ಯ ಇರಬಾರದು ಎಂದರು.

ಕಾಮಗಾರಿ ಅನುಷ್ಠಾನ ಏಜೆನ್ಸಿಗಳಾದ ಲೋಕೋಪಯೋಗಿ ಇಲಾಖೆ, ಕೆಆರ್‌ಇಡಿಎಲ್, ಜಿಪಂ, ಪಿಆರ್‌ಇಡಿ, ನಿರ್ಮಿತಿ ಕೇಂದ್ರಗಳು ಗುಣಮಟ್ಟದ ಕಾಮಗಾರಿ ಕೈಗೊಳ್ಳುವಂತೆ ಸಾಗಬೇಕು. ಅನುಷ್ಠಾನ ಏಜೆನ್ಸಿಗಳ ಮೇಲೆ ಸಾಕಷ್ಟು ದೂರುಗಳು ದಾಖಲಾಗಿವೆ. ಕಾಮಗಾರಿಗಳನ್ನು ಕಳಪೆ ಕೈಗೊಳ್ಳದೇ ಗುಣಮಟ್ಟ ಕಾಯ್ದುಕೊಳ್ಳುವಲ್ಲಿ ಅನುಷ್ಠಾನ ಏಜೆನ್ಸಿಗಳು ಕಾರ್ಯನಿರ್ವಹಿಸಬೇಕು ಎಂದರು.

ಪ್ರತಿ ತಾಲೂಕಿನ ಎರಡು ಕುಗ್ರಾಮಗಳ ಸರಕಾರಿ ಶಾಲೆಗಳಿಗೆ ಪೊಲೀಸ್ ಇಲಾಖೆಯ ಉನ್ನತ ಅಧಿಕಾರಿಗಳು ಆಕಸ್ಮಿಕ ಭೇಟಿ ನೀಡಿ ಶಾಲೆಗಳಲ್ಲಿ ನೀಡುವ ಶಿಕ್ಷಣ, ಗುಣಮಟ್ಟ ಹಾಗೂ ಮೂಲ ಸೌಕರ್ಯ ಪರಿಶೀಲಿಸಿ ವರದಿ ಸಲ್ಲಿಸಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಅಭ್ಯಸಿಸುವ ಮಕ್ಕಳಿಗೆ ಉತ್ತಮ ಪೌಷ್ಟಿಕ ಆಹಾರ ಒದಗಿಸಿ ಕಟ್ಟಡಗಳ ಕಿಟಕಿ ಬಾಗಿಲುಗಳಿಗೆ ಸೊಳ್ಳೆ ಪರದೆ ಅಳವಡಿಸಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಸುಶೀಲಾ ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್. ನೇಮಗೌಡ ಜಿಲ್ಲೆಯ ಕಾರ್ಯವ್ಯಾಪ್ತಿ ಹಾಗೂ ಪ್ರಮುಖ ವಿಷಯಗಳ ಕುರಿತು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಲೋಕಾಯುಕ್ತ ಅಧೀಕ್ಷಕ ಸತೀಶ ಎಸ್.ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಹಾಜರಿದ್ದರು.

ನವ್ಯ ಗದಗ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ : 08/07/2023 ರಂದು ಪ್ರಕಟವಾದ ಮಾಹಿತಿ.

3ನೇ ದಿನಕ್ಕೆ ಬಗರ್ ಹುಕುಂ, ಅರಣ್ಯ ಅವಲಂಬಿತರ ಅಹೋರಾತ್ರಿ ಧರಣಿ; ರೈತ ಅಸ್ವಸ್ಥ

# ಸರ್ಕಾರ ಕೂಡಲೇ ರೈತರ ಬೇಡಿಕೆಗಳನ್ನು ಇಡೇರಿಸಬೇಕು: ರವಿಕಾಂತ ಅಂಗಡಿ

■ ಉತ್ತರಪ್ರಭ ಸುದ್ದಿ ಗದಗ:

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ಯ ವಿಶ್ವವಿದ್ಯಾಲಯಕ್ಕೆ ಜಮೀನು ಕಳೆದುಕೊಂಡ ರೈತರು ಮತ್ತು ಬಗರ್ ಹುಕುಂ ಸಾಗುವಳಿದಾರರ ಹಾಗೂ ಅರಣ್ಯ ಅವಲಂಬಿತರ ಬೇಡಿಕೆ ಇಡೆರಿಕೆಗಾಗಿ ದಿನಾಂಕ: 06.07.2023 ರಿಂದ ಅಹೋರಾತ್ರಿ ಧರಣಿ ಸತ್ಯಾಗ್ರಹ 3ನೇ ದಿನಕ್ಕೆ ಕಾಲಿಟ್ಟಿದೆ. ಧರಣಿ ನಿರತ ರೈತ ಟಿಪ್ಪುಸುಲ್ತಾನ್ ಹೊನ್ನೂರಸಾಬ್ ನದಾಫ್ ಉರ್ಫ ಬೆಲೆರಿ ಅಸ್ವಸ್ಥರಾಗಿದ್ದು, ಕೂಡಲೇ ಇವರನ್ನು ಗದಗ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಪಡೆಯುತ್ತಿದ್ದಾನೆ.

ಗದಗ ತಾಲೂಕಾ ನಾಗಾವಿ ಗ್ರಾಮದ ಸರ್ವೆ ನಂ.143/2ಬಿ/ಬ/1ಬಿ/2 ಕ್ಷೇತ್ರ 124 ಎಕರೆ ಮತ್ತು ಸರ್ವೆ ನಂ: 179/ಬಿ 129 ಎಕರೆ 35 ಗುಂಟೆ ಕೃಷಿ ಭೂಮಿಯಲ್ಲಿ ಬಗರಹುಕುಂ ಸಾಗುವಳಿದಾರರಾಗಿದ್ದು, ಸಾಗುವಳಿ ಮಾಡುತ್ತಿದ್ದ ಜಮೀನುಗಳನ್ನು ಕರ್ನಾಟಕ ರಾಜ್ಯ ಗ್ರಾಮೀಣ ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಿ ರೈತರನ್ನು ಬಿದಿಪಾಲು ಮಾಡಿದೆ ಅವರಿಗೆ ಪರಿಹಾರ ನೀಡಬೇಕು ಮತ್ತು ಬಗರ್ ಹುಕುಂ ಸಾಗುವಳಿದಾರರ ಹಾಗೂ ಅರಣ್ಯ ಅವಲಂಬಿತರ ಜಮೀನುಗಳ ತೀರಸ್ಕೃತ ಅರ್ಜಿಗಳ ಪುನರ್ ಪರಿಶೀಲನೆ, ಹೊಸ ಅರ್ಜಿಗಳ ಸ್ವೀಕಾರ ಮತ್ತು ಹಕ್ಕು ಪತ್ರಗಳನ್ನು ವಿತರಣೆ ಮಾಡುವ ಆದೇಶವನ್ನು ಮಾಡಬೇಕು ಆದೇಶ ಬರುವವರೆಗೆ ಧರಣಿ ಮುಂದುವರಿಯಲಿದೆ ಎಂದು ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷರಾದ ರವಿಕಾಂತ ಅಂಗಡಿ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.



**ಲೋಕಾಯುಕ್ತಕ್ಕೆ ದೂರು:** ಗದಗ ನಗರದಲ್ಲಿ ನಡೆದ ಗದಗ ಜಿಲ್ಲಾ ಭವನದಲ್ಲಿ ಲೋಕಾಯುಕ್ತರು ಅಹವಾಲು ಸಭೆಯಲ್ಲಿ ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ ಮತ್ತು ಬಸವಣ್ಣೆಪ್ಪ ಚಿಂಚಲಿ ಲೋಕಾಯುಕ್ತರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಸ್ಥಾಪನೆ ಮಾಡಲು ಸುಮಾರು 353ಕ್ಕೂ ಹೆಚ್ಚು ಎಕರೆ ವಿಶ್ವವಿದ್ಯಾಲಯ ನಿರ್ಮಿಸಿ ಭೂಸ್ವಾಧಿನ ಮಾಡಿ ಅಲ್ಲಿ ಉಳುಮೆ ಮಾಡುತ್ತಿದ್ದ ಬಗರ್ ಹುಕುಂ ರೈತರಿಗೆ ಯಾವುದೇ ಪರಿಹಾರ ನೀಡದೆ ಅವರನ್ನು ಬಿದಿಪಾಲು ಮಾಡಿ ಯಾವುದೋ ರಾಜಕೀಯದ ಒತ್ತಡಕ್ಕೆ ಮಣಿದು, ಹುಯಿಲಗೋಳ ಕುಟುಂಬಕ್ಕೆ ಸರಿಸುಮಾರು 11 ಕೋಟಿ ಮೊತ್ತದ ಪರಿಹಾರವನ್ನು ನೀಡಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳನ್ನು ನಷ್ಟವನ್ನುಂಟು ಮಾಡುವುದಲ್ಲದೆ ಅಲ್ಲಿ ತಲೆತಲಾಂತರಗಳಿಂದ ಭೂಮಿಯನ್ನು ಉಳುಮೆ ಮಾಡುವ ರೈತರನ್ನು ಬೀದಿ ಪಾಲು ಮಾಡಿದ ಅಧಿಕಾರಗಳ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಲೋಕಾಯುಕ್ತರಿಗೆ ದೂರು ನೀಡಿದರು.



ಜಮೀನಿನ ಮಾಲೀಕರಲ್ಲದ ಹುಯಿಲಗೋಳ ಕುಟುಂಬಕ್ಕೆ 11 ಕೋಟಿ ಪರಿಹಾರ ನೀಡಿ, ಅಧಿಕಾರಿಗಳು ಅಕ್ರಮ ಮಾಡಿದ್ದು ಮತ್ತು ಹುಯಿಲಗೋಳ ಕುಟುಂಬಕ್ಕೆ ನೂರಾರು ಎಕರೆ ಜಮೀನು, ಗುಡ್ಡ ಅವರ ಹೆಸರಿಗೆ ಹೇಗೆ ಬಂತು? ಆದರೆ ಇಲ್ಲಿ ಕಡು ಬಡವರು ನೀಜವಾದ ಉಳುಮೆದಾರರು ಕೇವಲ 1 ರಿಂದ 5 ಎಕರೆ ಉಳುಮೆಮಾಡುವ ಬಡ ರೈತರನ್ನು ಬೀದಿ ಪಾಲು ಮಾಡಿದ್ದು ಕೂಡಲೇ ಸರ್ಕಾರ ಅಕ್ರಮದ ಬಗ್ಗೆ ತನಿಖೆ ಮಾಡಬೇಕು ಮತ್ತು ನೊಂದ ರೈತರಿಗೆ ಪರಿಹಾರ ನೀಡಬೇಕು ಅದರೊಂದಿಗೆ ಬಗರ್ ಹುಕುಂ ಮತ್ತು ಅರಣ್ಯ ಸಾಗುವಳಿದಾರರಿಗೆ ಹಕ್ಕು ಪತ್ರ ನೀಡಬೇಕು.

-ರವಿಕಾಂತ ಅಂಗಡಿ ವಕೀಲರು,
**ರಾಜ್ಯಾಧ್ಯಕ್ಷರು ಉತ್ತರ ಕರ್ನಾಟಕ ಮಹಾಸಭಾ.**

ಉತ್ತರ ಪ್ರಭೆ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ: 08/07/2023 ರಂದು ಪ್ರಕಟವಾದ ವರದಿ

# ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಪ್ಪಿತಸ್ಥರಾಗಿದ್ದರೆ ಶಿಕ್ಷೆಗೆ ಗುರಿಪಡಿಸಲಾಗುವುದು

ಗದಗ, ಜು. 7. ಜನಸೇವಕರಾದ ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಕ್ಷಮತೆಯಿಂದ ಹಾಗೂ ಅವಿರತವಾಗಿ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿರು. ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಅಧಿಕಾರಿ ಸಿಬ್ಬಂದಿಗಳ ಮೇಲೆ ಗುರುತರ ಆರೋಪ ಕೇಳಿ ಬಂದಲ್ಲಿ ಅಂತಹವರ ವಿರುದ್ಧ ಮೊಕದ್ದಮೆ ಹೂಡಿ ತಪ್ಪಿತಸ್ಥರಾಗಿದ್ದಲ್ಲಿ



ಶಿಕ್ಷೆಗೆ ಗುರಿಪಡಿಸಲಾಗುವದು ಎಂದು ತಿಳಿಸಿದರು.

ಜಿಲ್ಲೆಯ ಕಂದಾಯ, ಜಿಲ್ಲಾ ಪಂಚಾಯತ, ಸ್ಥಳೀಯ ಸಂಸ್ಥೆಗಳು, ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ದೂರುಗಳು ಬಂದಿದ್ದು ಈ ಕುರಿತು ನಮ್ಮ ಅಧಿಕಾರಿಗಳು ಪರಿಶೀಲನೆ ಮಾಡಿದ್ದು ಈ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ದೂರುಗಳಿಗೆ ಸಂಬಂಧಿಸಿದಂತೆ ಮೊಕದ್ದಮೆ ಹೂಡಿ ಅವುಗಳ ಕುರಿತು ಮೇಲ್ವಿಚಾರಣೆ ಮಾಡಿ ತಪ್ಪಿತಸ್ಥರು ಯಾರೆಂದು ಕಂಡು ಹಿಡಿಯಲಾಗುವದು. ಆಸ್ಪತ್ರೆಗಳಲ್ಲಿ ವೈದ್ಯರುಗಳು ಗೈರು ಹಾಜರಾಗುವುದು, ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೆ ಇರುವದು ಹಾಗೂ ಪ್ರಾಂಗಣವನ್ನು ಸ್ವಚ್ಛವಾಗಿಡದ ಕುರಿತು ಹಲವಾರು ವಿಷಯುಗಳು ಗಮನಕ್ಕೆ ಬಂದಿದ್ದು ಇವುಗಳ ಕುರಿತು ಪರಮಾರ್ಶಿಸಲಾಗುವದು. ಜನ ಸೇವಕರು ತಮ್ಮ ಕಾರ್ಯಕ್ಷೇತ್ರದಲ್ಲಿ ಶ್ರೇಷ್ಠತೆ ಸಾಧಿಸಲು ಹೇಗೆ ಸಾಧ್ಯವಾಗುತ್ತದೆ ಎಂಬುದನ್ನು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 28 ದೂರುಗಳು ದಾಖಲಾಗಿವೆ. ಈ ದೂರುಗಳಿಗೆ ಸಂಬಂಧಿಸಿದಂತೆ ಈಗಾಗಲೇ ನೋಟಿಸಗಳನ್ನು ಜಾರಿ ಮಾಡಿ ಮಾಹಿತಿ ಕ್ರೋಢಿಕರಿಸಿ ತನಿಖೆ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಹಲವಾರು ಸಮಸ್ಯಗಳಿದ್ದು ಆ ಸಮಸ್ಯೆಗಳನ್ನು ಯಾವ ರೀತಿ ಪರಿಹರಿಸಬೇಕು. ಒಂದು ವೇಳೆ ಸಮಸ್ಯೆಗಳನ್ನು ಪರಿಹರಿಸದಿದ್ದಲ್ಲಿ ಯಾವ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂಬ ಸೂಚನೆ ಅಧಿಕಾರಿಗಳಿಗೆ ನೀಡುವ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಲಾಗಿರುತ್ತದೆ. ಈ ಭೇಟಿ ಕೇವಲ ದೂರುಗಳನ್ನು ದಾಖಲಿಸಿಕೊಂಡು ತಪ್ಪಿತಸ್ಥರಿಗೆ ಶಿಕ್ಷೆಗೆ ಗುರುಪಡಿಸುವದರ ಜೊತೆಗೆ ಇಂತಹ ತಪ್ಪುಗಳ ಮರುಕಳಿಸಿದರಲಿ ಎಂಬ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಿ ಸಭೆ ಜರುಗಿಸಲಾಗಿದೆ ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕರ ಬಿ.ಎಸ್.ನೇಮಗೌಡ, ಲೊಕಾಯುಕ್ತ ಅಧೀಕ್ಷ ಸತೀಶ.ಎಸ್. ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ.ಕೆ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ ಉಪಸ್ಥಿತರಿದ್ದರು.

ಸರ್ವೋದಯ ಕರ್ನಾಟಕ ದಿನಪತ್ರಿಕೆಯಲ್ಲಿ ದಿನಾಂಕ: 08/07/2023 ರಂದು ಪ್ರಕಟವಾದ ವರದಿ

# ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಪ್ಪಿತಸ್ಥರಾಗಿದ್ದರೆ ಶಿಕ್ಷೆಗೆ ಗುರಿಪಡಿಸಲಾಗುವುದು

ಗದಗ, ಜು. 7. ಜನಸೇವಕರಾದ ಸರಕಾರಿ ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಕ್ಷಮತೆಯಿಂದ ಹಾಗೂ ಅವಿರತವಾಗಿ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಹೇಳಿದರು.



ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿರು. ಅಧಿಕಾರಿ ಸಿಬ್ಬಂದಿಗಳು ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಅಧಿಕಾರಿ ಸಿಬ್ಬಂದಿಗಳ ಮೇಲೆ ಗುರುತರ ಆರೋಪ ಕೇಳಿ ಬಂದಲ್ಲಿ ಅಂತಹವರ ವಿರುದ್ಧ ಮೊಕದ್ದಮೆ ಹೂಡಿ ತಪ್ಪಿತಸ್ಥರಾಗಿದ್ದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವದು ಎಂದು ತಿಳಿಸಿದರು.

ಜಿಲ್ಲೆಯ ಕಂದಾಯ, ಜಿಲ್ಲಾ ಪಂಚಾಯತ, ಸ್ಥಳೀಯ ಸಂಸ್ಥೆಗಳು, ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ದೂರುಗಳು ಬಂದಿದ್ದು ಈ ಕುರಿತು ನಮ್ಮ ಅಧಿಕಾರಿಗಳು ಪರಿಶೀಲನೆ ಮಾಡಿದ್ದು ಈ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ದೂರುಗಳಿಗೆ ಸಂಬಂದಿಸಿದಂತೆ ಮೊಕದ್ದಮೆ ಹೂಡಿ ಅವುಗಳ ಕುರಿತು ಮೇಲ್ವಿಚಾರಣೆ ಮಾಡಿ ತಪಿತಸ್ಥರು ಯಾರೆಂದು ಕಂಡು ಹಿಡಿಯಲಾಗುವದು. ಆಸ್ಪತ್ರೆಗಳಲ್ಲಿ ವೈದ್ಯರುಗಳು ಗೈರು ಹಾಜರಾಗುವುದು, ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೆ ಇರುವದು ಹಾಗೂ ಪ್ರಾಂಗಣವನ್ನು ಸ್ವಚ್ಛವಾಗಿಡದ ಕುರಿತು ಹಲವಾರು ವಿಷಯಗಳು ಗಮನಕ್ಕೆ ಬಂದಿದ್ದು ಇವುಗಳ ಕುರಿತು ಪರಮಾರ್ಶಿಸಲಾಗುವದು. ಜನ ಸೇವಕರು ತಮ್ಮ ಕಾರ್ಯಕ್ಷೇತ್ರದಲ್ಲಿ ಶ್ರೇಷ್ಠತೆ ಸಾಧಿಸಲು ಹೇಗೆ ಸಾಧ್ಯವಾಗುತ್ತದೆ ಎಂಬುದನ್ನು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 28 ದೂರುಗಳು ದಾಖಲಾಗಿವೆ. ಈ ದೂರುಗಳಿಗೆ ಸಂಬಂಧಿಸಿದಂತೆ ಈಗಾಗಲೇ ನೋಟಿಸಗಳನ್ನು ಜಾರಿ ಮಾಡಿ ಮಾಹಿತಿ ಕ್ರೋಡಿಕರಿಸಿ ತನಿಖೆ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಹಲವಾರು ಸಮಸ್ಯಗಳಿದ್ದು ಆ ಸಮಸ್ಯೆಗಳನ್ನು ಯಾವ ರೀತಿ ಪರಿಹರಿಸಬೇಕು. ಒಂದು ವೇಳೆ ಸಮಸ್ಯೆಗಳನ್ನು ಪರಿಹರಿಸದಿದ್ದಲ್ಲಿ ಯಾವ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂಬ ಸೂಚನೆ ಅಧಿಕಾರಿಗಳಿಗೆ ನೀಡುವ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಲಾಗಿರುತ್ತದೆ. ಈ ಭೇಟಿ ಕೇವಲ ದೂರುಗಳನ್ನು ದಾಖಲಿಸಿಕೊಂಡು ತಪ್ಪಿತಸ್ಥರಿಗೆ ಶಿಕ್ಷೆಗೆ ಗುರುಪಡಿಸುವದರ ಜೊತೆಗೆ ಇಂತಹ ತಪ್ಪುಗಳ ಮರುಕಳಿಸದರಲಿ ಎಂಬ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಿ ಸಭೆ ಜರುಗಿಸಲಾಗಿದೆ ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕರ ಬಿ.ಎಸ್.ನೇಮಗೌಡ, ಲೊಕಾಯುಕ್ತ ಅಧೀಕ್ಷ ಸತೀಶ.ಎಸ್. ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ.ಕೆ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ ಉಪಸ್ಥಿತರಿದ್ದರು.

ನವೋದಯ ಕನ್ನಡ ದಿನಪತ್ರಿಕೆಯಲ್ಲಿ ದಿನಾಂಕ: 08/07/2023 ರಂದು ಪ್ರಕಟವಾದ ವರದಿ